ಸಂಪುಟ: 05 ಸಂಚಿಕೆ: 156 ಪುಟಗಳು: 08 ಮಂಗಳವಾರ 19 ಆಗಸ್ಟ್ 2025 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**
ವಿಕಾಸವೇ ಜೀವನ,
ಸಂಕೋಚವೇ ಮರಣ,
ಪ್ರೇಮವೆಲ್ಲಾ ವಿಕಾಸ,
ಸ್ವಾರ್ಥವೆಲ್ಲಾ ಸಂಕೋಚ,
ಆದುದರಿಂದ ಪ್ರೇಮವೇ
ಬದುಕಿನ ಧರ್ಮ

# ಡಿಸಿಎಂ ಬೈಕ್‌ರೈಡ್‌ಗೆ ಸಿಎಂ ಗ್ರೀನ್ ಸಿಗ್ನಲ್ - ಹೆಬ್ಬಾಳ ಫ್ಲೈಓವರ್ ಉದ್ಘಾಟನೆ

**● ಬಹು ನಿರೀಕ್ಷಿತ ಬಿಡಿಎ ನಿರ್ಮಿತ ಹೆಬ್ಬಾಳ ಮೇಲ್ಸೇತುವೆ ಉದ್ಘಾಟನೆ ● ಎಜ್ಡಿ ಗಾಡಿಯನ್ನು ಫ್ಲೈಓವರ್ ನಲ್ಲಿ ಓಡಿಸಿದ ಡಿಸಿಎಂ ಡಿಕೆ ಶಿವಕುಮಾರ್**

• **ಉದಯವಾಹಿನಿ, ಬೆಂಗಳೂರು**

ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್, ತಮ್ಮ ಕಾಲೇಜು ದಿನಗಳಲ್ಲಿ ಬಳಸುತ್ತಿದ್ದ ಯಜ್ಡಿ ಬೈಕ್ ಚಾಲನೆಗೆ ಸಿಎಂ ಸಿದ್ದರಾಮಯ್ಯ ಅವರು ಹಸಿರು ನಿಶಾನೆ ತೋರುವ ಮೂಲಕ ಹೆಬ್ಬಾಳ ನೂತನ ಮೇಲ್ಸೇತುವೆಯನ್ನು ಉದ್ಘಾಟನೆ ಮಾಡಿದರು.





ಆ ಮೂಲಕ, ಸರ್ಕಾರೀ ಕಾರ್ಯಕ್ರಮಕ್ಕೆ ಡಿಕೆಶಿ ಪರ್ಸನಲ್ ಟಚ್ ನೀಡಿದರು.

ಕೆ ಆರ್ ಪುರ ಕಡೆಯಿಂದ ಮೇಖ್ರಿ ವೃತ್ತದ ಕಡೆ ವಾಹನಗಳ ಸರಾಗ ಸಂಚಾರಕ್ಕೆ ಅನುವಾಗುವಂತೆ ಹೆಬ್ಬಾಳ ಜಂಕ್ಷನ್‌ನಲ್ಲಿ ಬಿಡಿಎ ನಿರ್ಮಿಸಿರುವ ಮೇಲ್ಸೇತುವೆಯನ್ನು ಆ.18 ಸಾರ್ವಜನಿಕಸೇವೆಗೆ ಮುಕ್ತಗೊಳಿಸಲಾಯಿತು.

ಸಿಎಂ ಸಿದ್ದರಾಮಯ್ಯ, ಟೇಪ್ ಕಟ್ ಮಾಡಿ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಅವರ ಕಾಲೇಜು ದಿನಗಳ ಎಜ್ಡಿ ಬೈಕ್ ಚಾಲನೆಗೆ ಹಸಿರು ಬಾವುಟ ತೋರಿಸುವ ಮೂಲಕ ಉದ್ಘಾಟನೆ ಮಾಡಲಾಯಿತು.

''ಕೆ.ಆರ್.ಪುರಂ ಕಡೆಯಿಂದ ಮೇಖ್ರಿ ಸರ್ಕಲ್ ಭಾಗದ ಲೂಪ್ ಅನ್ನು ರೂ.80 ಕೋಟಿ ವೆಚ್ಚದಲ್ಲಿ ನಿರ್ಮಾಣ ಮಾಡಲಾಗಿದೆ. ಇನ್ನೊಂದು ಭಾಗದ ಲೂಪ್ ಅನ್ನು ನವೆಂಬರ್ ಹೊತ್ತಿಗೆ ಪೂರ್ಣಗೊಳಿಸಲಾಗುವುದು. ಒಟ್ಟು ರೂ.300 ಕೋಟಿ ವೆಚ್ಚದಲ್ಲಿ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗಿದೆ. ಎರಡು ಪಥಗಳು ಇರುವ ಕಡೆ ಆರು ಪಥಗಳು ಬರುವಂತೆ ಯೋಜನೆ ರೂಪಿಸಲಾಗಿದೆ'' ಎಂದು ಡಿಕೆ ಶಿವಕುಮಾರ್ ಹೇಳಿದರು.

17 ಸಾವಿರ ಕೋಟಿ ವೆಚ್ಚದಲ್ಲಿ 16.5 ಕಿಲೋಮೀಟರ್ ಉದ್ದದ ಟನಲ್ ರಸ್ತೆಗೆ ಟೆಂಡರ್ ಕರೆಯಲಾಗಿದೆ. ಹೆಬ್ಬಾಳ ಜಂಕ್ಷನ್ ನ ಮತ್ತೊಂದು ಲೂಪ್ ನಿರ್ಮಾಣವನ್ನು ತ್ವರಿತಗೊಳಿಸಲು ಬಿಡಿಎ ಅಧ್ಯಕ್ಷರಾದ ಹ್ಯಾರಿಸ್ ಅವರು ಜವಾಬ್ದಾರಿ ಹೊತ್ತುಕೊಂಡಿದ್ದಾರೆ ಎಂದು ಡಿಕೆ ಶಿವಕುಮಾರ್ ಹೇಳಿದರು.

ನೂತನ ಮೇಲ್ಸೆತುವೆಯಿಂದ ಮೇಖ್ರಿ ಸರ್ಕಲ್ ಬಳಿ ಸಂಚಾರ ದಟ್ಟಣೆ ಹೆಚ್ಚಲಿದೆ ಎನ್ನುವ ಟೀಕೆಯನ್ನು ಕೆಲವರು ಮಾಡುತ್ತಾರೆ. ಯಾರ್ಯಾರೋ ಏನೇನೋ ಮಾತನಾಡುವವರಿಗೆಲ್ಲ ನಾವು ಉತ್ತರ ನೀಡಲು ಆಗುವುದಿಲ್ಲ ಎಂದು ಉಪಮುಖ್ಯಮಂತ್ರಿಗಳು ಈ ಸಂದರ್ಭದಲ್ಲಿ ಹೇಳಿದರು. ಈ ಲೂಪ್ ಕಾಮಗಾರಿಯನ್ನು ಮುತುವರ್ಜಿವಹಿಸಿ ಮಾಡಲಾಗಿದೆ. ಏಕೆಂದರೆ ಒಂದು ಕಡೆ ಮೆಟ್ರೋ ಮಾರ್ಗ, ಇನ್ನೊಂದು ಕಡೆ ರೈಲ್ವೇ ಮಾರ್ಗವಿದ್ದು ಅತ್ಯಂತ ತಾಂತ್ರಿಕವಾಗಿ ಕಾಮಗಾರಿ ಪೂರ್ಣಗೊಳಿಸಲಾಗಿದೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಹೇಳಿದರು.

### ಸಂಚಾರ ದಟ್ಟನೆ ನಿಯಂತ್ರಣಕ್ಕೆ ಕ್ರಮ

ಬೈಕ್ ಪ್ರೇಮಿ ಡಿಕೆ ಶಿವಕುಮಾರ್ ಅವರು ಕಾಲೇಜು ದಿನಗಳಲ್ಲಿ ಅಂದರೆ ಪದವಿ ವ್ಯಾಸಂಗ ಮಾಡುವಾಗ 10,400 ರೂಪಾಯಿಗೆ, ಸಿಎಇ 7684 ಸಂಖ್ಯೆಯ ಯಡ್ಜಿ ಬೈಕ್ ಖರೀದಿಸಿದ್ದರು. ಕಾಲೇಜು ದಿನಗಳಲ್ಲಿ ಬಳಸಿದ್ದ ಈ ಬೈಕ್ ಅನ್ನು ಕಳೆದ ವರ್ಷ ಸೆಪ್ಟೆಂಬರ್‌ನಲ್ಲಿ ಬೆಂಗಳೂರಿನ ಹಳೆಯ ಬೈಕ್ ನವೀಕರಣ ಮಾಡುವ ಯುವಕ ಸುಪ್ರೀತ್ ಅವರು ರೀ ಕಂಡೀಷನಿಂಗ್ ಮಾಡಿದ್ದರು. ಈಗ ತಮ್ಮ ನೆಚ್ಚಿನ ಬೈಕ್ ಅನ್ನು ಹೆಬ್ಬಾಳ ಮೇಲ್ಸೇತುವೆ ಮೇಲೆ ಓಡಿಸಿದರು. ವಿಮಾನ ನಿಲ್ದಾಣದಿಂದ ಬರುವವರಿಗೆ ಸೇರಿದಂತೆ ಎಲ್ಲರೂ ಸಂಚಾರದಟ್ಟಣೆ ಅನುಭವಿಸುತ್ತಾ ಇದ್ದರು. ಇದನ್ನು ತಪ್ಪಿಸಲು ನಮ್ಮ ಸರ್ಕಾರ ಬದ್ಧವಾಗಿದೆ. ಹೆಬ್ಬಾಳ ಜಂಕ್ಷನ್ ನಿಂದ ಸಿಲ್ಕ್ ಬೋರ್ಡ್ ಜಂಕ್ಷನ್ ವರೆಗೆ ಸಂಚಾರ ದಟ್ಟನೆ ನಿಯಂತ್ರಣಕ್ಕೆ ಏನೇನು ಕ್ರಮ ತೆಗೆದುಕೊಳ್ಳಲಾಗಿದೆ ಎಂದು ಮುಖ್ಯಮಂತ್ರಿಗಳಿಗೆ ವಿವರಣೆ ನೀಡಿದ್ದೇನೆ ಎಂದು ಡಿಕೆ ಶಿವಕುಮಾರ್ ಹೇಳಿದರು.

## ಬಿಎಂಆರ್‌ಸಿಎಲ್ ನಿರ್ಮಾಣದ ಡಬಲ್ ಡೆಕ್ಕರ್ ಫ್ಲೈಓವರ್‌ಗೆ ವಿರೋಧ

• **ಉದಯವಾಹಿನಿ, ಬೆಂಗಳೂರು**

ಬಿಎಂಆರ್‌ಸಿಎಲ್ ಸಂಸ್ಥೆ ನಿರ್ಮಾಣ ಮಾಡುತ್ತಿರುವ ಡಬಲ್ ಡೆಕ್ಕರ್ ಮೇಲ್ಸೇತುವೆಯ (ಮೆಟ್ರೋ-ಮೇಲ್ಸೇತುವೆ ಮಾರ್ಗ) ರ್‍ಯಾಂಪ್ ಅನ್ನು ಜೆಪಿ ನಗರದ ಡೆಲ್ಮಿಯಾ ಜಂಕ್ಷನ್ ಬಳಿ ಇಳಿಸಬಾರದು, ಬದಲಾಗಿ ಬನ್ನೇರುಘಟ್ಟ ರಸ್ತೆಗೆ ಬದಲಾಯಿಸಬೇಕೆಂದು ಆಗ್ರಹಿಸಿದ್ದಾರೆ. ವಾಹನ ಸಂಚಾರಕ್ಕೆ ಅನುಕೂಲವಾಗುವಂತಹ ರಸ್ತೆಗಳು ವಿಶಾಲವಾಗಿವೆ. ಇದರಿಂದ ವಾಹನಗಳು ನೇರವಾಗಿ ವಸತಿ ಪ್ರದೇಶಗಳಿಗೆ ಬರುವುದನ್ನು ತಪ್ಪಿಸಬಹುದು.

ಅಲ್ಲದೆ, ಪಾದಚಾರಿಗಳಿಗೆ ತೊಂದರೆಯಾಗದಂತೆ ಮತ್ತು ಜೆ.ಪಿ. ನಗರದ ಮಿನಿ ಫಾರೆಸ್ಟ್ ಅನ್ನು ರಕ್ಷಿಸಬಹುದು ಎಂದು ಸ್ಥಳೀಯ ವೃದ್ಧರೊಬ್ಬರು ಹೇಳಿದ್ದಾರೆ. ಮೈತ್ರಿ ಸದಸ್ಯರ ಪ್ರಕಾರ, ಸದ್ಯ ಯೋಜನೆ ಪ್ರಕಾರ, ಮೇಲ್ಸೇತುವೆ ಜೆಪಿ ನಗರದಲ್ಲಿ ಇಳಿಯುವುದರಿಂದ ಸಂಚಾರ ದಟ್ಟಣೆ ಉಂಟಾಗಲಿದೆ. ಏಕೆಂದರೆ ಪ್ರದೇಶದ ಒಳಗಿನ ರಸ್ತೆಗಳು ಕಿರಿದಾಗಿವೆ. ಅವುಗಳ ಅಗಲ ಕೇವಲ 30 ಅಡಿಗಳು. ಪ್ರಸ್ತುತ, 6ಬಿ ಮುಖ್ಯ ರಸ್ತೆ ಮತ್ತು 2 ನೇ ಮುಖ್ಯ ರಸ್ತೆಯ ಮೂಲಕ ಪ್ರತಿದಿನ 6,000 ಕ್ಕೂ ಹೆಚ್ಚು ವಾಹನಗಳು ಸಂಚರಿಸುತ್ತವೆ. ಇದರಿಂದ ಸಂಚಾರ ದಟ್ಟಣೆ ಉಂಟಾಗುತ್ತದೆ ಎಂದಿದ್ದಾರೆ.

## ರಾಜ್ಯದ ವಿವಿಧೆಡೆ ಕೋಡಿಬಿದ್ದ ಕೆರೆಗಳು: ಭರ್ತಿಯತ್ತ ಅಣೆಕಟ್ಟೆಗಳು

• **ಉದಯವಾಹಿನಿ, ಬೆಂಗಳೂರು**

ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿ ಸೋಮವಾರ ಮಳೆ ಅಬ್ಬರಿಸಿದೆ. ಜನಜೀವನ ಅಸ್ತವ್ಯಸ್ತವಾಗಿದೆ. ತಗ್ಗುಪ್ರದೇಶಗಳು, ಜಮೀನುಗಳು ಜಲಾವೃತಗೊಂಡಿವೆ. ಹಲವೆಡೆ ಮನೆಗಳಿಗೆ ಹಾನಿಯಾಗಿದೆ. ಜಲಾಶಯಗಳಿಗೆ ಒಳಹರಿವು ಹೆಚ್ಚಿದೆ. ಮುಂಜಾಗ್ರತೆಯಾಗಿ ಜಲಾಶಯಗಳಿಂದ ಹೊರಹರಿವಿನ ಪ್ರಮಾಣ ಹೆಚ್ಚಿಸಿದ್ದು, ನದಿಪಾತ್ರದ ಪ್ರದೇಶಗಳಲ್ಲಿ ಆತಂಕದ ಸ್ಥಿತಿ ಮೂಡಿದೆ. ಬೆಳಗಾವಿ, ಉತ್ತರ ಕನ್ನಡ, ಧಾರವಾಡ, ಕೊಡಗು, ದಾವಣಗೆರೆ ಚಿತ್ರದುರ್ಗ ಜಿಲ್ಲೆಯಾಂದ್ಯಂತ, ಹಾಗೂ ಬೀದರ್ ಜಿಲ್ಲೆಯ ಔರಾದ್ ತಾಲ್ಲೂಕಿನಲ್ಲಿ ಶಾಲೆ, ಕಾಲೇಜುಗಳಿಗೆ ರಜೆ ಘೋಷಿಸಲಾಗಿತ್ತು.

ಚಿಕ್ಕಮಗಳೂರು ಜಿಲ್ಲೆಯಲ್ಲಿ ನಾಲ್ಕು ತಾಲ್ಲೂಕುಗಳ ವ್ಯಾಪ್ತಿಯಲ್ಲಿ ಜಿಲ್ಲಾಡಳಿತ ಮಂಗಳವಾರವೂ ರಜೆ ಘೋಷಿಸಲಾಗಿದೆ. ಬೆಳಗಾವಿ ಜಿಲ್ಲೆಯಲ್ಲಿ ರಾಜಾ ಲಖಮಗೌಡ ಜಲಾಶಯ (ಹಿಡಕಲ್) ಭರ್ತಿಯಾಗಿದ್ದು, ಸವದತ್ತಿಯ ನವಿಲುತೀರ್ಥ ಜಲಾಶಯ ಭರ್ತಿಗೆ ಒಂದೂವರೆ ಅಡಿ ಬಾಕಿ ಇದೆ. ಮಹಾರಾಷ್ಟ್ರದಲ್ಲಿ ವ್ಯಾಪಕ ಮಳೆಯಿಂದಾಗಿ ಕೃಷ್ಣಾ ನದಿಯ ನೀರಿನ ಮಟ್ಟ ಏರಿದೆ.

## ಪತ್ರಕರ್ತ ಕಲ್ಲೆ ಶಿವೋತ್ತಮರಾವ್ ಅರಸು ಪ್ರಶಸ್ತಿಗೆ ಸರ್ಕಾರ ಆಯ್ಕೆ

• **ಉದಯವಾಹಿನಿ, ಬೆಂಗಳೂರು**

2025-26ನೇ ಸಾಲಿನ 'ಡಿ.ದೇವರಾಜು ಅರಸು ಪ್ರಶಸ್ತಿ'ಗೆ ಪತ್ರಕರ್ತ ಕಲ್ಲೆ ಶಿವೋತ್ತಮರಾವ್ ಅವರನ್ನು ರಾಜ್ಯ ಸರ್ಕಾರ ಆಯ್ಕೆ ಮಾಡಿದೆ. 'ಸಾಮಾಜಿಕ ನ್ಯಾಯದ ಪರವಾಗಿ ಅವರು ನಡೆಸಿದ ಹೋರಾಟ, ದೇವರಾಜು ಅರಸು ಅವರ ತತ್ವ-ಸಿದ್ಧಾಂತಗಳನ್ನು ಅನುಷ್ಠಾನಕ್ಕೆ ತರುವಲ್ಲಿ ಅವರ ಶ್ರಮ ಮತ್ತು ಪತ್ರಕರ್ತರಾಗಿ ನೀಡಿದ ಕೊಡುಗೆಯಿಂದಾಗಿ ಈ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ' ಎಂದು ಸರ್ಕಾರ ತನ್ನ ಆದೇಶದಲ್ಲಿ ತಿಳಿಸಿದೆ. ಪ್ರಶಸ್ತಿಯು 5 ಲಕ್ಷ ನಗದು ಹಾಗೂ ಫಲಕವನ್ನು ಒಳಗೊಂಡಿದೆ. ವಿಧಾನಸೌಧದಲ್ಲಿ ಇದೇ ಆ.20ರಂದು ಬೆಳಿಗ್ಗೆ 10.45ಕ್ಕೆ ನಡೆಯುವ ದೇವರಾಜ ಅರಸು ಅವರ 110ನೇ ಜನ್ಮದಿನಾಚರಣೆ ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ.

**ತನಿಖೆ ಇನ್ನೂ ಆರಂಭವಾಗಿಲ್ಲ**



# ಬುರುಡೆ ಭವಿಷ್ಯ ಸದನದಲ್ಲಿ ಇದೇ ವಿಷ್ಯ



**ಇಲ್ಲಿವರೆಗೆ ಆಗಿರುವುದು ಕೇವಲ ಮಣ್ಣು ಅಗೆತ ಮಾತ್ರ**

### ನಾವು ಒತ್ತಡಕ್ಕೆ ಮಣಿದಿಲ್ಲ ಯಾವುದೇ ರಾಜಿ ಇಲ್ಲ

### ಎಫ್‌ಎಸ್‌ಎಲ್ ವರದಿ ಬಂದ ಬಳಿಕ ಅದರ ಆಧಾರದಲ್ಲಿ ತನಿಖೆ ಆರಂಭ



• **ಉದಯವಾಹಿನಿ, ಬೆಂಗಳೂರು**

ಧರ್ಮಸ್ಥಳ ಪ್ರಕರಣ ಸಂಬಂಧ ನಾವು ಯಾವುದೇ ಒತ್ತಡಕ್ಕೆ ಮಣಿದಿಲ್ಲ. ಇದರಲ್ಲಿ ಯಾವುದೇ ರಾಜಿ ಆಗುವುದಿಲ್ಲ. ಸತ್ಯವನ್ನು ಹೊರಗಡೆ ತರುತ್ತೇವೆ ಎಂದು ಗೃಹ ಸಚಿವ ಜಿ.ಪರಮೇಶ್ವರ್ ಸ್ಪಷ್ಟಪಡಿಸಿದರು. ವಿಧಾನಸಭೆಯಲ್ಲಿ ಸೋಮವಾರ ಧರ್ಮಸ್ಥಳ ಪ್ರಕರಣ ಸಂಬಂಧ ನಿಯಮ 69ರಡಿ ನಡೆದ ಚರ್ಚೆಗೆ ಉತ್ತರಿಸಿದ ಅವರು, ಇಡೀ ದೇಶ ಧರ್ಮಸ್ಥಳ ಪ್ರಕರಣವನ್ನು ಗಮನಿಸುತ್ತಿದೆ. ಧರ್ಮಸ್ಥಳ ಒಂದು ದೇವಸ್ಥಾನ. ಲಕ್ಷಾಂತರ ಭಕ್ತರು ಇದ್ದಾರೆ. ಅದಕ್ಕೇ ಅದರದ್ದೇ ಆದ ಸ್ಥಾನಮಾನ ಇದೆ. ಧರ್ಮಸ್ಥಳಕ್ಕೆ 800 ವರ್ಷಗಳ ಇತಿಹಾಸ ಇದೆ. ಒಬ್ಬ ವ್ಯಕ್ತಿ ಧರ್ಮಸ್ಥಳ ಠಾಣೆಗೆ ಹೋಗಿ ದೂರು ಕೊಡುತ್ತಾನೆ. ಆತ ಪ್ರಸ್ತಾಪ ಮಾಡಿದ ವಿಚಾರ ತನಗೆ ಪ್ರಾಣ ಬೆದರಿಕೆವೊಡ್ಡಿ, ಧರ್ಮಸ್ಥಳ ಸುತ್ತಮುತ್ತ ಕೊಲೆಯಾದವರ ಮೃತದೇಹಗಳನ್ನು ಹೂತು ಹಾಕಿಸಿದ್ದಾರೆ ಎಂದು ದೂರು ನೀಡಿದ್ದಾನೆ. ಪಾಪಪ್ರಜ್ಞೆಯಿಂದ ಹೊರಬರಲು ದೂರು ನೀಡುತ್ತಿದ್ದೇನೆ ಎಂದಿದ್ದಾನೆ. ಅತ್ಯಾಚಾರವಾದ ಮಹಿಳೆಯರು, ಕೊಲೆಗಳಾದ ಬಗ್ಗೆ ತನಿಖೆ ನಡೆಸುವಂತೆ ದೂರು ನೀಡಿದ್ದಾನೆ ಎಂದು ವಿವರಿಸಿದರು. ಬಳಿಕ ಧರ್ಮಸ್ಥಳ ಪೊಲೀಸರು ಎಫ್‌ಐಆರ್ ಮಾಡುತ್ತಾರೆ. ಪೊಲೀಸರು ಪ್ರಮುಖ ವಿಚಾರ ಪ್ರಸ್ತಾಪ ಮಾಡಿರುವ ಕಾರಣ ಆತನನ್ನು ಮ್ಯಾಜಿಸ್ಟ್ರೇಟ್ ಮುಂದೆ ಹಾಜರುಪಡಿಸಿ ಹೇಳಿಕೆ ದಾಖಲಿಸುತ್ತಾರೆ. ಕೂಡಲೇ ಪೊಲೀಸರು ತನಿಖೆ ನಡೆಸುತ್ತಾರೆ. ಈ ಮಧ್ಯೆ ಕರ್ನಾಟಕ ಮಹಿಳಾ ಆಯೋಗದ ಅಧ್ಯಕ್ಷರು ಸಿಎಂಗೆ ಪತ್ರ ಬರೆದು ಧರ್ಮಸ್ಥಳದ ಸಾವಿನ ಕೇಸ್ ಸಂಬಂಧ ಎಸ್ ಐಟಿ ರಚಿಸುವಂತೆ ಕೋರುತ್ತಾರೆ. ಬಳಿಕ ಎಸ್‌ಐಟಿ ತನಿಖೆಗೆ ಸಿಎಂ ಹಾಗೂ ನಾನು ಚರ್ಚೆ ಮಾಡಿ ಆದೇಶ ಮಾಡಲಾಗಿದೆ ಎಂದು ತಿಳಿಸಿದರು.

ಜುಲೈ 19ರಂದು ಹಿರಿಯ ಐಪಿಎಸ್ ಪ್ರಣವ್ ಮೊಹಂತಿ ನೇತೃತ್ವದಲ್ಲಿ ಎಸ್ ಐಟಿ ರಚನೆ ಮಾಡಲಾಗುತ್ತದೆ. ಎಸ್ ಐಟಿ ಅವರು ಧರ್ಮಸ್ಥಳ ಪೊಲೀಸರಿಂದ ಕೇಸ್ ವಹಿಸಿಕೊಂಡು ತನಿಖೆ ಆರಂಭ ಮಾಡುತ್ತಾರೆ. ಎಸ್‌ಐಟಿ ಅವರು ದೂರುದಾರನಿಂದ ಮತ್ತೊಂದು ಹೇಳಿಕೆ ಪಡೆಯುತ್ತಾರೆ. ಆತ ಇಂತಂಥ ಸ್ಥಳಗಳಲ್ಲಿ ಹೂತು ಹಾಕಿದ್ದೇನೆ ಅಂತಾನೆ. ಅದನ್ನು ಎಸ್‌ಐಟಿ ಮ್ಯಾಪ್ ಮಾಡುತ್ತಾರೆ ಎಂದರು. ಸುಮಾರು ಜಾಗಗಳಲ್ಲಿ ಮಣ್ಣು ತೆಗೆಯಲಾಗಿದೆ. ಎರಡು ಜಾಗಗಳಲ್ಲಿ ಅಸ್ಥಿಪಂಜರ ಸಿಕ್ಕಿದೆ. ಅದನ್ನು ಎಫ್‌ಎಸ್‌ಎಲ್‌ಗೆ ಕೊಡಲಾಗುತ್ತದೆ. ಮಿಕ್ಕ ಜಾಗಗಳಲ್ಲಿ ಕೆಂಪು ಕಲ್ಲಿನ ಮಣ್ಣು ಇದ್ದು, ಅದು ಬಹಳ ಎಸಿಡಿಕ್ ಮಣ್ಣಾಗಿರುವುದರಿಂದ ಎಸ್ ಐಟಿ ಅವರು ಮಣ್ಣಿನ ಮಾದರಿ ಪಡೆದು ಎಫ್‌ಎಸ್‌ಎಲ್‌ಗೆ ಕಳುಹಿಸಿದ್ದಾರೆ. ಪತ್ತೆಯಾದ ಅಸ್ಥಿಪಂಜರದ ಅನಾಲಿಸಿಸ್ ಆಗಬೇಕು. ಮಣ್ಣಿನ ಮಾದರಿಯ ಅನಾಲಿಸಿಸ್ ಆಗಬೇಕು ಎಂದು ತಿಳಿಸಿದರು.

**ತನಿಖೆ ಇನ್ನೂ ಆರಂಭವಾಗಿಲ್ಲ:** ಇಲ್ಲಿವರೆಗೆ ಆಗಿರುವುದು ಕೇವಲ ಮಣ್ಣು ಅಗೆತ ಮಾತ್ರ. ತನಿಖೆ ಇನ್ನೂ ಆರಂಭವಾಗಿಲ್ಲ. ಎಫ್‌ಎಸ್‌ಎಲ್ ವರದಿ ಬಂದ ಬಳಿಕ ಅದರ ಆಧಾರದಲ್ಲಿ ತನಿಖೆ ಆರಂಭವಾಗುತ್ತದೆ. ದೂರುದಾರ ಬುರುಡೆ ತಗೊಂಡು ಬಂದಿದ್ದ. ಅದನ್ನೂ ಎಫ್‌ಎಸ್‌ಎಲ್‌ಗೆ ಕಳುಹಿಸಿಕೊಡಲಾಗಿದೆ ಎಂದು ವಿವರಿಸಿದರು.

### ಸದ್ಯಕ್ಕೆ ಮಣ್ಣು ಅಗೆತ ಸ್ಥಗಿತ

ಎಫ್‌ಎಸ್‌ಎಲ್ ವರದಿ ಬರುವ ತನಕ ಮಣ್ಣು ಅಗೆತವನ್ನು ಸ್ಥಗಿತಗೊಳಿಸಲು ಎಸ್‌ಐಟಿ ತೀರ್ಮಾನಿಸಿದೆ. ಈ ವಿಚಾರವಾಗಿ ಸಾಕಷ್ಟು ಊಹಾಪೋಹ ಸೃಷ್ಟಿಯಾಗುತ್ತಿದೆ. ಇದರಿಂದ ಭಕ್ತರಿಗೂ ಅನುಮಾನ, ಆತಂಕ ಆರಂಭವಾಗುತ್ತಿದೆ. ಹೀಗಾಗಿ ಅದನ್ನು ಬಹಳ ಸೂಕ್ಷ್ಮವಾಗಿ ಪರಿಗಣಿಸಬೇಕಾಗಿದೆ. ವಿಪಕ್ಷಗಳ ಉದ್ದೇಶ ಏನು ಎಂಬುದು ಗೊತ್ತಾಗಿಲ್ಲ. ಸತ್ಯ ಹೊರಬರಬೇಕು ಎಂದರು. ಘಟನೆ ಆಗಿದೆ ಎಂದು ಯಾರೂ ಹೇಳಲು ಆಗುವುದಿಲ್ಲ. ಆಗಿಲ್ಲ ಅಂತ ಯಾರೂ ಹೇಳಲು ಆಗಲ್ಲ. ಆಗಿಲ್ಲ ಅಂತ ತನಿಖೆಯಲ್ಲಿ ಬಂದರೆ ಧರ್ಮಸ್ಥಳದ ಗೌರವ ಇನ್ನಷ್ಟು ಹೆಚ್ಚುವುದಿಲ್ಲವೇ. ಒಂದು ವೇಳೆ ಆಗಿದೆ ಅಂತ ಬಂದರೆ ಅನ್ಯಾಯವಾದವರಿಗೆ ನ್ಯಾಯ ಸಿಕ್ಕಂತೆ ಆಗುತ್ತದೆ. ಇದಕ್ಕೆ ರಾಜಕೀಯ ಬೆರೆಸುವುದು ಸರಿಯಲ್ಲ. ಇದನ್ನು ನ್ಯಾಯಕ್ಕೆ ಬಿಡೋಣ, ಸತ್ಯ ಹೊರಬರಲಿ.

### ಗೃಹ ಸಚಿವರ ಉತ್ತರಕ್ಕೆ ವಿಪಕ್ಷಗಳ ಆಕ್ಷೇಪ

ವಿಪಕ್ಷ ನಾಯಕ ಆರ್.ಅಶೋಕ್ ಗೃಹ ಸಚಿವರ ಉತ್ತರಕ್ಕೆ ಆಕ್ಷೇಪ ವ್ಯಕ್ತಪಡಿಸಿದ್ದರು. ನಾನು ಉತ್ತೇಜಿತನಾಗಿ ಊಟ ಬಿಟ್ಟು ಸದನಕ್ಕೆ ಬಂದೆ. ಗೃಹ ಸಚಿವರು ಏನೋ ಬಹಿರಂಗ ಪಡಿಸುತ್ತಾರೆ ಎಂಬ ನಿರೀಕ್ಷೆ ಇತ್ತು. ಮಾಸ್ಕ್ ಮ್ಯಾನ್ ಬೆಟ್ಟ ಅಗೆದರೂ ಇಲಿನೂ ಸಿಕ್ಕಿಲ್ಲ. ಪರಮೇಶ್ವರ್ ಉತ್ತರದಲ್ಲಿ ಒಂದು ನೊಣನೂ ಸಿಕ್ಕಿಲ್ಲ. ಧರ್ಮಸ್ಥಳ ವಿಚಾರದಲ್ಲಿ ಷಡ್ಯಂತರ ಇದೆ ಅಂತ ಹೇಳುತ್ತಾರೆ. ಪರಮೇಶ್ವರ್ ಅವರು ಏನೂ ಇಲ್ಲ ಅಂತಾರೆ. ಎಸ್ ಐಟಿ ರಚನೆ ಮಾಡಿರುವುದು ಯಾರ ಒತ್ತಡದಲ್ಲಿ ಅಂತ ಹೇಳಿಲ್ಲ, ನಗರ ನಕ್ಸಲೈಟ್‌ಗಳು ಪತ್ರ ಬರೆದು ಒತ್ತಡ ಹಾಕಿದ್ದಾರೆ ಎಂದು ಮಾಧ್ಯಮಗಳಲ್ಲಿ ಫೋಟೋ ಸಮೇತ ಬಂದಿದೆ. ಆಗುವ ಅನಾಚಾರ ಆಗಿ ಹೋಗಿದೆ ಎಂದು ವಿಪಕ್ಷ ನಾಯಕ ಆರ್.ಅಶೋಕ್ ತಿಳಿಸಿದರು.

### ತನಿಖೆ ದಿಕ್ಕು ತಪ್ಪಿಸಲು ಅವಕಾಶವಿಲ್ಲ

ಇತ್ತ ದೂರುದಾರ ಮ್ಯಾಜಿಸ್ಟ್ರೇಟ್ ಸಂಪರ್ಕಿಸುತ್ತಾನೆ. ಮ್ಯಾಜಿಸ್ಟ್ರೇಟ್ ಆದೇಶ ಹೊರಡಿಸಿ ದೂರುದಾರನಿಗೆ ರಕ್ಷಣೆ ಕೊಡುವಂತೆ ಸೂಚನೆ ನೀಡುತ್ತಾರೆ. ತನಿಖೆ ಬಹಳ ಗಂಭೀರವಾಗಿ ನಡೆಯುತ್ತಿದೆ. ತನಿಖೆಯನ್ನು ದಿಕ್ಕು ತಪ್ಪಿಸಲು ಅವಕಾಶ ನೀಡುವುದಿಲ್ಲ. ಅವನು ಎಲ್ಲೆಲ್ಲಿ ತೋರಿಸುತ್ತಿದ್ದಾನೆ ಅಲ್ಲೆಲ್ಲ ಅಗೆಯುತ್ತಿದ್ದೇವೆ. ಮುಂದಕ್ಕೆ ಅಗೆಯಬೇಕಾ, ಬೇಡವೇ ಎಂಬ ತೀರ್ಮಾನವನ್ನು ನಾವು ಮಾಡುವುದಿಲ್ಲ. ಎಸ್‌ಐಟಿ ಮಾಡಲಿದೆ ಎಂದು ಸಚಿವರು ಹೇಳಿದರು.

### ಧರ್ಮದಲ್ಲಿ ರಾಜಕಾರಣ ಮಾಡಬಾರದು

ಈ ವೇಳೆ ಮಧ್ಯ ಪ್ರವೇಶಿಸಿದ ಡಿ.ಕೆ. ಶಿವಕುಮಾರ್, ಪ್ರತಿ ವರ್ಷ ಸಿಎಂ ಧರ್ಮಸ್ಥಳಕ್ಕೆ ಹೋಗಿ ಆರೋಗ್ಯ ತಪಾಸಣೆ ಮಾಡಿಸಿಕೊಂಡು ಬರುತ್ತಾರೆ. ಅವರಿಗೆ ನಂಬಿಕೆ ಇದೆ. ತಾಳ್ಮೆ ಇರಲಿ. ರಾಜಕಾರಣದಲ್ಲಿ ಧರ್ಮ ಇರಬೇಕು ಹೊರತು ಧರ್ಮದಲ್ಲಿ ರಾಜಕಾರಣ ಇರಬಾರದು. ನಿರ್ದಾಕ್ಷಿಣ್ಯವಾಗಿ ಯಾರನ್ನೂ ಬಲಿ ತೆಗೆದುಕೊಳ್ಳಬೇಕು. ಯಾರನ್ನೂ ಎಲ್ಲಿಗೆ ಕಳುಹಿಸಬೇಕು ಅದನ್ನು ಮಾಡಲಾಗುತ್ತದೆ. ತನಿಖೆಯಲ್ಲಿ ಎಲ್ಲವೂ ಹೊರಬರಲಿದೆ. ಮೂರ್ನಾಲ್ಕು ದಿನಗಳ ಕಾಲ ತಾಳ್ಮೆಯಿಂದಿರಿ ಎಂದು ಮನವಿ ಮಾಡಿದರು.

# ಸಿದ್ದರಾಮಯ್ಯ 24 ಕೊಲೆ ಮಾಡಿದ್ದಾರೆ ಎಂದಿದ್ದರೇ ತಿಮರೋಡಿ

**■ ಸೌಜನ್ಯ ಪರ ಹೋರಾಟಗಾರ ಮಹೇಶ್ ಶೆಟ್ಟಿ ತಿಮರೋಡಿ ಸಂಬಂಧ ಗದ್ದಲ ■ ಶಾಸಕ ಹರೀಶ್ ಪೂಂಜಾ ಹೇಳಿಕೆ ಉಲ್ಲೇಖಿಸಿದ್ದ ತಿಮರೋಡಿ**

• **ಉದಯವಾಹಿನಿ, ಬೆಂಗಳೂರು**

'ಸಿಎಂ ಸಿದ್ದರಾಮಯ್ಯ 24 ಕೊಲೆಗಳನ್ನು ಮಾಡಿದ್ದಾರೆ ಎಂದು ಸೌಜನ್ಯ ಪರ ಹೋರಾಟಗಾರ ಮಹೇಶ್ ಶೆಟ್ಟಿ ತಿಮರೋಡಿ ಹೇಳಿಕೆ ನೀಡಿದ್ದಾರೆ' ಎಂಬ ವಿಚಾರ ಸೋಮವಾರ ಸದನದಲ್ಲಿ ದೊಡ್ಡ ಮಟ್ಟದ ಗದ್ದಲಕ್ಕೆ ಕಾರಣವಾಯಿತು. ಸ್ವತಃ ವಿಪಕ್ಷ ನಾಯಕ ಆರ್. ಅಶೋಕ್ ಈ ವಿಚಾರವನ್ನು ಪ್ರಸ್ತಾಪ ಮಾಡಿ, 'ಕರ್ನಾಟಕದಲ್ಲಿ ಗೂಂಡಾ ರಾಜ್ಯ ನಡೆಯುತ್ತಿದೆ' ಎಂದು ಆರೋಪ ಮಾಡಿದರು. ಆದರೆ ಕೆಲವೇ ಕ್ಷಣಗಳಲ್ಲಿ ವಿಡಿಯೋ ಅಸಲಿಯತ್ತು ಬಯಲಿಗೆ ಬಂದಿದೆ.

**ಏನಂದಿದ್ದರು ಅಶೋಕ್**

ಸೋಮವಾರ ಪ್ರಶ್ನೋತ್ತರ ಅವಧಿ ಮುಗಿದ ಬಳಿಕ ವಿಪಕ್ಷ ನಾಯಕ ಆರ್ ಅಶೋಕ್ ಈ ವಿಚಾರ ಪ್ರಸ್ತಾಪ ಮಾಡಿದರು. ಸದನ ನಡೆಯುತ್ತಿದೆ. ಇದೇ ಸಂದರ್ಭದಲ್ಲಿ ಧರ್ಮಸ್ಥಳ ವಿಚಾರವಾಗಿ ಚರ್ಚೆಗಳು ನಡೆಯುತ್ತಿದೆ.

ಹೀಗಿರುವಾಗ ರಾಜ್ಯದ ಸಿಎಂ ಸಿದ್ದರಾಮಯ್ಯ 24 ಕೊಲೆಗಳನ್ನು ಮಾಡಿದ್ದಾರೆ ಎಂಬ ಆರೋಪವನ್ನು ಓರ್ವ ವ್ಯಕ್ತಿ ಮಾಡುತ್ತಾರೆ. ಸದನ ನಡೆಯುವಾಗ ರಾಜ್ಯದ ಸಿಎಂ ಕೊಲೆ ಮಾಡಿದ್ದಾರೆ ಎಂದು ಆರೋಪ ಮಾಡಿದರೆ ಹೇಗೆ ಗೂಂಡಾ ರಾಜ್ಯ ನಡೆಯುತ್ತಿದ್ಯಾ, ಯಾರು ಬೇಕಾದರೂ ಏನು ಹೇಳಬಹುದೇ ಸಿಎಂ 28 ಕೊಲೆ ಮಾಡಿದ್ದಾರಾ ಸಿಎಂ ಕೊಲೆಗಾರರೇ ಆ ವ್ಯಕ್ತಿಯ ಮೇಲೆ ಎಸ್‌ಐಟಿ ರಚನೆ ಮಾಡುತ್ತಾರಾ 15 ದಿನ ಸೀರಿಯಲ್ ಆಗುತ್ತಾ ಸರ್ಕಾರಕ್ಕೆ ಕಿವಿ ಇಲ್ಲ, ಎಂದು ಒಂದೇ ಸಮನೆ ಅಬ್ಬರಿಸಿದರು.





ಇದಕ್ಕೆ ಧ್ವನಿಗೂಡಿಸಿದ ಸುನೀಲ್ ಕುಮಾರ್ ''ಈ ಆರೋಪವನ್ನು ಸಿಎಂ ಸಿದ್ದರಾಮಯ್ಯ ಒಪ್ಪುತ್ತಾರಾ ಆರೋಪ ಮಾಡಿದವರ ವಿರುದ್ಧ ಕ್ರಮ ಕೈಗೊಳ್ಳುತ್ತೀರಾ ಮೌನವಾಗಿದ್ದರೆ ಕೊಲೆ ಮಾಡಿದ್ದೀರಿ ಎಂದರ್ಥ,'' ಎಂದು ಏರು ಸ್ವರದಲ್ಲಿ ತರಾಟೆಗೆ ತೆಗೆದುಕೊಂಡರು. ಇದೇ ವೇಳೆ ''ಸಾಮಾಜಿಕ ಜಾಲತಾಣದಲ್ಲಿ ಸಿಎಂ 28 ಕೊಲೆ ಮಾಡಿದ್ದಾರೆ ಎಂದು ಹೇಳುವುದಾದರೆ ಸರ್ಕಾರ ಇದನ್ನು ಹೇಗೆ ಸಹಿಸುತ್ತೆ'' ಎಂದು ಸುರೇಶ್ ಕುಮಾರ್ ಕೂಡ ಪ್ರಶ್ನಿಸಿದರು.

ಬಿಜೆಪಿ ಸದಸ್ಯರ ಆರೋಪಗಳಿಗೆ ಪ್ರತಿಕ್ರಿಯೆ ನೀಡಿದ ಡಿಸಿಎಂ ಡಿಕೆ ಶಿವಕುಮಾರ್ ಆ ವ್ಯಕ್ತಿಯ ಹೇಳಿಕೆ ಗಮನಿಸಿದ್ದೇನೆ. ನಿಮ್ಮ ಪಕ್ಷದ ನಾಯಕರ ವಿರುದ್ಧನೂ ಮಾತನಾಡಿದ್ದಾರೆ. ಆದರೆ ಸದನದಲ್ಲಿ ಅವರ ಹೆಸರು ಉಲ್ಲೇಖ ಮಾಡಿ ಅವರನ್ನು ದೊಡ್ಡವರಾಗಿ ಮಾಡಬೇಡಿ. ಅವರು ಮಾತನಾಡಿದ ಹೇಳಿಕೆ ಬಗ್ಗೆ ಸಿಎಂ ಸಿದ್ದರಾಮಯ್ಯ ಅವರಿಗೂ ತಿಳಿಸಿದ್ದೇನೆ. ಅವರು ಗೃಹ ಸಚಿವರಿಗೆ ಸೂಚನೆ ನೀಡಿದ್ದಾರೆ, ಎಂದು ಹೇಳಿದರು.

### ವಿಡಿಯೋದ ಅಸಲಿಯತ್ತೇನು

ಈ ವಿಡಿಯೋದ ಅಸಲಿಯತ್ತು ಬೇರೆಯೇ ಇದೆ. ಇದು 2023ರಲ್ಲಿ ಬೆಳ್ತಂಗಡಿಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಸೌಜನ್ಯ ಪರ ಹೋರಾಟಗಾರ ಮಹೇಶ್ ಶೆಟ್ಟಿ ತಿಮರೋಡಿ ನೀಡಿದ ಹೇಳಿಕೆಯ ತುಣುಕುಗಳಾಗಿವೆ. ಇದರಲ್ಲಿ ಅವರು ಸ್ಥಳೀಯ ಶಾಸಕ ಹರೀಶ್ ಪೂಂಜಾ ವಿರುದ್ಧ ವಾಗ್ದಾಳಿ ನಡೆಸುತ್ತಾ, ಸಿದ್ದರಾಮಯ್ಯ ಅವರು ಕೊಲೆ ಮಾಡಿದ್ದಾರೆ ಎಂದು ಪೂಂಜಾ ನೀಡಿದ್ದ ಹೇಳಿಕೆಯನ್ನು ಪ್ರಸ್ತಾಪ ಮಾಡಿದ್ದರು. ಸಿದ್ದರಾಮಯ್ಯ 24 ಕೊಲೆ ಮಾಡಿದ್ದಾರೆ ಎಂದು ಹರೀಶ್ ಪೂಂಜಾ ಹೇಳಿದ್ದಾರೆ. ಹೀಗಾಗಿ ಸಿದ್ದರಾಮಯ್ಯ ತಕ್ಷಣ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ಕೊಡಬೇಕು. ಹರೀಶ್ ಪೂಂಜಾ ನಮ್ಮ ಶಾಸಕ. ಸಿದ್ದರಾಮಯ್ಯ ಅವರು ಹತ್ಯೆ ಮಾಡಿದ್ದಾರೆ ಎಂದು ನಾವೂ ಹೇಳುತ್ತೇವೆ. ಕಾರಣ ನಮ್ಮ ಶಾಸಕರು ಹೇಳಿದ್ದಾರೆ. ಹಾಗಿರುವಾಗ ನಾವು ಏಕೆ ಹೆದರಬೇಕು. ಸಿದ್ದರಾಮಯ್ಯ ನೂರಕ್ಕೆ ನೂರು ಹತ್ಯೆ ಮಾಡಿದ್ದಾರೆ. ನಮ್ಮ ಶಾಸಕರು ಹೇಳಿದ್ದಾರೆ. ಹೀಗಾಗಿ ಸಿದ್ದರಾಮಯ್ಯ ಕೂಡಲೇ ರಾಜೀನಾಮೆ ನೀಡಬೇಕು ಎಂದು ತಿಮರೋಡಿ ಹೇಳಿದ್ದರು.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹10,118/Gram24ct ₹9,275/Gram22ct ಬೆಳ್ಳಿ: ₹117.00/Gram

# ಹರಿದಾಸ ನಮನ ಗಾಯನ



• ಉದಯವಾಹಿನಿ ಬೆಂಗಳೂರು

ಪವಮಾನಪುರದ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶದಂತೆ ಶ್ರೀಮಠದ ವಿಚಾರಣಾಕರ್ತರಾದ ಶ್ರೀ ಗಿರಿರಾಜಾಚಾರ್ಯರ ನೇತೃತ್ವದಲ್ಲಿ ಆಗಸ್ಟ್ 21, ಗುರುವಾರ ಸಂಜೆ 7-00ಕ್ಕೆ ಹರಿದಾಸ ನಮನ. ಗಾಯನ : ಶ್ರೀಮತಿ ಸಿಂಧು ಚಿರದೀಪ್ ಮತ್ತು ಚಿ|| ವಿಷ್ಣುವಸಿಷ್ಠ, ಪಿಟೀಲು : ಕೇಶವಪ್ರಸಾದ್ ಎಚ್.ಎಸ್., ಮೃದಂಗ : ಶ್ರೀ ವರದರಾಜ್ ಬಿ.ಎಸ್. ಸ್ಥಳ : ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, ಪವಮಾನಪುರ ಬನಶಂಕರಿ 6ನೇ ಹಂತ, ಬೆಂಗಳೂರು

# ದೇಶದಲ್ಲಿ ವನ್ಯಜೀವಿಗಳ ಸಂರಕ್ಷಣೆಗಾಗಿ ಯುವ ಸಮುದಾಯ ಪರಿಸರ ಕಾರ್ಯ



• ಉದಯವಾಹಿನಿ ಬೆಂಗಳೂರು

ದೇಶ ರಕ್ಷಣೆ ಮಾಡಿದಂತೆ, ಪರಿಸರ - ವನ್ಯಜೀವಿಗಳ ಸಂರಕ್ಷಣೆ ಮಾಡುವುದು ಅತೀಮುಖ್ಯವಾಗಿದೆ ಎಂದು ಆರ್ಮಿ ಡಾಗ್ ಟ್ರೈನಿಂಗ್ ಕ್ಯಾಂಪಸಿನ ಡಿಐಜಿ ಎಸ್. ಸುರೇಶ್ ಹೇಳಿದರು. ನಗರದ ಬನ್ನೇರುಘಟ್ಟ ಕಗ್ಗಲಿಪುರ ರಸ್ತೆಯಲ್ಲಿ ಇರುವ ಸಿಆರ್‌ಪಿಎಫ್ ಆರ್ಮಿ ಡಾಗ್ ಟ್ರೈನಿಂಗ್ ಕ್ಯಾಂಪಸಿನಲ್ಲಿ ಹಸಿರು ಸೇನಾ ಪಡೆ ಹಾಗೂ ಮನ್ವಿತ್ ಫೌಂಡೇಶನ್ ಆಯೋಜಿಸಿದ ಕಾಡು ಗಿಡಗಳನ್ನು ನೆಡುವ ಕಾರ್ಯಕ್ರಮದಲ್ಲಿ ಗಿಡ ನೆಟ್ಟು ಮಾತನಾಡಿದ ಅವರು. ದೇಶದಲ್ಲಿ ವನ್ಯಜೀವಿಗಳ ಸಂರಕ್ಷಣೆಗಾಗಿ ಯುವ ಸಮುದಾಯ ಪರಿಸರ ಕಾರ್ಯದಲ್ಲಿ ತೊಡಗಿಸಿಕೊಂಡು ಹಸಿರು ಸೇನಾ ಪಡೆಯಂತೆ ಕಾರ್ಯನಿರ್ವಾಹಿಸಬೇಕು ಎಂದರು. ಹಸಿರು ಸೇನಾ ಪಡೆ ಮುಖ್ಯಸ್ಥರಾದ ಡಿ.ಎಸ್ ಕಿರಣ್ ಕುಮಾರ್ ಮಾತನಾಡಿ, ಕರ್ನಾಟಕದಲ್ಲಿ ಇರುವ ಕಾಡು, ಕಾಡುಪ್ರಾಣಿಗಳನ್ನು ರಕ್ಷಿಸಬೇಕೆಂದರೆ ಪ್ಲಾಸ್ಟಿಕ್ ತ್ಯಜಿಸಿ, ಪರಿಸರ ಸ್ನೇಹಿ ಜೀವನಕ್ಕೆ ಮುಂದಾಗಬೇಕು. ಎಲ್ಲಾ ಪ್ರವಾಸಿ ತಾಣಗಳು, ಪ್ರೇಕ್ಷಣೀಯ, ಮಠಮಂದಿಗಳಲ್ಲಿ ಪ್ಲಾಸ್ಟಿಕ್ ಮುಕ್ತಗೊಳಿಸಲು ಸರ್ಕಾರ ಮುಂದಾಗಬೇಕೆಂದರು. ಇದೇ ವೇಳೆ ಎಂಎಲ್‌ಎ ಕಾಲೇಜಿನ ವಿದ್ಯಾರ್ಥಿಗಳು, 500ಕ್ಕೂ ಹೆಚ್ಚು ಗಿಡಗಳನ್ನು ನೆಡಲು ಸ್ವಯಂ ಭಾಗಿಯಾಗಿದ್ದರು. ಈ ಸಂದರ್ಭದಲ್ಲಿ ಸ್ವಾಟ್ ಸಂಸ್ಥೆಯ ಎಂ.ಎನ್. ಸಿಂಹಾದ್ರಿ, ಲಯನ್ಸ್ ಕ್ಲಬ್ ನಿರ್ದೇಶಕರಾದ ಡಾ. ಮಮತಾ ರಾವತ್, ಪ್ರಾಧ್ಯಾಪಕರು ಹಾಗೂ ಎನ್.ಎನ್.ಎಸ್ ಘಟಕದ ಮುಖ್ಯಸ್ಥರಾದ ಶ್ರೀಮತಿ ದಾಕ್ಷಾಯಿಣಿ, ಸಸ್ತಾನಬ್ಬೆ ಎನ್ವಿರ್ನಮೆಂಟ್ ಡೆವಲಪ್ಮೆಂಟ್ ಟ್ರಸ್ಟ್ ಸಂಸ್ಥಾಪಕ ಪ್ರಕೃತಿ ಪ್ರಸನ್ನ, ಅಕ್ಷಯ್ ಕುಮಾರ್ ಮತ್ತಿತರರು ಇದ್ದರೂ.

# ಲಾಲ್‌ಬಾಗ್ ಫಲಪುಷ್ಪ ಪ್ರದರ್ಶನಕ್ಕೆ ಇಂದು ತೆರೆ 5.80 ಲಕ್ಷ ಜನರಿಂದ ವೀಕ್ಷಣೆ



• ಉದಯವಾಹಿನಿ ಬೆಂಗಳೂರು

ಲಾಲ್‌ಬಾಗ್‌ನಲ್ಲಿ ನಡೆಯುತ್ತಿರುವ 218ನೇ ಫಲಪುಷ್ಪ ಪ್ರದರ್ಶನಕ್ಕೆ ತೆರೆಬೀಳಲಿದೆ. ಸ್ವಾತಂತ್ರ್ಯ ದಿನಾಚರಣೆಯಲ್ಲಿ ಹಿನ್ನೆಲೆ ನಗರದ ಲಾಲ್‌ಬಾಗ್‌ನಲ್ಲಿ ಆ.07ರಿಂದ 18ರವರೆಗೆ ಫಲಪುಷ್ಪ ಪ್ರದರ್ಶನ ಹಮ್ಮಿಕೊಳ್ಳಲಾಗಿತ್ತು. ಸಂಜೆ 7 ಗಂಟೆಗೆ ಫಲಪುಷ್ಪ ಪ್ರದರ್ಶನ ಮುಕ್ತಾಯಗೊಳ್ಳಲಿದೆ. ಪ್ರದರ್ಶನದಲ್ಲಿ ಕಿತ್ತೂರು ರಾಣಿ ಚೆನ್ನಮ್ಮನ ಥೀಮ್‌ನಲ್ಲಿ ಕಿತ್ತೂರು ಸಂಸ್ಥಾನ, ರಾಜರು, ಇತಿಹಾಸ, ಚೆನ್ನಮ್ಮ ಹಾಗೂ ಸಂಗೊಳ್ಳಿ ರಾಯಣ್ಣನ ಐತಿಹಾಸಿಕ ಹೆಜ್ಜೆಗುರುತುಗಳ ಪ್ರತಿಬಿಂಬವನ್ನು ಪುಷ್ಪಗಳಲ್ಲಿ ತೋರ್ಪಡಿಸಲಾಗಿತ್ತು. ಒಂದೇ ದಿನ ಫಲಪುಷ್ಪ ಪ್ರದರ್ಶನ ವೀಕ್ಷಣೆಗೆ 7,960 ಮಕ್ಕಳು, 7,200 ಶಾಲಾ ಮಕ್ಕಳು, 52,150 ವಯಸ್ಕರು ಸೇರಿದಂತೆ ಒಟ್ಟು 67,310 ಮಂದಿ ಭೇಟಿ ನೀಡಿದ್ದು, ಒಟ್ಟು 37.39 ಲಕ್ಷ ರೂ. ಆದಾಯ ಬಂದಿದೆ. ಈವರೆಗೆ ಒಟ್ಟು 5.80 ಲಕ್ಷ ಜನರು ಲಾಲ್‌ಬಾಗ್‌ಗೆ ಭೇಟಿ ನೀಡಿದ್ದಾರೆ. ಸೋಮವಾರ ಕೊನೆಯ ದಿನವಾದ್ದರಿಂದ ಹೆಚ್ಚಿನ ಸಂಖ್ಯೆಯಲ್ಲಿ ಜನ ಆಗಮಿಸುತ್ತಿದ್ದು, ದಿನದ ಅಂತ್ಯಕ್ಕೆ ಭೇಟಿ ಕೊಟ್ಟವರ ಒಟ್ಟು ಜನರ ಸಂಖ್ಯೆ 6 ಲಕ್ಷಕ್ಕೆ ಏರಿಕೆಯಾಗುವ ಸಾಧ್ಯತೆಯಿದೆ.

# ಫ್ಲ್ಯಾಟ್ ವೀಕ್ಷಣೆಗೆ ತ್ರಿಡಿ ವಿನ್ಯಾಸದ ತಂತ್ರಜ್ಞಾನ

## ಹಣ ಪಾವತಿ, ದಾಖಲೆಗಳ ಸಂಗ್ರಹಕ್ಕೂ ಕಚೇರಿಗೆ ತೆರಳಬೇಕಿಲ್ಲ

• ಉದಯವಾಹಿನಿ ಬೆಂಗಳೂರು

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ(ಬಿಡಿಎ)ವು ಇನ್ನಷ್ಟು ಹೈಟೆಕ್ ಆಗಲಿದೆ. ವಿಲ್ಲಾ/ಫ್ಲ್ಯಾಟ್‌ಗಳನ್ನು ತ್ರಿಡಿ ವಿನ್ಯಾಸದಲ್ಲಿ ಆನ್‌ಲೈನ್‌ನಲ್ಲಿ ವೀಕ್ಷಿಸುವ ಜತೆಗೆ ಆನ್‌ಲೈನ್‌ನಲ್ಲೇ ಖರೀದಿಯ ಎಲ್ಲಾ ಹಂತಗಳನ್ನು ಪೂರ್ಣಗೊಳಿಸಬಹುದಾದ ವ್ಯವಸ್ಥೆಯನ್ನು ರೂಪಿಸುತ್ತಿದೆ.

ಬಿಡಿಎ ಹೊಸ ತಂತ್ರಜ್ಞಾನ ಆಧಾರಿತ ವೆಬ್‌ಸೈಟ್ ಸಿದ್ಧಪಡಿಸಿದೆ. ಈ ತಿಂಗಳಾಂತ್ಯಕ್ಕೆ ವೆಬ್‌ಸೈಟ್ ಸಾರ್ವಜನಿಕರಿಗೆ ಲಭ್ಯವಾಗಲಿದೆ. ಹೊಸ ವೆಬ್‌ಸೈಟ್ ಮೂಲಕ ಬಿಡಿಎ ನಿರ್ಮಿಸಿರುವ ಫ್ಲ್ಯಾಟ್/ ವಿಲ್ಲಾಗಳನ್ನು ಕುಳಿತಲ್ಲೇ ವೀಕ್ಷಿಸಬಹುದು. ತ್ರಿಡಿ ವಿನ್ಯಾಸದಲ್ಲಿ ವೀಕ್ಷಣೆ ವ್ಯವಸ್ಥೆ ಇರುವುದರಿಂದ ಸ್ಥಳಕ್ಕೆ ಹೋಗಿ ನೋಡಿದ ಅನುಭವವೇ ಸಿಗಲಿದೆ. ಅರ್ಜಿ ಪಡೆಯಲು, ದಾಖಲೆ ಸಲ್ಲಿಸಲು, ಹಣ ಪಾವತಿಸಲು ಕಚೇರಿಗಳನ್ನು ಎಡತಾಕಬೇಕಿಲ್ಲ. ಎಲ್ಲವನ್ನೂ ಕುಳಿತಲ್ಲಿಂದಲೇ ಮಾಡಬಹುದು. ನೋಂದಣಿಗಷ್ಟೇ ಉಪ ನೋಂದಣಾಧಿಕಾರಿ ಕಚೇರಿಗೆ ಭೌತಿಕವಾಗಿ ಹಾಜರಾಗಬೇಕಾಗುತ್ತದೆ.

**ಆನ್‌ಲೈನ್ ಖರೀದಿ ಹೇಗೆ:** ಈ ಹಿಂದೆ ಇದ್ದ ಆನ್‌ಲೈನ್



ವ್ಯವಸ್ಥೆಯಲ್ಲಿ ವಿಲ್ಲಾ, ಫ್ಲ್ಯಾಟ್‌ಗಳ ಪೈಕಿ ಒಂದು ಮನೆ ಮಾದರಿಯ ವಿಡಿಯೊವನ್ನು ಮಾತ್ರ ಅಪ್‌ಲೋಡ್ ಮಾಡಲಾಗುತ್ತಿತ್ತು. ಆದರೆ ಹೊಸ ತಂತ್ರಜ್ಞಾನದಲ್ಲಿ ಪ್ರತಿ ಫ್ಲ್ಯಾಟ್ ಮತ್ತು ವಿಲ್ಲಾಗಳ ವಿಡಿಯೊ ಮತ್ತು ಸಂಪೂರ್ಣ ಮಾಹಿತಿ ಲಭ್ಯವಿರುತ್ತದೆ. ಮನೆಯ ಸಂಖ್ಯೆ ನಮೂದಿಸಿದರೆ, ಅದು ಯಾವ ದಿಕ್ಕಿನಲ್ಲಿದೆ ಅದರ ವಿಸ್ತೀರ್ಣ ಮತ್ತು ವಿನ್ಯಾಸವನ್ನು ನೋಡಬಹುದು. ಮನೆಯ ಪ್ರತಿ ಭಾಗವನ್ನೂ ಸ್ಪಷ್ಟವಾಗಿ ವೀಕ್ಷಿಸಬಹುದು. ಮನೆಗೆ ನಿಗದಿಯಾಗಿರುವ ಪಾರ್ಕಿಂಗ್ ಜಾಗವನ್ನೂ ವೀಕ್ಷಿಸಬಹುದು. ಆರಂಭಿಕ ಠೇವಣಿ, ಮನೆಯ ಒಟ್ಟು ಮೌಲ್ಯವೆಷ್ಟು ಅರ್ಜಿ ಸಲ್ಲಿಕೆಗೆ ಕೊನೆಯ ದಿನಾಂಕ ಎಷ್ಟು ಫ್ಲ್ಯಾಟ್/ವಿಲ್ಲಾಗಳು ಖಾಲಿಯಿವೆ ಎಂಬಿತ್ಯಾದಿ ಮಾಹಿತಿಯೂ ವೆಬ್‌ಸೈಟ್‌ನಲ್ಲಿ ಸಿಗಲಿವೆ. ಒಮ್ಮೆ ಬುಕ್ ಮಾಡಿ ಆರಂಭಿಕ ಠೇವಣಿ ಪಾವತಿಸಿದರೆ ಫ್ಲ್ಯಾಟ್/ವಿಲ್ಲಾ ನೋಂದಣಿ ಮಾಡಿಸಿಕೊಳ್ಳಲು ಗರಿಷ್ಠ 180 ದಿನ ಕಾಲಾವಕಾಶವಿರುತ್ತದೆ. 90 ದಿನದ ಒಳಗೆ ನೋಂದಣಿ ಮಾಡಿಕೊಂಡರೆ ಯಾವುದೇ ಬಡ್ಡಿ ಇರುವುದಿಲ್ಲ. 90 ದಿನದ ಬಳಿಕವಾದರೆ ಬಡ್ಡಿ ಪಾವತಿಸಿ ನೋಂದಣಿ ಮಾಡಿಕೊಳ್ಳಬೇಕಿರುತ್ತದೆ. 180 ದಿನಗಳ ಬಳಿಕವೂ ಗ್ರಾಹಕರು ಆಸಕ್ತಿ ತೋರದಿದ್ದರೆ ಮುಂಗಡ ಕಾಯ್ದಿರಿಸುವಿಕೆಯನ್ನು ರದ್ದು ಪಡಿಸಲಾಗುತ್ತದೆ, ಎಂದು ಬಿಡಿಎ ಮುಖ್ಯ ಲೆಕ್ಕಾಧಿಕಾರಿ ಎಂ.ಜಿ. ಶ್ರೀನಿವಾಸ ಮೂರ್ತಿ ತಿಳಿಸಿದರು.

ಬಿಡಿಎ ಫ್ಲ್ಯಾಟ್ ಖರೀದಿ, ನೋಂದಣಿ ಮಾಡಿಸಿಕೊಳ್ಳಲು ಅಧಿಕಾರಿಗಳು, ಸಿಬ್ಬಂದಿ ಪದೇ ಪದೇ ಕಚೇರಿಗೆ ಅಲೆದಾಡಿಸುತ್ತಾರೆ ಎಂಬ ದೂರುಗಳಿದ್ದವು. ಹೊಸ ವ್ಯವಸ್ಥೆ ಜಾರಿಗೆ ಬಂದ ಬಳಿಕ ಫ್ಲ್ಯಾಟ್ ಖರೀದಿ ಪ್ರಕ್ರಿಯೆ ಸುಗಮವಾಗುವ ನಿರೀಕ್ಷೆ ಇದೆ.

### 7 ದಿನಗಳೊಳಗೆ ನೋಂದಣಿ

**ಗ್ರಾಹಕರು ಮನೆಯ ಪೂರ್ಣ ಮೊತ್ತ ಪಾವತಿಸಿದ ನಂತರ 50 ಲಕ್ಷ ರೂ.ಗೂ ಹೆಚ್ಚು ಮೌಲ್ಯದ ಫ್ಲ್ಯಾಟ್‌ಗಳಿಗೆ 26 ಕ್ಯೂಬಿ, 16ಬಿ ಅರ್ಜಿ ನಮೂನೆ ಸಲ್ಲಿಸಬೇಕು. ಅಂತಹವರಿಗೆ 5 ರಿಂದ 7 ದಿನಗಳೊಳಗೆ ನೋಂದಣಿ ಮಾಡಿಕೊಡಲಾಗುತ್ತದೆ. ಬಳಿಕ ಸ್ವಾಧೀನಾನುಭವ ಪ್ರಮಾಣಪತ್ರ ಹಾಗೂ ಖಾತಾವನ್ನು ಕೂಡ ಅನ್‌ಲೈನ್‌ನಲ್ಲೇ ಪಡೆಯಬಹುದು. ಈವರೆಗೆ ಫ್ಲ್ಯಾಟ್ / ವಿಲ್ಲಾಗಳ ಬುಕ್ಕಿಂಗ್‌ಗೆ ಮಾತ್ರ ಆನ್‌ಲೈನ್ ವ್ಯವಸ್ಥೆಯಿತ್ತು. ಈಗ ಮನೆ ವೀಕ್ಷಣೆಯಿಂದ ಹಣ ಪಾವತಿವರೆಗೆ ಎಲ್ಲವನ್ನೂ ಆನ್‌ಲೈನ್ ಮಾಡಲಾಗಿದೆ. ನೋಂದಣಿಗಷ್ಟೇ ಗ್ರಾಹಕರು ಭೌತಿಕವಾಗಿ ಹಾಜರಾಗಬೇಕು. ಈ ವ್ಯವಸ್ಥೆಯನ್ನು ಶೀಘ್ರದಲ್ಲೇ ಜಾರಿಗೆ ತರಲಾಗುವುದು ಎಂದಿದ್ದಾರೆ -ಡಾ. ಎ.ಲೋಕೇಶ್, ಬಿಡಿಎ ಅರ್ಥಿಕ ಸದಸ್ಯ**

# 2026ರ ಡಿಸೆಂಬರ್ ಒಳಗೆ 1,80,253 ಮನೆ ಪೂರ್ಣ

• ಉದಯವಾಹಿನಿ ಬೆಂಗಳೂರು

ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ವತಿಯಿಂದ ಪಿಎಂಎವೈ ಯೋಜನೆಯಡಿಯಲ್ಲಿ ರಾಜ್ಯಾದ್ಯಂತ ಪ್ರಗತಿಯಲ್ಲಿರುವ 1,80,253 ಮನೆಗಳ ಕಾಮಗಾರಿಯನ್ನು 2026ರ ಡಿಸೆಂಬರ್ ಒಳಗೆ ಪೂರ್ಣಗೊಳಿಸಲಾಗುವುದು ಎಂದು ವಸತಿ ಸಚಿವ ಜಮೀರ್ ಅಹಮದ್ ಖಾನ್ ತಿಳಿಸಿದರು.

ಶಾಸಕ ಸಿದ್ದು ಪಾಟೀಲ್ ಅವರ ಪ್ರಶ್ನೆಗೆ ವಿಧಾನಸಭೆಯಲ್ಲಿ ಉತ್ತರಿಸಿದ ಸಚಿವರು, ಫಲಾನುಭವಿಗಳ ವಂತಿಗೆ ಪಾವತಿ ಆಗದ ಕಾರಣ ಯೋಜನೆಗೆ ಸಮಸ್ಯೆ ಉಂಟಾಗಿತ್ತು.

ಮುಖ್ಯಮಂತ್ರಿಗಳಿಗೆ ಸಮಸ್ಯೆ ಮನವರಿಕೆ ಮಾಡಿಕೊಟ್ಟು ಬಡವರ ಮನೆಗೆ ಸರ್ಕಾರವೇ ಫಲಾನುಭವಿಗಳ ವಂತಿಗೆ ಪಾವತಿಸುವ ಮಹತ್ವದ ತೀರ್ಮಾನ ಕೈಗೊಳ್ಳಲಾಯಿತು. 500 ಕೋಟಿ ರೂ. ಬಿಡುಗಡೆ ನಂತರ ಮೊದಲ ಹಂತದಲ್ಲಿ 36,789 ಮನೆ ಹಂಚಿಕೆ ಮಾಡಿ 2ನೇ ಹಂತದಲ್ಲಿ 40,345 ಮನೆ ಹಂಚಿಕೆಗೆ ಸಿದ್ಧತೆ ನಡೆದಿದೆ. ಸಿಎಂ 2026ರ ಒಳಗೆ ಪೂರ್ಣಗೊಳಿಸಲು ಸೂಚಿಸಿದ್ದು ಅದರಂತೆ ಕ್ರಮ



ಕೈಗೊಳ್ಳಲಾಗುವುದು ಎಂದು ಜಮೀರ್ ಮಾಹಿತಿ ನೀಡಿದರು. ಅರವಿಂದ್ ಬೆಲ್ಲದ್ ಅವರ ಉಪ ಪ್ರಶ್ನೆಗೆ ಉತ್ತರಿಸಿದ ಸಚಿವರು, ರಾಜೀವ್ ಗಾಂಧಿ ವಸತಿ ನಿಗಮ ವತಿಯಿಂದ ಬಡ ಕುಟುಂಬಗಳಿಗೆ 47,870 ಮನೆ ನಿರ್ಮಾಣ ಯೋಜನೆ ಸಹ ಫಲಾನುಭವಿಗಳ ವಂತಿಗೆ ಪಾವತಿ ಆಗದ ಕಾರಣ, ಆ ವಿಚಾರ ಸಹ ಮುಖ್ಯಮಂತ್ರಿಯವರ ಗಮನಕ್ಕೆ ತಂದಿದ್ದು, ಸರ್ಕಾರವೇ ವಂತಿಗೆ ಭರಿಸಲು ತಾತ್ವಿಕ ಒಪ್ಪಿಗೆ ದೊರೆತಿದ್ದು, ಸಂಪುಟಕ್ಕೆ ತಂದು ಒಪ್ಪಿಗೆ ಪಡೆಯಲಾಗುವುದು. ಆ ಮನೆಗಳನ್ನ ಆದಷ್ಟು ಬೇಗ ಪೂರ್ಣಗೊಳಿಸಿ ಹಂಚಿಕೆ ಮಾಡಲಾಗುವುದು ಎಂದು ಸಚಿವ ಜಮೀರ್ ವಿವರಿಸಿದರು.

# ವಿಧಾನ ಮಂಡಲದ ಅಧಿವೇಶನ ಮುಗಿದ ಬಳಿಕ ಬಿಪಿಎಲ್ ಕಾರ್ಡ್ ಪರಿಷ್ಕರಣೆ

• ಉದಯವಾಹಿನಿ ಬೆಂಗಳೂರು

ವಿಧಾನ ಮಂಡಲದ ಅಧಿವೇಶನ ಮುಗಿದ ಕೂಡಲೇ ಅನರ್ಹ ಬಿಪಿಎಲ್ ಕಾರ್ಡ್ ಪರಿಷ್ಕರಣೆ ಪ್ರಕ್ರಿಯೆ ಪ್ರಾರಂಭ ಮಾಡೋದಾಗಿ ಆಹಾರ ಸಚಿವ ಮುನಿಯಪ್ಪ ವಿಧಾನ ಪರಿಷತ್‌ನಲ್ಲಿ ಘೋಷಣೆ ಮಾಡಿದ್ದಾರೆ.

ವಿಧಾನ ಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿ ಪ್ರತಾಪ್ ಸಿಂಹ ನಾಯಕ್, ಕಾಂಗ್ರೆಸ್‌ನ ಯತೀಂದ್ರ ಸಿದ್ದರಾಮಯ್ಯ ಪ್ರಶ್ನೆ ಕೇಳಿದರು. ಪ್ರತಾಪ್ ಸಿಂಹ ನಾಯಕ್ ಮಾತಾಡಿ, ರಾಜ್ಯದಲ್ಲಿ ಹೊಸ ರೇಷನ್ ಕಾರ್ಡ್ ಸಿಗುತ್ತಿಲ್ಲ. ಜನರು ಅರ್ಜಿ ಹಾಕಿ ಕಾಯುತ್ತಿದ್ದಾರೆ. ಸರ್ಕಾರ ಸಿದ್ಧ ಉತ್ತರ ಕೊಡುತ್ತಿದೆ. ಅಕ್ಕಿ ಮೇಲೆ ಆಸೆ ನೆಂಟರ ಮೇಲೆ ಪ್ರೀತಿ ತರಹ ಸರ್ಕಾರ ಮಾಡುತ್ತಿದೆ. ಕೂಡಲೇ ಅರ್ಜಿ ಹಾಕಿರೋರಿಗೆ ರೇಷನ್ ಕಾರ್ಡ್ ಕೊಡಬೇಕು. ಸಮಸ್ಯೆ ಪರಿಹಾರ ಮಾಡಬೇಕು ಎಂದು ಆಗ್ರಹಿಸಿದರು.

ಇದಕ್ಕೆ ಸಚಿವ ಮುನಿಯಪ್ಪ ಉತ್ತರ ನೀಡಿ, ಕರ್ನಾಟಕ ರಾಜ್ಯದಲ್ಲಿ 74% ಬಿಪಿಎಲ್ ಕಾರ್ಡ್ ಇವೆ. ಬೇರೆ ಯಾವುದೇ ದಕ್ಷಿಣ ರಾಜ್ಯದಲ್ಲಿ



ಇಷ್ಟು ಬಿಪಿಎಲ್ ಕಾರ್ಡ್ ಇಲ್ಲ. ಕರ್ನಾಟಕದಲ್ಲಿ ಬಿಪಿಎಲ್ ಕಾರ್ಡ್ ಜಾಸ್ತಿ ಇವೆ. ಈಗ 1.28 ಕೋಟಿ ಕಾರ್ಡ್‌ಗೆ ಅಕ್ಕಿ ಕೊಡಲಾಗುತ್ತಿದೆ. 3.27 ಲಕ್ಷ ಕಾರ್ಡ್ ಬಿಪಿಎಲ್ ಕಾರ್ಡ್ ಕೊಡೋಕೆ ಬಾಕಿ ಇದೆ. ಎಪಿಎಲ್ ಅರ್ಹತೆ ಇರೋರು ಬಿಪಿಎಲ್ ಕಾರ್ಡ್ ಪಡೆದಿದ್ದಾರೆ. ಅಧಿವೇಶನ ಮುಗಿದ ಬಳಿಕ ಅದನ್ನ ಪರಿಷ್ಕರಣೆ ಶುರು ಮಾಡುತ್ತೇವೆ. ಅಧಿವೇಶನ ಮುಗಿದ ಮೇಲೆ ಅನರ್ಹ ಬಿಪಿಎಲ್ ಕಾರ್ಡ್ ಪರಿಷ್ಕರಣೆ ಪ್ರಕ್ರಿಯೆ ಶುರು. ಅನರ್ಹರ ಬಿಪಿಎಲ್ ಕಾರ್ಡ್ ರದ್ದು ಮಾಡಿ ಅರ್ಜಿ ಹಾಕಿರೋ ಅರ್ಹರಿಗೆ ಬಿಪಿಎಲ್ ಕಾರ್ಡ್ ಕೊಡುತ್ತೇವೆ ಎಂದು ಹೇಳಿದರು. ಎಪಿಎಲ್ ಕಾರ್ಡ್ ರಾಜ್ಯದಲ್ಲಿ 25 ಕಾರ್ಡ್ ಇವೆ. ಆದರೆ 1 ಲಕ್ಷ ಜನರು ಮಾತ್ರ ಅಕ್ಕಿ ಪಡೆಯುತ್ತಿದ್ದಾರೆ. ಅದಕ್ಕೆ ಎಪಿಎಲ್ ಕಾರ್ಡ್ ಕೊಡೋದು ನಿಲ್ಲಿಸಿದ್ದೇವೆ. ಅಗತ್ಯ ಇದ್ದರೆ ಎಪಿಎಲ್ ಕಾರ್ಡ್ ಕೊಡ್ತೀವಿ ಅಂತ ತಿಳಿಸಿದರು.

**ಯತೀಂದ್ರ ಸಿದ್ದರಾಮಯ್ಯ ಮಾತಾಡಿ, ಮೂರು ವರ್ಷಗಳಿಂದ ಬಿಪಿಎಲ್ ಕಾರ್ಡ್ ಪೆಂಡಿಂಗ್ ಜಾಸ್ತಿ ಇವೆ. ಇದರಿಂದ ಬಡವರಿಗೆ ಸಮಸ್ಯೆ ಆಗುತ್ತಿದೆ. ಗೃಹಲಕ್ಷ್ಮಿ, ಆಸ್ಪತ್ರೆ ಅನೇಕ ಕಡೆ ರೇಷನ್ ಕಾರ್ಡ್ ಬೇಕಾಗಿದೆ. ಅನರ್ಹರ ಕಾರ್ಡ್ ರದ್ದು ಮಾಡಿ. ಅವಶ್ಯಕತೆ ಇರೋರಿಗೆ ರೇಷನ್ ಕಾರ್ಡ್ ಕೊಡಬೇಕು ಎಂದರು.**

# ಸೌರ ವಿದ್ಯುತ್ ಫಲಕ ಅಳವಡಿಕೆಗೆ ಸರ್ಕಾರ ಮುಂದು; ಯಲಹಂಕದ 2 ಕೆರೆಗಳ ಆಯ್ಕೆ..!

• ಉದಯವಾಹಿನಿ ಬೆಂಗಳೂರು

ಕೆರೆಗಳಲ್ಲಿ ತೇಲುವ ಸೌರ ವಿದ್ಯುತ್ ಫಲಕಗಳನ್ನು ಅಳವಡಿಸಿ ವಿದ್ಯುತ್ ಉತ್ಪಾದಿಸಲು ರಾಜ್ಯ ಸರ್ಕಾರ ಮುಂದಾಗಿದ್ದು, ಇದಕ್ಕಾಗಿ ಯಲಹಂಕದ 2 ಕೆರೆಗಳನ್ನು ಆಯ್ಕೆ ಮಾಡಿದೆ ಎಂದು ತಿಳಿದುಬಂದಿದೆ. ಯಲಹಂಕದ ದೊಡ್ಡಬೊಮ್ಮಸಂದ್ರ. ರಾಚೇನಹಳ್ಳಿಯ ಎರಡು ಕೆರೆಗಳನ್ನು ಆಯ್ಕೆ ಮಾಡಿಕೊಳ್ಳಲಾಗಿದ್ದು, ಈ ಕೆರೆಗಳಲ್ಲಿ ಶೇಕಡಾ 10 ರಷ್ಟು ತೇಲುವ ಫೋಟೊವೋಲ್ಟಾಯಿಕ್ ಫಲಕಗಳ ಅಳವಡಿಸಿ 20 ಮೆಗಾವ್ಯಾಟ್ ವಿದ್ಯುತ್ ಉತ್ಪಾದಿಸಲು ಮುಂದಾಗಿದೆ ಎಂದು ತಿಳಿದುಬಂದಿದೆ.

ಈ ಯೋಜನೆಗೆ ಕರ್ನಾಟಕ ಟ್ಯಾಂಕ್ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ ದಿಂದ ಅನುಮೋದನೆ ದೊರೆತಿದ್ದು, ಫಲಕಗಳನ್ನು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ



ಲಿಮಿಟೆಡ್ ಸ್ಥಾಪಿಸಲಿದೆ ಎಂದು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಮಾಹಿತಿ ನೀಡಿದ್ದಾರೆ.

ವಿಧಾನಮಂಡಲ ಮುಂಗಾರು ಅಧಿವೇಶನದ ವೇಳೆ ತೇಲುವ ಸೌರ ವಿದ್ಯುತ್ ಫಲಕಗಳನ್ನು ಅಳವಡಿಸಲು ಆಯ್ಕೆ ಮಾಡಲಾಗಿರುವ ಕರೆಗೆಳ ಕುರಿತು ಶಿವಾಜಿನಗರ ಶಾಸಕ ರಿಜ್ವಾನ್ ಅರ್ಷದ್ ಅವರು ಪ್ರಶ್ನೆಗಳನ್ನು ಎತ್ತಿದ್ದರು.

ತೇಲುವ ಸೌರ ಫಲಕಗಳಿಂದ ಉತ್ಪಾದಿಸುವ ವಿದ್ಯುತ್ ಅನ್ನು ಸರೋವರದ ನಿರ್ವಹಣೆಗೆ ಮತ್ತು ಸುತ್ತಮುತ್ತಲಿನ ದೀಪ ಕಂಬಗಳಿಗೆ ವಿದ್ಯುತ್ ನೀಡಲು ಬಳಸಬಹುದು. ವಿದ್ಯುತ್ ಉತ್ಪಾದನೆಯ ಹೊರತಾಗಿ, ಈ ಫಲಕಗಳು ಸರೋವರದ ನೀರಿನ ಆವಿಯಾಗುವಿಕೆಯನ್ನು ತಡೆಯುತ್ತದೆ ಎಂದು ಹೇಳಿದರು. ಈ ಯೋಜನೆಗೆ ಬಜೆಟ್ ಹಂಚಿಕೆ ಕುರಿತು ಪ್ರಶ್ನಿಸಿದಾಗ, ಯೋಜನೆಯು ಆರಂಭಿಕ ಹಂತದಲ್ಲಿದೆ. ರಾಜ್ಯ ಸರ್ಕಾರ ಅಥವಾ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಇದಕ್ಕಾಗಿ ಯಾವುದೇ ಹಣವನ್ನು ಕಾಯ್ದಿರಿಸಿಲ್ಲ ಎಂದು ಹೇಳಿದರು. ಈ ಯೋಜನೆಯ ಫಲಿತಾಂಶದ ಆಧಾರದ ಮೇಲೆ ರಾಜ್ಯದಾದ್ಯಂತ ಇತರೆ ಕೆರೆಗಳಲ್ಲಿ ಸೌರ ಫಲಕಗಳನ್ನು ಸ್ಥಾಪಿಸಲಾಗುವುದು ಎಂದು ರಾಜ್ಯ ಸರ್ಕಾರದ ಮೂಲಗಳು ತಿಳಿಸಿವೆ.

**ಇದಕ್ಕೆ ಉತ್ತರಿಸಿದ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಅವರು, ಯಲಹಂಕ ವಲಯದಲ್ಲಿರುವ ದೊಡ್ಡಬೊಮ್ಮಸಂದ್ರ ಮತ್ತು ರಾಚೇನಹಳ್ಳಿಯ ಕೆರೆಗಳನ್ನು ವಿದ್ಯುತ್ ಉತ್ಪಾದಿಸಲು ಸೌರ ಫಲಕಗಳನ್ನು ಸ್ಥಾಪಿಸಲು ಆಯ್ಕೆ ಮಾಡಲಾಗಿದೆ ಎಂದು ಹೇಳಿದರು. ಕೆರೆ ಪ್ರದೇಶದ ಶೇಕಡಾ 10 ರಷ್ಟು ಪ್ರದೇಶದಲ್ಲಿ ಫಲಕಗಳನ್ನು ಸ್ಥಾಪಿಸುವ ಮೂಲಕ ಸುಮಾರು 20 ಮೆಗಾವ್ಯಾಟ್ ವಿದ್ಯುತ್ ಉತ್ಪಾದಿಸಬಹುದು ಎಂದು ತಿಳಿಸಿದರು.**

# 2 ವರ್ಷ, 7 ತಿಂಗಳಲ್ಲಿ 43,052 ಪ್ರಕರಣ ದಾಖಲು

• ಉದಯವಾಹಿನಿ ಬೆಂಗಳೂರು

ಮಹಿಳೆಯರು, ಮಕ್ಕಳ ರಕ್ಷಣೆಗೆ ಹಲವು ಕಾನೂನುಗಳು ಇದ್ದರೂ, ಅವರ ಮೇಲೆ ನಡೆಯುತ್ತಿರುವ ದೌರ್ಜನ್ಯ ಪ್ರಕರಣಗಳ ಸಂಖ್ಯೆ ವರ್ಷದಿಂದ ವರ್ಷಕ್ಕೆ ಹೆಚ್ಚುತ್ತಲೇ ಇದೆ. ಎರಡು ವರ್ಷ, ಏಳು ತಿಂಗಳಲ್ಲಿ ಮಹಿಳೆಯರು ಮತ್ತು ಮಕ್ಕಳ ಮೇಲೆ 43,053 ದೌರ್ಜನ್ಯ ಪ್ರಕರಣಗಳು ರಾಜ್ಯದಲ್ಲಿ ದಾಖಲಾಗಿವೆ. 2023 ರಿಂದ 2025ರ ಜುಲೈ ಅವಧಿಯಲ್ಲಿ ಅತ್ಯಾಚಾರ, ಲೈಂಗಿಕ ಕಿರುಕುಳ, ವರದಕ್ಷಿಣೆ ಕಿರುಕುಳ, ಸಾವು, ಗಂಡನಿಂದ ಕಿರುಕುಳ, ಪೋಕ್ಸೊ (ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣೆ ಕಾಯ್ದೆ-2012), ಬಾಲ್ಯ ವಿವಾಹ, ಬಾಲ ಕಾರ್ಮಿಕ, ಮಕ್ಕಳ ರಕ್ಷಣೆ ಮತ್ತು ಆರೈಕೆ ಕಾಯ್ದೆ (ಜೆ.ಜೆ.ಕಾಯ್ದೆ) ಅಡಿ 43 ಸಾವಿರಕ್ಕೂ ಹೆಚ್ಚು ಮಹಿಳೆಯರು ಹಾಗೂ ಮಕ್ಕಳ ಮೇಲೆ ನಡೆದ ದೌರ್ಜನ್ಯ ಪ್ರಕರಣಗಳು ದಾಖಲಾಗಿವೆ. ಇದರಲ್ಲಿ ಮಹಿಳೆಯರಿಗೆ ಲೈಂಗಿಕ ಕಿರುಕುಳ, ವರದಕ್ಷಿಣೆ ಕಿರುಕುಳ ಹಾಗೂ ಪೋಕ್ಸ್ ಕಾಯ್ದೆ ಅಡಿಯಲ್ಲಿ ದಾಖಲಾದ ಪ್ರಕರಣಗಳ ಸಂಖ್ಯೆಯೇ ಅಧಿಕವಾಗಿದೆ.

ಕೆಲಸದ ಸ್ಥಳ ಸೇರಿದಂತೆ ಬೇರೆ ಬೇರೆ ಕಡೆಗಳಲ್ಲಿ ಮಹಿಳೆಯರಿಗೆ ಲೈಂಗಿಕ ಕಿರುಕುಳ ನೀಡಿದಕ್ಕೆ ಸಂಬಂಧಿಸಿದಂತೆ



16,273 ಪ್ರಕರಣಗಳು ದಾಖಲಾಗಿವೆ.

ವರದಕ್ಷಿಣೆ ಕಿರುಕುಳಕ್ಕೆ ಸಂಬಂಧಿಸಿದಂತೆ ಒಟ್ಟು 5,456 ಪ್ರಕರಣಗಳು ದಾಖಲಾಗಿದ್ದು, ವರದಕ್ಷಿಣೆ ಕಿರುಕುಳದಿಂದಲೇ 340 ಗೃಹಿಣಿಯರು ಮೃತಪಟ್ಟಿದ್ದಾರೆ. ಗಂಡನ ಕಿರುಕುಳಕ್ಕೆ ಸಂಬಂಧಿಸಿದಂತೆ 7,546 ಪ್ರಕರಣಗಳು ದಾಖಲಾಗಿವೆ ಎಂಬುದು ಪೊಲೀಸ್ ಇಲಾಖೆಯ ಅಂಕಿ-ಅಂಶಗಳಿಂದ ಗೊತ್ತಾಗಿದೆ.

**ಅತ್ಯಾಚಾರ ಪ್ರಕರಣಗಳ ಸಂಖ್ಯೆ ವರ್ಷದಿಂದ ವರ್ಷಕ್ಕೆ ಹೆಚ್ಚುತ್ತಿವೆ. 2023ರಲ್ಲಿ 600, 2024ರಲ್ಲಿ 739, 2025ರ ಜುಲೈವರೆಗೆ 549 ಅತ್ಯಾಚಾರ ಪ್ರಕರಣಗಳು ದಾಖಲಾಗಿವೆ. ಪೋಟೊ ಪ್ರಕರಣಗಳ ಸಂಖ್ಯೆ ಹೆಚ್ಚಾಗಿದ್ದು, 2023ರಲ್ಲಿ 3,902, 2024ರಲ್ಲಿ 4,064, 2025ರ ಜುಲೈವರೆಗೆ 2,544 ಪ್ರಕರಣಗಳು ದಾಖಲಾಗಿವೆ. ಬಡತನ, ಅನಕ್ಷರತೆ, ಕಾನೂನಿನ ಕುರಿತು ಸಮರ್ಪಕ ಮಾಹಿತಿ ಇಲ್ಲದಿರುವುದರಿಂದ ಮಹಿಳೆಯರು, ಮಕ್ಕಳ ಮೇಲೆ ದೌರ್ಜನ್ಯ ಪ್ರಕರಣಗಳ ಸಂಖ್ಯೆ ಹೆಚ್ಚುತ್ತಿವೆ. ಸಂತ್ರಸ್ತ ಮಹಿಳೆಯರಿಗೆ ಮಹಿಳಾ ಆಯೋಗವು ಪೊಲೀಸ್ ಇಲಾಖೆಯ ಸಹಕಾರದ ಮೂಲಕ ರಕ್ಷಣೆ ಒದಗಿಸುವುದರ ಜೊತೆಗೆ ಅವರ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುತ್ತಿದೆ' ಎಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮೀ ಚೌಧರಿ ತಿಳಿಸಿದರು.**

# ಕೂಡಲೇ ತುಂಗಭದ್ರಾ ಜಲಾಶಯದ 33 ಕ್ರಸ್ಟ್ ಗೇಟ್ ಬದಲಾಯಿಸಿ

• ಉದಯವಾಹಿನಿ ಬೆಂಗಳೂರು

ತುಂಗಭದ್ರಾ ಜಲಾಶಯದ 33 ಕ್ರಸ್ಟ್ ಗೇಟನ್ನೂ ಕೂಡಲೇ ಬದಲಾಯಿಸಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ, ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ. ವಿಧಾನಸೌಧದಲ್ಲಿ ಮಾತಾಡಿದ ಅವರು, ಕಳೆದ ಆಗಸ್ಟ್‌ನಲ್ಲಿ ಜಲಾಶಯದ 19ನೇ ಕ್ರಸ್ಟ್ ಗೇಟ್ ಮುರಿದುಬಿದ್ದಿತ್ತು. ಹೀಗಾಗಿ ಸಾವಿರಾರು ಕ್ಯೂಸೆಕ್ ನೀರು ಹರಿದು ವ್ಯರ್ಥವಾಗಿದೆ. ಅದಕ್ಕೆ ಶಾಶ್ವತ ಪರಿಹಾರ ನೀಡಿದೆ ವಿಳಂಬ ಮಾಡಿದ್ದರಿಂದ ನೀರಿನ ಒತ್ತಡ ಇತರ ಗೇಟ್‌ಗಳ ಮೇಲೆ ಬಿದ್ದಿದೆ. ಇದರ ಪರಿಣಾಮವಾಗಿ ಎಲ್ಲಾ 33 ಕ್ರಸ್ಟ್ ಗೇಟನ್ನೂ ತಕ್ಷಣ ಬದಲಿಸಬೇಕಾದ ಪರಿಸ್ಥಿತಿ ಒದಗಿಬಂದಿದೆ ಎಂದರು. ಕೊಪ್ಪಳ, ರಾಯಚೂರು, ಬಳ್ಳಾರಿ ಮೊದಲಾದ ಜಿಲ್ಲೆಗಳ ರೈತರು ಪ್ರತಿವರ್ಷ 2 ಬೆಳೆ ಬೆಳೆಯುತ್ತಿದ್ದರು. ಆದರೆ, ರಾಜ್ಯ ಸರ್ಕಾರ ಅಥವಾ ಸಂಬಂಧಿತ ಸಚಿವರು, ತುಂಗಭದ್ರಾ ಜಲಾಶಯ ನೀರಾವರಿ ಮಂಡಳಿಯಲ್ಲಿ ಚರ್ಚೆ ಮಾಡಿ, ಒತ್ತಡ ಹಾಕದ ಪರಿಣಾಮವಾಗಿ ಈ ಬಾರಿ ರೈತರು ಒಂದೇ ಬೆಳೆಗೆ ತೃಪ್ತಿ ಪಡುವ ಸಂದರ್ಭ ಬಂದಿದೆ ಎಂದು ಟೀಕಿಸಿದರು. ಸ್ವಾತಂತ್ರ್ಯ ಹೋರಾಟಗಾರರ ಮಾಸಾಶನ ಕೊಡುವ ಯೋಗ್ಯತೆಯೂ ಈ ಸರ್ಕಾರಕ್ಕೆ ಇಲ್ಲ. ಅವರು ಸ್ವಾತಂತ್ರ್ಯ ಹೋರಾಟಗಾರರ ಮಾಸಾಶನ 4.85 ಕೋಟಿ ರೂ. ಮೊತ್ತವನ್ನು ಕೊಡದೇ ತಡೆ ಹಿಡಿದಿದ್ದಾರೆ. ಇದನ್ನು ಪ್ರಶ್ನಿಸಿದರೆ, ರಾಜ್ಯದ ಆರ್ಥಿಕ ಪರಿಸ್ಥಿತಿ ಬಹಳ ಚೆನ್ನಾಗಿದೆ ಎಂದು ಸಿದ್ದರಾಮಯ್ಯನವರು ಹೇಳುತ್ತಾರೆ. ಮುಖ್ಯಮಂತ್ರಿ ಪರಿಹಾರ ನಿಧಿಗೆ ಹಣ ಬಿಡುಗಡೆ ಮಾಡದಂಥ ದುಸ್ಥಿತಿಗೆ ಬಂದು ನಿಂತಿದೆ ಎಂದು ವಾಗ್ದಾಳಿ ನಡೆಸಿದರು.

# ಅವೈಜ್ಞಾನಿಕ, ದುರ್ಬಲ ಕಟ್ಟಡಗಳ ಮಾಲೀಕರಿಗೆ ನೋಟಿಸ್

## ಮೃತಪಟ್ಟವರ ಕುಟುಂಬಗಳಿಗೆ ತಲಾ ರೂ.5 ಲಕ್ಷ ಪರಿಹಾರ ನೀಡಲು ಸರ್ಕಾರ ನಿರ್ಧರಿಸಿದೆ ಎಂದು ಡಿಕೆಶಿ ಹೇಳಿಕೆ

• ಉದಯವಾಹಿನಿ ಬೆಂಗಳೂರು

ಅವೈಜ್ಞಾನಿಕವಾಗಿ ನಿರ್ಮಾಣ ಮಾಡಿರುವ, ದುರ್ಬಲ ಕಟ್ಟಡಗಳ ಮಾಲೀಕರಿಗೆ ನೋಟಿಸ್ ನೀಡಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.

ನಗರ್ತಪೇಟೆಯಲ್ಲಿ ಬೆಂಕಿ ಅವಘಡದಿಂದ ಹಾನಿಗೊಳಗಾದ ಸ್ಥಳಕ್ಕೆ ಭಾನುವಾರ ಭೇಟಿ ನೀಡಿ, ಪರಿಶೀಲಿಸಿದ ಬಳಿಕ ಅವರು ಮಾತನಾಡಿದರು. ಅವೈಜ್ಞಾನಿಕವಾಗಿ ನಿರ್ಮಾಣ ಮಾಡಿರುವ ದುರ್ಬಲ ಕಟ್ಟಡಗಳನ್ನು ಭದ್ರಗೊಳಿಸುವ ಕೆಲಸ ಮೊದಲು ಆಗಬೇಕು. ಎರಡು, 3 ಮಹಡಿಗಳನ್ನು ಕಟ್ಟಲು ಅನುಮತಿ ಪಡೆದು, 8-10 ಮಹಡಿಗಳನ್ನು ನಿರ್ಮಾಣ ಮಾಡಲಾಗಿದೆ. ಹಲವು ಕಟ್ಟಡಗಳು ವಾಸಕ್ಕೆ ಯೋಗ್ಯವಾಗಿಲ್ಲ.

ಒಳಗೆ ಬಂದು ನೋಡಿದಾಗ ಗಾಬರಿಯಾಯಿತು.



ಇಂತಹ ಇಕ್ಕಟ್ಟಿನ ಜಾಗದಲ್ಲಿ ಬೆಂಕಿ ಅವಘಡ ನಡೆದರೆ ಜನರು ಓಡಿ ಹೋಗುತ್ತಾರೆ. ಆಗ ಕಾಲ್ತುಳಿತದ ಅಪಾಯವೂ ಇರುತ್ತದೆ. ದೆಹಲಿ, ಮುಂಬೈನಲ್ಲೂ ಇದೇ ಪರಿಸ್ಥಿತಿ ಇದೆ ಎಂದರು. ಇಂತಹ ಕಟ್ಟಡಗಳನ್ನು ಕೆಡವಲು ಹೋಗುವುದಿಲ್ಲ. ದುರಸ್ತಿ ಮಾಡಿ, ಸುಸ್ಥಿತಿಯಲ್ಲಿ ಇಟ್ಟುಕೊಳ್ಳುವಂತೆ ಮಾಲೀಕರಿಗೆ ಸೂಚಿಸಲಾಗುವುದು. ಎಲ್ಲಾ ಕಟ್ಟಡಗಳ ಸಮೀಕ್ಷೆ ನಡೆಸಲಾಗುವುದು. ನಿಯಮ ಪಾಲಿಸದವರ ವಿರುದ್ಧ ಕ್ರಮ ಜರುಗಿಸಲಾಗುವುದು. ಈ ಪ್ರಕ್ರಿಯೆಗೆ ಸಾಕಷ್ಟು ಸಮಯ ತೆಗೆದುಕೊಳ್ಳುತ್ತದೆ' ಎಂದು ಹೇಳಿದರು.

ಚಿಕ್ಕಪೇಟೆ, ನಗರ್ತಪೇಟೆ ಹೆಸರಿಗಷ್ಟೇ ವಾಸಸ್ಥಳಗಳು, ಆದರೆ, ವ್ಯಾಪಾರ ಕೇಂದ್ರಗಳಾಗಿ ಬದಲಾಗಿವೆ. ಕೆಲ ಕಟ್ಟಡಗಳಲ್ಲಿ ಮೇಲ್ಭಾಗಕ್ಕೆ ಹೋಗಲು ಆಗುತ್ತಿಲ್ಲ. ಬಡತನದ ಬದುಕು ಇಂತಹ ಕೆಲಸ ಮಾಡಿಸುತ್ತದೆ. ಬಾಡಿಗೆಗಾಗಿ ಹೀಗೆ ಕಟ್ಟಡಗಳನ ನಿರ್ಮಾಣ ಮಾಡಿರುವುದೇ ಅನಾಹುತಗಳಿಗೆ ಕಾರಣ. ಅಗ್ನಿಶಾಮಕ ನಿಯಮದ ಪ್ರಕಾರ ಹೋದರೆ ಎಲ್ಲಾ ಕಟ್ಟಡಗಳನು ಒಡೆದು ಹಾಕಬೇಕಾಗುತ್ತದೆ ಎಂದರು.

ಮೃತರಿಗೆ ತಲಾ 5 ಲಕ್ಷ ಪರಿಹಾರ ಅವಘಡದಲ್ಲಿ ಮೃತಪಟ್ಟವರ ಕುಟುಂಬಗಳಿಗೆ ತಲಾ ರೂ.5 ಲಕ್ಷ ಪರಿಹಾರ ನೀಡಲು ಸರ್ಕಾರ ನಿರ್ಧರಿಸಿದೆ ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

ನಿರ್ಲಕ್ಷ್ಯ ವಹಿಸಿರುವ ಕಟ್ಟಡ ಮಾಲೀಕರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗಿದೆ. ಸೂಕ್ತ ಕಾನೂನು ಕ್ರಮ ಜರುಗಿಸಲು ಪೊಲೀಸರಿಗೆ ಮುಕ್ತ ಅವಕಾಶ ನೀಡಲಾಗಿದೆ ಎಂದರು.

### ಶೇ 70 ರಷ್ಟು ಕಟ್ಟಡಗಳು ಅಕ್ರಮ

**ನಗರದಲ್ಲಿ ಶೇ 70ರಷ್ಟು ಕಟ್ಟಡಗಳ ನಿರ್ಮಾಣ ಅಕ್ರಮವಾಗಿದೆ. ಬಿಡಿಎ ಬಡಾವಣೆಗಳಲ್ಲೂ ಸಾಮರ್ಥ್ಯಕ್ಕಿಂತ ಹೆಚ್ಚು ಮಹಡಿ ನಿರ್ಮಾಣ ಮಾಡಿದ್ದಾರೆ ಎಂದು ಶಿವಕುಮಾರ್ ಹೇಳಿದರು. ಇಂತಹ ಕಟ್ಟಡಗಳಿಗೆ ನೀರು ವಿದ್ಯುತ್ ಸಂಪರ್ಕ ನೀಡದಂತೆ ಸುಪ್ರೀಂಕೋರ್ಟ್ ತೀರ್ಪು ನೀಡಿದೆ. ಹಾಗಾಗಿ 4 ಲಕ್ಷ ಕಟ್ಟಡಗಳಿಗೆ ಸಂಪರ್ಕ ಕಡಿತಗೊಳಿಸಲಾಗುತ್ತಿದೆ. 30X40 ಅಡಿ ಅಳತೆಯಲ್ಲಿ ನಿರ್ಮಿಸಿರುವ ಎರಡು ಮಹಡಿಯ ಕಟ್ಟಡಗಳಿಗೆ ವಿನಾಯಿತಿ ನೀಡಬೇಕು ಎನ್ನುವ ವಿಚಾರವನ್ನು ಸಂಪುಟ ಸಭೆಯಲ್ಲಿ ಚರ್ಚಿಸಲಾಗುವುದು' ಎಂದರು.**

# ಮಹಿಳೆ ಮೇಲೆ ಲೈಂಗಿಕ ದೌರ್ಜನ್ಯ; ಉತ್ತರ ಪ್ರದೇಶದ ಶಾಸಕನ ವಿರುದ್ಧ ಪ್ರಕರಣ ದಾಖಲು

• ಉದಯವಾಹಿನಿ ಬೆಂಗಳೂರು

ಉತ್ತರ ಪ್ರದೇಶದ ಮಾಜಿ ಶಾಸಕ ಶ್ರೀ ಭಗವಾನ್ ಶರ್ಮಾ ಅಲಿಯಾಸ್ ಗುಡ್ಡು ಪಂಡಿತ್ ವಿರುದ್ಧ 40 ವರ್ಷದ ಮಹಿಳೆಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಮತ್ತು ಜೀವ ಬೆದರಿಕೆಯೊಡ್ಡಿದ' ಆರೋಪ ಕೇಳಿಬಂದಿದ್ದು, ಅವರ ವಿರುದ್ಧ ಪ್ರಕರಣ ದಾಖಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ದೂರಿನ ಪ್ರಕಾರ, ಮಾಜಿ ಶಾಸಕರ ಒತ್ತಾಯದ ಮೇರೆಗೆ ಮಹಿಳೆ ತನ್ನ ಅಪ್ರಾಪ್ತ ಮಗನೊಂದಿಗೆ ಆಗಸ್ಟ್ 14 ರಂದು ಉತ್ತರ ಪ್ರದೇಶದಿಂದ ಬೆಂಗಳೂರಿಗೆ ಪ್ರಯಾಣ ಬೆಳೆಸಿದ್ದರು. ಅದೇ ದಿನ, ಶಾಸಕರು ಅವರನ್ನು ನಗರದ ಹಲವಾರು ಸ್ಥಳಗಳಿಗೆ ಕರೆದುಕೊಂಡು ಹೋಗಿದ್ದರು ಎಂದು ಆರೋಪಿಸಲಾಗಿದೆ. ಆಗಸ್ಟ್ 16 ರಂದು ಮಾಜಿ ಶಾಸಕರು ಅವರನ್ನು ಚಿತ್ರದುರ್ಗಕ್ಕೆ ಕರೆದೊಯ್ದರು ಮತ್ತು ಮರುದಿನ ಹಿಂದಿರುಗುವಾಗ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಬಳಿಯ ಪಂಚತಾರಾ ಹೋಟೆಲ್‌ನಲ್ಲಿ ಕೊಠಡಿ ವ್ಯವಸ್ಥೆ ಮಾಡಿದರು ಎಂದು ಎಫ್‌ಐಆರ್‌ನಲ್ಲಿ ಹೇಳಲಾಗಿದೆ. ಹೋಟೆಲ್ ಕೋಣೆಯೊಳಗೆ, ಆಕೆಯ ಇಚ್ಛೆಗೆ ವಿರುದ್ಧವಾಗಿ ಲೈಂಗಿಕ ಸಂಬಂಧಕ್ಕೆ ಒತ್ತಾಯಿಸಿದನು, ಆಕೆ ವಿರೋಧಿಸಿದಾಗ ಕೊಲ್ಲುವುದಾಗಿ ಬೆದರಿಕೆ ಹಾಕಿದರು ಎಂದು ಆರೋಪಿಸಲಾಗಿದೆ. ದೂರಿನ ಆಧಾರದ ಮೇಲೆ, ಆಗಸ್ಟ್ 17 ರಂದು ಭಾರತೀಯ ನ್ಯಾಯ ಸಂಹಿತೆಯ ಸೆಕ್ಷನ್ 69 (ಮೋಸದಿಂದ ಲೈಂಗಿಕ ಸಂಭೋಗ) ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಈ ಸಂಬಂಧ ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಉದಯ ವಾಹಿನಿ



# ಗ್ಯಾರಂಟಿಯಿಂದ ಮಹಿಳಾ ಸಬಲೀಕರಣ: ಸೌಮ್ಯ ರೆಡ್ಡಿ

## ನಗರದ ಕಾಂಗ್ರೆಸ್ ಕಚೇರಿಗೆ ಭೇಟಿ ನೀಡಿ ಮಹಿಳಾ ಕಾರ್ಯಕರ್ತರ ಸಭೆ

• **ಉದಯವಾಹಿನಿ ರಾಮನಗರ**




ರಾಜ್ಯ ಸರ್ಕಾರವು ಜಾರಿಗೆ ತಂದಿರುವ ಗ್ಯಾರಂಟಿ ಯೋಜನೆಗಳು ಮಹಿಳೆಯರನ್ನು ಆರ್ಥಿಕವಾಗಿ, ಸಾಮಾಜಿಕವಾಗಿ ಸಬಲೀಕರಣಗೊಳಿಸುವಲ್ಲಿ ಮಹತ್ವದ ಪಾತ್ರ ವಹಿಸಿವೆ. ಮಹಿಳಾ ಸಮಾನತೆಗೂ ಗ್ಯಾರಂಟಿ ಯೋಜನೆಗಳು ಕೊಡುಗೆ ದೊಡ್ಡದು ಎಂದು ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಮಹಿಳಾ ಘಟಕದ ರಾಜ್ಯಾಧ್ಯಕ್ಷೆ ಸೌಮ್ಯಾ ರೆಡ್ಡಿ ಅಭಿಪ್ರಾಯ ಪಟ್ಟರು. ನಗರದ ಕಾಂಗ್ರೆಸ್ ಕಚೇರಿಗೆ ಭೇಟಿ ನೀಡಿ ಮಹಿಳಾ ಕಾರ್ಯಕರ್ತರ ಸಭೆ ನಡೆಸಿದ ಬಳಿಕ ಸುದ್ದಿಗಾರರ ಜೊತೆ ಮಾತನಾಡಿದ ಅವರು, ರಾಜ್ಯದ ಕೋಟ್ಯಂತರ ಜನರು ಗ್ಯಾರಂಟಿ ಯೋಜನೆಗಳ ಪ್ರಯೋಜನ ಪಡೆದಿದ್ದಾರೆ. ಕೋವಿಡ್‌ನಿಂದ ತತ್ತರಿಸಿದ್ದವರ ಬದುಕಿಗೆ ನಮ್ಮ ಯೋಜನೆಗಳು ಆಸರೆಯಾಗಿವೆ ಎಂದರು.

ರಾಜ್ಯದಲ್ಲಿ ಮಹಿಳಾ ಕ್ರಾಂತಿ ಪ್ರಾರಂಭವಾಗಿದೆ. ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಕಾಂಗ್ರೆಸ್ ಸದಸ್ಯತ್ವ ಪಡೆಯಲು ಆಸಕ್ತಿ ತೋರುತ್ತಿದ್ದಾರೆ. ಮಹಿಳೆಯರು ಶೈಕ್ಷಣಿಕವಾಗಿ, ಸಾಮಾಜಿಕ ಹಾಗೂ ಆರ್ಥಿಕವಾಗಿ ಅಭಿವೃದ್ಧಿ ಹೊಂದಬೇಕು. ಹೆಣ್ಣು ಕುಟುಂಬದ ಕಣ್ಣಿದ್ದಂತೆ. ಮಹಿಳೆಯರು ಸ್ವಾವಲಂಬಿಗಳಾದಾಗ ಮಾತ್ರ ಕುಟುಂಬ, ಸಮಾಜಕ್ಕೆ ಆರ್ಥಿಕ ಶಕ್ತಿ ಬರುತ್ತದೆ ಎಂದು ಹೇಳಿದರು. ಕಾಂಗ್ರೆಸ್ ಪಕ್ಷವು ಮಹಿಳೆಯರನ್ನು ಎಲ್ಲಾ ರೀತಿಯಲ್ಲೂ ಮುಂದೆ ತರಬೇಕು ಎಂಬ ಆಶಯ ಹೊಂದಿದೆ.

ಅದಕ್ಕಾಗಿಯೇ ಗ್ಯಾರಂಟಿ ಯೋಜನೆಗಳಲ್ಲಿ ಮಹಿಳೆಯರಿಗೆ ವಿಶೇಷ ಒತ್ತು ನೀಡಿದೆ. ಮುಂದಿನ ದಿನಗಳಲ್ಲಿ ಆರೋಗ್ಯ ಶಿಬಿರ, ಕೌಶಲಾಭಿವೃದ್ಧಿ ಕಾರ್ಯಕ್ರಮ, ಗ್ಯಾರಂಟಿ ಯೋಜನೆಯ ಹಣದಿಂದ ಸಣ್ಣಪುಟ್ಟ ಸ್ವಯಂ ಉದ್ಯೋಗ ಆರಂಭಿಸಿರುವ ಹಲವು ಮಹಿಳೆಯರಿಗೆ ನೆರವು ನೀಡುವ ಕುರಿತಾಗಿ ಸಭೆಯಲ್ಲಿ ಚರ್ಚಿಸಲಾಯಿತು' ಎಂದರು.

ಗ್ಯಾರಂಟಿ ಯೋಜನೆಗಳಿಂದ ಹೆಚ್ಚಿನ ಪ್ರಮಾಣದ ಮಹಿಳೆಯರು ಕಾಂಗ್ರೆಸ್ ಪಕ್ಷದತ್ತ ಒಲವು ತೋರುತ್ತಿದ್ದಾರೆ. ತೆಲಂಗಾಣದ ಬಳಿಕ ಹೆಚ್ಚಿನ ಸಂಖ್ಯೆಯ ಮಹಿಳಾ ಕಾಂಗ್ರೆಸ್ ಕಾರ್ಯಕರ್ತರು ಇರುವ ರಾಜ್ಯ ಕರ್ನಾಟಕವಾಗಿದೆ. ಈ ನಿಟ್ಟಿನಲ್ಲಿ ರಾಜ್ಯದಲ್ಲಿ ಮಹಿಳಾ ಕ್ರಾಂತಿ ಪ್ರಾರಂಭವಾಗಿದೆ. ಸದಸ್ಯತ್ವ ಹೆಚ್ಚಿಸಲು ವಿಶೇಷ ಆದ್ಯತೆ ನೀಡಲಾಗಿದೆ' ಎಂದು ತಿಳಿಸಿದರು.

ಪಕ್ಷದ ಮಹಿಳಾ ಮುಖಂಡರಾದ ಕೋಕಿಲರಾಣಿ, ರೋಹಿಣಿ ಪ್ರಿಯಾ, ಸುಧಾ, ಲೇಕಾ, ಗಾಯತ್ರಿ, ಅನುಸೂಯ, ಮಂಜೀತಾ, ಅರ್ಪಿತಾ, ಫರ್ಹಾನ್, ಲೀಲಾವತಿ ಹಾಗೂ ಕಾರ್ಯಕರ್ತರು ಇದ್ದರು.

**ನಗರಸಭೆ ಉಪಾಧ್ಯಕ್ಷೆ ಆಯಿಷಾ ಬಾನು, ರಾಜ್ಯ ಸರ್ಕಾರ ಜಾರಿಗೆ ತಂದಿರುವ ಗ್ಯಾರಂಟಿ ಯೋಜನೆಗಳಿಂದ ಮಹಿಳೆಯರಿಗೇ ಹೆಚ್ಚಿನ ಅನುಕೂಲಗಳಾಗಿವೆ. ಯೋಜನೆಗಳ ಪ್ರಯೋಜನ ಪಡೆದವರು ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಬೇಕು. ಬೀಡಿ ಕಾರ್ಮಿಕರಿಗೆ ಕಡಿಮೆ ವೇತನವಿದ್ದು ಸಂಕಷ್ಟದಲ್ಲಿದ್ದಾರೆ. ಅವರಿಗೆ ಹೆಚ್ಚಿನ ಸವಲತ್ತು ಒದಗಿಸುವ ಕುರಿತು ಚಿಂತನೆ ನಡೆಸಬೇಕಿದೆ' ಎಂದು ಸಲಹೆ ನೀಡಿದರು.**

### ಬಿಜೆಪಿಯ ಮತಗಳ್ಳತನದ ಸಾಕ್ಷ್ಯ ಬಿಚ್ಚಿಟ್ಟ ರಾಹುಲ್

**ಬಿಜೆಪಿಯವರು ಚುನಾವಣೆಗಳಲ್ಲಿ ಹೇಗೆ ಮತಗಳ್ಳತನ ಮಾಡಿ ಗೆಲುವು ಸಾಧಿಸಿಕೊಂಡು ಬಂದಿದ್ದಾರೆ ಎಂಬುದನ್ನು ನಮ್ಮ ಪಕ್ಷದ ರಾಷ್ಟ್ರೀಯ ನಾಯಕ ರಾಹುಲ್ ಗಾಂಧಿ ಅವರು ಸಾಕ್ಷ್ಯ ಸಮೇತ ದೇಶದ ಜನರ ಮುಂದಿಟ್ಟಿದ್ದಾರೆ. ಜನರಿಗೂ ಬಿಜೆಪಿಯ ಚುನಾವಣೆಯ ಮರ್ಮ ಏನೆಂಬುದು ಈಗ ಗೊತ್ತಾಗಿದೆ. ಕಳೆದ ಸಾರ್ವತ್ರಿಕ ಚುನಾವಣೆಯಲ್ಲಿ ನನ್ನ ಗೆಲುವಿನ ಬಳಿಕ ಬಿಜೆಪಿಯವರು ಮತಗಳ್ಳತನ ಮೂಲಕ ಏನು ಮಾಡಿದರು ಎಂಬುದನ್ನು ಎಲ್ಲರೂ ನೋಡಿದ್ದಾರೆ. ಬಿಜೆಪಿಯ ಈ ಕಳ್ಳಹಾದಿ ಮುಂದೆ ಅವರಿಗೇ ಮುಳುವಾಗಲಿದೆ' ಎಂದು ಸೌಮ್ಯಾ ರೆಡ್ಡಿ ಹೇಳಿದರು.**

# ಚಿನ್ನ, ನಗದು ವಂಚಿಸಿದ ಫೇಸ್‌ಬುಕ್ ಗೆಳೆಯ

• **ಉದಯವಾಹಿನಿ ತುಮಕೂರು**

ತಾಲ್ಲೂಕಿನ ರಂಗಯ್ಯನಪಾಳ್ಯದ ಮಹಿಳೆಯೊಬ್ಬರು ಫೇಸ್‌ಬುಕ್‌ನಲ್ಲಿ ಪರಿಚಯವಾದ ಸ್ನೇಹಿತನನ್ನು ನಂಬಿ ರೂ.8 ಲಕ್ಷ ಮೌಲ್ಯದ ಚಿನ್ನಾಭರಣ, ರೂ.11 ಸಾವಿರ ಹಣ ಕಳೆದುಕೊಂಡಿದ್ದಾರೆ.'ಫೇಸ್‌ಬುಕ್‌ನಲ್ಲಿ 'ಅರುಣ್ ಪ್ರಿನ್ಸ್' ಎಂಬ ಖಾತೆಯ ಸ್ನೇಹಿತನ ಪರಿಚಯವಾಗಿದ್ದು, ಎರಡು ತಿಂಗಳು ಮೊಬೈಲ್‌ನಲ್ಲಿ ಮಾತನಾಡಿದ್ದೇವೆ. ಅರುಣ್ ಹಣದ ಅಗತ್ಯವಿದೆ ಎಂದು ಚಿನ್ನಾಭರಣ ಪಡೆದು ವಂಚಿಸಿದ್ದಾನೆ' ಎಂದು ಮಹಿಳೆ ನೀಡಿದ ದೂರಿನ ಮೇರೆಗೆ ತುಮಕೂರು ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



ಹಣದ ಅವಶ್ಯಕತೆ ಇದೆ ಎಂದು ಅರುಣ್ ಕೇಳಿದ್ದರು, ನನ್ನ ಬಳಿ ಹಣವಿಲ್ಲ ಎಂದು ಹೇಳಿದ್ದೆ. ಒಡವೆ ಇದ್ದರೆ ಕೊಡು, ಕೆಲಸ ಮುಗಿದ ನಂತರ ಬಿಡಿಸಿ ಕೊಡುತ್ತೇನೆ ಎಂದಿದ್ದರು. ಇದಕ್ಕೆ ನಾನು ಒಪ್ಪಿಕೊಂಡಿದ್ದೆ. ನನಗೆ ನಿಮ್ಮ ಮನೆಯ ಬಳಿಗೆ ಬರಲು ಆಗುವುದಿಲ್ಲ, ನನ್ನ ಸ್ನೇಹಿತನನ್ನು ಕಳುಹಿಸಿಕೊಡುತ್ತೇನೆ, ಆತನಿಗೆ ಒಡವೆ ನೀಡುವಂತೆ ಅರುಣ್ ತಿಳಿಸಿದ್ದ. ಅದರಂತೆ ಆಭರಣ ಕೊಟ್ಟಿದ್ದೆ' ಎಂದು ಮಹಿಳೆ ದೂರಿನಲ್ಲಿ ಉಲ್ಲೇಖಿಸಿದ್ದಾರೆ.

**64 ಗ್ರಾಂ ಚಿನ್ನದ ಸರ, 28 ಗ್ರಾಂ ಕೈ ಸರ ಮತ್ತು ರೂ.11 ಸಾವಿರ ನಗದು ಪ್ಲಾಸ್ಟಿಕ್ ಕವರ್‌ನಲ್ಲಿ ಹಾಕಿ, ಮನೆ ಮುಂಭಾಗದ ರಸ್ತೆಗೆ ಎಸೆದಿದ್ದೆ. ಅಲ್ಲಿಯೇ ನಿಂತಿದ್ದ ಅರುಣ್ ಹೇಳಿದ ವ್ಯಕ್ತಿ ಕವರ್ ತೆಗೆದುಕೊಂಡು ಹೋದರು. ಇದರ ನಂತರ ಅರುಣ್‌ಗೆ ವಿಚಾರಿಸಿದಾಗ ಕವರ್ ತಲುಪಿರುವುದಾಗಿ ತಿಳಿಸಿದ್ದರು. ಘಟನೆಯಾದ ಒಂದು ವಾರದ ನಂತರ ನನ್ನ ನಂಬರ್ ಬ್ಲಾಕ್ ಮಾಡಿದ್ದಾರೆ. ಇದುವರೆಗೆ ಕರೆ ಮಾಡಿಲ್ಲ ಎಂದು ತಿಳಿಸಿದ್ದಾರೆ. ಹಣ, ಬಂಗಾರದ ಒಡವೆ ಪಡೆದು, ಮೋಸ ಮಾಡಿದ ಅರುಣ್ ಪ್ರಿನ್ಸ್ ಎಂಬಾತನನ್ನು ಪತ್ತೆ ಹಚ್ಚಿ, ಕಾನೂನು ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದ್ದಾರೆ.**

# ಸುಮಾರು 200 ಎಕರೆಯಲ್ಲಿ ಗೋದಾಮು ನಿರ್ಮಾಣ

• **ಉದಯವಾಹಿನಿ ತುಮಕೂರು**



ನಗರ ಹೊರವಲಯದ ತಿಮ್ಮರಾಜನಹಳ್ಳಿ ಹತ್ತಿರ ಸುಮಾರು 200 ಎಕರೆಯಲ್ಲಿ ಗೋದಾಮು ನಿರ್ಮಿಸಲಾಗುತ್ತಿದೆ. ಈ ಬಗ್ಗೆ ಕೆಐಎಡಿಬಿ ಅಧಿಕಾರಿಗಳ ಜತೆ ಸಭೆ ನಡೆಸಲಾಗಿದೆ ಎಂದು ಕೇಂದ್ರ ಜಲ ಶಕ್ತಿ, ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಹೇಳಿದರು.ನಗರದಲ್ಲಿ ಭಾನುವಾರ ಜಿಲ್ಲಾ ರೈಲ್ವೆ ಪ್ರಯಾಣಿಕರ ವೇದಿಕೆಯಿಂದ ಹಮ್ಮಿಕೊಂಡಿದ್ದ ವಾರ್ಷಿಕೋತ್ಸವ, ಪ್ರತಿಭಾ ಪುರಸ್ಕಾರ ವಿತರಣಾ ಸಮಾರಂಭದಲ್ಲಿ ಮಾತನಾಡಿದರು.

ರೈಲ್ವೆ ಇಲಾಖೆಯಿಂದ ಗೋದಾಮು ನಿರ್ಮಾಣವಾಗಲಿದೆ. ರಸಗೊಬ್ಬರ, ಸಿಮೆಂಟ್ ಸೇರಿದಂತೆ ಇತರೆ ಸಾಮಗ್ರಿ ಸಂಗ್ರಹಕ್ಕೆ ಬಳಕೆಯಾಗಲಿದೆ. ವಿಮಾನ ನಿಲ್ದಾಣಕ್ಕಿಂತ ವಿಭಿನ್ನವಾಗಿ ರೈಲು ನಿಲ್ದಾಣಗಳ ಅಭಿವೃದ್ಧಿ ಕಾರ್ಯ ನಡೆಯುತ್ತಿದೆ. ಜಿಲ್ಲೆಯಲ್ಲಿ ಸಾಕಷ್ಟು ರೈಲ್ವೆ ಅಭಿವೃದ್ಧಿ ಕೆಲಸ ಆಗುತ್ತಿದೆ. ಹತ್ತಾರು ವರ್ಷಗಳಿಂದ ನನೆಗುದಿಗೆ ಬಿದ್ದಿದ್ದ ರೈಲ್ವೆ ಯೋಜನೆಗೆ ವೇಗ ನೀಡಲಾಗಿದೆ ಎಂದರು.

ರೈಲ್ವೆ ಪ್ರಯಾಣಿಕರ ವೇದಿಕೆ ಅಧ್ಯಕ್ಷ ಕರಣಂ ರಮೇಶ್, ತುಮಕೂರು- ಬೆಂಗಳೂರು ಮಾರ್ಗದಲ್ಲಿ ರೈಲು ಸಂಚಾರ ಹೆಚ್ಚಿಸಬೇಕು. ತುಮಕೂರು- ಯಶವಂತಪುರ ಮೆಮು ರೈಲನ್ನು ಬೆಂಗಳೂರಿನ ಸಂಗೊಳ್ಳಿ ರಾಯಣ್ಣ ನಿಲ್ದಾಣದ ವರೆಗೂ ವಿಸ್ತರಿಸಬೇಕು. ಜಿಲ್ಲೆಯಲ್ಲಿ ರೈಲ್ವೆ ಪ್ರಯಾಣಿಕರು ಹೆಚ್ಚಿದ್ದು, ರೈಲುಗಳ ಸಂಖ್ಯೆ ಜಾಸ್ತಿ ಮಾಡಬೇಕು' ಎಂದು ಮನವಿ ಮಾಡಿದರು. ಶಾಸಕ ಜಿ.ಬಿ.ಜ್ಯೋತಿಗಣೇಶ್, ಮುಖಂಡರಾದ ಎಚ್.ಜಿ.ಚಂದ್ರಶೇಖರ್, ವೈ.ಎಚ್.ಹುಚ್ಚಯ್ಯ, ಎಸ್.ಶಿವಪ್ರಸಾದ್, ನಾಗರಾಜು, ಆರ್.ಬಾಲಾಜಿ ಇತರರು ಉಪಸ್ಥಿತರಿದ್ದರು.

# ಒಳಮೀಸಲಾತಿ ಶೀಘ್ರ ಜಾರಿಗೆ ತರಲು ಒತ್ತಾಯ

• **ಉದಯವಾಹಿನಿ ಚಿಂತಾಮಣಿ**



ಒಳಮೀಸಲಾತಿ ಪರಿಶಿಷ್ಟ ಜಾತಿಗಳು ನೂರೊಂದು ಸಮುದಾಯಗಳಿಗೂ ಸಾಮಾಜಿಕ ನ್ಯಾಯ ಕೊಡುತ್ತದೆ. ಅಹಿಂದ ವರ್ಗಗಳ ಹೆಸರಿನಲ್ಲಿ ಅಧಿಕಾರ ಹಿಡಿದ ಸಿದ್ದರಾಮಯ್ಯ ದಲಿತರಿಗೆ ಸಾಮಾಜಿಕ ನ್ಯಾಯ ಒದಗಿಸುವಲ್ಲಿ ವಿಳಂಬ ಧೋರಣೆ ಅನುಸರಿಸುತ್ತಿದ್ದಾರೆ ಎಂದು ಮಾದಿಗ ಜಾಗೃತಿ ಸಮಿತಿ ಆರೋಪಿಸಿದೆ.

ಒಳಮೀಸಲಾತಿ ಶೀಘ್ರವಾಗಿ ಜಾರಿಗೊಳಿಸಲು ವಿಧಾನಸಭೆ ಅಧಿವೇಶನದಲ್ಲಿ ಬೆಂಬಲ ನೀಡಬೇಕು, ಮುಖ್ಯಮಂತ್ರಿ ಮೇಲೆ ಒತ್ತಡ ತರುವಂತೆ ಒತ್ತಾಯಿಸಿ ಸಮಿತಿಯ ಪದಾಧಿಕಾರಿಗಳು, ಮುಖಂಡರು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ. ಸುಧಾಕರ್‌ಗೆ ಮನವಿ ಸಲ್ಲಿಸಿದರು.

ಪರಿಶಿಷ್ಟ ಜಾತಿಯ ಎಲ್ಲಾ ಸಮುದಾಯಗಳಿಗೂ ಸಾಮಾಜಿಕ ನ್ಯಾಯ ದೊರಕಿಸಿಕೊಡುವ ಜವಾಬ್ದಾರಿ ಸರ್ಕಾರದ ಮೇಲಿದೆ. ಒಳಮೀಸಲಾತಿಯನ್ನು ರಾಜ್ಯ ಸರ್ಕಾರವೇ ಜಾರಿಗೊಳಿಸಬಹುದು ಎಂದು ಸುಪ್ರಿಂಕೋರ್ಟ್ ತೀರ್ಪು ನೀಡಿ ಒಂದು ವರ್ಷ ಕಳೆದರೂ ಸರ್ಕಾರ ಕಾಲಹರಣ ಮಾಡಿಕೊಂಡಿರುವುದು ಸಮುದಾಯದ ನಿರ್ಲಕ್ಷ್ಯಕ್ಕೆ ಕಾರಣವಾಗಿದೆ ಎಂದು ತಿಳಿಸಿದೆ.

ಸಮಿತಿ ಮುಖಂಡ ಅಮರ್ ಮಾತನಾಡಿ, 30 ವರ್ಷಗಳಿಂದ ನಿರಂತರ ಹೋರಾಟದ ಪ್ರತಿಫಲವಾಗಿ ಒಳಮೀಸಲಾತಿಯ ಅವಕಾಶ ಸಿಕ್ಕಿದೆ. ಸರ್ಕಾರ ಅದನ್ನು ಜಾರಿಗೆ ತರುವಲ್ಲಿ ಕಾಲಹರಣ ಮಾಡುತ್ತಿದೆ. ಸದಾಶಿವ ಆಯೋಗ, 2011ರಲ್ಲಿ ಜಾತಿಗಣತಿ, 2012ರಲ್ಲಿ ಸದಾಶಿವ ಆಯೋಗದ ವರದಿ. ನಾಗಮೋಹನ್‌ದಾಸ್ ವರದಿ ಹಾಗೂ ಬಿಜೆಪಿ ಸರ್ಕಾರದ ಮಾಧುಸ್ವಾಮಿ ವರದಿ ಸೇರಿದಂತೆ ಎಲ್ಲಾ ಆಯೋಗಗಳು ಒಳಮೀಸಲಾತಿಯ ಪರವಾಗಿ ವರದಿ ನೀಡಿವೆ ಎಂದರು.

ಒಳಮೀಸಲಾತಿ ಜಾರಿ ಆಗುವವರೆಗೆ ಸರ್ಕಾರ ಯಾವುದೇ ಉದ್ಯೋಗ ನೇಮಕಾತಿ ಮಾಡುವುದಿಲ್ಲ ಎಂದು ಭರವಸೆ ಕೊಟ್ಟಿತ್ತು. ಆದರೆ ನೇಮಕಾತಿ ಘೋಷಣೆಗಳು ವಿವಿಧ ಇಲಾಖೆಯಿಂದ ಬರುತ್ತಲೆ ಇದೆ. ಖಂಡನಾರ್ಹ ವಿಷಯವಾಗಿದೆ. ಹರಿಯಾಣದ ಬಿಜೆಪಿ ಸರ್ಕಾರ ಸುಪ್ರಿಂಕೋರ್ಟಿನ ತೀರ್ಪು ಬಂದ ಮೊದಲ ವಾರದಲ್ಲೇ ಒಳ ಮೀಸಲಾತಿ ಜಾರಿ ಮಾಡಿದೆ. ರಾಜ್ಯದಲ್ಲಿನ ಕಾಂಗ್ರೆಸ್ ಸರ್ಕಾರ ಬದ್ಧತೆ ತೋರಿಸುವಲ್ಲಿ ಸಂಪೂರ್ಣ ವಿಫಲವಾಗಿದೆ ಎಂದರು. ಮುಖಂಡ ಜಂಗಮಶೀಗೇಹಳ್ಳಿ ದೇವರಾಜ್, ರಾಜಣ್ಣ ಮಾತನಾಡಿದರು. ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಪೂಜಪ್ಪ, ಗಂಗಲಪ್ಪ, ಶೇಷಾದ್ರಿ, ಕೃಷ್ಣಪ್ಪ, ಬೀಡಾ ಶ್ರೀನಿವಾಸ್, ಬಿವಿ ವೆಂಕಟಾಣಪ್ಪ ಭಾಗವಹಿಸಿದ್ದರು.

**ಸುಪ್ರೀಂಕೋರ್ಟ್‌ನ ಸಂವಿಧಾನದ ಪೀಠವು ಒಳ ಮೀಸಲಾತಿಯನ್ನು ಜಾರಿ ಮಾಡುವ ಅಧಿಕಾರವನ್ನು ರಾಜ್ಯಗಳಿಗೆ ಕೊಡುವ ಐತಿಹಾಸಿಕ ತೀರ್ಪು ಪ್ರಕಟಿಸಿತು. ರಾಜ್ಯ ಸರ್ಕಾರ ಆಮೆಗತಿಯಲ್ಲಿ ಸಾಗಿದೆ. ಆಯೋಗ ರಚಿಸಬೇಕೆನ್ನುವುದು ಮಾದಿಗ ಸಮಾಜದ ಯಾರೊಬ್ಬರ ಬೇಡಿಕೆಯೂ ಆಗಿರಲಿಲ್ಲ. ಸರ್ಕಾರದ ಈ ನಿಧಾನಗತಿಯ ನಿರ್ಲಕ್ಷ್ಯದ ಧೋರಣೆ ನೋಡಿದರೆ ಅವಕಾಶ ವಂಚಿತ ದಲಿತ ಸಮುದಾಯಗಳಿಗೆ ಒಳ ಮೀಸಲಾತಿ ಕೊಡುವ ಮನಸ್ಸಿಲ್ಲವೆಂಬುದು ಸ್ಪಷ್ಟವಾಗುತ್ತದೆ ಎಂದು ದೂರಿದರು.**

**ಪ್ರಗತಿಪರ ಚಿಂತಕ ಎನ್.ಕೃಷ್ಣಪ್ಪ**

# ಗಡಿ ಗ್ರಾಮಗಳಲ್ಲಿ ಕಾವಡಿ ಉತ್ಸವ

• **ಉದಯವಾಹಿನಿ ಬಂಗಾರಪೇಟೆ**



ತಾಲ್ಲೂಕಿನ ದೋಣಿಮಡಗು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗಡಿ ಭಾಗದ ಗ್ರಾಮಗಳಲ್ಲಿ ಕಾವಡಿ ಹಬ್ಬವನ್ನು ವಿಜೃಂಭಣೆಯಿಂದ ಆಚರಿಸಲಾಯಿತು. ಭಕ್ತರು ಕಾವಡಿಗಳನ್ನು ಹೊತ್ತು ಭಜನೆ ಮಾಡುತ್ತಾ ಮೆರವಣಿಗೆಯೊಂದಿಗೆ ಸುಬ್ರಹ್ಮಣ್ಯ ದೇವಾಲಯಕ್ಕೆ ಬಂದರು. ಕಾವಡಿ ಉತ್ಸವದಲ್ಲಿ ಭಕ್ತರು ಭಕ್ತಿ ಮತ್ತು ಶ್ರದ್ಧೆಯಿಂದ ಪಾಲ್ಗೊಂಡರು.

ಕಾವಡಿ ಉತ್ಸವವು ಸುಬ್ರಹ್ಮಣ್ಯ ದೇವರಿಗೆ ಭಕ್ತರು ಅರ್ಪಿಸುವ ಭಕ್ತಿ ಮತ್ತು ತ್ಯಾಗದ ಸಂಕೇತವಾಗಿದೆ. ಆಷಾಢ ಮಾಸದಲ್ಲಿ ನಡೆಯುವ ಕಾವಡಿ ಉತ್ಸವವು ಈ ಬಾರಿ ಶ್ರಾವಣ ಮಾಸದಲ್ಲಿ ಆಚರಿಸುತ್ತಿರುವುದು ವಿಶೇಷ. ತಲ್ಲೂಕಿನ ದೋಣಿಮಡಗು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗುಡಿವಂಕದಲ್ಲಿರುವ ಬೆಟ್ಟದ ಮೇಲಿನ ಸುಬ್ರಮಣಿ ದೇವರಿಗೆ ವಿವಿಧ ರೀತಿಯಲ್ಲಿ ನೂರಾರು ಭಕ್ತರು ಹರಿಕೆ ತೀರಿಸಿದರು. ಕಾವಡಿ ಹಬ್ಬಕ್ಕೆ ಮುಂಚಿತವಾಗಿ ಭಕ್ತರು ಉಪವಾಸ ಮತ್ತು ವ್ರತಗಳನ್ನು ಆಚರಿಸುತ್ತಾರೆ. ಭಕ್ತರು ಕಾವಡಿಯನ್ನು ಹೊತ್ತು ಮೆರವಣಿಗೆಯಲ್ಲಿ ದೇವಸ್ಥಾನಕ್ಕೆ ಹೋಗುತ್ತಾರೆ. ದೇಹವನ್ನು ಚುಚ್ಚಿಕೊಳ್ಳುವುದು, ಒಬ್ಬರು ಬೆನ್ನಿಗೆ ನಿಂಬೆ ಹಣ್ಣುಗಳನ್ನು ಪೋಣಿಸಿಕೊಂಡು ಬಂದರೆ, ಮತ್ತೊಬ್ಬರು ಮೈ ಜುಮ್ ಅನ್ನಿಸುವ ರೀತಿ ಕೊಕ್ಕೆಗಳನ್ನು ಚುಚ್ಚಿಕೊಂಡು ಟ್ರ್ಯಾಕ್ಟರ್ ಎಳೆಯುವುದು, ಕಬ್ಬಿಣದ ರಾಡ್‌ನಿಂದ ನಾಲಗೆ ಚುಚ್ಚಿಕೊಂಡು ಹರಿಕೆ ತೀರಿಸಲಾಗುತ್ತದೆ. ಈ ರೀತಿಯ ಮೂಢನಂಬಿಕೆ ಆಚರಣೆಯನ್ನು ನಿಷೇಧಿಸಲಾಗಿದೆ.

ಎರಡು ವರ್ಷಗಳ ಹಿಂದೆ ಇಂಥ ಆಚರಣೆಗೆ ಪೊಲೀಸರು ನಿಷೇಧ ಹೇರಿದ್ದರು. ಈ ವರ್ಷವೂ ಇಂಥ ಆಚರಣೆಯಲ್ಲಿ ಭಕ್ತರು ಪಾಲ್ಗೊಳ್ಳಬಾರದು ಎಂದು ಪೊಲೀಸರು ಪ್ರಕಟಣೆ ಮೂಲಕ ಎಚ್ಚರಿಕೆ ನೀಡಿದ್ದರು. ಆದರೆ, ಪೊಲೀಸರ ಆದೇಶ ಧಿಕ್ಕರಿಸಿರುವ ನೂರಾರು ಮಂದಿ. ಬೆನ್ನಿಗೆ ಕೊಕ್ಕೆಗಳನ್ನು ಚುಚ್ಚಿಕೊಂಡು ಕ್ರೇನ್‌ನಡಿ ನೇತಾಡುವ ಮೂಲಕ ದೇವರಿಗೆ ಹರಕೆ ತೀರಿಸಿದರು. ಈ ನಡುವೆ, ಪೊಲೀಸರು ಮೂಕ ಪ್ರೇಕ್ಷಕರಾದರು. ಕಾವಡಿ ಉತ್ಸವಕ್ಕೆ ಕರ್ನಾಟಕದ ವಿವಿಧ ಭಾಗಗಳಿಂದ ಅಷ್ಟೇ ಅಲ್ಲದೆ, ಆಂಧ್ರಪ್ರದೇಶ, ತಮಿಳುನಾಡಿನಿಂದಲೂ ಭಕ್ತರು ಬಂದಿದ್ದರು.

# ಕಾಲ್ತುಳಿತ ಅವಘಡದ ಬಳಿಕ ಪೊಲೀಸ್ ಇಲಾಖೆ ರೂಪಿಸಿರುವ ಪ್ರಮಾಣೀಕೃತ ಕಾರ್ಯಾಚರಣೆ

• **ಉದಯವಾಹಿನಿ ಮೈಸೂರು**



ಆರ್‌ಸಿಬಿ ವಿಜಯೋತ್ಸವ ವೇಳೆ ಬೆಂಗಳೂರಿನಲ್ಲಿ ಸಂಭವಿಸಿದ್ದ ಕಾಲ್ತುಳಿತ ಅವಘಡದ ಪರಿಣಾಮ ಈ ಬಾರಿ ಮೈಸೂರು ದಸರಾ ಮಹೋತ್ಸವದ ಮೇಲೂ ಬೀರಿದೆ. ಜಂಬೂಸವಾರಿ ದಿನ ಅರಮನೆ ಆವರಣದಲ್ಲಿ 11,600 ಆಸನಗಳು ಕಡಿತಗೊಳ್ಳಲಿವೆ. 2023ರಲ್ಲಿ 38 ಸಾವಿರ ಆಸನಗಳು, ಕಳೆದ ವರ್ಷ ದಾಖಲೆಯ 59,600ಕ್ಕೂ ಹೆಚ್ಚು ಆಸನಗಳ ವ್ಯವಸ್ಥೆಯನ್ನು ಜಿಲ್ಲಾಡಳಿತ ಮಾಡಿತ್ತು. ಕಾಲ್ತುಳಿತ ಅವಘಡದ ಬಳಿಕ ಪೊಲೀಸ್ ಇಲಾಖೆ ರೂಪಿಸಿರುವ 'ಪ್ರಮಾಣೀಕೃತ ಕಾರ್ಯಾಚರಣೆ ವಿಧಾನವನ್ನು (ಎಸ್‌ಒಪಿ) ಕಟ್ಟುನಿಟ್ಟಾಗಿ ಪಾಲಿಸಲು ಈ ಬಾರಿ ಕ್ರಮ ಕೈಗೊಳ್ಳಲಾಗುತ್ತಿದೆ. ಆಸನಗಳ ಸಂಖ್ಯೆ ಕಡಿತಗೊಳಿಸಲಾಗುತ್ತಿದೆ. ಈ ಬಾರಿ ಆಸನಗಳ ಸಂಖ್ಯೆ ಕಡಿತಗೊಳಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಉನ್ನತಮಟ್ಟದ ಸಮಿತಿ ಸಭೆ ತೀರ್ಮಾನಿಸಿದೆ. ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಸಿ. ಮಹದೇವಪ್ಪ ಅಧ್ಯಕ್ಷತೆಯ ಜಿಲ್ಲಾ ಕಾರ್ಯಕಾರಿ ಸಮಿತಿ ಸಭೆಯಲ್ಲೂ ಚರ್ಚೆಯಾಗಿದ್ದು, 48 ಸಾವಿರ ಅಸನ ವ್ಯವಸ್ಥೆ ಮಾಡಲು, ಅಷ್ಟೇ ಪ್ರಮಾಣದಲ್ಲಿ ಪಾಸ್, ಟಿಕೆಟ್, ಕಾರ್ಡ್ ನೀಡಲು ನಿರ್ಧರಿಸಲಾಗಿದೆ ಎಂದು ಮೂಲಗಳು ತಿಳಿಸಿವೆ. ಇದರಿಂದಾಗಿ, ವಿವಿಐಪಿ, ವಿಐಪಿಗಳಿಗೆ ಕೂಡ 1 ಸಾವಿರ ಆಸನ ಕಡಿತಗೊಳಿಸಲು ತೀರ್ಮಾನಿಸಲಾಗಿದೆ. ಪ್ರತಿ ವಿಭಾಗದಲ್ಲೂ (ಎನ್‌ಕ್ಲೋಸರ್) ತಲಾ ಸರಾಸರಿ 500ರಿಂದ ಸಾವಿರ ಅಸನಗಳು ಕಡಿಮೆಯಾಗಲಿವೆ.

**ಮಾರ್ಗ ಬದಲಾವಣೆಯಾಗಿತ್ತು:** ಕಳೆದ ವರ್ಷ ಅರಮನೆ ಆವರಣದೊಳಗೆ ಆನೆಗಳು ಬರುವ ಮಾರ್ಗ ಬದಲಾಯಿಸಲಾಗಿತ್ತು. ಅಂಬಾರಿ ಆನೆ, ಸ್ತಬ್ಧಚಿತ್ರಗಳು, ಜನಪದ ಕಲಾತಂಡಗಳು ಅರಮನೆ ಮುಂದಿನಿಂದ ಹೊರಡುವ ಬದಲಿಗೆ, ಅಂಬಾರಿ ಕಟ್ಟುವ ಸ್ಥಳದಿಂದ 'ಅಭಿಮನ್ಯು' ಸೇರಿದಂತೆ ಎಲ್ಲಾ ಆನೆಗಳು ನೇರ ಅರಮನೆ ಆವರಣದ ತ್ರಿನೇಶ್ವರ ದೇವಾಲಯಕ್ಕೆ ತೆರಳಿ ಅಲ್ಲಿ ಬಲಕ್ಕೆ ತಿರುಗಿ, ನಂತರ ಗಾಯತ್ರಿ ದೇಗುಲದ ಬಳಿ ಬಲಕ್ಕೆ ತಿರುಗಿ ಅರಮನೆ ಎದುರು ಬರುವ ವ್ಯವಸ್ಥೆ ಇತ್ತು. ಈ ಮಾರ್ಗದಲ್ಲಿ ಸಾರ್ವಜನಿಕರಿಗಾಗಿ 11 ಸಾವಿರಕ್ಕೂ ಹೆಚ್ಚಿನ ಆಸನ ಹಾಕಲಾಗಿತ್ತು. ಈ ಮಾರ್ಗ ಉಳಿಸಿಕೊಳ್ಳಬೇಕೇ, ಬೇಡವೇ ಎಂಬುದು ಇನ್ನೂ ತೀರ್ಮಾನವಾಗಿಲ್ಲ.

ಈ ಬಾರಿ ಸೆ.22ರಿಂದ ಅ.2ರವರೆಗೆ ಮೈಸೂರು ದಸರಾ ನಡೆಯಲಿದೆ. ಅ.2ರ ವಿಜಯದಶಮಿ ದಿನ ಜಂಬೂಸವಾರಿ ಮೆರವಣಿಗೆ ಇರುತ್ತದೆ. 750 ಕೆ.ಜಿ. ತೂಕದ ಚಿನ್ನದ ಅಂಬಾರಿಯಲ್ಲಿ ಸಾಗುವ ಚಾಮುಂಡೇಶ್ವರಿ ಉತ್ಸವ ಮೂರ್ತಿ ಮೆರವಣಿಗೆಯಲ್ಲಿ ಸಾಗಲಿದೆ.

## ನಗರದ 26ನೇ ವಾರ್ಡ್‌ನಲ್ಲಿ ರೂ. 40 ಲಕ್ಷ ಅನುದಾನದಲ್ಲಿ ಕಾಂಕ್ರೀಟ್ ರಸ್ತೆ ನಿರ್ಮಾಣ ಕಾಮಗಾರಿಗೆ ಚಾಲನೆ

# ಒಳಚರಂಡಿ ಯೋಜನೆಗೆ ಸಿಗದ ರೂ.70 ಕೋಟಿ: ಶಾಸಕ ಹರೀಶ್ ಗೌಡ

• **ಉದಯವಾಹಿನಿ ಹುಣಸೂರು**



ರಾಜ್ಯ ಸರ್ಕಾರದಿಂದ ಸಮರ್ಪಕವಾಗಿ ಅನುದಾನ ಬಿಡುಗಡೆಯಾಗದ ಕಾರಣ ನಗರಸಭೆ ವ್ಯಾಪ್ತಿಯಲ್ಲಿ ಅಭಿವೃದ್ಧಿ ಕಾಮಗಾರಿ ನಡೆಸಲಾಗುತ್ತಿಲ್ಲ. ಯೋಜನೆಗಳು ವಿಳಂಬವಾಗಿ, ಜನರು ಮೂಲಸೌಕರ್ಯಗಳಿಂದ ವಂಚಿತರಾಗಿದ್ದಾರೆ ಎಂದು ಶಾಸಕ ಜಿ.ಡಿ.ಹರೀಶ್ ಗೌಡ ಹೇಳಿದರು. ನಗರದ 26ನೇ ವಾರ್ಡ್‌ನಲ್ಲಿ ರೂ. 40 ಲಕ್ಷ ಅನುದಾನದಲ್ಲಿ ಕಾಂಕ್ರೀಟ್ ರಸ್ತೆ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಿ ಅವರು ಮಾತನಾಡಿದರು.

**ಯೋಜನೆಗೆ ಅಡ್ಡಗಾಲು:** ಸರ್ಕಾರದದ ಯೋಜನೆ ತರಲು ಅಡ್ಡಗಾಲು ಹಾಕುವರಿದ್ದು, ಸಾರ್ವಜನಿಕ ವೇದಿಕೆಯಲ್ಲಿ ಯಾವ ಯೋಜನೆ, ಎಷ್ಟು ಅನುದಾನ ಕ್ಷೇತ್ರಕ್ಕೆ ತರುತ್ತಿದ್ದೇನೆ ಎಂದು ಹೇಳುವುದು ಕಷ್ಟವಾಗಿದೆ. ಅನುದಾನದೊಂದಿಗೆ ಕ್ಷೇತ್ರದ ಯೋಜನೆಗಳಿಗೆ ಭೂಮಿ ಪೂಜೆ ನಡೆಸಿ ಯಾವುದೇ ಅಡೆತಡೆಗಳಿಲ್ಲದೆ ಯೋಜನೆ ಅನುಷ್ಠಾನಗೊಳಿಸಬೇಕಾದ ಪರಿಸ್ಥಿತಿ ಸೃಷ್ಟಿಯಾಗಿದೆ' ಎಂದು ವಿರೋಧ ಪಕ್ಷದವರಿಗೆ ಟಾಂಗ್ ನೀಡಿದರು.

**ಆದಾಯ ಕೊರತೆ:** ನಗರಸಭೆ ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದು, ಸಾರ್ವಜನಿಕರು ತೆರಿಗೆ ಪಾವತಿಸಿ ನಗರಸಭೆ ಆರ್ಥಿಕ ಸ್ಥಿತಿ ಸುಧಾರಿಸಲು ಕೈ ಜೋಡಿಸಬೇಕು. 2025-26 ರಲ್ಲಿ ನಗರಸಭೆಯಿಂದ ಬೇಡಿಕೆ ಇರುವುದು ರೂ.7.20 ಕೋಟಿ. ಆದರೆ ಸಂಗ್ರಹವಾಗಿರುವು ರೂ.6 ಕೋಟಿ, ರೂ. 1.20 ಕೋಟಿ ಕೊರತೆ ಅನುಭವಿಸಿದೆ. ಈ ಪರಿಸ್ಥಿತಿಯಲ್ಲಿ ಯಾವ ಅಭಿವೃದ್ಧಿ ಕಾಮಗಾರಿ ನಗರಸಭೆ ತೆಗೆದುಕೊಳ್ಳಲು ಸಾಧ್ಯ ಎಂದರು.

**ವಿರೋಧ ಪಕ್ಷದವರಿಗೆ ಟಾಂಗ್**

**ಅಧ್ಯಕ್ಷರ ಅಳಲು:** ನಗರಸಭೆ ಅಧ್ಯಕ್ಷ 26ನೇ ವಾರ್ಡ್ ಸದಸ್ಯ ಗಣೇಶ್ ಕುಮಾರಸ್ವಾಮಿ ಮಾತನಾಡಿ, ನಮ್ಮ ಅವಧಿಯಲ್ಲಿ ಕೆಲವು ತಿಂಗಳಿಗಳಲ್ಲಿ ಪೂರ್ಣಗೊಳ್ಳಲಿದೆ. 2 ವರ್ಷ ಕೋವಿಡ್, ಬಳಿಕ ಗ್ಯಾರಂಟಿ ಯೋಜನೆ ಜಾರಿಯಿಂದಾಗಿ ಅನುದಾನವಿಲ್ಲದೆ ಅಭಿವೃದ್ಧಿ ನಿರೀಕ್ಷಿತ ಮಟ್ಟದಲ್ಲಿ ಆಗಿಲಿಲ್ಲ. ಇತ್ತೀಚೆಗೆ ಶಾಸಕರು 31 ವಾರ್ಡ್ ಗಳಿಗೆ 3.10 ಕೋಟಿ ಅನುದಾನ ತಂದಿದ್ದು ಅದರಲ್ಲಿ ಕೆಲವು ಅಭಿವೃದ್ಧಿ ನಡೆದಿದೆ' ಎಂದರು.

ಕಾರ್ಯಕ್ರಮದಲ್ಲಿ ಉಪಾಧ್ಯಕ್ಷೆ ಆಶಾ ಕೃಷ್ಣನಾಯಕ, ಸದಸ್ಯರಾದ ಸತೀಶ್ ಕುಮಾರ್, ಕೃಷ್ಣರಾಜಗುಪ್ತ, ಶರವಣ, ಆಯುಕ್ತ ಮಾನಸ, ಎಇಇ ಶರ್ಮಿಳಾ, ಲೋಕೇಶ್, ವೆಂಕಟೇಶ್ (ಪಾಪು), ಬಾಬು ಭಾಗವಹಿಸಿದ್ದರು.

### ಜನರ ದಿಕ್ಕುತಪ್ಪಿಸಿದ ಮುಖ್ಯಮಂತ್ರಿ

**ಕ್ಷೇತ್ರದ ಶಾಸಕನಾದ ಬಳಿಕ ನಗರ ವ್ಯಾಪ್ತಿಯಲ್ಲಿ ಒಳಚರಂಡಿ ಕಾಮಗಾರಿಗೆ ರೂ. 70 ಕೋಟಿ ವೆಚ್ಚದ ಪ್ರಸ್ತಾವ ಸಲ್ಲಿಸಿ ಪೌರಾಡಳಿತ ಸಚಿವರು ಈವರೆಗೂ ಅನುದಾನ ಬಿಡುಗಡೆ ಮಾಡಿಲ್ಲ. ಸರ್ಕಾರ ತನ್ನ ಚುನಾವಣಾ ಪ್ರಣಾಳಿಕೆಯಲ್ಲಿ ಹೇಳಿದಂತೆ ಗ್ಯಾರಂಟಿ ಯೋಜನೆ ಜಾರಿಗೊಳಿಸಿ ರಾಜ್ಯದ ಎಸ್‌ಟಿಪಿ ಮತ್ತು ಟಿಎಸ್‌ಪಿ ಯೋಜನೆ ಅನುದಾನ ರೂ. 56 ಸಾವಿರ ಕೋಟಿ ಬಳಸಿಕೊಂಡು ಯೋಜನೆಗಳಿಗೆ ಅನುದಾನ ಇಲ್ಲವಾಗಿದೆ' ಎಂದು ಜಿ.ಡಿ. ಹರೀಶ್‌ಗೌಡ ದೂರಿದರು. ಎಸ್‌ಸಿಪಿ ಮತ್ತು ಟಿಎಸ್‌ಪಿ ಯೋಜನೆಗೆ ರೂ. 2.70 ಲಕ್ಷ ಕೋಟಿ ಬಳಸಿದ್ದೇವೆ ಎಂದು ಮುಖ್ಯಮಂತ್ರಿ ಹೇಳಿಕೆ ನೀಡಿ ಜನರ ದಿಕ್ಕು ತಪ್ಪಿಸಿದ್ದಾರೆ. ಈ ಪ್ರಮಾಣದ ಅನುದಾನ ರಾಜ್ಯದ 225 ಕ್ಷೇತ್ರಕ್ಕೆ ನೀಡಿದ್ದರೆ ಅನುದಾನ ಕೊರತೆ ಇಲ್ಲದಂತೆ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಬಹುದಿತ್ತು. ಆದರೆ ಹುಣಸೂರು ಕ್ಷೇತ್ರಕ್ಕೆ 2 ವರ್ಷದಲ್ಲಿ ರೂ. 75 ಲಕ್ಷ ಮಾತ್ರ ನೀಡಿದ್ದಾರೆ' ಎಂದು ಲೇವಡಿ ಮಾಡಿದರು.**

## ಮಿನಿ ನ್ಯೂಸ್

### ರಸ್ತೆ ಕಾಮಗಾರಿ ವಿಳಂಬ ಪೈರು ನಾಟಿ ಮಾಡಿ ಆಕ್ರೋಶ

• **ಉದಯವಾಹಿನಿ ಮಾಗಡಿ**

ತಾಲ್ಲೂಕಿನ ಚಕ್ರಬಾವಿ ಕಾಲೊನಿ ರಸ್ತೆ ಕಾಮಗಾರಿ ವಿಳಂಬದಿಂದಾಗಿ ಕೆಸರು ಗದ್ದೆಯಾಗಿ ಮಾರ್ಪಟ್ಟಿದೆ. ಕೆಸರು ರಸ್ತೆಗೆ ರಾಗಿ ಪೈರು ನಾಟಿ ಮಾಡುವ ಮೂಲಕ ಆಕ್ರೋಶ ವ್ಯಕ್ತಪಡಿಸಿದರು.

ರೂ.1.30 ಕೋಟಿ ವೆಚ್ಚದಲ್ಲಿ ಕಾಂಕ್ರೀಟ್ ರಸ್ತೆ ಹಾಗೂ ಚರಂಡಿ ನಿರ್ಮಾಣಕ್ಕೆ ವಿಶ್ವೇಶ್ವರಯ್ಯ ಜಲ ನಿಗಮ ವತಿಯಿಂದ ಅನುದಾನ ಬಿಡುಗಡೆಯಾಗಿದ್ದು ಚಕ್ರಬಾವಿ ಪರಿಶಿಷ್ಟ ಜಾತಿ/ ಪಂಗಡ ಕಾಲೊನಿ ಗಣಪತಿ ದೇವಸ್ಥಾನದಿಂದ ಅರಳಕುಪ್ಪೆಗೆ ತೆರಳುವ ಮುಖ್ಯರಸ್ತೆ 150 ಮೀಟರ್ ರಸ್ತೆ ಕಾಮಗಾರಿಗಾಗಿ ಹಲವು ದಿನಗಳ ಹಿಂದೆ ರಸ್ತೆಯನ್ನು ಅಗೆಯಲಾಗಿತ್ತು. ಎರಡು ಬದಿಯಲ್ಲೂ ಚರಂಡಿ ನಿರ್ಮಾಣ ಆಗದೆ ಮನೆ ಕೊಳಚೆ ನೀರು, ಮಳೆ ನೀರು ರಸ್ತೆಯಲ್ಲಿ ಹರಿಯುತ್ತಿರುವುದರಿಂದ ಕೆಸರು ರಸ್ತೆಯಾಗಿ ಮಾರ್ಪಟ್ಟಿದೆ ಎಂದು ಗ್ರಾಮಸ್ಥರು ಆರೋಪಿಸಿದರು. ಎರಡು ಬದಿಯಲ್ಲೂ ಚರಂಡಿ ನಿರ್ಮಾಣ ಆಗಿಲ್ಲ. ಜನರು ಪ್ರತಿನಿತ್ಯ ಈ ರಸ್ತೆಯಲ್ಲಿ ಸಂಚಾರ ಮಾಡಲು ತೊಂದರೆ ಪಡುತ್ತಿದ್ದು ವೃದ್ಧರು ಈ ರಸ್ತೆಯಲ್ಲಿ ಸಂಚಾರ ಮಾಡುವುದೇ ದುಸ್ತರವಾಗಿದೆ ಎಂದು ಗ್ರಾಮಸ್ಥರಾದ ಅಂಗಡಿ ಸುರೇಶ್, ಗಿರೀಶ್, ಪಾಪೇಗೌಡ, ರವಿ, ಪಟೇಲ್ ಸುರೇಶ್, ಚಂದ್ರು, ಜಯಮ್ಮ, ಲಕ್ಷ್ಮಕ್ಕ ಸೇರಿದಂತೆ ಇತರರು ಆಕ್ರೋಶ ವ್ಯಕ್ತಪಡಿಸಿದರು.

### ಕುರುಪಾಳ್ಯ ರಸ್ತೆ ಅಭಿವೃದ್ಧಿಗೂ ಅನುದಾನ ಬಿಡುಗಡೆ

• **ಉದಯವಾಹಿನಿ ಮಾಗಡಿ**

ತಾಲ್ಲೂಕಿನ ತಗೀಕುಪ್ಪೆ ಸಮಗ್ರ ಅಭಿವೃದ್ಧಿಗೆ ಶಾಸಕ ಎಚ್.ಸಿ.ಬಾಲಕೃಷ್ಣ ಅವರು ರೂ.1.5ಕೋಟಿ ವೆಚ್ಚದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿ ಕೈಗೊಂಡಿದ್ದಾರೆ ಎಂದು ಬಮೂಲ್ ನಿರ್ದೇಶಕ ಎಚ್.ಎನ್.ಅಶೋಕ್ ಹೇಳಿದರು. ರೂ.30 ವೆಚ್ಚದಲ್ಲಿ ಕಾಂಕ್ರೀಟ್ ರಸ್ತೆ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು. ಶಾಲೆ, ಹಾಸ್ಟೆಲ್ ಅಭಿವೃದ್ಧಿ, ಗ್ರಂಥಾಲಯ, ಅಂಬೇಡ್ಕರ್ ಭವನ ನಿರ್ಮಾಣ ಸೇರಿದಂತೆ ಹಲವು ಯೋಜನೆಗಳನ್ನು ಹಾಕಿಕೊಳ್ಳಲಾಗಿದೆ ಎಂದರು. ತಗೀಕುಪ್ಪೆ ಗ್ರಾಮ ಪಂಚಾಯಿತಿ ಅಧ್ಯಕ್ಷ ತೇಜಸ್ವಿನಿ ರಮೇಶ್ ಮಾತನಾಡಿ, ಕುರುಪಾಳ್ಯ ರಸ್ತೆ ಅಭಿವೃದ್ಧಿಗೂ ಅನುದಾನ ಬಿಡುಗಡೆ ಮಾಡಿದ್ದು ಶೀಘ್ರದಲ್ಲೇ ಭೂಮಿ ಪೂಜೆ ನೆರವೇರಿಸಲಾಗುವುದು. ಸಮುದಾಯ ಭವನ ಅರ್ಧಕ್ಕೆ ನಿಂತಿದ್ದು ಪೂರ್ಣಗೊಳಿಸಲಾಗುವುದು ಎಂದರು.

### ವಾಟದಹೊಸಹಳ್ಳಿ ರೈತರ ತಮಟೆ ಚಳವಳಿ

• **ಉದಯವಾಹಿನಿ ಗೌರಿಬಿದನೂರು**

ವಾಟದಹೊಸಹಳ್ಳಿ ಕೆರೆ ನೀರನ್ನು ನಗರಕ್ಕೆ ತರುವುದನ್ನು ವಿರೋಧಿಸಿ ತಾಲ್ಲೂಕು ಕಚೇರಿ ಮುಂದೆ ನಡೆಯುತ್ತಿರುವ ರೈತರ ಪ್ರತಿಭಟನೆ 11ನೇ ದಿನ ತಮಟೆ ಚಳವಳಿ ಹಮ್ಮಿಕೊಂಡಿದ್ದರು. ವಾಟದಹೊಸಹಳ್ಳಿ ಅಚ್ಚುಕಟ್ಟುದಾರರ ಸಂಘದ ಅಧ್ಯಕ್ಷ ಮಾಳಪ್ಪ ಮಾತನಾಡಿ, ನಮ್ಮ ಹೋರಾಟಗಳಿಗೆ ಅಧಿಕಾರಿಗಳಾಗಲಿ, ಪ್ರತಿನಿಧಿಗಳಾಗಲಿ ಸ್ಪಂದಿಸುತ್ತಿಲ್ಲ.

ರೈತರು ದೇಶಕ್ಕೆ ಬೆನ್ನೆಲುಬು ಎಂದು ರೈತರ ಬೆನ್ನೆಲುಬನ್ನು ಮುರಿಯುತ್ತಿದ್ದಾರೆ. ರೂ.65 ಕೋಟಿ ತೆರಿಗೆ ಹಣ ಪೋಲಾಗುತ್ತದೆ. ನಮ್ಮ ಬೇಡಿಕೆ ಈಡೇರಿಸದೆ ಇದ್ದರೆ ಮುಂದಿನ ದಿನಗಳಲ್ಲಿ ಸಾವಿರಾರು ಮಂದಿ ವಿಧಾನಸೌಧಕ್ಕೆ ಮುತ್ತಿಗೆ ಹಾಕುತ್ತೇವೆ ಎಂದು ಎಚ್ಚರಿಕೆ ನೀಡಿದರು. ಮಧು ಸೂರ್ಯನಾರಾಯಣರೆಡ್ಡಿ, ಹರ್ಷವರ್ಧನ್ ರೆಡ್ಡಿ, ರವಿಚಂದ್ರರೆಡ್ಡಿ, ಕೋಡಿರ್ಲಪ್ಪ ಸೇರಿದಂತೆ ಹಲವು ರೈತರು ಪಾಲ್ಗೊಂಡಿದ್ದರು.

### ತಾಲ್ಲೂಕಿನ ಕೆಆರ್‌ಎಸ್‌ನಿಂದ 36 ಸಾವಿರ ಕ್ಯೂಸೆಕ್ ನೀರು ನದಿಗೆ

• **ಉದಯವಾಹಿನಿ ಶ್ರೀರಂಗಪಟ್ಟಣ**

ತಾಲ್ಲೂಕಿನ ಕೆಆರ್‌ಎಸ್ ಜಲಾಶಯದಿಂದ 36 ಸಾವಿರ ಕ್ಯೂಸೆಕ್‌ಗೂ ಹೆಚ್ಚು ನೀರನ್ನು ಮಧ್ಯಾಹ್ನದಿಂದ ನದಿಗೆ ಹರಿಸಲಾಗುತ್ತಿದೆ. ಕಾವೇರಿ ಕಣಿವೆಯಲ್ಲಿ ನಿರಂತರವಾಗಿ ಮಳೆ ಸುರಿಯುತ್ತಿದ್ದು, ಜಲಾಶಯಕ್ಕೆ ಹರಿದು ಬರುವ ನೀರು ಪ್ರಮಾಣ ಹೆಚ್ಚಾಗುತ್ತಿದೆ.

ಹೆಚ್ಚುವರಿ ನೀರನ್ನು ಹೊರಗೆ ಬಿಡಲಾಗುತ್ತಿದೆ. ಹೊರ ಹರಿವಿನ ಪ್ರಮಾಣ 50 ಸಾವಿರ ಕ್ಯೂಸೆಕ್‌ವರೆಗೂ ಹೆಚ್ಚುವ ಸಾಧ್ಯತೆ ಇದ್ದು, ನದಿ ಪಾತ್ರದ ಜನ, ಜಾನುವಾರುಗಳು ಸುರಕ್ಷಿತ ಸ್ಥಳಕ್ಕೆ ತೆರಳಬೇಕು ಎಂದು ಕಾವೇರಿ ನೀರಾವರಿ ನಿಗಮದ ಕಾರ್ಯಪಾಲಕ ಎಂಜಿನಿಯರ್ ವಿ.ಜಯಂತ್ ತಿಳಿಸಿದ್ದಾರೆ. ಅಣೆಕಟ್ಟೆಯಲ್ಲಿ ಮಧ್ಯಾಹ್ನದ ವೇಳೆಗೆ 124.46 ಅಡಿ (ಗರಿಷ್ಠ 124.80 ಅಡಿ) ನೀರು ಸಂಗ್ರಹವಾಗಿತ್ತು. ಬೆಳಿಗ್ಗೆ 12,262 ಕ್ಯೂಸೆಕ್ ಇದ್ದ ಒಳ ಹರಿವಿನ ಪ್ರಮಾಣ ಮಧ್ಯಾಹ್ನದ ವೇಳೆಗೆ 36 ಸಾವಿರ ಕ್ಯೂಸೆಕ್ ದಾಟಿದೆ. ಹಾಗಾಗಿ ನದಿಗೆ ಹರಿಸುವ ನೀರಿನ ಪ್ರಮಾಣ ಕೂಡ ಹೆಚ್ಚಾಗಿದೆ. ಕಳೆದ ವರ್ಷ ಇದೇ ದಿನ ಜಲಾಶಯದಲ್ಲಿ 123.20 ಅಡಿ ನೀರಿತ್ತು. ಒಳ ಹರಿವು 16,625 ಕ್ಯೂಸೆಕ್ ಹಾಗೂ ಹೊರ ಹರಿವು 14,522 ಕ್ಯೂಸೆಕ್ ದಾಖಲಾಗಿತ್ತು.

### ಹಾಲು ಉತ್ಪಾದಕರ ಸಂಘಕ್ಕೆ ರೂ.3.29 ಲಕ್ಷ ಲಾಭ

• **ಉದಯವಾಹಿನಿ ತಿ.ನರಸೀಪುರ**

ತಾಲ್ಲೂಕಿನ ಬನ್ನೂರು ಹೋಬಳಿಯ ಮೆಣಸಿನಕ್ಯಾತನಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘವು 2024-25ನೇ ಸಾಲಿನಲ್ಲಿ ರೂ.3.29 ಲಕ್ಷ ನಿವ್ವಳ ಲಾಭಗಳಿಸಿದೆ ಎಂದು ಸಂಘದ ಕಾರ್ಯನಿರ್ವಾಹಣಾಧಿಕಾರಿ ಎಂ. ಎಸ್.ರವಿ ತಿಳಿಸಿದರು.

ಸಂಘದ ಆವರಣದಲ್ಲಿ ಅಧ್ಯಕ್ಷ ತಿಮ್ಮೇಗೌಡ ಅಧ್ಯಕ್ಷತೆಯಲ್ಲಿ ನಡೆದ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯಲ್ಲಿ ವರದಿ ಮಂಡಿಸಿದ ಅವರು, ಸದಸ್ಯರಿಂದ ರೂ.1.16ಕೋಟಿ ಮೌಲ್ಯದ ಹಾಲು ಖರೀದಿಸಲಾಗಿದೆ. ಲಾಭದಲ್ಲಿ ರೂ.1.36 ಲಕ್ಷವನ್ನು ಸದಸ್ಯರಿಗೆ ಬೋನಸ್ ರೂಪದಲ್ಲಿ ವಿತರಿಸಲಾಗಿದೆ ಎಂದು ಮಾಹಿತಿ ನೀಡಿದರು. ಗ್ರಾಮದ ಸರ್ಕಾರಿ ಪ್ರೌಢ ಶಾಲೆಯಲ್ಲಿ ವಿಜ್ಞಾನ ಶಿಕ್ಷಕರಾಗಿ ಸೇವೆ ಸಲ್ಲಿಸಿದ ವೇಳೆ ವೈಜ್ಞಾನಿಕ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಿದ್ದ. ಪ್ರಸ್ತುತ ಹುಣಸೂರು ತಾಲ್ಲೂಕಿನಲ್ಲಿ ಸೇವೆಯಲ್ಲಿರುವ ರಾಷ್ಟ್ರೀಯ ಶಿಕ್ಷಕ ಪ್ರಶಸ್ತಿ ವಿಜೇತ ಎಚ್.ಎನ್.ಗಿರೀಶ್ ಅವರನ್ನು ಸಂಘ ಹಾಗೂ ಹಳೆಯ ವಿದ್ಯಾರ್ಥಿಗಳು ಸೇರಿ ಅಭಿನಂದಿಸಿದರು. ಮಂಜುಗೌಡ, ಚಿಕ್ಕರಾಜು, ಮಹೇಶ್ ಎಂ.ಎಸ್.ಬೋರಯ್ಯ, ಪಶುವೈದ್ಯ ಕಾರ್ತಿಕ್, ಸಂಘದ ಸದಸ್ಯರು ಹಾಜರಿದ್ದರು.

ಅಂತರಾಳದಿಂದ.. EDITORIAL

# ತಗ್ಗುತ್ತಿರುವ ಹಣದುಬ್ಬರ ಪ್ರಮಾಣ

## ಬೆಳವಣಿಗೆಗೆ ವೇಗ ನೀಡಲು ಸಕಾಲ

ವರ್ಷಗಳಿಂದ ಏರುಗತಿಯಲ್ಲಿ ಇದ್ದ ಗ್ರಾಹಕ ಬೆಲೆ ಸೂಚ್ಯಂಕ ಸಿಪಿಐ ಆಧಾರಿತ ಚಿಲ್ಲರೆ ಹಣದುಬ್ಬರ ದರವು ಈಗ ಕೆಲವು ತಿಂಗಳುಗಳಿಂದ ಇಳಿಮುಖವಾಗಿದೆ. ಚಿಲ್ಲರೆ ಹಣದುಬ್ಬರ ಪ್ರಮಾಣವು ಜುಲೈ ತಿಂಗಳಲ್ಲಿ ಎಂಟು ವರ್ಷಗಳ ಕನಿಷ್ಠ ಮಟ್ಟವಾದ ಶೇ 1.55ಕ್ಕೆ ತಗ್ಗಿದೆ. ತರಕಾರಿ ಹಾಗೂ ಧಾನ್ಯಗಳು ಸೇರಿದಂತೆ ವಿವಿಧ ಬಗೆಯ ಆಹಾರ ಉತ್ಪನ್ನಗಳ ಬೆಲೆಯಲ್ಲಿನ ಇಳಿಕೆಯು ಹಣದುಬ್ಬರ ಪ್ರಮಾಣ ತಗ್ಗಲು ಕಾರಣವಾಗಿದೆ. ಹಿಂದಿನ ವರ್ಷದ ಜುಲೈನಲ್ಲಿ ಹಣದುಬ್ಬರ ಪ್ರಮಾಣವು ಶೇ 3.60ರಷ್ಟು ಇತ್ತು. ಕಳೆದ ವರ್ಷದ ಜುಲೈಗೆ ಹೋಲಿಸಿದರೆ ಈ ವರ್ಷದ ಜುಲೈನಲ್ಲಿ ಆಹಾರ ವಸ್ತುಗಳ ಬೆಲೆಯು ಇಳಿಕೆ ಕಂಡಿದೆ. ಮುಂಗಾರು ಮಳೆಯು ಚೆನ್ನಾಗಿ ಆಗುತ್ತಿರುವ ಕಾರಣಕ್ಕೆ ಹಾಗೂ ಕೃಷಿ ಚಟುವಟಿಕೆಗಳು ಉತ್ತಮವಾಗಿ ನಡೆದಿರುವ ಪರಿಣಾಮವಾಗಿ ಆಹಾರ ವಸ್ತುಗಳ ಬೆಲೆಯು ಮುಂದಿನ ದಿನಗಳಲ್ಲಿಯೂ ತೀರಾ ಹೆಚ್ಚಾಗುವ ಸಾಧ್ಯತೆ ಇಲ್ಲ. ಜಲಾಶಯಗಳಲ್ಲಿ ನೀರಿನ ಸಂಗ್ರಹವು ಚೆನ್ನಾಗಿ ಇದೆ. ಮುಂಗಾರು ಬೆಳೆಯು ಚೆನ್ನಾಗಿ ಆಗುವ ಅಂದಾಜು ಇದೆ. ಇವೆಲ್ಲವೂ ಬೆಲೆಯ ಸ್ಥಿರತೆಗೆ ನೆರವಾಗಲಿವೆ. ಆಹಾರ ವಸ್ತುಗಳು, ಇಂಧನವನ್ನು ಹೊರತುಪಡಿಸಿ ಇತರ ಉತ್ಪನ್ನಗಳ ಹಣದುಬ್ಬರ ಪ್ರಮಾಣವು ಜುಲೈನಲ್ಲಿ ಶೇ 4.1ರಷ್ಟು ಆಗಿದೆ. ಇದು ಜೂನ್‌ನಲ್ಲಿ ಶೇ 4.4ರಷ್ಟಾಗಿತ್ತು. ಗ್ರಾಹಕ ಬಳಕೆಯ ಇತರ ಕೆಲವು ವರ್ಗಗಳಲ್ಲಿನ ಉತ್ಪನ್ನಗಳ ಬೆಲೆ ಏರಿಕೆಯು ಜೂನ್‌ನಲ್ಲಿದ್ದ ಪ್ರಮಾಣದಲ್ಲೇ ಉಳಿದಿದೆ. ತಂಬಾಕು ಮತ್ತು ತಂಬಾಕು ಉತ್ಪನ್ನಗಳ ಬೆಲೆ ಏರಿಕೆಯು ಶೇ 2.4ರಷ್ಟು ಆಗಿದೆ. ಬಟ್ಟೆ ಹಾಗೂ ಪಾದರಕ್ಷೆಗಳ ಬೆಲೆ ಏರಿಕೆ ಪ್ರಮಾಣವು ಜೂನ್‌ನಲ್ಲಿ ಇದ್ದ ಮಟ್ಟದಲ್ಲೇ ಮುಂದುವರಿದಿದೆ. ಇಂಧನ ಮತ್ತು ವಿದ್ಯುತ್ ಬೆಲೆ ಏರಿಕೆಯು ಶೇ 2.5ರಷ್ಟು ಇದ್ದಿದ್ದು ಶೇ 2.7ಕ್ಕೆ ಹೆಚ್ಚಾಗಿದೆ. ಆದರೂ ಒಟ್ಟಾರೆ ಚಿತ್ರಣವು ಬೆಲೆ ಸ್ಥಿರತೆಯನ್ನು ಹೇಳುತ್ತಿದೆ. ದಿನಬಳಕೆಯ ಯಾವುದೇ ಉತ್ಪನ್ನದ ಬೆಲೆಯು ತಕ್ಷಣಕ್ಕೆ ಸವಾಲಾಗಿ ಪರಿಣಮಿಸುವ ಸಾಧ್ಯತೆ ಇಲ್ಲ. ಹೀಗಿದ್ದರೂ ಪರಿಸ್ಥಿತಿಯು ಮಧ್ಯಮಾವಧಿಯಲ್ಲಿ ಇದೇ ರೀತಿ ಉಳಿದುಕೊಳ್ಳುವುದಿಲ್ಲ, 2026ರ ಜನವರಿಯಿಂದ ಹಣದುಬ್ಬರ ಪ್ರಮಾಣವು ಹೆಚ್ಚಳ ಕಾಣಲಿದೆ ಎಂದು ಭಾರತೀಯ ರಿಸರ್ವ್ ಬ್ಯಾಂಕ್ ಅಂದಾಜು ಮಾಡಿದೆ. ಅಮೆರಿಕದ ಒತ್ತಡಕ್ಕೆ ಮಣಿದು ಭಾರತವು ರಷ್ಯಾ ದಿಂದ ಕಚ್ಚಾ ತೈಲ ಖರೀದಿ ಕೈಬಿಟ್ಟರೆ, ಅದು ಕೂಡ ಹಣದುಬ್ಬರದ ಹೆಚ್ಚಳಕ್ಕೆ ಕಾರಣವಾಗುವ ಸಾಧ್ಯತೆ ಇದೆ. ಅಮೆರಿಕವು ಆರಂಭಿಸಿರುವ ಸುಂಕ ಸಮರವು ದೇಶದ ಕೆಲವು ವಲಯಗಳ ಮೇಲೆ ಪರಿಣಾಮ ಉಂಟುಮಾಡುವುದು ಖಚಿತ. ಕೈಗಾರಿಕಾ ಉತ್ಪಾದನೆಯ ಸೂಚ್ಯಂಕವು ಜುಲೈನಲ್ಲಿ 10 ತಿಂಗಳ ಕನಿಷ್ಠ ಮಟ್ಟದಲ್ಲಿತ್ತು. ಅರ್ಥ ವ್ಯವಸ್ಥೆಯ ಆರೋಗ್ಯವನ್ನು ಸೂಚಿಸುವ ತೆರಿಗೆ ಸಂಗ್ರಹವು ಬಹಳ ಉತ್ತೇಜನಕಾರಿ ಆಗಿಲ್ಲ. ಹಣದುಬ್ಬರ ಪ್ರಮಾಣವು ತೀರಾ ಕಡಿಮೆ ಆಗಿರುವುದು, ಆರ್ಥಿಕ ಬೆಳವಣಿಗೆಗೆ ಇಂಬು ನೀಡಲು ಸರ್ಕಾರವು ಮುಂದಡಿ ಇರಿಸಬಹುದಾದ ಸಂದರ್ಭವೊಂದನ್ನು ಸೃಷ್ಟಿಸಿಕೊಟ್ಟಿದೆ. ಸರ್ಕಾರದ ಕಡೆಯಿಂದ ಆಗುವ ವೆಚ್ಚ, ಹೂಡಿಕೆಗಳನ್ನು ಮಾತ್ರ ಆಧರಿಸಿ ಭಾರತ ಬೆಳವಣಿಗೆ ಕಾಣಲು ಸಾಧ್ಯವಿಲ್ಲ. ಖಾಸಗಿ ವಲಯದಿಂದ ಹೂಡಿಕೆ ಹೆಚ್ಚಬೇಕು. ಬೇಡಿಕೆಯು ಚುರುಕುಗೊಳ್ಳಬೇಕು. ಬೆಳವಣಿಗೆಗೆ ವೇಗ ನೀಡಲು ಅಥವಾ ವಿಷಮ ಸನ್ನಿವೇಶ ಎದುರಾದರೆ ಈಗಿನ ಬೆಳವಣಿಗೆಯ ಪ್ರಮಾಣವನ್ನು ಉಳಿಸಿಕೊಳ್ಳಲು ಈ ವಿಚಾರಗಳ ಬಗ್ಗೆ ಸರ್ಕಾರವು ಗಮನಹರಿಸಬೇಕು.

**ಹಣದುಬ್ಬರಕ್ಕೆ ಸಂಬಂಧಿಸಿದ ಅಂಕಿ–ಅಂಶಗಳು ಈಗಿನ ಸಂದರ್ಭದಲ್ಲಿ ಹೆಚ್ಚು ಕಳವಳ ಮೂಡಿಸುವಂತೆ ಇಲ್ಲ. ಆದರೆ ಅರ್ಥ ವ್ಯವಸ್ಥೆಯ ಬೆಳವಣಿಗೆ ಕುರಿತ ಅಂದಾಜುಗಳು ತೀರಾ ಸಮಾಧಾನಕರವಾಗಿ ಇಲ್ಲ. ಪ್ರಸಕ್ತ ಹಣಕಾಸು ವರ್ಷದಲ್ಲಿ ಜಿಡಿಪಿ ಬೆಳವಣಿಗೆ ದರವು ಶೇ 6.5ರಷ್ಟು ಇರುತ್ತದೆ ಎಂದು ಆರ್‌ಬಿಐ ಅಂದಾಜು ಮಾಡಿದೆ. ಜಾಗತಿಕ ಅನಿಶ್ಚಿತತೆಗಳು ಜಿಡಿಪಿ ಬೆಳವಣಿಗೆ ದರದ ಮೇಲೆ ಪರಿಣಾಮ ಬೀರಬಹುದು ಎಂದು ಕೂಡ ಅದು ಹೇಳಿದೆ.**

# ರಾಘವೇಂದ್ರ ಸ್ವಾಮಿಗಳ 354ನೇ ಆರಾಧನೆ



• ಉದಯವಾಹಿನಿ, ಬೆಂಗಳೂರು

ಶ್ರೀ ಗುರು ರಾಯರ ಅನುಗ್ರಹ ಶ್ರೀ ಸುಧೀಂದ್ರ ದೇಸಾಯಿ ಮತ್ತು ಎನ್,ವಿ ಲಕ್ಷ್ಮೀನಾರಾಯಣ ಸ್ವಾಮಿ ಅವರಿಗೆ ರಾಯರ ಫಲಮಂತ್ರಾಕ್ಷತೆ ಆರಾಧನಾ ಸಂದರ್ಭದಲ್ಲಿ ವಿಶೇಷ ಸೇವೆ ಸಲ್ಲಿಸಿದ ಪತ್ರಿಕಾ ಮಾಧ್ಯಮ ಹಾಗೂ ಎಲೆಕ್ಟ್ರಾನಿಕ್ಸ್ ಮಾಧ್ಯಮಕ್ಕೆ ಶ್ರೀ ರಾಘವೇಂದ್ರ ಸ್ವಾಮಿಗಳ 354ನೇ ಆರಾಧನೆಯ ವಿಶೇಷ ಮಾಹಿತಿಯೊಂದಿಗೆ ಸೇವೆ ಸಲ್ಲಿಸಿದ ಶ್ರೀ ಸುಧೀಂದ್ರ ದೇಸಾಯಿ ಮತ್ತು ಶ್ರೀ ಎನ್ ವಿ ಲಕ್ಷ್ಮೀನಾರಾಯಣ ಸ್ವಾಮಿ ಅವರಿಗೆ ಶ್ರೀಮಠದ ವ್ಯವಸ್ಥಾಪಕರಾದ ಆರ್‌ಕೆವಾದಿಂದ್ರ ಆಚಾರ್ಯರು ಫಲಮಂತ್ರಾಕ್ಷತೆ ರಾಯರ ಶೇಷ ವಸ್ತ್ರ ಕೊಟ್ಟು ಆಶೀರ್ವದಿಸಿದರು ಎಂದು ಶ್ರೀ ನಂದಕಿಶೋರ್ ಆಚಾರ್ಯರು ತಿಳಿಸಿದರು ಈ ಸಂದರ್ಭದಲ್ಲಿ ಆರ್ ಕೆ ವಾದಿಂದ್ರ ಆಚಾರ್ಯರು ಎಲ್ಲಾ ಮಾಧ್ಯಮದವರಿಗೂ ಅಭಿನಂದನೆ ಸಲ್ಲಿಸಿದರು

# ರಾಮಾಯಣ




• ಹಿಂದಿನ ಸಂಚಿಕೆಯಿಂದ

## 116 ನೆಯ ಅಧ್ಯಾಯ

ಮೃಗಪಕ್ಷಿ ಸಮೂಹಗಳಿಂದ ಇಟ್ಟಣಿಸಿ ಅತ್ಯಂತ ವಿಶಾಲವಾದ ಅಗ್ನಿ ಹೋತ್ರದ ಮನೆಗಳಿಂದ ತುಂಬಿತ್ತು. ಕೃಷ್ಣಾಜಿನ, ಹೋಮಯೋಗ್ಯವಾದ ಸಮಿತ್ತು, ದರ್ಭೆ,ದೇವಪೂಜಾರ್ಥವಾಗಿ ತಂದ ಪುಷ್ಪದ ಕರಡಿಗೆ, ದೇವತಾರ್ಚನೆಯ ನಿಮಿತ್ತವಾಗಿ ತಂದ ಪವಿತ್ರವಾದ ಪುಣ್ಯ ತೀರ್ಥೋದಕ–ಇವುಗಳಿಂದ ಪರಿಪೂರ್ಣವಾದ ಪೂರ್ಣಕಲಶಗಳು ಕಂದಮೂಲಫಲಗಳು ಇತ್ಯಾದಿ ಗಳಿಂದ ಮೆರೆಯುತ್ತಿತ್ತು. ಅತ್ಯಂತ ಸ್ವಾದುವಾದ ಫಲಗಳಿಂದಲೂ ಮನೋಹರವಾದ ವೃಕ್ಷಗಳಿಂದಲೂ ಹೋಮಧೂಮಗಳಿಂದಲೂ ವೈಶ್ವದೇವತಾರ್ಥವಾದ ಬಲಿಗಳಿಂದಲೂ ಋಷಿಕುಮಾರರು ಅಭ್ಯಾಸ ಮಾಡುವ ವೇದಘೋಷಗಳಿಂದಲೂ ಪುಷ್ಪಿತವಾದ ತಾವರೆ ಕೊಳಗಳಿಂದಲೂ ಮನೋಹರವಾಗಿತ್ತು.ಕಂದಮೂಲಫಲಾಹಾರಗಳನ್ನು ಮಾಡಿಕೊಂಡು ಜಿತೇಂದ್ರಿಯರಾಗಿ ಕೃಷ್ಣಾಜಿನ ನಾರುಬಟ್ಟೆಗಳನ್ನು ಧರಿಸಿಕೊಂಡು ತಮ್ಮ ತಪಸ್ಸಾಮರ್ಥ್ಯದಿಂದ ಸೂರ್ಯಾಗ್ನಿಗಳ ಕಾಂತಿಗೆ ಸಮಾನವಾದ ತೇಜಸ್ಸುಳ್ಳವರೂ ಆಹಾರನಿಯಮವುಳ್ಳವರೂ ಮಹಾತ್ಮರೂ ವೃದ್ಧರೂ ಆದ ಋಷಿಗಳಿಂದ ಇಟ್ಟಣಿಸಿತ್ತು. ಸಾಕ್ಷಾತ್ ಬ್ರಹ್ಮಲೋಕದಂತೆ ಅತಿಮನೋಹರವಾಗಿ ಬ್ರಹ್ಮಜ್ಞಾನಿಗಳಾದ ಬ್ರಾಹ್ಮಣರಿಂದ ಪರಿಪೂರ್ಣವಾಗಿದ್ದ ಆ ಋಷಿಗಳ ಆಶ್ರಮವನ್ನು ಕಂಡು ಶ್ರೀರಾಮನು ಹರ್ಷದಿಂದ ಬಿಲ್ಲಿನ ಹೆದೆಯನ್ನಿಳಿಸಿಕೊಂಡು ಪ್ರವೇಶಿಸಿದನು. ಆ ತಪೋವನದಲ್ಲಿದ್ದ ಋಷಿಗಳು ಸೀತಾಲಕ್ಷ್ಮಣ ಸಮೇತನಾದ ಶ್ರೀರಾಮನನ್ನು ಕಂಡು ಶರತ್ಕಾಲದ ಪೂರ್ಣಿಮೆಯಲ್ಲಿ ಉದಯಾಚಲವನ್ನೈದಿದ ಚಂದ್ರನಂತೆ ಅತಿಪ್ರಕಾಶದಿಂದ ಒಳಿತ್ತಿದ್ದ ಆತನಾರೆಂದು ತಮ್ಮೊಳಗೆ ತಾವೇ ಯೋಚಿಸುತ್ತ ಆತನನ್ನು ಇದಿರ್ಗೊಂಡು ಆಶೀರ್ವದಿಸಿದರು. ಆತನ ಮುಖಕಾಂತಿಯನ್ನೂ ಸೊಬಗನ್ನೂ ಪ್ರಸನ್ನತೆ ಯನ್ನೂ ಅತ್ಯಂತ ಮನೋಹರವಾದ ಆಕಾರವನ್ನೂ ಕಂಡು ಆಶ್ಚರ್ಯವಟ್ಟು ಅವನನ್ನು ತಮ್ಮ ಪರ್ಣಶಾಲೆಗೆ ಕರೆದುಕೊಂಡು ಹೋದರು. ಪೀಠವನ್ನು ಕೊಟ್ಟು ಅರ್ಘ್ಯಪಾದ್ಯಾದಿ ಸತ್ಕಾರಗಳನ್ನು ಮಾಡಿ ಕಂದಮೂಲಫಲಾಹಾರಗಳನ್ನರ್ಪಿಸಿ ರಾಮನ ವೃತ್ತಾಂತವನ್ನರಿತುಕೊಂಡು ಹೀಗೆಂದರು!. ಎಲೈ ಶ್ರೀರಾಮನೆ, ಲೋಕದಲ್ಲಿ ಧರ್ಮಪರಿಪಾಲಕನಾದ ಅರಸನೇ ಪೂಜ್ಯನು, ಆತನೇ ಮಾನನು, ಸಮಸ್ತ ಪ್ರಾಣಿಗಳಿಗೂ ಮರೆಹೊಗಲು ಯೋಗ್ಯನು. ದುಷ್ಟನಿಗ್ರಹಶಿಷ್ಟ ಪರಿಪಾಲನ ಗಳನ್ನು ಮಾಡಿ ಪ್ರಜೆಗಳನ್ನು ರಕ್ಷಿಸುವುದರಿಂದ ಎಲ್ಲರಿಗೂ ತಂದೆಯೆನಿಸಿಕೊಳ್ಳುವನು. ದೇವೇಂದ್ರನು ಪರಿಪಾಲಿಸುವ ಭೂಮಂಡಲದ ಭಾರದಲ್ಲಿ ನಾಲ್ಕರೊಳಗೊಂದುಶವನ್ನು ಧರ್ಮಿಷ್ಟನಾದ ರಾಜನು ವಹಿಸುವನು. ಆದಕಾರಣ ಧರ್ಮಿಷ್ಟನಾದ ರಾಜನಿಗೆ ನಮಸ್ಕರಿಸಿ ಸತ್ಕಾರವನ್ನು ಮಾಡಬೇಕೆಂಬ ಧರ್ಮಶಾಸ್ತ್ರವುಂಟು. ನೀನು ನಮ್ಮನ್ನು ರಕ್ಷಿಸಬೇಕು. ಎಲೈ ಶ್ರೀರಾಮನೆ, ನೀನು ಪಟ್ಟಣದಲ್ಲಿದ್ದರೂ ವನದಲ್ಲಿದ್ದರೂ ನಮಗೆಲ್ಲರಿಗೂ ರಕ್ಷಕನು. ನಾವು ಸಂಸಾರಭ್ರಾಂತಿಯನ್ನು ಬಿಟ್ಟು ಕಾಮ ಕ್ರೋಧ ಲೋಭ ಮೋಹ ಮದ ಮಾತ್ಸರಗಳೆಂಬ ಅರಿಷಡ್ವರ್ಗವನ್ನು ತೊರೆದು ಜಿತೇಂದ್ರಿಯರಾಗಿ ತಪೋವನದಲ್ಲಿ ತಪಸ್ಸು ಮಾಡಿಕೊಂಡು ನಿನ್ನ ಗರ್ಭದಲ್ಲಿರುವ ಮಕ್ಕಳೆಂದು ಭಾವಿಸಿಕೊಂಡಿದ್ದೇವೆ. **ಮುಂದುವರಿಯುವುದು...**

# ಬೆಳ್ಳುಳ್ಳಿಯನ್ನು ಪಾದಗಳಿಗೆ ಉಜ್ಜುವುದರಿಂದ ಎಷ್ಟೆಲ್ಲಾ ಲಾಭಗಳಿವೆ ನೋಡಿ



ಬೆಳ್ಳುಳ್ಳಿಯು ಒಂದು ಆಯುರ್ವೇದಿಕ್ ಗುಣಗಳನ್ನು ಹೊಂದಿರುವ ಮಸಾಲೆಯಾಗಿದೆ. ಇದನ್ನು ನಾನಾ ರೀತಿಯ ಮನೆಮದ್ದುಗಳಲ್ಲಿ ಬಳಸಲಾಗುತ್ತದೆ.

ಪ್ರಿಯಾಂಕಾ ಚೋಪ್ರಾ, ಇತ್ತೀಚೆಗೆ ತಮ್ಮ ಚಿತ್ರದ ಸೆಟ್‌ನ ವಿಡಿಯೋವೊಂದು ಹಂಚಿಕೊಂಡಿದ್ದು, ಕ್ಯಾರೋಸೆಲ್‌ನ ಒಂದು ವಿಡಿಯೋದಲ್ಲಿ ಯಾರೋ ಒಬ್ಬರು ಬೆಳ್ಳುಳ್ಳಿಯನ್ನು ಅವರ ಪಾದಗಳಿಗೆ ಉಜ್ಜುತ್ತಿರುವುದು ಕಂಡು ಬಂದಿದೆ. ಇದು ಆಶ್ಚರ್ಯವೆನಿಸುವುದು ಸಹಜ. ಆದರೆ ಈ ಅಭ್ಯಾಸವು ವಾಸ್ತವವಾಗಿ ಅನೇಕ ಹಳೆ ಮದ್ದನ್ನು ಬಿಂಬಿಸುತ್ತದೆ. ಇದರ ಹಿಂದಿನ ಕೆಲವು ವಿಜ್ಞಾನವೂ ಇದೆ.

**ಬೆಳ್ಳುಳ್ಳಿ ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸಬಹುದೇ?** ಹೌದು, ಬೆಳ್ಳುಳ್ಳಿ ನೈಸರ್ಗಿಕ ರೋಗನಿರೋಧಕ ವರ್ಧಕವಾಗಿದೆ. ಕ್ಲೀವ್ಲ್ಯಾಂಡ್ ಕ್ಲಿನಿಕ್ ಪ್ರಕಾರ, ಬೆಳ್ಳುಳ್ಳಿ ಆಂಟಿ–ವೈರಲ್ ಮತ್ತು ಬ್ಯಾಕ್ಟೀರಿಯಾ ವಿರೋಧಿ ಗುಣಗಳನ್ನು ಹೊಂದಿರುವ ಆಲಿಸಿನ್‌ನಂತಹ ಸಂಯುಕ್ತಗಳಿಂದ ಸಮೃದ್ಧವಾಗಿದೆ. ಪಾದಗಳಿಗೆ ಉಜ್ಜಿದಾಗ, ಆಲಿಸಿನ್ ಚರ್ಮಕ್ಕೆ ಹೀರಲ್ಪಡುತ್ತದೆ ಮತ್ತು ರಕ್ತಪ್ರವಾಹಕ್ಕೆ ಪ್ರವೇಶಿಸುತ್ತದೆ, ನಿಮ್ಮ ದೇಹವು ಸೋಂಕುಗಳ ವಿರುದ್ಧ ಹೋರಾಡಲು ಸಹಾಯ ಮಾಡುತ್ತದೆ.

**ಬೆಳ್ಳುಳ್ಳಿ ಸ್ನಾಯು ಮತ್ತು ಕೀಲು ನೋವಿಗೆ ಸಹಾಯ ಮಾಡುತ್ತದೆಯೇ?:** ಖಂಡಿತ. ಪ್ರಿಯಾಂಕಾ ಈ ತಂತ್ರವನ್ನು ಪ್ರಯತ್ನಿಸಲು ಒಂದು ಕಾರಣವೆಂದರೆ ಬೆಳ್ಳುಳ್ಳಿಯಲ್ಲಿರುವ ಉರಿಯೂತ ನಿವಾರಕ ಪರಿಣಾಮಗಳು. ದೀರ್ಘ ಶೂಟಿಂಗ್ ದಿನಗಳು ಅಥವಾ ತೀವ್ರವಾದ ದೈಹಿಕ ಚಟುವಟಿಕೆಯ ನಂತರ ನೋಯುತ್ತಿರುವ ಪಾದಗಳಿಗೆ ಬೆಳ್ಳುಳ್ಳಿಯನ್ನು ಉಜ್ಜುವುದರಿಂದ ಸ್ನಾಯುಗಳ ಬಿಗಿತ ಅಥವಾ ಕೀಲು ಅಸ್ವಸ್ಥತೆಯಿಂದ ಪರಿಹಾರ ಸಿಗಬಹುದು.

**ಬೆಳ್ಳುಳ್ಳಿ ಶಿಲೀಂಧ್ರಗಳ ಸೋಂಕಿನ ವಿರುದ್ಧ ಪರಿಣಾಮಕಾರಿಯಾಗಿದೆಯೇ:** ಇದು ಕ್ರೀಡಾಪಟುವಿನ ಪಾದಕ್ಕೆ ಜನಪ್ರಿಯ ಮನೆಮದ್ದಾಗಿದೆ. ಬೆಳ್ಳುಳ್ಳಿಯ ಬಲವಾದ ಶಿಲೀಂಧ್ರ ವಿರೋಧಿ ಗುಣಲಕ್ಷಣಗಳು ಸಣ್ಣ ಶಿಲೀಂಧ್ರ ಸೋಂಕುಗಳಿಗೆ, ವಿಶೇಷವಾಗಿ ಕಾಲ್ಬೆರಳುಗಳ ನಡುವೆ ಚಿಕಿತ್ಸೆ ನೀಡಲು ಸಹಾಯ ಮಾಡುತ್ತದೆ. ನೀವು ಸೂಕ್ಷ್ಮ ಚರ್ಮವನ್ನು ಹೊಂದಿದ್ದರೆ ಮೊದಲು ಪ್ಯಾಚ್ ಪರೀಕ್ಷೆಯನ್ನು ಮಾಡಲು ಮರೆಯದಿರಿ.

**ಬೆಳ್ಳುಳ್ಳಿ ರಕ್ತ ಪರಿಚಲನೆಯನ್ನು ಸುಧಾರಿಸಬಹುದೇ** ಬೆಳ್ಳುಳ್ಳಿಯಲ್ಲಿ ಗಂಧಕವಿದೆ, ಇದನ್ನು ನಿಮ್ಮ ದೇಹವು ಹೈಡ್ರೋಜನ್ ಸಲ್ಫೈಡ್ ಅನಿಲವಾಗಿ ಪರಿವರ್ತಿಸುತ್ತದೆ. ಈ ಅನಿಲವು ರಕ್ತನಾಳಗಳನ್ನು ಸಡಿಲಗೊಳಿಸಲು, ರಕ್ತದ ಹರಿವನ್ನು ಸುಧಾರಿಸಲು, ಬಹುಶಃ ಆರೋಗ್ಯಕರ ರಕ್ತದೊತ್ತಡವನ್ನು ಬೆಂಬಲಿಸಲು ಸಹಾಯ ಮಾಡುತ್ತದೆ.

ಬೆಳ್ಳುಳ್ಳಿಯನ್ನು ನಿಮ್ಮ ಪಾದಗಳಿಗೆ ಉಜ್ಜುವುದು ನೈಸರ್ಗಿಕವಾಗಿ ಆ ಪ್ರಯೋಜನಗಳನ್ನು ಪಡೆಯಲು ಸರಳ ಮಾರ್ಗವಾಗಿದೆ.

**ಬೆಳ್ಳುಳ್ಳಿ ಮೊಡವೆಗಳಂತಹ ಚರ್ಮದ ಸಮಸ್ಯೆಗಳಿಗೆ ಸಹಾಯ ಮಾಡಬಹುದೇ:** ಬೆಳ್ಳುಳ್ಳಿಯ ಬ್ಯಾಕ್ಟೀರಿಯಾ ವಿರೋಧಿ ಗುಣವು ಮೊಡವೆಗಳನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ ಎಂದು ಕೆಲವರು ನಂಬುತ್ತಾರೆ.

ಆದರೆ ಸಾಮಾನ್ಯವಾಗಿ ಪಾದಗಳಲ್ಲಿ ಮೊಡವೆಗಳು ಕಾಣಿಸಿಕೊಳ್ಳುವುದಿಲ್ಲ, ಇದು ನೈಸರ್ಗಿಕ ಚರ್ಮದ ಪರಿಹಾರವಾಗಿ ಬೆಳ್ಳುಳ್ಳಿಯ ಸಾಮರ್ಥ್ಯವನ್ನು ತೋರಿಸುತ್ತದೆ.

# 20ನೇ ಸಾರ್ವಜನಿಕ ಕೃಷ್ಣ ಜನ್ಮಾಷ್ಟಮಿ ಉತ್ಸವ

• ಉದಯವಾಹಿನಿ, ಬೆಂಗಳೂರು



ಬಸವನಗುಡಿಯ ಗೋವರ್ಧನ ಕ್ಷೇತ್ರ ಪುತ್ತಿಗೆ ಮಠ, ಅಮೃತ ಶಿಶು ನಿವಾಸದಲ್ಲಿ ಶ್ರೀ ಕೃಷ್ಣ ಜನ್ಮಾಷ್ಟಮಿ ಪ್ರಯುಕ್ತ ಅಖಿಲ ಕರ್ನಾಟಕ ಮಟ್ಟದ ಭಜನಾ ಸ್ಪರ್ಧೆಯನ್ನು ಅಖಿಲ ಕರ್ನಾಟಕ ಭಜನಾ ಪರಿಷತ್ತು ಮತ್ತು 20ನೇ ಸಾರ್ವಜನಿಕ ಕೃಷ್ಣ ಜನ್ಮಾಷ್ಟಮಿ ಉತ್ಸವ ಸಮಿತಿ ಸಹಯೋಗದೊಂದಿಗೆ ಆಯೋಜಿಸಲಾಗಿತ್ತು .

ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಶ್ರೀನಿವಾಸ ಉತ್ಸವ ಬಳಗದ ಸಂಸ್ಥಾಪಕ ಅಧ್ಯಕ್ಷ ಡಾ.ವಾದಿರಾಜ ತಾಯಲೂರು ಚಾಲನೆ ನೀಡಿ ಸನಾತನ ಧರ್ಮ ಉಳಿವ ನಿಟ್ಟಿನಲ್ಲಿ ಭಜನೆ ಬಹಳ ಪ್ರಮುಖ ಪಾತ್ರ ವಹಿಸುತ್ತದೆ . ವಿಭಜನೆಗೊಳ್ಳುತ್ತಿರುವ ಈ ಸಂದರ್ಭದಲ್ಲಿ ಸಮಾಜವನ್ನು ಒಗ್ಗೂಡಿಸಲು ಇಂತಹ ಸ್ಪರ್ಧೆಗಳು ಅಗತ್ಯ ಎಂದು ತಿಳಿಸಿದರು ದಾಸ ಸಾಹಿತ್ಯ ಚಿಂತಕ ಡಾ. ಅನಂತ ರಾವ್ ದಂಡಿನ್ , ಹಿರಿಯ ಪತ್ರಕರ್ತ ಹನುಮೇಶ್ ಯಾವಾಗಲ್ ಸ್ಪರ್ಧಿಗಳಿಗೆ ಪ್ರಮಾಣಪತ್ರ ವಿತರಿಸಿದರು. ಸಂಸ್ಕೃತಿ ಚಿಂತಕ ಡಾ.ಗುರುರಾಜ ಪೋಶೆಟ್ಟಿಹಳ್ಳಿ ಧರ್ಮ ದೀಕ್ಷಾ ಪ್ರತಿಜ್ಞೆ ಬೋಧಿಸಿದರು.

ಕಾರ್ಯಕ್ರಮದ ಆಯೋಜಕರಾದ ಅಕಭಪದ ಡಾ ಕೆ ಜಿ ಮುರುಳಿಧರ ಶರ್ಮ, ಸಂಘಟನಾ ಕಾರ್ಯದರ್ಶಿ ಟಿವಿ ಮಲ್ಲಿಕಾರ್ಜುನ ತೀರ್ಪುಗಾರರಾದ ಪದ್ಮ ಪ್ರಕಾಶ್ , ಸುಗುಣ ಬೆಳ್ಳೂರು ಮೊದಲಾದವರು ಉಪಸ್ಥಿತರಿದ್ದರು

# ನಗರದ ಕೆಲವು ಭಾಗಗಳಲ್ಲಿ ಫ್ಲೆಕ್ಸ್ ತೆರವು

• ಉದಯವಾಹಿನಿ, ಬೆಂಗಳೂರು




ಬಿಬಿಎಂಪಿ ವ್ಯಾಪ್ತಿಯ ಯಲಹಂಕ ಹಾಗೂ ಪಶ್ಚಿಮ ವಲಯದ ಕೆಲವು ಪ್ರದೇಶಗಳಲ್ಲಿ ಅನಧಿಕೃತವಾಗಿ ಹಾಕಲಾಗಿದ್ದ ಫ್ಲೆಕ್ಸ್, ಬ್ಯಾನರ್‌ಗಳನ್ನು ಬಿಬಿಎಂಪಿ ಸಿಬ್ಬಂದಿ ಸೋಮವಾರ ತೆರವು ಮಾಡಿದರು.ಯಲಹಂಕ ಉಪನಗರದಲ್ಲಿ ಮುಖ್ಯ ರಸ್ತೆಗಳಲ್ಲಿ ವಿದ್ಯುತ್ ಕಂಬಗಳಿಗೆ ಫ್ಲೆಕ್ಸ್‌ಗಳನ್ನು ಹಾಕಲಾಗಿತ್ತು. ಅವುಗಳನ್ನು ಬಿಬಿಎಂಪಿ ಸಿಬ್ಬಂದಿ ತೆರವುಗೊಳಿಸಿದರು.

ಪಶ್ಚಿಮ ವಲಯದ ಪುಲಕೇಶಿನಗರ ವ್ಯಾಪ್ತಿಯ ಟ್ಯಾನರಿ ರಸ್ತೆಯಲ್ಲಿ ಹಲವು ರೀತಿಯ ಫ್ಲೆಕ್ಸ್, ಬ್ಯಾನರ್‌ಗಳನ್ನು ಹಾಕಲಾಗಿತ್ತು. ಬಿಬಿಎಂಪಿ ಸಿಬ್ಬಂದಿ 'ತೆರವು ಅಭಿಯಾನ' ನಡೆಸಿ, ನೂರಾರು ಫ್ಲೆಕ್ಸ್ ಗಳನ್ನು ತೆಗೆದುಹಾಕಿದರು. ನಗರದಲ್ಲಿ ಬ್ಯಾನರ್, ಫ್ಲೆಕ್ಸ್, ಕಟೌಟ್ ಅಳವಡಿಸುವವರು, ಅದರಲ್ಲಿರುವ ವ್ಯಕ್ತಿಗಳು, ಮುದ್ರಕರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಿ, ತೆರವಿನ ಸಂಪೂರ್ಣ ವೆಚ್ಚವನ್ನು ಅವರಿಂದಲೇ ವಸೂಲಿ ಮಾಡಲು ಅನುವಾಗುವ ಪರಿಷ್ಕೃತ ಪ್ರಮಾಣಿತ ಕಾರ್ಯಾಚಾರಣಾ ವಿಧಾನವನ್ನು (ಎಸ್‌ಒಪಿ) ಏಪ್ರಿಲ್ 24ರಿಂದ ಜಾರಿ ಮಾಡಲಾಗಿದೆ.

ಬಿಬಿಎಂಪಿ ಕಾಯ್ದೆ 2020ರ ಸೆಕ್ಷನ್ 158ರಂತೆ ಪಾಲಿಕೆಯ ವ್ಯಾಪ್ತಿಯಲ್ಲಿನ ಯಾವುದೇ ಕಟ್ಟಡ, ಪ್ರದೇಶ, ಗೋಡೆ ಅಥವಾ ಸಾರ್ವಜನಿಕ ಸ್ಥಳಗಳಲ್ಲಿ ಮುಖ್ಯ ಆಯುಕ್ತರ ಲಿಖಿತ ಅನುಮತಿಯಿಲ್ಲದೆ ಫ್ಲೆಕ್ಸ್, ಬ್ಯಾನರ್, ಕಟೌಟ್, ಯಾವುದೇ ರೀತಿಯ ಜಾಹೀರಾತು ಪ್ರದರ್ಶಿಸುವುದನ್ನು ನಿಷೇಧಿಸಲಾಗಿದೆ. ಮುದ್ರಣ ಘಟಕದವರ ಮೇಲೂ ಕ್ರಿಮಿನಲ್ ಮೊಕದ್ದಮೆ ದಾಖಲಿಸಲು ಬಿಬಿಎಂಪಿ ಮುಖ್ಯ ಆಯುಕ್ತರು ಆದೇಶ ಹೊರಡಿಸಿದ್ದರು. ಆದರೆ, ಎಸ್‌ಒಪಿ ಜಾರಿಯಾಗದೆ ನಗರದಲ್ಲಿ ಫ್ಲೆಕ್ಸ್, ಬ್ಯಾನರ್‌ಗಳು ರಾರಾಜಿಸುತ್ತಲೇ ಇವೆ.

ಎಸ್‌ಒಪಿಯನ್ನು ಕಟ್ಟುನಿಟ್ಟಾಗಿ ಅನುಷ್ಠಾನ ಮಾಡಲು ವಲಯದ ಜಂಟಿ ಆಯುಕ್ತರನ್ನು ನೋಡಲ್ ಅಧಿಕಾರಿಯಾಗಿ ಹಾಗೂ ವಲಯ ಆಯುಕ್ತರನ್ನು ಮೇಲ್ವಿಚಾರಣೆ ಅಧಿಕಾರಿಯನ್ನಾಗಿ ನೇಮಿಸಲಾಗಿದೆ.

ವಲಯ ಆಯುಕ್ತರು ತಮ್ಮ ಅಧಿಕಾರ ವ್ಯಾಪ್ತಿಯಲ್ಲಿರುವ ಉಪ ಪೊಲೀಸ್ ಕಮಿಷನರ್ (ಡಿಸಿಪಿ) ಹಾಗೂ ಪಾಲಿಕೆಯ ಅಧಿಕಾರಿಗಳೊಂದಿಗೆ ನಿಯಮಿತವಾಗಿ ಸಭೆ ನಡೆಸಿ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಲಾಗಿದೆ. ಆದರೆ, ಈ ಕ್ರಮಗಳು ಕಟ್ಟುನಿಟ್ಟಾಗಿ ಪಾಲಿಸಲಾಗುತ್ತಿಲ್ಲ ಎಂದು ನಾಗರಿಕರು ಆರೋಪಿಸಿದ್ದಾರೆ. ರಸ್ತೆ, ಜಂಕ್ಷನ್‌ಗಳಲ್ಲಿ ಹಬ್ಬದ ಶುಭಾಶಯದ ಫ್ಲೆಕ್ಸ್‌ಗಳು ಜನ್ಮದಿನಾಚರಣೆ, ಶುಭ ಹಾರೈಕೆಗೆ ಬೃಹತ್ ಕಟೌಟ್‌ಗಳು ಫ್ಲೆಕ್ಸ್ ಕಟ್ಟಲು ರಾಜಕೀಯ ಮುಖಂಡರ ಪೈಪೋಟಿ

### ಪ್ರಭಾವಿಗಳ ವಿರುದ್ಧ ಕ್ರಮವಿಲ್ಲ

**'ಫ್ಲೆಕ್ಸ್ ಬ್ಯಾನರ್ ಹಾಕುವಂತಿಲ್ಲ ಎಂದು ಹೈಕೋರ್ಟ್ ಆದೇಶ ನೀಡಿದೆ. ಅದರ ಅನುಷ್ಠಾನಕ್ಕೆ ಬಿಬಿಎಂಪಿ ಎಸ್ ಒಪಿ ಜಾರಿಮಾಡಿದ್ದರೂ ಅಧಿಕಾರಿಗಳು ರಾಜಕೀಯ ಒತ್ತಡಕ್ಕೆ ಮಣಿದು ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ. ರಾಜಕಾರಣಿಗಳು ಅವರ ಹಿಂಬಾಲಕರು ಹಾಗೂ ಪ್ರಭಾವಿಗಳ ಫ್ಲೆಕ್ಸ್‌ಗಳನ್ನು ತೆಗೆಯುತ್ತಿಲ್ಲ. ಅವರ ವಿರುದ್ಧ ಎಫ್‌ಐಆರ್ ಕೂಡ ಹಾಕುತ್ತಿಲ್ಲ. ಹೆಚ್ಚು ಪ್ರಭಾವವಿಲ್ಲದ ವ್ಯಕ್ತಿಗಳ ಮೇಲೆ ದರ್ಪ ತೋರಿ ಎಫ್‌ಐಆರ್ ದಾಖಲಿಸುತ್ತಿದ್ದಾರೆ' ಎಂದು ನಾಗರಿಕರಾದ ಮನೋಜ್ ಚಂದ್ರಶೇಖರ್ ಶ್ರೀನಿವಾಸ್ ಜಗದೀಶ್ ದೂರಿದರು. ನಗರದಲ್ಲಿ ಈ ವರ್ಷ 27 ಸಾವಿರ ಫ್ಲೆಕ್ಸ್/ ಬ್ಯಾನರ್‌ಗಳನ್ನು ತೆರವು ಮಾಡಿದ್ದೇವೆ. 461 ಎಫ್ ಐಆರ್ ದಾಖಲಿಸಿದ್ದೇವೆ' ಎಂದು ಬಿಬಿಎಂಪಿ ಅಧಿಕಾರಿಗಳು ಮಾಹಿತಿ ನೀಡಿದರು.**

# ಗಣೇಶನಿಗೆ ಬಲುಪ್ರಿಯ ಈ ಮೋದಕ! ಮೃದುವಾಗಿ ಮಾಡೋದು ಹೇಗೆ?

ಗಣೇಶ ಚತುರ್ಥಿ ಎಂದಾಕ್ಷಣ ಮೊದಲು ನೆನಪಾಗುವುದು ವಿನಾಯಕನ ನಂತರ ಮೋದಕ ಅಥವಾ ಕೊಝುಕಟ್ಟೈ. ಇದನ್ನೂ ಕೆಲವರು ಕಡುಬು ಎಂದೂ ಕರೆಯುವರು. ಹೊರಗೆ ಬಿಳಿ ಹಿಟ್ಟಿನ ರುಚಿ, ಒಳಗೆ ಸಿಹಿಯಾದ ಹೂರಣ. ಇದು ಮೋದಕದ ವಿಶೇಷ. ಹಿರಿಯರು ಮೋದಕಕ್ಕೂ ಜೀವನಕ್ಕೂ ಒಂದು ಅರ್ಥವಿದೆ ಅಂತ ಹೇಳ್ತಾರೆ. ಮೋದಕದ ಮೇಲ್ಭಾಗ ಬ್ರಹ್ಮಾಂಡವನ್ನೂ, ಒಳಭಾಗದ ಸಿಹಿ ಹೂರಣವು ಬ್ರಹ್ಮನನ್ನೂ ಪ್ರತಿನಿಧಿಸುತ್ತದೆ ಎನ್ನುವುದು ಇದರ ಹಿಂದಿರುವ ನಂಬಿಕೆ. ಮೋದಕವನ್ನು 'ಮೋದಕಪ್ರಿಯ' ಎಂದೂ ಕರೆಯುತ್ತಾರೆ. ಏಕೆಂದರೆ, ಇದು ಗಣೇಶನಿಗೆ ಅತ್ಯಂತ ಪ್ರಿಯವಾದ ನೈವೇದ್ಯವಾಗಿದೆ. ಜೀವನದ ಕಷ್ಟಗಳನ್ನು ಎದುರಿಸುವಾಗ ಭಗವಂತನನ್ನು ಆರಾಧಿಸಬಹುದು ಎಂಬುದು ಇದರ ಸಾರ. ಇದೇ ಕಾರಣಕ್ಕೆ ಆದಿ ದೇವನಾದ ವಿನಾಯಕನಿಗೆ ಚತುರ್ಥಿಯಂದು ಮೋದಕವನ್ನು ಅರ್ಪಿಸಲಾಗುತ್ತದೆ. ಗಣೇಶ ಚತುರ್ಥಿ ಸಮೀಪಿಸುತ್ತಿದ್ದಂತೆ, ಮೋದಕ ತಯಾರಿಸುವ ವಿಧಾನವನ್ನು ಹಲವರು ಹುಡುಕುತ್ತಾರೆ. ನಾವು ಈ ಲೇಖನದಲ್ಲಿ ಅಕ್ಕಿ, ತೆಂಗಿನಕಾಯಿ, ಬೆಲ್ಲ ಮುಂತಾದ ಸಾಮಗ್ರಿಗಳನ್ನು ಬಳಸಿ ಸುಲಭವಾಗಿ ರುಚಿಕರವಾದ ಮೋದಕ ಹೇಗೆ ಮಾಡುವುದು ಎಂದು ಹಂತ ಹಂತವಾಗಿ ತಿಳಿಸಿದ್ದೇವೆ. ಬನ್ನಿ, ಮೋದಕ ತಯಾರಿಸಲು ಬೇಕಾದ ಸಾಮಗ್ರಿಗಳು ಮತ್ತು ವಿಧಾನವನ್ನು ನೋಡೋಣ.

### ಮೋದಕ ತಯಾರಿಸಲು ಬೇಕಾದ ಸಾಮಗ್ರಿಗಳು

- ಕಂದು ಅಥವಾ ಪಚ್ಚೆ ಅಕ್ಕಿ
- ಬೇಯಿಸಿದ ಅಕ್ಕಿ
- ಬೆಲ್ಲ
- ತೆಂಗಿನಕಾಯಿ
- ಏಲಕ್ಕಿ
- ರುಚಿಗೆ ತಕ್ಕಷ್ಟು ಉಪ್ಪು

**ಮೋದಕ ಮಾಡುವ ವಿಧಾನ :** ಮೊದಲು, 200 ಗ್ರಾಂ ಕಂದು ಅಕ್ಕಿ ಮತ್ತು ಬೇಯಿಸಿದ ಅಕ್ಕಿಯನ್ನು ಒಟ್ಟಿಗೆ ಸೇರಿಸಿ ಚೆನ್ನಾಗಿ ತೊಳೆಯಿರಿ. ನಂತರ, ಇದನ್ನು 4 ರಿಂದ 5 ಗಂಟೆಗಳ ಕಾಲ ನೆನೆಸಿಡಿ. ನೆನೆಸಿದ ಅಕ್ಕಿಯ ನೀರನ್ನು ಬಸಿದು, ಒಂದು ಸ್ವಚ್ಛವಾದ ಬಟ್ಟೆಯ ಮೇಲೆ ಹರಡಿ ಒಣಗಿಸಿ. ಅಕ್ಕಿ ಸಂಪೂರ್ಣವಾಗಿ ಒಣಗಿದ ನಂತರ, ಮಿಕ್ಸಿಯಲ್ಲಿ ನುಣ್ಣಗೆ ಪುಡಿ ಮಾಡಿಕೊಳ್ಳಿ. ಈಗ ದಪ್ಪ ತಳದ ಪಾತ್ರೆಯನ್ನು ತೆಗೆದುಕೊಂಡು, ಕಡಿಮೆ ಉರಿಯಲ್ಲಿ ಹಿಟ್ಟನ್ನು ಹಗುರವಾಗಿ ಹುರಿಯಿರಿ. ಹಿಟ್ಟಿನ ತೇವಾಂಶ ಹೋಗಿ ಒಣಗಿದ ನಂತರ, ಒಂದು ದೊಡ್ಡ ತಟ್ಟೆಗೆ ಹಾಕಿ ಚೆನ್ನಾಗಿ ಆರಲು ಬಿಡಿ. ಈಗ, ಹುರಿದ ಹಿಟ್ಟನ್ನು ಜರಡಿಯಿಂದ ಜರಡಿ ಹಿಡಿದು ಇಟ್ಟುಕೊಳ್ಳಿ. ಬಳಿಕ 100 ಗ್ರಾಂ ತೆಂಗಿನಕಾಯಿಯನ್ನು ತುರಿದು, ಬೆಲ್ಲವನ್ನು ಸಣ್ಣಗೆ ಪುಡಿ ಮಾಡಿ. ಇದಲ್ಲದೆ, ಹೆಸರುಬೇಳೆಯನ್ನು ಬೇಯಿಸಿ ಮತ್ತು 3 ಏಲಕ್ಕಿಯನ್ನು ಪುಡಿ ಮಾಡಿಕೊಳ್ಳಿ. ಒಂದು ಪಾತ್ರೆಯಲ್ಲಿ ಅರ್ಧ ಹೋಳು ತೆಂಗಿನ ತುರಿ, ಬೇಯಿಸಿದ ಹೆಸರುಬೇಳೆ, ಬೆಲ್ಲ, ಮತ್ತು ಏಲಕ್ಕಿ ಪುಡಿಯನ್ನು ಹಾಕಿ ಚೆನ್ನಾಗಿ ಮಿಕ್ಸ್ ಮಾಡಿ. ಇಷ್ಟು ಮಾಡಿದರೆ ಮೋದಕದ ಹೂರಣ ಸಿದ್ಧ. ಈಗ ತಯಾರಿಸಿದ ಹಿಟ್ಟಿಗೆ ಸ್ವಲ್ಪ ಉಪ್ಪನ್ನು ಹಾಕಿ, ಬಿಸಿ ನೀರನ್ನು ಸ್ವಲ್ಪ ಸ್ವಲ್ಪವಾಗಿ ಸೇರಿಸುತ್ತಾ ಚಪಾತಿ ಹಿಟ್ಟಿನ ಹದಕ್ಕೆ ನಾದಿಕೊಳ್ಳಿ. ನಿಂಬೆ ಗಾತ್ರದ ಹಿಟ್ಟನ್ನು ತೆಗೆದುಕೊಂಡು ಅದನ್ನು ವೃತ್ತಾಕಾರವಾಗಿ ಮಾಡಿ ಬಟ್ಟಲಿನ ಆಕಾರಕ್ಕೆ ತನ್ನಿ. ಅದರೊಳಗೆ ಸ್ವಲ್ಪ ಹೂರಣವನ್ನು ಇಟ್ಟು, ಎಚ್ಚರಿಕೆಯಿಂದ ಮುಚ್ಚಿ ಚೆಂಡಿನಂತೆ ಆಕಾರ ನೀಡಿ. ಮೋದಕ ಕಟ್ಟುವಾಗ ಹೂರಣ ಹೊರಬರದಂತೆ ನೋಡಿಕೊಳ್ಳಿ. ಕೊನೆಯದಾಗಿ, ಕುಕ್ಕರ್ ಅಥವಾ ಇಡ್ಲಿ ಪಾತ್ರೆಯಲ್ಲಿ ಸ್ವಲ್ಪ ನೀರನ್ನು ಹಾಕಿ, ಒಂದೊಂದಾಗಿ ಮೋದಕಗಳನ್ನು ತಟ್ಟೆಯಲ್ಲಿ ಇಟ್ಟು ಚೆನ್ನಾಗಿ ಬೇಯಿಸಿ. ಬಳಿಕ ಹೊರಗೆ ತೆಗೆಯಿರಿ. ಇಷ್ಟು ಮಾಡಿದರೆ, ಗಣೇಶನಿಗೆ ಪ್ರಿಯವಾದ ರುಚಿಕರವಾದ ಮೋದಕ ಸಿದ್ಧ. ಒಟ್ಟಾರೆಯಾಗಿ, ಗಣೇಶನಿಗೆ ಅತ್ಯಂತ ಪ್ರಿಯವಾದ ಖಾದ್ಯವೆಂದರೆ ಮೋದಕ. ಇದು ಸಾಂಪ್ರದಾಯಿಕವಾಗಿ ಗಣೇಶ ಚತುರ್ಥಿಯಂದು ತಯಾರಿಸಲಾಗುವ ಸಿಹಿ ತಿಂಡಿಯಾಗಿದೆ. ನೀವು ಸಹ ಅಕ್ಕಿ ಹಿಟ್ಟು, ತೆಂಗಿನಕಾಯಿ, ಬೆಲ್ಲ ಮತ್ತು ಏಲಕ್ಕಿ ಮಿಶ್ರಣದಿಂದ ತಯಾರಿಸಿದ ಮೋದಕವನ್ನು ಹಬ್ಬದ ದಿನ ಗಣೇಶನಿಗೆ ಅರ್ಪಿಸಿ. ವಿಘ್ನ ವಿನಾಯಕನ ಪ್ರೀತಿಗೆ ಮತ್ತು ಅನುಗ್ರಹಕ್ಕೆ ಪಾತ್ರರಾಗಿ.



# ಗರ್ವದಿಂದ ವಿನಯದ ಕಡೆಗೆ



ವಿಶ್ವಾಸ್.ಡಿ.ಗೌಡ

ಪರಶಿವನಿಂದ ಪಾಶುಪತಾಸ್ತ್ರವನ್ನು ಪಡೆದುಕೊಂಡು ಬಂದ ಮೇಲೆ ಅರ್ಜುನನಿಗೆ ತಾನು ಶಿವನ ಪರಮ ಭಕ್ತ, ತನ್ನಂತಹ ಭಕ್ತರು ಯಾರೂ ಇಲ್ಲ ಎಂಬ ಅಹಂಕಾರವಿದ್ದಿತ್ತು. ಮನೆಯಲ್ಲಿಯೂ ಕೂಡ ತುಂಬ ಆಡಂಬರವಾದ ಪೂಜೆಯನ್ನು ಮಾಡುತ್ತಿದ್ದನು. ಒಂದು ವಿಶಾಲವಾದ ಕೋಣೆಯಲ್ಲಿ ಲೆಕ್ಕವಿಲ್ಲದಷ್ಟು ದೀಪಗಳನ್ನು ಹೊತ್ತಿಸಿ ಬೆಳ್ಳಿ ಬಂಗಾರದ ವಿಗ್ರಹಗಳನ್ನಿಟ್ಟು ಪೂಜೆ ಮಾಡುತ್ತಿದ್ದನು. ಆತನ ಕೋಣೆಯೇ ಒಂದು ಶಿವನ ದೇವಸ್ಥಾನದಂತೆ ಕಂಗೊಳಿಸುತ್ತಿತ್ತು. ಆತನು ಪದ್ಮಾಸನ ಹಾಕಿ ಶಿವಪೂಜೆಗೆ ಕುಳಿತರೆ ಗಂಟೆಗಟ್ಟಲೆ ಪೂಜೆ ಮಾಡುತ್ತಿದ್ದನು. ಪೂಜೆಯುದ್ದಕ್ಕೂ ಅವನ ಅಹಂಕಾರವೆದ್ದು ಕಾಣಿಸುತ್ತಿತ್ತು. ಅದಕ್ಕೆ ತದ್ವಿರುದ್ಧವಾಗಿ ಭೀಮಸೇನನು ಭಗವಂತನನ್ನು ಮನಸ್ಸಿನಲ್ಲಿಯೇ ಆರಾಧಿಸುತ್ತಿದ್ದನು. ಅತ್ಯಂತ ಸರಳವಾಗಿ ಕೆಲವೇ ನಿಮಿಷಗಳಲ್ಲಿ ಪೂಜೆಯನ್ನು ಮುಗಿಸುತ್ತಿದ್ದನು. ಹಾಗಾಗಿ ಅರ್ಜುನನಿಗೆ ಭೀಮಸೇನನ ಮೇಲೆ ಒಂದು ವಿಧವಾದ ತಾತ್ಸಾರ ಭಾವವಿದ್ದಿತ್ತು.


ಅಷ್ಟೇ ಅಲ್ಲದೆ ತಾನೊಬ್ಬ ಶ್ರೇಷ್ಠ ಭಕ್ತನೆಂತಲೂ ತನ್ನ ಶ್ರದ್ಧೆಗೆ ಎಣೆಯಿಲ್ಲವೆಂತಲೂ ಭಾವಿಸಿದ್ದನು. ಅಣ್ಣ ಭೀಮಸೇನನಿಗೆ ದೇವರ ಮೇಲೆ ಭಕ್ತಿಯಿಲ್ಲ. ಕೇವಲ ಕಾಟಾಚಾರಕ್ಕಾಗಿ ಪೂಜೆ ಮಾಡುತ್ತಾನೆ' ಎಂದು ಭಾವಿಸಿದ್ದ. ಅದನ್ನು ಗಮನಿಸಿದ ಶ್ರೀ ಕೃಷ್ಣನು ಇವನಿಗೆ ಸರಿಯಾಗಿ ಬುದ್ಧಿ ಕಲಿಸಬೇಕೆಂದು ತೀರ್ಮಾನಿಸಿದ. ಅದಕ್ಕಾಗಿ ಒಂದು ದಿನ ಶಿವನ ವಾಸಸ್ಥಾನವಾದ ಕೈಲಾಸ ಪರ್ವತಕ್ಕೆ ಅರ್ಜುನನನ್ನು ಕರೆದುಕೊಂಡು ಹೊರಟನು. ಹೀಗೆ ಅವರು ಪ್ರಯಾಣ ಮಾಡುತ್ತಿದ್ದಾಗ ಅನೇಕ ಭಕ್ತರು ಅವರ ಜೊತೆಯಲ್ಲಿಯೇ ಕೈಲಾಸ ಪರ್ವತಕ್ಕೆ ಬರುತ್ತಿದ್ದರು. ಕೆಲವರು ಜೊತೆಯಲ್ಲಿ ಗಾಡಿಗಳಲ್ಲಿ ಹೂವಿನ ರಾಶಿ ರಾಶಿಯನ್ನೇ ತರುತ್ತಿದ್ದರು. ಕೃಷ್ಣಾರ್ಜುನರು ಆ ಹೂವುಗಳ ರಾಶಿಯನ್ನು ನೋಡಿ, ಇಷ್ಟೊಂದು ರಾಶಿ ಹೂವುಗಳನ್ನು ಎಲ್ಲಿಂದ ತರುತ್ತಿದ್ದೀರಿ ಎಲ್ಲಿಗೆ ತೆಗೆದುಕೊಂಡು ಹೋಗುತ್ತಿದ್ದೀರಿ' ಎಂದು ಕೇಳಿದರು. ಆದರೆ ಗಡಿಬಿಡಿಯಲ್ಲಿ ಗಾಡಿ ಹೊಡೆದುಕೊಂಡು ಹೋಗುವವರಾರೂ ಅವರಿಗೆ ಸಮರ್ಪಕವಾಗಿ ಉತ್ತರ ಕೊಡಲಿಲ್ಲ. ಅವರು ನಾವು ಹೋಗುವ ದಿಕ್ಕಿನತ್ತಲೇ ಹೋಗುತ್ತಿದ್ದಾರೆ. ಈ ಗಾಡಿ ಹೊಡೆಯುವವರ ಜೊತೆಯಲ್ಲಿಯೇ ಹೋದರೆ ಎಲ್ಲಿಗೆ ಹೋಗುತ್ತಿದ್ದಾರೆ ಎಂದು ಗೊತ್ತಾಗುತ್ತದೆ ಎಂದು ಕೃಷ್ಣನು ಸಲಹೆ ಕೊಟ್ಟನು. ನಂತರ ಕೃಷ್ಣಾರ್ಜುನರು ಅವರು ಹೊರಟ ದಿಕ್ಕಿನಲ್ಲಿಯೇ ತಮ್ಮ ಪ್ರಯಾಣವನ್ನು ಮುಂದುವರಿಸಿದರು. ಆ ಸಹಪ್ರಯಾಣಿಕರು ಗಾಡಿಯಲ್ಲಿ ತಂದ ಹೂವುಗಳನ್ನೆಲ್ಲ ಒಂದು ಕಡೆ ತೆಗೆದು ಕೊಂಡು ಹೋಗಿ ರಾಶಿ ಹಾಕುತ್ತಿದ್ದರು. ಅಲ್ಲಿ ಆಗಲೇ ದೇವರಪೂಜೆ ಮಾಡಿದ ಮೇಲೆ ತಂದು ಎಸೆದ ಒಂದು ಹೂವುಗಳ ದೊಡ್ಡ ರಾಶಿಯೇ ಬಿದ್ದಿತ್ತು.

ಕೃಷ್ಣಾರ್ಜುನರು ಅಲ್ಲಿ ನಿಂತಿದ್ದಾಗಲೇ ಅಂತಹ ನೂರಾರು ಗಾಡಿಗಳು ಬರುತ್ತಲೇ ಇದ್ದವು. ಹೀಗೆ ಬಂದ ಗಾಡಿಗಳಿಂದ ರಾಶಿ, ರಾಶಿ ಹೂವುಗಳನ್ನು ತಂದು ಅಲ್ಲಿ ಸುರಿಯುತ್ತಿದ್ದರು. ಇದನ್ನೆಲ್ಲಾ ನೋಡುತ್ತಿದ್ದ ಅರ್ಜುನನು ತನಗಾದ ಆಶ್ಚರ್ಯವನ್ನು ತಡೆಯಲಾರದೆ ಗಾಡಿಯಲ್ಲಿ ಹೂವುಗಳನ್ನು ತರುತ್ತಿದ್ದ ಜನರನ್ನು, ಇಷ್ಟೊಂದು ಹೂವುಗಳನ್ನು ಎಲ್ಲಿಂದ ತರುತ್ತಿದ್ದೀರಿ? ಯಾಕಾಗಿ ಅಲ್ಲಿ ತಂದು ಸುರಿಯುತ್ತಿದ್ದೀರಿ? ಎಂದು ಮತ್ತೊಮ್ಮೆ ಕೇಳಿದನು. ಆದರೆ ಆಗಲೂ ಯಾರೊಬ್ಬರಿಂದಲೂ ಉತ್ತರ ಸಿಗಲಿಲ್ಲ. ಅವರೆಲ್ಲ ತಮ್ಮ ಕೆಲಸಗಳನ್ನು ಗಡಿಬಿಡಿಯಿಂದ ಮಾಡುತ್ತಿದ್ದರು. ಅರ್ಜುನನ ಕಾಟ ತಡೆಯಲಾರದೆ ಕೊನೆಗೊಬ್ಬ ಬೇಸರದಿಂದ ಉತ್ತರಿಸಿದ.

ಸ್ವಾಮೀ, ದಯವಿಟ್ಟು ನಮಗೆ ತೊಂದರೆ ಕೊಡಬೇಡಿ. ನಾವು ತುಂಬ ಒತ್ತಡದಲ್ಲಿದ್ದೇವೆ. ನಮಗೆ ವಿಪರೀತ ಕೆಲಸವಿದೆ. ಇದುವರೆಗೆ ಕೇವಲ ಸಾವಿರ ಗಾಡಿಗಳಲ್ಲಿ ಮಾತ್ರ ಹೂವುಗಳನ್ನು ತಂದಿದ್ದೇವೆ. ಇನ್ನೂ ಸಾವಿರ ಗಾಡಿಗಳಲ್ಲಿ ಹೂವುಗಳನ್ನು ತರಬೇಕಾಗಿದೆ. ಭೀಮಸೇನನೆಂಬ ಒಬ್ಬ ಮಹಾ ಭಕ್ತನು ಇಷ್ಟೊಂದು ಹೂವುಗಳಿಂದ ದೇವರ ಪೂಜೆ ಮಾಡಿದ್ದಾನೆ. ಈ ಹೂವುಗಳ ರಾಶಿ ದೇವಸ್ಥಾನದ ಬಳಿ ಬಿದ್ದಿದೆ. ಅವನ ಇಂದಿನ ಪೂಜೆ ಪ್ರಾರಂಭವಾಗಲು ಇನ್ನೂ ಮೂರುನಾಲ್ಕು ಗಂಟೆಗಳ ಕಾಲವಿದೆ. ಅಷ್ಟರೊಳಗೆ ಅಲ್ಲಿರುವ ಹೂವುಗಳ ರಾಶಿಯನ್ನು ಖಾಲಿ ಮಾಡಬೇಕು ಎಂದ.

ಅವನ ಮಾತುಗಳನ್ನು ಕೇಳಿ ಆಶ್ಚರ್ಯಚಕಿತನಾದ ಅರ್ಜುನನು, ಅಯ್ಯಾ! ನೀನು ಹೇಳುತ್ತಿರುವುದು ಯಾರನ್ನು ಕುರಿತು ಭೀಮಸೇನನ ಬಗ್ಗೆಯೋ? ಅಥವಾ ಅವನ ತಮ್ಮ ಪರಶಿವನ ಪರಮಭಕ್ತನಾದ ಅರ್ಜುನನ ಬಗ್ಗೆಯೋ? ನೀನೆಲ್ಲೋ ತಪ್ಪಾಗಿ ಭಾವಿಸಿರಬೇಕು. ಎಂದನು. ಅಯ್ಯೋ! ಅವನ ತಮ್ಮನಾದ ಅರ್ಜುನನ ಬಗ್ಗೆ ನಮಗೆ ಗೊತ್ತಿಲ್ಲವೇ? ಅವನು ಕೇವಲ ಆಡಂಬರಕ್ಕೋಸ್ಕರ ಪೂಜೆ ಮಾಡುತ್ತಾನೆ. ಅವನು ನಿಜವಾದ ಭಕ್ತನಲ್ಲ. ಆದರೆ ಭೀಮಸೇನನು ಮಾತ್ರ ಹಾಗಲ್ಲ. ಆತನು ನಿಜವಾದ ಭಕ್ತ. ಭೀಮಸೇನನಿಗೂ ಅರ್ಜುನನಿಗೂ ಹೋಲಿಸಲು ಸಾಧ್ಯವೇ ಇಲ್ಲ. ಎಂದನು. ಆ ಸಮಯಕ್ಕೆ ಸರಿಯಾಗಿ ಒಬ್ಬ ವ್ಯಕ್ತಿಯು ಒಂದು ಬುಟ್ಟಿಯಲ್ಲಿ ಸ್ವಲವೇ ಸ್ವಲ್ಪ ಹೂವುಗಳನ್ನು ತೆಗೆದುಕೊಂಡು ಅಲ್ಲಿಗೆ ಬಂದನು. ಆಗ ಅರ್ಜುನನು, ಏಕೆ ಇಷ್ಟೊಂದು ಕಡಿಮೆ ಹೂವುಗಳನ್ನು ತರುತ್ತಿರು? ಈ ಹೂವುಗಳನ್ನು ಅರ್ಪಿಸಿದವರು ಯಾರು? ಎಂದು ಕೇಳಿದನು. ಅದಕ್ಕೆ ಆ ವ್ಯಕ್ತಿ ಉತ್ತರಿಸುತ್ತ, ಇದು ಅರ್ಜುನನೆಂಬ ಒಬ್ಬ ವ್ಯಕ್ತಿಯು ಅರ್ಪಿಸಿದ ಹೂವುಗಳು. ಹಾಗೆ ನೋಡಿದರೆ ಅವನು ಭಕ್ತನೇ ಅಲ್ಲ. ಅವನಲ್ಲಿ ಸ್ವಲ್ಪವೂ ಭಕ್ತಿಯಿಲ್ಲ. ಕೇವಲ ಆಡಂಬರದಿಂದ ಪೂಜಿಸುತ್ತ ಲೋಕದ ಕಣ್ಣಿಗೆ ತಾನೊಬ್ಬ ಮಹಾಭಕ್ತ ಎಂದು ತೋರಿಸಿಕೊಳುತ್ತಾನೆ ಅಷ್ಟೆ ಎಂದನು.

ಅರ್ಜುನನಿಗೆ ತನ್ನ ತಪ್ಪಿನ ಅರಿವಾಗಿ ನಾಚಿಕೆಯಿಂದ ತಲೆತಗ್ಗಿಸಿದನು. ನಿಜವಾದ ಭಕ್ತನಾದ ಅಣ್ಣನನ್ನು ಅದೆಷ್ಟು ತಾತ್ಸಾರದಿಂದ ಕಾಣುತ್ತಿದ್ದೆ ಎಂದು ನೆನೆದಾಗ ತುಂಬಾ ದುಃಖವಾತು. ಅಣ್ಣ ಭೀಮಸೇನನ ಮಾನಸಿಕವಾದ ಪೂಜೆಯು ತನ್ನ ಆಡಂಬರದ ಪೂಜೆಗಿಂತಲೂ ತುಂಬ ಮಿಗಿಲಾದುದು ಎಂಬ ಸತ್ಯವನ್ನು ಅರಿತ. ಇದನ್ನು ತೋರಿಸುವುದಕ್ಕೋಸ್ಕರವಾಗಿಯೇ ಕೃಷ್ಣ ತನ್ನನ್ನು ಇಲ್ಲಿಗೂ ಕರೆತಂದಿದ್ದಾನೆ ಎಂಬ ಸತ್ಯದ ಅರಿವಾಯಿತು. ಆಗ ಅರ್ಜುನನು ಕೃಷ್ಣನಿಗೆ ನಮಸ್ಕರಿಸುತ್ತ, ಹೇ ಪ್ರಭು, ನನ್ನ ತಪ್ಪನ್ನು ತೋರಿಸುವುದಕ್ಕೋಸ್ಕರ ಇಲ್ಲಿಗೇಕೆ ಕರೆತಂದೆ? ಅಲ್ಲೇ ನನ್ನ ಲೋಪದೋಷಗಳನ್ನೂ, ಬಾಹ್ಯಾಡಂಬರಗಳನ್ನೂ ಹೇಳಿ ನನ್ನನ್ನು ತಿದ್ದಬಹುದಿತ್ತಲ್ಲ ನೀನಿರುವುದೇ ನಮ್ಮನ್ನು ಕಾಪಾಡುವುದಕ್ಕೆ ಹಾಗೂ ನಮ್ಮ ತಪ್ಪುಗಳನ್ನೆಲ್ಲ ತಿದ್ದಿ ಸರಿಪಡಿಸುವುದಕ್ಕಲ್ಲವೇ. ಎಲ್ಲಾ ನಿನ್ನ ಮಾಯೆ, ಬೇಕೆಂತಲೇ ನನಗೆ ಬುದ್ಧಿ ಕಲಿಸಲೆಂದೇ ಇಲ್ಲಿಗೆ ಕರೆತಂದು ನನ್ನ ತಪ್ಪನ್ನು ನಾನೇ ಅರಿಯುವಂತೆ ಮಾಡಿದೆ. ಹೇ ಅನಾಥ ರಕ್ಷಕ, ದೀನ ಬಂಧು, ನನ್ನನ್ನು ಕ್ಷಮಿಸು. ನಮ್ಮನ್ನು ಕಾಪಾಡುವ ಭಾರ ನಿನ್ನದುಎನ್ನುತ್ತ ಶ್ರೀ ಕೃಷ್ಣನ ಪಾದಗಳಿಗೆರಗಿದ.



# ಔದ್ಯೋಗಿಕ ನಗರ ಮಾಡಲು ಎಲ್ಲರೂ ಕೈಜೋಡಿಸಿ: ಬೊಮ್ಮಾಯಿ

• ಉದಯವಾಹಿನಿ, ಗದಗ

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ ಬೆಂಗಳೂರಿನ ವಾಣಿಜ್ಯೋದ್ಯಮ ಸಂಸ್ಥೆಯ ಜತೆಗೆ ಸ್ಪರ್ಧೆ ಮಾಡಬೇಕು. ಆ ಗುರಿ ಇಟ್ಟುಕೊಂಡಾಗ ನಮಗೆ ದಾರಿ ಸಿಗುತ್ತದೆ. ಗದಗನ್ನು ಔದ್ಯೋಗಿಕ ನಗರವನ್ನಾಗಿ ಮಾಡುವ ಸಂಕಲ್ಪ ಮಾಡಿದ್ದು, ಎಲ್ಲರೂ ಕೈಜೋಡಿಸಬೇಕು ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು. ನಗರದ ಕೆ.ಎಚ್.ಪಾಟೀಲ ಸಭಾಭವನದಲ್ಲಿ ನಡೆದ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಸುವರ್ಣ ಮಹೋತ್ಸವ ಹಾಗೂ ಗದಗ ಉತ್ಸವದ ರಜತ ಮಹೋತ್ಸವ ಮತ್ತು ಶ್ರೇಷ್ಠ ವರ್ತಕ ಹಾಗೂ ಶ್ರೇಷ್ಠ ಉದ್ಯಮಿ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದರು. ಗದಗಕ್ಕೆ ವಿಶೇಷ ಸ್ಥಾನ ಇದೆ. ಈ ನಿಟ್ಟಿನಲ್ಲಿ ನಗರಕ್ಕೆ ಒಳ್ಳೆಯ ಭವಿಷ್ಯ ಬರೆಯಬೇಕಿದೆ. ಇದು ಸಾಧ್ಯವೋ; ಅಸಾಧ್ಯವೋ ಈ ಪಶ್ನೆ ಎಲ್ಲರನ್ನೂ ಕಾಡುತ್ತಿದೆ. ಪ್ರತಿ ಮೂರು ತಿಂಗಳಿಗೊಮ್ಮೆ ಬ್ಯಾಂಕರ್ಸ್ ಸಭೆ ಮಾಡುತ್ತೇನೆ. ಆಗ ವಾಣಿಜ್ಯೋದಮಿ ಸಂಘದವರನ್ನೂ ಕರೆಯುತ್ತೇನೆ. ಅಲ್ಲಿ ನಿಮ್ಮ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬಹುದು. ನಮ್ಮಲ್ಲಿರುವ ಮೂಲಸೌಕರ್ಯಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಂಡು ಮುಂದುವರಿದರೆ ಖಂಡಿತ ಒಳ್ಳೆಯ ಭವಿಷ್ಯ ಇದೆ ಎಂದರು. ವಾಣಿಜ್ಯೋದ್ಯಮ ಸಂಸ್ಥೆ ಐವತ್ತು ವರ್ಷಗಳನ್ನು ಪೂರೈಸಿದೆ. ಈ ಸಂದರ್ಭದಲ್ಲಿ ಒಂದು ಸಿಂಹಾವಲೋಕನ ಮತ್ತು ಆತ್ಮಾವಲೋಕನ ಅಗತ್ಯವಾಗಿದೆ. ಒಬ್ಬ ವ್ಯಕ್ತಿಗೆ ಐವತ್ತು ವರ್ಷ ಆಗುವುದು ಮುಖ್ಯವಲ್ಲ. ಒಂದು ಸಂಸ್ಥೆಗೆ ಐವತ್ತು ವರ್ಷ ಆಗುವುದು ಬಹಳ ಮುಖ್ಯ. ಆಗಿನ ವಾಣಿಜ್ಯೋದ್ಯಮಿಗಳು ಕಷ್ಟ ಕಾಲದಲ್ಲಿ ಸಂಸ್ಥೆ ಕಟ್ಟಿದ್ದಾರೆ. ಹಿಂದಿನ ಅಧ್ಯಕ್ಷರು ಹಾಗು ನಿರ್ದೇಶಕ ಮಂಡಳಿಗೆ ಅಭಿನಂದನೆಗಳು ಎಂದು ಹೇಳಿದರು. ಗದಗ-ವಾಡಿ, ಗದಗ- ಯಲವಿಗೆ ರೈಲ್ವೆ ಸಂಪರ್ಕ ಆಗುತ್ತಿದೆ. ಮುಂಬೈಗೆ ಸೂಪರ್‌ಫಾಸ್ಟ್ ರೈಲು ಸಂಪರ್ಕ ಮಾಡುತ್ತಿದ್ದೇವೆ. ಗದಗ- ಯಲವಿಗೆ ಯೋಜನೆಗೆ 700 ಕೋಟಿ ಮಂಜೂರಾತಿ ಸಿಗುತ್ತಿದೆ. ತುಂಗಭದ್ರಾ ನೀರು ದಡದಲ್ಲಿರುವ ಯೋಜನೆ. ವರದಾ ಬೆಡ್ತಿ ಜೋಡಣೆಗೆ ಕೇಂದ್ರ ಸರ್ಕಾರ ಶೀಘ್ರ ಒಪ್ಪಿಗೆ ಕೊಡುತ್ತದೆ. ಅದು ಬಂದರೆ ತುಂಗಭದ್ರಾ ನದಿಯಲ್ಲಿ ಬೇಸಿಗೆಯಲ್ಲಿ ನೀರಿನ ಕೊರತೆ ತಪ್ಪುತ್ತದೆ ಎಂದರು. ನಮ್ಮಲ್ಲಿ ಕೌಶಲ್ಯದ ಕೊರತೆ ಇದೆ. ಇದನ್ನು ನೀಗಿಸಲು ಕೇಂದ್ರ ಸರ್ಕಾರ ಕೌಶಲ್ಯ ಅಭಿವೃದ್ಧಿಗೆ ಒತ್ತು ನೀಡಿದೆ. ಉಪಯೋಗ ಮಾಡಿಕೊಂಡು ಮುನ್ನಡೆದರೆ ಖಂಡಿತವಾಗಿಯೂ ನಾವು ಯಾವುದೇ ದೇಶಕ್ಕೂ ಸಡ್ಡು ಹೊಡೆಯಬಹುದು ಎಂದರು. ಗದಗನಲ್ಲಿ ಆಹಾರ ಸಂಸ್ಕರಣೆ, ಜವಳಿ ಉದ್ಯಮಕ್ಕೆ ಹೆಚ್ಚು ಅವಕಾಶ ಇದೆ. ನಾನು ಜವಳಿ, ಕೌಶಲ್ಯ, ಕಾರ್ಮಿಕ ಸಂಸದೀಯ ಸ್ಥಾಯಿ ಸಮಿತಿ ಅಧ್ಯಕ್ಷ ಇದ್ದೇನೆ. ಹಾಗಾಗಿ, ಗದಗ ನಗರಕ್ಕಾಗಿ ಏನು ಮಾಡಬೇಕೆಂದು ಅಧಿಕಾರಿಗಳಿಗೆ ಹೇಳಿದ್ದೇನೆ ಎಂದರು.



ಉದಯವಾಹಿನಿ ಚಿತ್ರ

> ರಾಜ್ಯದಲ್ಲಿ ಉದ್ಯಮ ಮಾಡಲು ಕಷ್ಟವಾಗಲು ಸರ್ಕಾರ ಹಾಗೂ ಭೂಮಾಫಿಯಾ ಕಾರಣವಾಗಿದೆ. ಒಂದು ಉದ್ಯಮ ಆರಂಭಿಸಲು ಮುಂದಾದರೆ ಭೂಮಿಯ ಬೆಲೆ ನಾಲ್ಕು ಪಟ್ಟು ಹೆಚ್ಚಾಗುತ್ತದೆ. ಇದರಿಂದ ಸಾಮಾನ್ಯ ಜನರು ಉದ್ಯಮ ಸ್ಥಾಪಿಸುವುದು ಕಷ್ಟವಾಗಿದೆ.
> -ಬಸವರಾಜ ಬೊಮ್ಮಾಯಿ ಸಂಸದ

## ಮೈದುಂಬಿ ಹರಿಯುತ್ತಿರುವ ಎತ್ತಿಪೋತ ಪ್ರವಾಸಿಗರಿಗೆ ತೆಲಂಗಾಣ ಪೋಲಿಸ್ ನಿರ್ಭಂಧ


ಉದಯವಾಹಿನಿ ಚಿತ್ರ

• ಉದಯವಾಹಿನಿ,ಚಿಂಚೋಳಿ

ತಾಲ್ಲೂಕಿನ ಕುಂಚಾವರಂ ವನ್ಯಜೀವಿಧಾಮ ಅರಣ್ಯ ಪ್ರದೇಶದಲ್ಲಿ ಹಚ್ಚು ಹಸಿರಿನ ಗಿಡಮರಗಳ ಗುಡ್ಡಗಾಡು ಪ್ರದೇಶ ನಡುವೆ ಎತ್ತಿಪೋತ ಜಲಾಪಾತ ಮೈದುಂಬಿ ಹರೆಯುತ್ತಿದೆ ಆದರೆ ತೆಲಂಗಾಣದ ಜಹೀರಾಬಾದ ಪೋಲಿಸರು ಜಲಾಪಾತ ವಿಕ್ಷಣೆಗೆ ಹೋಗುವ ಪ್ರವಾಸಿಗರಿಗೆ ನೋಡಲು ನಿರ್ಭಂಧ ಹೇರಿದ್ದಾರೆ.

ಪ್ರತಿ ವರ್ಷದಂತೆ ಜೂನ್,ಜುಲೈ, ಆಗಷ್ಟ ತಿಂಗಳಲ್ಲೇ ಮಳೆಗಾಲದಲ್ಲಿ ಅತ್ಯಂತ ಸುಂದರವಾದ ನೋಡುವ ಎತ್ತಿಪೋತ ಜಲಾಪಾತ ಸ್ಥಳವಾಗಿದ್ದು ಮೇಲಿಂದ ಕೆಳಗೆ ಧುಮ್ಮಿಕ್ಕುವ ನೀರಿನ ಸುಂದರ ದೃಶ್ಯವನ್ನು ನೋಡಿ ಕಣ್ತುಂಬಿಕೊಳ್ಳಲು ದೂರದ ಆಂದ್ರಪ್ರದೇಶ, ತೆಲಂಗಾಣ, ಕರ್ನಾಟಕ, ಮಹಾರಾಷ್ಟ್ರದಿಂದ ಅನೇಕ ಪ್ರವಾಸಿಗರು ಪ್ರವಾಸಿ ತಾಣಗಳು ವಿಕ್ಷಣೆಗೆ ಬರುತ್ತಾರೆ ಆದರೆ ಈ ವರ್ಷ ಏಕಾಏಕಿ ತೆಲಂಗಾಣದ ಪೋಲಿಸರು ಪ್ರವಾಸಿಗರಿಗೆ ಹೋಗಲು ಬಿಡದೆ ಹೋಗುವ ರಸ್ತೆಗೆ ಮುಳ್ಳಿನಕಂಟ್ಟಿ ಹಾಕಿದ್ದಾರೆ ಇದರಿಂದ ಪ್ರವಾಸಿಗರು ಬೇಸರ ವ್ಯಕ್ತಪಡಿಸಿ ಹಿಂತಿರುಗಿ ಹೋಗುತ್ತಿದ್ದಾರೆ.

**ಮೂಲಭೂತ ಸೌಕರ್ಯ ಒದಗಿಸಲು ಆಗ್ರಹ:** ಎತ್ತಿಪೋತ ಜಲಾಪಾತ ವಿಕ್ಷೀಸಲು ಕರ್ನಾಟಕ,ತೇಲಂಗಾಣ,ಆಂದ್ರಪ್ರದೇಶ,ಮಹಾರಾಷ್ಟ್ರ ರಾಜ್ಯಗಳಿಂದ ಪ್ರವಾಸಿಗರು ಬರುತ್ತಾರೆ ಆದರೆ ಕೆಲವರು ತೆಲಂಗಾಣ ರಾಜ್ಯಕ್ಕೆ ಸೇರಿದ್ದು ಎಂದು ಹೇಳಿದರೆ ಕೆಲವರು ಕರ್ನಾಟಕ ರಾಜ್ಯಕ್ಕೆ ಸೇರಿದ್ದು ಎಂದು ಹೇಳುತ್ತಿದ್ದಾರೆ ಗೊಂದಲದಲ್ಲಿ ಎತ್ತಿಪೋತ ಜಲಾಪಾತವಿದೆ. ಏನೇ ಇರಲಿ ಈ ಗೊಂದಲವನ್ನು ಜಿಲ್ಲಾಧಿಕಾರಿಗಳು ಸರ್ವೇ ನಡೆಸಿ ಬೇಗನೇ ಸರಿಪಡಿಸಿ, ಎತ್ತಿಪೋತ ಜಲಾಪಾತ ನೋಡಲು ಬರುವ ಪ್ರವಾಸಿಗರಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕು ಎಂದು ಸಮಾಜ ಸೇವಕ ಹಣಮಂತ ಪೂಜಾರಿ ಒತ್ತಾಯಿಸಿದರು.

## ಮೃತನ ತಂದೆ, ತಾಯಿ ವಿರುದ್ಧ ಪೋಕ್ಸೊ ಪ್ರಕರಣ ದಾಖಲು
# ಕೊಪ್ಪಳ ಗವಿಸಿದ್ದಪ್ಪ ಕೊಲೆ ಕೇಸ್‌ಗೆ ಟ್ವಿಸ್ಟ್

• ಉದಯವಾಹಿನಿ, ಕೊಪ್ಪಳ

ಗವಿಸಿದ್ದಪ್ಪ ಕೊಲೆ ಕೇಸ್‌ಗೆ ಬಿಗ್ ಟ್ವಿಸ್ಟ್ ಸಿಕ್ಕಿದ್ದು, ಗವಿಸಿದ್ದಪ್ಪ, ಅವರ ಕುಟುಂಬಸ್ಥರ ವಿರುದ್ಧ ಕೊಪ್ಪಳದ ಮಹಿಳಾ ಪೊಲೀಸ್ ಠಾಣೆಯಲ್ಲಿ ಪೋಕ್ಸೊ ಕಾಯಿದೆಯಡಿ ಪ್ರಕರಣ ದಾಖಲಾಗಿದೆ. ಬಾಲಕಿಯ ತಾಯಿ ನೀಡಿದ ದೂರಿನನ್ವಯ ಮೃತ ಗವಿಸಿದ್ದಪ್ಪ ತಂದೆ ನಿಂಗಜ್ಜ, ತಾಯಿ ದೇವಮ್ಮ ಹಾಗೂ ಸಹೋದರಿ ಅನ್ನಪೂರ್ಣಾ ಅವರ ವಿರುದ್ಧ ಪ್ರಕರಣ ದಾಖಲಾಗಿದೆ. ಈ ವೇಳೆ ವಿಧಾನ ಪರಿಷತ್ ಸದಸ್ಯೆ, ಹೇಮಲತಾ ನಾಯಕ್, ಮಾಧ್ಯಮಗಳ ಎದುರು ಮಾತನಾಡುತ್ತಿದ್ದ ನಿಂಗಜ್ಜ ಅವರಿಗೆ ಕಿವಿಯಲ್ಲಿ ಹೇಳಿದ ಮಾತು ಕಾಂಗ್ರೆಸ್ ವಲಯದಲ್ಲಿ ಏಕಾಏಕಿ ಆಕ್ರೋಶ ಭುಗಿಲೇಳುವಂತೆ ಮಾಡಿತ್ತು. ಇದರ ಮರುದಿನವೇ ಬಾಲಕಿಯ ತಾಯಿ ತನ್ನ ಹಿರಿಮಗಳೊಂದಿಗೆ ಜಿಲ್ಲಾಡಳಿತ ಭವನದ ಎದುರು, ದಿಢೀರ್ ಪ್ರತಿಭಟನೆ ನಡೆಸಿದ್ದರು.

**ಇನ್ನಿಬ್ಬರು ಆರೋಪಿಗಳ ಬಂಧನ**

**ಮೃತ ಗವಿಸಿದ್ದಪ್ಪನಿಂದ 2 ವರ್ಷ ಅತ್ಯಾಚಾರ:** ನನ್ನ ಎರಡನೇ ಮಗಳ ಮೇಲೆ ಮೃತ ಯುವಕನಿಂದ ನಿರಂತರ ಎರಡು ವರ್ಷ ಅತ್ಯಾಚಾರವಾಗಿದೆ. ಕೊಲೆಯಲ್ಲಿ ನನ್ನ ಮಗಳ ಪಾತ್ರವಿಲ್ಲದಿದ್ದರೂ, ಸುಖಾಸುಮ್ಮನೆ ಎಳೆದು ತರಲಾಗುತ್ತಿದೆ, ಎಂದು ಆರೋಪಿಸಿ, ಪ್ರತಿಭಟನೆ ನಡೆಸಿದ ಬಳಿಕ ಎಸ್ಪಿ ಕಚೇರಿಗೆ ತೆರಳಿ ದೂರು ಸಲ್ಲಿಸಿದ್ದರು.


**ವಿಧಾನ ಪರಿಷತ್ ಸದಸ್ಯೆ ಹೇಮಲತಾ ನಾಯಕ ಭೇಟಿ**

ಗವಿಸಿದ್ದಪ್ಪ ಅವರ ಮನೆಗೆ ವಿಧಾನ ಪರಿಷತ್ ಸದಸ್ಯೆ, ಹೇಮಲತಾ ನಾಯಕ ಭೇಟಿ ನೀಡಿ ಸಾಂತ್ವನ ಹೇಳಿದರು.

ಕೊಲೆ ನಡೆದಿರುವುದು ಮನಸ್ಸಿಗೆ ಅತೀವ ದುಃಖ ತಂದಿದೆ. ಈ ಘಟನೆಗೆ ಸಂಬಂಧಿಸಿದಂತೆ ಪ್ರಕರಣವನ್ನು ಎನ್‌ಐಎಗೆ ವಹಿಸುವಂತೆ ಈಗಾಗಲೇ ರಾಜ್ಯಪಾಲರನ್ನು ಭೇಟಿಯಾಗಿ ಮನವಿ ಮಾಡಿದ್ದೇವೆ. ಖಂಡಿತ ನಮಗೆ ನ್ಯಾಯ ಸಿಗಲಿದೆ ಎಂದು ಮೃತ ಯುವಕನ ತಂದೆ- ತಾಯಿ, ಸಹೋದರಿಯರನ್ನು ಸಂತೈಸಿದರು. ಬಿಜೆಪಿ ಎಸ್ಟಿ ಮೋರ್ಚಾ ಪ್ರಧಾನ ಕಾರ್ಯದರ್ಶಿ ಬಸವರಾಜ ಬನ್ನಿ ಕೊಪ್ಪ, ಸದಸ್ಯರಾದ ಮಲ್ಲಿಕಾರ್ಜುನ ಕಲ್ಲನಣ್ಣವರ, ರಮೇಶ ವಾಲ್ಮೀಕಿ, ರಮೇಶ ಮುದ್ಲಾಪುರ, ಸುರೇಶಪ್ಪ ಪಾಟೀಲ್ ಇತರರು ಇದ್ದರು.

**ಏನಿದು ಪ್ರಕರಣ?:** ಗವಿಸಿದ್ದಪ್ಪ ನಾಯಕ(30) ಎಂಬುವವನ್ನು ಕೊಪ್ಪಳ ನಗರದ ಬಹದ್ದೂರಬಂಡಿ ರಸ್ತೆಯ ಬಳಿ ಅನ್ಯಕೋಮಿನ ಯುವಕ ಮಾರಕಾಸ್ತ್ರಗಳಿಂದ ಕೊಚ್ಚಿ ಕೊಲೆ ಮಾಡಿದ್ದರು. ಅನ್ಯಧರ್ಮದ ಯುವತಿ ಪ್ರೀತಿ ಮಾಡಿದ ವಿಚಾರಕ್ಕೆ ಯುವಕನನ್ನು ಹತ್ಯೆ ಮಾಡಲಾಗಿದೆ ಎಂದು ಆರೋಪಿಸಲಾಗಿತ್ತು.

ಪ್ರಕರಣಕ್ಕೆ ಸಂಬಂಧಿಸಿದಂತೆ ಸೈಲಾನ್‌ಪುರ ಓಣಿಯ ನಿವಾಸಿ ಸಾದಿಕ್ ಹುಸೇನ್ ಕೊಲ್ಕಾರ್ ಎಂಬಾತ ಪೊಲೀಸರಿಗೆ ಶರಣಾಗಿದ್ದನು. ಇನ್ನುಳಿದಂತೆ ಈತನೊಂದಿಗಿದ್ದು, ಘಟನೆ ಬಳಿಕ ನಾಪತ್ತೆಯಾಗಿದ್ದ ಇನ್ನಿಬ್ಬರು ಆರೋಪಿಗಳನ್ನು ಪೊಲೀಸರು ಪತ್ತೆ ಹಚ್ಚಿ, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದರು.


ಉದಯವಾಹಿನಿ ಚಿತ್ರ

**ಮೃತ ಗವಿಸಿದ್ದಪ್ಪನ ತಂದೆ - ತಾಯಿಯೊಂದಿಗೆ ಬಿಜೆಪಿ ಹಾಗೂ ಜೆಡಿಎಸ್ ನೇತೃತ್ವದ ನಿಯೋಗ ಇತ್ತೀಚೆಗೆ ಬೆಂಗಳೂರಿನಲ್ಲಿ ರಾಜ್ಯಪಾಲರನ್ನು ಭೇಟಿಯಾಗಿ, ಕೊಲೆ ಪ್ರಕರಣವನ್ನು ಎನ್‌ಐಎಗೆ ವಹಿಸುವಂತೆ ಆಗ್ರಹಿಸಿತ್ತು. ಮನವಿ ಸಲ್ಲಿಕೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಮೃತ ಯುವಕನ ತಂದೆ ನಿಂಗಜ್ಜ, ನೇರವಾಗಿ ಕೊಪ್ಪಳ ಶಾಸಕ ರಾಘವೇಂದ್ರ ಹಿಟ್ನಾಳ್, ಅವರ ಬೆಂಬಲಿಗರ ವಿರುದ್ಧ ಹರಿಹಾಯ್ದಿದ್ದರು.**

### ಆರೋಪ-ಪ್ರತ್ಯಾರೋಪ


**ಕೊಪ್ಪಳದಲ್ಲಿ ಕೊಲೆಯಾದ ಗವಿಸಿದ್ದಪ್ಪ ಮತ್ತು ಆತನ ಕುಟುಂಬದ ವಿರುದ್ಧ ಪೋಕ್ಸೋ ಕಾಯ್ದೆಯಡಿ ಪ್ರಕರಣ ದಾಖಲಾಗಿದೆ. ಬಾಲಕಿಯ ತಾಯಿಯ ದೂರಿನನ್ವಯ ಈ ಕ್ರಮ ಕೈಗೊಳ್ಳಲಾಗಿದೆ. ಈ ನಡುವೆ, ಕೊಲೆ ಪ್ರಕರಣವು ರಾಜಕೀಯ ತಿರುವು ಪಡೆದಿದ್ದು, ಆರೋಪ-ಪ್ರತ್ಯಾರೋಪಗಳು ನಡೆಯುತ್ತಿವೆ. ಮೃತ ಗವಿಸಿದ್ದಪ್ಪ ತನ್ನ ಮಗಳ ಮೇಲೆ ಅತ್ಯಾಚಾರ ಎಸಗಿದ್ದಾನೆ ಎಂದು ಬಾಲಕಿಯ ತಾಯಿ ಆರೋಪಿಸಿದ್ದಾರೆ.**

## ಎಂಟು ಜೋಡಿಗಳ ಉಚಿತ ಸಾಮೂಹಿಕ ವಿವಾಹ

• ಉದಯವಾಹಿನಿ ಸುದ್ದಿ

**ಕಾರಟಗಿ:** ಕಲಬುರ್ಗಿ ಶ್ರೀ ಶರಣಬಸವೇಶ್ವರರ 51ನೇ ವರ್ಷದ ಜಾತ್ರಾ ಮಹೋತ್ಸವ 27 ನೇ ವರ್ಷದ ಜೋಡು ರಥೋತ್ಸವ ನಿಮಿತ್ಯ ಪುರಾಣ ಮಹಾಮಂಗಲ ಮಂಟಪದಲ್ಲಿ ಆಯೋಜಿಸಿದ್ದ ಸರ್ವಧರ್ಮಗಳ ಉಚಿತ ಶ್ರೀ ಶರಣಬಸವೇಶ್ವರ ಸೇರಿ ಒಂಭತ್ತು ಜೋಡಿ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಶ್ರೀ ಮರುಳ ಸಿದ್ದಯ್ಯ ಸ್ವಾಮಿಗಳ ನೇತೃತ್ವದಲ್ಲಿ ಮತ್ತು ದಿವ್ಯ ಸಾನಿಧ್ಯವಹಿಸಿದ ಹರ ಗುರು ಚರಮೂರ್ತಿಗಳಾದ ಬುಕ್ಕ ಸಾಗರದ ಶ್ರೀಕರಿಸಿದ್ದೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಸಾಂಗಿಕವಾಗಿ ವಿವಾಹ ಕಾರ್ಯಕ್ರಮ ನೆರವೇರಿಸಿ ಆಶೀರ್ವದಿಸಿ ಆಶೀರ್ವಚನ ನೀಡಿದರು,

ಬಳಿಕ ಮರಳು ಸಿದ್ದಯ್ಯ ಸ್ವಾಮಿ ಹಿರೇಮಠರವರು ಮಾತನಾಡಿ ನೂತನ ದಾಂಪತ್ಯಕ್ಕೆ ಕಾಲಿಟ್ಟ ವಧು-ವರರು ಪರಸ್ಪರ ಒಬ್ಬರೊನ್ನೂಬ್ಬರು ಅರಿತು ಸಹಬಾಳ್ವೆ ನಡೆಸಿದಾಗಲೇ ದಾಂಪತ್ಯ ಜೀವನಕ್ಕೆ ಉತ್ತಮ ಅರ್ಥ ಸಿಗುತ್ತದೆ. ಅನಗತ್ಯ ಆರ್ಥಿಕ ಅಪಮೌಲ್ಯ ತಡೆದು ಸಾಮಾಜಿಕ ಜೀವನಕ್ಕೆ ಸಹಕಾರ ನೀಡುವ ಸಾಮೂಹಿಕ ವಿವಾಹ ಆಯೋಜನೆ ಇತರರಿಗೆ ಮಾದರಿಯಾಗಬೇಕು. ಮೌಢ್ಯಗಳಿಗೆ ಕಟ್ಟುಬೀಳದೇ ಆದರ್ಶ ಜೀವನ ನಡೆಸಬೇಕು ಎಂದರು. ನೂತನ ದಾಂಪತ್ಯಕ್ಕೆ ಕಾಲಿಟ್ಟ ದಂಪತಿಗಳನ್ನು ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡಲಾಯಿತು. ಬಳಿಕ ನೆರದಿದ್ದ ನೂರಾರು ಭಕ್ತಾದಿಗಳಿಗೆ ಶರಣಬಸವೇಶ್ವರ ದಾಸೋಹ ಜರುಗಿತು, ಈ ಸಂದರ್ಭದಲ್ಲಿ ದಾನಿಗಳು ದೇವಸ್ಥಾನ ಸಮಿತಿಯ ಪದಾಧಿಕಾರಿಗಳು, ಸರ್ವ ಸಮುದಾಯದ ಗುರು ಹಿರಿಯರು ಭಕ್ತಾದಿಗಳು ನೂರಾರು ಮಹಿಳೆಯರು ಭಾಗವಹಿಸಿದ್ದರು.


ಉದಯವಾಹಿನಿ ಚಿತ್ರ


> ಸಾಮೂಹಿಕ ವಿವಾಹ ಎಂದರೆ ಅದು ಕೇವಲ ಬಡ ಜನರ ಮದುವೆ ಎಂದು ಭಾವಿಸಬಾರದು ಮದುವೆ ಪ್ರತಿಯೊಬ್ಬರ ಜೀವನದ ಪ್ರಮುಖ ಘಟ್ಟ. ಸಾಮೂಹಿಕ ವಿವಾಹದಲ್ಲಿ ವಿವಾಹ ಮಾಡಿ ಕೊಳ್ಳುವುದರಿಂದ ದುಂದು ವೆಚ್ಚಕ್ಕೆ ಕಡಿವಾಣ ಹಾಕಿದಂತೆ ಭಕ್ತರ ಮತ್ತು ಮಠಾಧೀಶರ ಆಶೀರ್ವಾದದೊಂದಿಗೆ ಸಾಮೂಹಿಕ ವಿವಾಹ ಬಂಧನಕ್ಕೆ ಒಳಗಾಗುವ ಭಾಗ್ಯ ಜೀವನದ ಸಾರ್ಥಕತೆಯ ಕ್ಷಣವಾಗಿದೆ ಎಂದರು.

## ತುಂಗಭದ್ರಾ ಜಲಾಶಯ ವಿಚಾರದಲ್ಲಿ ಸರ್ಕಾರಗಳಿಂದ ಮಲತಾಯಿ ಧೋರಣೆ: ರೈತ ಮುಖಂಡರ ಆಕ್ರೋಶ

• ಉದಯವಾಹಿನಿ, ಬಳ್ಳಾರಿ

ತುಂಗಭದ್ರಾ ಜಲಾಶಯದ ವಿಚಾರದಲ್ಲಿ ಸರ್ಕಾರಗಳು ಮಲತಾಯಿ ಧೋರಣೆ ಅನುಸರಿಸುತ್ತಿವೆ ಎಂದು ರೈತ ಮುಖಂಡ ಹನುಮನ ಗೌಡ ಬೆಳಗುರ್ಕಿರವರು ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ತುಂಗಭದ್ರಾ, ಬಳ್ಳಾರಿ, ವಿಜಯನಗರ, ಕೊಪ್ಪಳ, ರಾಯಚೂರು ಜಿಲ್ಲೆಗಳ ಜೀವನಾಡಿ. ಆದರೆ, ಜಲಾಶಯದಲ್ಲಿ 30 ಟಿಎಂಸಿಯಷ್ಟು ಹೂಳು ತುಂಬಿದೆ. ಇದಕ್ಕೆ ಪರ್ಯಾವಾಗಿ ನವಿಲೆ ಬಳಿ ಸಮಾನಾಂತರ ಜಲಾಶಯ ನಿರ್ಮಾಣವಾಗಬೇಕು. ತಕ್ಷಣಕ್ಕೆ ಜಲಾಶಯದ ಕ್ರಸ್ಟ್ ಗೇಟ್‌ಗಳು, ಜಲಾಶಯದ ರಿಪೇರಿ ಕಾರ್ಯ ಆಗಬೇಕು ಎಂದು ಅವರು ಒತ್ತಾಯಿಸಿದರು.

ರಾಜ್ಯ ರೈತ ಸಂಘ, ಹಸಿರು ಸೇನೆಯ ಅಧ್ಯಕ್ಷ ಮಾಧವ ರೆಡ್ಡಿ ಮಾತನಾಡಿ, ನಮ್ಮ ಭಾಗಕ್ಕೆ 130 ಟಿಎಂಸಿ ನೀರು ನಿಗದಿಯಾಗಿದ್ದರೂ, ಈಗ 70 ಟಿಎಂಸಿಗೆ ನಿಲ್ಲಿಸಿದ್ದಾರೆ. ಕಿತ್ತು ಹೋಗಿರುವ ಗೇಟ್ ಕ್ರಸ್ಟ್‌ಗೇಟ್ ಅನ್ನು ಕೂಡಲೇ ಅಳವಡಿಸಬೇಕು ಎಂಬ ರೈತರ ಆಗ್ರಹಗಳ ನಡುವೆಯೇ, ಜಲಾಶಯದ ಗೇಟುಗಳೂ ಹಾಳಾಗಿರುವ ವಿಷಯವನ್ನು ಸಚಿವ ಶಿವರಾಜ ತಂಗಡಗಿ ಅವರೇ ಬಹಿರಂಗಪಡಿಸಿದ್ದಾರೆ. ಇದು ರೈತರ ಆತಂಕಕ್ಕೆ ಕಾರಣವಾಗಿದೆ ಎಂದರು.



> ತುಂಗಭದ್ರಾ ಜಲಾಶಯ ಭಾಗದ ಜನಪ್ರತಿನಿಧಿಗಳು ಈ ಕೂಡಲೇ ಸರ್ಕಾರದೊಂದಿಗೆ ಮಾತನಾಡಿ ಜಲಾಶಯದ ಸಮಸ್ಯೆ ಸರಿಪಡಿಸಬೇಕು. ಈ ವಿಷಯ ಅಧಿವೇಶನದಲ್ಲಿ ಚರ್ಚೆಯಾಗಬೇಕು. ಇಲ್ಲವಾದರೆ, ಜನಪ್ರತಿನಿಧಿಗಳಿಗೆ ರೈತರೇ ಗತಿ ಕಾಣಿಸುವ ಕೆಲಸ ಮಾಡಲಿದ್ದಾರೆ ಎಂದು ಎಚ್ಚರಿಸಿದರು.

## ಒಳ ಮೀಸಲಾತಿ ವರದಿ ಯಥಾವತ್ತಾಗಿ ಜಾರಿ ಮಾಡಿ

• ಉದಯವಾಹಿನಿ, ಯಲಬುರ್ಗಾ

ನ್ಯಾಯಮೂರ್ತಿ ನಾಗಮೋಹನ ದಾಸ್ ಅವರ ಒಳಮೀಸಲಾತಿ ವರದಿಯು ವೈಜ್ಞಾನಿಕವಾಗಿದ್ದು, ಯಥಾವತ್ತಾಗಿ ಜಾರಿಗೊಳಿಸಲು ಸರ್ಕಾರ ಮುಂದಾಗಬೇಕು. ಅಧಿವೇಶನದಲ್ಲಿ ಜಾರಿಗೆ ಒತ್ತಾಯಿಸಬೇಕು ಎಂದು ಪಟ್ಟಣದ ಮಾದಿಗ ದಂಡೋರ ಮೀಸಲಾತಿ ಹೋರಾಟ ಸಮಿತಿ ಪದಾಧಿಕಾರಿಗಳು ಮುಖ್ಯಮಂತ್ರಿ ಆರ್ಥಿಕ ಸಲಹೆಗಾರ ಬಸವರಾಜ ರಾಯರಡ್ಡಿ ಅವರಿಗೆ ಮನವಿ ಮಾಡಿದರು.

ಪಟ್ಟಣದ ಶಾಸಕರ ಕಚೇರಿಯಲ್ಲಿ ರಾಯರಡ್ಡಿ ಅವರನ್ನು ಭೇಟಿ ಮಾಡಿ ಮನವಿ ಮಾಡಿಕೊಂಡ ಹೋರಾಟ ಸಮಿತಿ ಮುಖಂಡರು, ಸುಮಾರು ವರ್ಷಗಳ ಬೇಡಿಕೆಯಂತೆ ಸಮಿತಿ ಉತ್ತಮ ಸಲಹೆಗಳನ್ನು ನೀಡಿದೆ. ಮಾದಿಗ ಸಮಾಜಕ್ಕೆ ಶೇ. 6ರಷ್ಟು ಮೀಸಲಾತಿಗೆ ಶಿಫಾರಸು ಮಾಡಿದ್ದು ಸ್ವಾಗತಾರ್ಹವಾಗಿದೆ. ಇದರಲ್ಲಿ ಯಾವುದೇ ಬದಲಾವಣೆ ಮಾಡದೇ ಜಾರಿಗೆ ಮುಂದಾಗಬೇಕಾಗಿದೆ ಎಂದು ಮನವಿಯಲ್ಲಿ ಕೋರಿದ್ದಾರೆ.

**ಬೆಂಬಲ:** ಮನವಿಗೆ ಪ್ರಕ್ರಿಯಿಸಿದ ರಾಯರಡ್ಡಿ ಅವರು, ನಿಮ್ಮ ಬೇಡಿಕೆಗೆ ಸಂಪೂರ್ಣವಾದ ಬೆಂಬಲವಿದೆ. ನಾಗಮೋಹನ ದಾಸ್ ಅವರು ಸರಿಯಾದ ವರದಿ ನೀಡಿದ್ದಾರೆ. ಸಣ್ಣಪುಟ್ಟ ಬದಲಾವಣೆ ಮಾಡಿ ಶೀಘ್ರದಲ್ಲಿಯೇ ಜಾರಿಗೆ ಸರ್ಕಾರ ಸಿದ್ಧತೆ ಮಾಡಿಕೊಂಡಿದೆ. ಮುಖ್ಯವಾಗಿ ಮಾದಿಗ ಸಮಾಜದವರಿಗೆ ಸೂಕ್ತ ಸ್ಥಾನಮಾನ ಕಲ್ಪಿಸಿಕೊಡುವಲ್ಲಿ ಸರ್ಕಾರ ಹಾಗೂ ವೈಯಕ್ತಿಯವಾಗಿ ತಾವೂ ಒತ್ತಾಯಿಸುತ್ತೇವೆ ಎಂದು ಹೇಳಿದರು.


ಉದಯವಾಹಿನಿ ಚಿತ್ರ

## ಪಂಚಾಯಿತಿಗೊಂದು ಕೆಪಿಎಸ್ ನಿರ್ಮಾಣ: ಮಧುಬಂಗಾರಪ್ಪ

• ಉದಯವಾಹಿನಿ, ಹುಬ್ಬಳ್ಳಿ

ಎಲ್‌ಕೆಜಿಯಿಂದ 12ನೇ ತರಗತಿವರೆಗೆ ಶಿಕ್ಷಣ ಒದಗಿಸುವ ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ರಾಜ್ಯದ ಎಲ್ಲಾ ಗ್ರಾ.ಪಂ ವ್ಯಾಪ್ತಿಯಲ್ಲಿ ನಿರ್ಮಿಸುವ ಗುರಿ ಹೊಂದಲಾಗಿದೆ. ಛಬ್ಬಿಯಲ್ಲೂ ಕೆಪಿಎಸ್ ಸ್ಥಾಪಿಸುವ ಕುರಿತು ಪರಿಶೀಲನೆ ನಡೆಸಲಾಗುವುದು ಎಂದು ಶಾಲಾ ಶಿಕ್ಷಣ, ಸಾಕ್ಷರತಾ ಇಲಾಖೆ ಸಚಿವ ಮಧು ಬಂಗಾರಪ್ಪ ಹೇಳಿದರು. ತಾಲ್ಲೂಕಿನ ಛಬ್ಬಿ ಗ್ರಾಮದಲ್ಲಿ ಆಯೋಜಿಸಿದ್ದ ಸರ್ಕಾರಿ ಪ್ರೌಢಶಾಲೆಯ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದರು.

ಕಲ್ಯಾಣ ಕರ್ನಾಟಕ ಸೇರಿದಂತೆ ರಾಜ್ಯದ ವಿವಿಧೆಡೆ 600ಕ್ಕೂ ಹೆಚ್ಚು ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸಲಾಗುತ್ತದೆ. ಪ್ರತಿ ಶಾಲೆಗೆ 5 ಕೋಟಿ ಅನುದಾನ ನೀಡಲಾಗುತ್ತದೆ. 3,000 ಶಾಲಾ ಕೊಠಡಿಗಳ ದುರಸ್ತಿ, 4,000 ಶಾಲೆಗಳಲ್ಲಿ ದ್ವಿಭಾಷಾ ಶಿಕ್ಷಣ, 5,000 ಶಾಲೆಗಳಲ್ಲಿ ಎಲ್‌ಕೆಜಿ, ಯುಕೆಜಿ ಶಿಕ್ಷಣ ನೀಡಲು ಕ್ರಮ ವಹಿಸಲಾಗಿದೆ. ಶುಲ್ಕ ರದ್ದು ಮಾಡಿ, ಎಸ್‌ಎಸ್‌ಎಲ್‌ಸಿ ಪರೀಕ್ಷೆ ಬರೆಯಲು ಅವಕಾಶ ನೀಡಿದ್ದರಿಂದ 1.06 ಲಕ್ಷ ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ ಎಂದು ತಿಳಿಸಿದರು. ಕೇಂದ್ರ ಸಚಿವ ಪ್ರಲಾದ ಜೋಶಿ ಮಾತನಾಡಿ, ಶಿಕ್ಷಣದಿಂದ ಹಳ್ಳಿಗಳ ಅಭಿವೃದ್ಧಿ ಸಾಧ್ಯವಿದೆ ಎಂಬುದನ್ನು ಮನಗಂಡು ಧಾರವಾಡ ಲೋಕಸಭಾ ಕ್ಷೇತ್ರದಲ್ಲಿ ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ ನಿಧಿ ಮೂಲಕ ಉಪಯುಕ್ತ ಕೆಲಸ ಮಾಡಲಾಗಿದೆ. ಖಾಸಗಿ ಶಾಲೆಯ ಸೌಲಭ್ಯಗಳು ಸರ್ಕಾರಿ ಶಾಲೆಗಳಲ್ಲೂ ಇರಬೇಕು ಎಂಬ ಉದ್ದೇಶ ನಮ್ಮದು ಎಂದು ತಿಳಿಸಿದರು.

**ಶೇ 74ರಷ್ಟು ಸಾಕ್ಷರತೆ ಆತ್ಮಾವಲೋಕ ಅವಶ್ಯ:** ದೇಶದ ಸಾಕ್ಷರತೆ ಪ್ರಮಾಣ ಶೇ 74ರಷ್ಟಿದೆ. ಸಾವಿರಾರು ಸರ್ಕಾರಿ ಶಾಲೆಗಳು ಬಂದ್ ಆಗಿದ್ದು ಬಹುತೇಕ ಪದವೀಧರರಿಗೆ ಕೆಲಸವಿಲ್ಲ. ಈ ಬಗ್ಗೆ ಆತ್ಮಾವಲೋಕನ ಆಗಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಹೇಳಿದರು. ಆಡಳಿತದಲ್ಲಿ ಪಾರದರ್ಶಕತೆ ಇಲ್ಲದಿರುವುದು ಗುಲಾಮಗಿರಿ ಭ್ರಷ್ಟಾಚಾರ ಜನರ ದಿಕ್ಕು ತಪ್ಪಿಸುವುದು ಸುಳ್ಳು ಹೇಳುವುದು ಅವ್ಯಾಹತವಾಗಿ ನಡೆದಿದೆ. ಈ ದೇಶವು ಯಾವುದೇ ರಾಜಕೀಯಕ್ಕೆ ಸಂಬಂಧಿಸಿದ್ದಲ್ಲ. ಯಾವುದೇ ಯೋಜನೆಗೆ ಸಾರ್ವಜನಿಕರ ತೆರಿಗೆ ಹಣವೇ ಬಳಕೆಯಾಗುವುದು ಎಂಬುದನ್ನು ಪ್ರಜ್ಞಾವಂತರು ಅರಿತುಕೊಳ್ಳಬೇಕು ಎಂದರು.

**ಕೊರತೆ ನೀಗಿಸಲು ಕ್ರಮವಹಿಸಿ:** ಜ್ಞಾನ ಧ್ಯಾನ ಎಲ್ಲರಿಗೂ ಮುಖ್ಯ. ಈ ಶತಮಾನದಲ್ಲಿ ಜ್ಞಾನ ಇದ್ದವರಿಗಷ್ಟೇ ಮಹತ್ವ ಸಿಗುತ್ತದೆ. ಜ್ಞಾನಕ್ಕೆ ಪ್ರಾಥಮಿಕ, ಪ್ರೌಢಶಾಲಾ ಶಿಕ್ಷಣ ಬುನಾದಿಯಾಗಿದೆ. ಶಾಲೆಗಳಲ್ಲಿನ ಕೊರತೆ ನೀಗಿಸಲು ಸರ್ಕಾರ ಕ್ರಮ ವಹಿಸಬೇಕು. ರಾಜ್ಯ ಶಿಕ್ಷಣ ಪದ್ಧತಿ ಜಾರಿಗೊಳಿಸಿದರೂ ಅದಕ್ಕೆ ಸೃಜನಾತ್ಮಕ ಅಂಶಗಳನ್ನು ಸೇರ್ಪಡೆ ಮಾಡಬೇಕು ಎಂದು ಸಂಸದ ಬಸವರಾಜ ಬೊಮ್ಮಾಯಿ ಸಲಹೆ ನೀಡಿದರು.



ಉದಯವಾಹಿನಿ ಚಿತ್ರ

> ಗ್ರಾಮೀಣ ಭಾಗದಲ್ಲಿ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಎಲ್ಲರ ಸಹಕಾರ ಅಗತ್ಯವಿದೆ. ಕೇಂದ್ರ ಸರ್ಕಾರವು ಹೆಚ್ಚಿನ ಅನುದಾನ ನೀಡಬೇಕಿದೆ.
> -ಮಧು ಬಂಗಾರಪ್ಪ
> ಶಾಲಾ ಶಿಕ್ಷಣ, ಸಾಕ್ಷರತಾ ಸಚಿವ

> ಎಸ್‌ಎಸ್‌ಎಲ್‌ಸಿ ಪರೀಕ್ಷೆ ತೇರ್ಡೆಯಾಗಲು ವಿದ್ಯಾರ್ಥಿಗಳಿಗೆ ಮೂರು ಬಾರಿ ಅವಕಾಶ ನೀಡುವ ಬದಲು ಒಂದೇ ಬಾರಿಗೆ ಉತ್ತೀರ್ಣರಾಗುವಂತಹ ವಾತಾವರಣ ಸೃಷ್ಟಿಸಬೇಕು.
> -ಪ್ರಹ್ಲಾದ ಜೋಶಿ ಕೇಂದ್ರ ಸಚಿವ

# ಯತ್ನಾಳ್ ಹೇಳಿಕೆ ವಿರುದ್ಧ ಪೊಲೀಸ್ ಠಾಣೆಯಲ್ಲಿ ಕೇಸ್ ದಾಖಲು

## ನಿಮ್ಮ ಮನೆ ಹುಡುಗಿನ ಮದುವೆ ಮಾಡಿ ಕೊಟ್ರೆ 1 ಕೋಟಿ ರೂ. ಕೊಡ್ತೇವೆ; ಮುಸ್ಲಿಂ ಮುಖಂಡನಿಂದ ಯತ್ನಾಳ್‌ಗೆ ಸವಾಲು

• ಉದಯವಾಹಿನಿ, ವಿಜಯಪುರ

ನಿಮ್ಮ ಮನೆ ಹುಡುಗಿನ ನಮ್ಮ ಸಮುದಾಯದ ಯುವಕನಿಗೆ ಮದುವೆ ಕೊಟ್ರೆ 1.11 ಕೋಟಿ ರೂಪಾಯಿ ಕೊಡ್ತೇವೆ ಎಂದು ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್‌ಗೆ ಮುಸ್ಲಿಂ ಮುಖಂಡರೊಬ್ಬರು ಸವಾಲು ಹಾಕಿದ್ದಾರೆ. ಇತ್ತೀಚೆಗೆ ರಾಜ್ಯದಲ್ಲಿ ಮುಸ್ಲಿಂ ಯುವತಿ ಮದುವೆಯಾಗುವ ಯುವಕರಿಗೆ 5 ಲಕ್ಷ ರೂ. ನೀಡಲಾಗುವುದು ಎಂದು ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಘೋಷಿಸಿದ್ದರು. ಇದಕ್ಕೆ ಮುಸ್ಲಿಂ ಸಮುದಾಯದಿಂದ ಭಾರೀ ವಿರೋಧ ವ್ಯಕ್ತವಾಗಿತ್ತು. ಸದ್ಯ ವಿಜಯಪುರದ ಮುಸ್ಲಿಂ ಮುಖಂಡ ಮುಸ್ಲಿಂ ಮುಖಂಡ ಹಮೀದ್ ಮುಶ್ರೀಫ್ ಎಂಬುವವರು ಯತ್ನಾಳ್‌ಗೆ ಸವಾಲು ಎಸೆದಿದ್ದಾರೆ. ಶಾಸಕ ಯತ್ನಾಳ್ ಕುಟುಂಬದ ಯುವತಿಯನ್ನೇ ಮುಸ್ಲಿಂ ಸಮಾಜದ ಯುವಕನೊಂದಿಗೆ ಮದುವೆ ಮಾಡಿ ಕೊಡಲಿ. ನಾವೇ ಅವರಿಗೆ 1 ಕೋಟಿ 11 ಲಕ್ಷ ರೂ. ಸಮಾಜದ ಪರವಾಗಿ ಕೊಡ್ತೀವಿ ಎಂದಿದ್ದಾರೆ. ಇನ್ನು ಯತ್ನಾಳ್ ಕೇವಲ ಪ್ರಚೋದನಾಕಾರಿ ಹೇಳಿಕೆ ನೀಡುತ್ತಾರೆ ಕ್ಷೇತ್ರದಲ್ಲಿ ಯಾವ ಅಭಿವೃದ್ಧಿಯನ್ನ ಕೂಡ ಮಾಡಿಲ್ಲ ಎಂದು ಕಿಡಿಕಾರಿದ್ದಾರೆ.

ನಿರ್ದಿಷ್ಟ ಧಾರ್ಮಿಕ ಗುಂಪನ್ನು ಗುರಿಯಾಗಿಸಿ ಸಾರ್ವಜನಿಕ ಶಾಂತಿ ಮತ್ತು ಸೌಹಾರ್ದ ಕದಡುವ ಸಾರ್ವಜನಿಕ ಹೇಳಿಕೆ ನೀಡುತ್ತಾರೆ. ಅವರ ಹೇಳಿಕೆ ಸಾಮಾಜಿಕ ದ್ವೇಷವನ್ನು ಉತ್ತೇಜಿಸುತ್ತವೆ, ಸಮಾಜದಲ್ಲಿ ವಿಭಜನೆಯನ್ನು ಸೃಷ್ಟಿಸುತ್ತವೆ. ಇತ್ತೀಚೆಗೆ ಕೊಪ್ಪಳದಲ್ಲಿನಡೆದ ಕಾರ್ಯಕ್ರಮವೊಂದರಲ್ಲಿ 'ಹಿಂದೂ ಹುಡುಗರು ಮುಸ್ಲಿಂ ಹುಡುಗಿಯರನ್ನು ಮದುವೆ ಯಾದರೆ 5 ಲಕ್ಷ ರೂ.ಗಳನ್ನು ನಗದು ಪ್ರೋತ್ಸಾಹ ಧನ ನೀಡಲಾಗುವುದೆಂದು ಸಾರ್ವಜನಿಕ ವಾಗಿ ಘೋಷಿಸಿದರು. ಈ ಹೇಳಿಕೆ ಒಂದು ಸಮುದಾಯವನ್ನು ಗುರಿಯಾಗಿಸಲು ಮತ್ತು ಇನ್ನೊಂದು ಸಮುದಾಯವನ್ನು ಪ್ರಚೋದಿಸಲು ನೀಡಿದ್ದಾರೆ. ಇದರಿಂದ ಹಲವು ಕಡೆಗಳಲ್ಲಿಗಂಭೀರ ಕಾನೂನು ಸುವ್ಯವಸ್ಥೆಗೆ ಕಾರಣವಾಗಬಹುದು ಎಂದು ದೂರಿನಲ್ಲಿ ತಿಳಿಸಿದ್ದಾರೆ.



**ಕಲಬುರಗಿ ಕೋಮು ಸೌಹಾರ್ದಕ್ಕೆ ಧಕ್ಕೆ ತರುವ ಹೇಳಿಕೆ ನೀಡಿದ ಆರೋಪದ ಮೇಲೆ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಿರುದ್ಧ ನಗರದ ರೋಜಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ನಗರದ ಖಮರ್ ಕಾಲೊನಿಯ ಖಿದ್ಮತ್ ಎ ಮಿಲ್ಲತ್ ಕಮೀಟಿ ಅಧ್ಯಕ್ಷ ಖಮರ್ ಜುನೈದ್ ಖುರೇಶಿ ದೂರು ದಾಖಲಿಸಿದ್ದಾರೆ.**

### ಯತ್ನಾಳ್ ಹೇಳಿಕೆಗೆ ದಕ್ಷಿಣ ಕನ್ನಡ ಮುಸ್ಲಿಂ ಯುವಜನ ಪರಿಷತ್ ಖಂಡನೆ

**ಮುಸ್ಲಿಂ ಯುವತಿಯನ್ನು ಹಿಂದೂ ಯುವಕ ಮದುವೆಯಾದರೆ ಆ ಯುವಕನಿಗೆ 5 ಲಕ್ಷ ರೂ. ಬಹುಮಾನ ನೀಡುವುದಾಗಿ ಬಿಜೆಪಿ ಮುಖಂಡ ಬಸನಗೌಡ ಪಾಟೀಲ್ ಯತ್ನಾಳ್ ಹೇಳಿಕೆ ನೀಡಿರುವುದು ಖಂಡನೀಯ ಎಂದು ದಕ್ಷಿಣ ಕನ್ನಡ ಮುಸ್ಲಿಂ ಯುವಜನ ಪರಿಷತ್ ಹೇಳಿದೆ. ಸಂಘಟನೆ ಅಧ್ಯಕ್ಷ ಅಶ್ರಫ್ ಕಲ್ಲೇಗ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಮುಸ್ಲಿಂ ಹೆಣ್ಣು ಮಕ್ಕಳ ಮದುವೆ ಬಗ್ಗೆ ಅವರ ಅಪ್ಪ-ಅಮ್ಮ, ಜಮಾತ್‌ನವರು ಚಿಂತಿಸುತ್ತಾರೆ. ಯತ್ನಾಳ್ ಅವರಿಗೆ ಈ ಚಿಂತೆ ಬೇಡ. ಮುಸ್ಲಿಂ ಯುವತಿಯನ್ನು ಮದುವೆಯಾದ ಹಿಂದೂ ಯುವಕರಿಗೆ 5 ಲಕ್ಷ ನೀಡುವ ಬದಲು, ಹಿಂದೂ ಸಮಾಜದಲ್ಲೇ ಮದುವೆಯಾಗದೆ ಉಳಿದಿರುವ ಹೆಣ್ಣು ಮಕ್ಕಳ ಮದುವೆ ಮಾಡಿಸಲಿ. ಪುತ್ತೂರಿನಲ್ಲಿ ಬಿಜೆಪಿ ಮುಖಂಡನ ಮಗನೇ ಯುವತಿಗೆ ಮಗು ಕರುಣಿಸಿ ಮೋಸ ಮಾಡಿದ್ದಾನೆ. ಮೊದಲು ಯತ್ನಾಳ್ ಮುಂದೆ ನಿಂತು ಆ ಯುವಕನ ಜತೆ ಸಂತ್ರಸ್ತ ಯುವತಿಯ ಮದುವೆ ಮಾಡಿಸಲಿ. ಬಿಜೆಪಿಯಲ್ಲಿ ಚಲಾವಣೆಯಲ್ಲಿಲ್ಲದ ನಾಣ್ಯದಂತಾಗಿರುವ ಯತ್ನಾಳ್ ಈಗ ಪಕ್ಷದ ನಾಯಕರ ಗಮನ ಸೆಳೆಯಲು ಈ ರೀತಿ ಹೇಳಿಕೆ ನೀಡುತ್ತಿದ್ದಾರೆ ಎಂದರು.**

## ಮಿನಿ ನ್ಯೂಸ್

### ಅಂಗನವಾಡಿ ಕಾರ್ಯಕರ್ತೆ, ಸಹಾಯಕಿ ಹುದ್ದೆಗಳ ನೇಮಕಾತಿ ಅರ್ಜಿ ಆಹ್ವಾನ


• ಉದಯವಾಹಿನಿ, ಚಿತ್ರದುರ್ಗ

ಚಳ್ಳಕೆರೆ ಶಿಶು ಅಭಿವೃದ್ಧಿ ಯೋಜನೆ ಕಚೇರಿ ವ್ಯಾಪ್ತಿಯಲ್ಲಿ ಖಾಲಿ ಇರುವ 2 ಅಂಗನವಾಡಿ ಕಾರ್ಯಕರ್ತೆ, 24 ಸಹಾಯಕಿರು ಸೇರಿ 26 ಹುದ್ದೆಗಳನ್ನು ಗೌರವ ಸೇವೆಯ ಆಧಾರದಲ್ಲಿ ನೇಮಕಕ್ಕೆ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ದ್ವಿತಿಯ ಪಿಯುಸಿ, ಸಹಾಯಕಿ ಹುದ್ದೆಗೆ ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾಗಿರಬೇಕು. 19 ರಿಂದ 35 ವರ್ಷದೊಳಗಿನ ಸ್ಥಳೀಯ ಮಹಿಳಾ ಅಥವಾ ಲಿಂಗತ್ವ ಅಲ್ಪಸಂಖ್ಯಾತ ಮಹಿಳಾ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು.

ಸೆ. 5 ಸಂಜೆ 5:30ರ ಒಳಗಾಗಿ ವೆಬ್‌ಸೈಟ್ https://karnemaka-one.kar.inc.in/abcd/ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸುವ ಮುನ್ನ ಅಭ್ಯರ್ಥಿಗಳು ಬಳಕೆದಾರರ ಕೈಪಿಡಿಯಲ್ಲಿನ ಸೂಚನೆಗಳನ್ನು ಸ್ಪಷ್ಟವಾಗಿ ಓದಿಕೊಳ್ಳಬೇಕು. ಮಾಹಿತಿಗಾಗಿ ಚಳ್ಳಕೆರೆ ನಗರದ ಚಿತ್ರದುರ್ಗ ರಸ್ತೆಯಲ್ಲಿನ ತ್ಯಾಗರಾಜ ನಗರದ ಎಸ್‌ಬಿಐ ಬ್ಯಾಂಕ್ ಪಕ್ಕದಲ್ಲಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

### ಅಪ್ಪ ಪ್ರಶಸ್ತಿಗೆ ವಿನಯಕುಮಾರ ಆಯ್ಕೆ

• ಉದಯವಾಹಿನಿ, ಸಿಂದಗಿ



ಸಿಂದಗಿ ತಾಲ್ಲೂಕಿನ ಬೋರಗಿ ಗ್ರಾಮದ ನಬಿರೋಶನ್ ಪ್ರಕಾಶನದಿಂದ ದಿವಂಗತ ಖತಾಲಸಾಬ ಆಲಗೂರ ಸ್ಮರಣಾರ್ಥ ನೀಡುವ ಅಪ್ಪ ರಾಜ್ಯಮಟ್ಟದ ಪ್ರಶಸ್ತಿಗೆ ಇನ್‌ಸೈಟ್ಸ್ ಐಎಎಸ್ ಸಂಸ್ಥೆಯ ಸಂಸ್ಥಾಪಕ ಜಿ.ಬಿ ವಿನಯಕುಮಾರ, ವಿಜಯಪುರ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಮಹೇಶ ಪೋತದಾರ ಆಯ್ಕೆಯಾಗಿದ್ದಾರೆ. ಪ್ರಶಸ್ತಿಯು 5 ಸಾವಿರ ನಗದು, ಫಲಕ ಒಳಗೊಂಡಿದೆ. ಬೆಂಗಳೂರಿನ ಕನ್ನಡ ಸಾಹಿತ್ಯ ಪರಿಷತ್ತಿನ ಕೃಷ್ಣರಾಜ ಪರಿಷನ್ಮಂದಿರದಲ್ಲಿ ಆ. 30ರಂದು ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಲಿದೆ. ನಟ ವಿಜಯರಾಘವೇಂದ್ರ ಪ್ರಶಸ್ತಿ ಪ್ರದಾನ ಮಾಡುವರು. ಲೋಕಾಯುಕ್ತ ನಿವೃತ್ತ ನ್ಯಾಯಮೂರ್ತಿ ಎನ್.ಸಂತೋಷ ಹೆಗ್ಡೆ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

### ತುಂಗಭದ್ರಾ: 1.24 ಲಕ್ಷ ಕ್ಯೂಸೆಕ್ ನೀರು ಹೊರಕ್ಕೆ

• ಉದಯವಾಹಿನಿ, ಹೊಸಪೇಟೆ

ವಿಜಯನಗರ ಜಿಲ್ಲೆಯಲ್ಲಿ ಮಳೆ ಇಲ್ಲದಿದ್ದರೂ, ಶಿವಮೊಗ್ಗ ಭಾಗದಲ್ಲಿ ಬಿರುಸಿನ ಮಳೆ ಆಗುತ್ತಿರುವುದರಿಂದ ತುಂಗಭದ್ರಾ ಜಲಾಶಯಕ್ಕೆ ಅಪಾರ ಪ್ರಮಾಣದಲ್ಲಿ ನೀರು ಹರಿದುಬರುತ್ತಿದ್ದು, 1.24 ಲಕ್ಷ ಕ್ಯೂಸೆಕ್ ನೀರನ್ನು ನದಿಗೆ ಮತ್ತು ಕಾಲುವೆಗಳಿಗೆ ಹರಿಯಬಿಡಲಾಯಿತು. ಸದ್ಯ 77,221 ಕ್ಯೂಸೆಕ್‌ನಷ್ಟು ಒಳಹರಿವು ಇದೆ, ಆದರೆ 80 ಟಿಎಂಸಿ ಅಡಿಗಿಂತ ಹೆಚ್ಚು ನೀರು ಸಂಗ್ರಹಿಸಲಾಗದು ಎಂಬ ಕಾರಣಕ್ಕೆ ಅದಕ್ಕಿಂತ ಹೆಚ್ಚಿನ ಪ್ರಮಾಣದಲ್ಲಿ ನೀರನ್ನು ಹೊರಬಿಡಲಾಗುತ್ತಿದೆ. ಕಾಲುವೆಗಳಿಗೆ ಸುಮಾರು 15 ಕ್ಯೂಸೆಕ್‌ನಷ್ಟು ನೀರನ್ನು ಹರಿಸಲಾಗುತ್ತಿದ್ದರೆ, 26 ಗೇಟ್‌ಗಳನ್ನು ತೆರೆದು 1.09 ಲಕ್ಷ ಕ್ಯೂಸೆಕ್ ನೀರನ್ನು ನದಿಗೆ ಹರಿಸಲಾಗುತ್ತಿದೆ ಎಂದು ತುಂಗಭದ್ರಾ ಮಂಡಳಿಯ ಅಧಿಕಾರಿಗಳು ತಿಳಿಸಿದ್ದಾರೆ. ಸದ್ಯ 6 ಗೇಟ್‌ಗಳನ್ನು ಮೇಲೆತ್ತಲು ಸಾಧ್ಯವಾಗುತ್ತಿಲ್ಲ. 19ನೇ ಗೇಟ್‌ಗೆ ಸ್ಟಾಪ್‌ಲಾಗ್ ಅಳವಡಿಸಿದ್ದರಿಂದ ಅದರಲ್ಲಿ ನೀರು ಹೊರಬಿಡುವುದು ಸಾಧ್ಯವಿಲ್ಲ. 4ನೇ ಗೇಟ್ ಅನ್ನು ಎರಡು ಅಡಿಯಷ್ಟು ಮಾತ್ರ ಮೇಲೆತ್ತಲಾಗುತ್ತಿದೆ.13 ಗೇಟ್‌ಗಳನ್ನು 5 ಅಡಿಯಷ್ಟು ಮೇಲಕ್ಕೆ ಎತ್ತಿ 68,965 ಕ್ಯೂಸೆಕ್ ನೀರನ್ನು ಹೊರಗೆ ಬಿಡಲಾಗುತ್ತಿದೆ. ಉಳಿದಂತೆ 5 ಗೇಟ್‌ಗಳನ್ನು 2 ಅಡಿಯಷ್ಟು, 5 ಗೇಟ್‌ಗಳನ್ನು 3 ಅಡಿಯಷ್ಟು, 2 ಗೇಟ್‌ಗಳನ್ನು 4 ಅಡಿಯಷ್ಟು, 1 ಗೇಟ್ ಅನ್ನು 3.5 ಅಡಿಯಷ್ಟು ಮೇಲಕ್ಕೆತ್ತಿ ನೀರು ನದಿಗೆ ಹರಿಸಲಾಗುತ್ತಿದೆ.

### ಮಳೆ ಹಾನಿ ಪ್ರದೇಶಕ್ಕೆ ಡಿಸಿ ಭೇಟಿ

• ಉದಯವಾಹಿನಿ, ಔರಾದ್

ಭಾರಿ ಮಳೆಯಿಂದ ಹಾನಿಗೊಳಗಾದ ತಾಲ್ಲೂಕಿನ ಬಾವಲಗಾಂವ್, ಭಂಡಾರಕುಮಟಾ ಸೇರಿದಂತೆ ವಿವಿಧ ಗ್ರಾಮಗಳಿಗೆ ಸೋಮವಾರ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ್ ಸಿಇಒ ಡಾ. ಗಿರೀಶ್ ಬದೋಲೆ ಭೇಟಿ ನೀಡಿ ಪರಿಶೀಲಿಸಿದರು. ಸುರಿದ ಭಾರಿ ಮಳೆಗೆ ಬೊಂತಿ ಬಳಿಯ ಸಣ್ಣ ನೀರಾವರಿ ಇಲಾಖೆ ಕೆರೆ ಒಡೆದು ಸುತ್ತಲಿನ ಅನೇಕ ಗ್ರಾಮಗಳ ಹೊಲಗಳು ಜಲಾವೃತವಾಗಿವೆ. ಸೇತುವೆಗಳು ಮುಳುಗಡೆಯಾಗಿ ಈ ಭಾಗಲ್ಲಿ ಸಂಚಾರ ಕಡಿತವಾಗಿದೆ. ಬಾವಲಗಾಂವ್ ಹಾಗೂ ಭಂಡಾರಕುಮಟಾ ಗ್ರಾಮಗಳಿಗೆ ನೀರು ನುಗ್ಗುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ಈ ಜನರಿಗೆ ಎಚ್ಚರ ವಹಿಸಲು ತಿಳಿಸಲಾಗಿದೆ. ಈ ಎರಡು ಗ್ರಾಮದ ಹೊರ ವಲಯದ ಶಾಲೆಗಳಲ್ಲಿ ಕಾಳಜಿ ಕೇಂದ್ರ ತೆರೆಯಲಾಗಿದೆ. ಮಳೆ ಹೀಗೆ ಮುಂದುವರೆದರೆ ಜನರನ್ನು ಕಾಳಜಿ ಕೇಂದ್ರಕ್ಕೆ ಸ್ಥಳಾಂತರಿಸಲಾಗುವುದು ಎಂದು ತಹಶೀಲ್ದಾರ್ ಮಹೇಶ ಪಾಟೀಲ್ ತಿಳಿಸಿದ್ದಾರೆ.

### 64 ಜನರಿಗೆ ಕೃತಕ ಕೈಕಾಲು ಜೋಡಣೆಗೆ ತಪಾಸಣೆ




• ಉದಯವಾಹಿನಿ, ಆಳಂದ

ಪಟ್ಟಣದ ಸಮತಾ ಆಯುರ್ವೇದಿಕ್ ಆಸ್ಪತ್ರೆಯಲ್ಲಿ ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಪುಣೆಯ ಸಾಧು ವಾಸ್ವಾನಿ ಮಿಷನ್, ಸಮತಾ ಆಯುರ್ವೇದಿಕ್ ಕಾಲೇಜು, ಆಸ್ಪತ್ರೆ ಸಹಯೋಗದಲ್ಲಿ ವಿಕಲಚೇತನರ ಕೃತಕ ಕೈಕಾಲು ಜೋಡಣೆ ಶಿಬಿರದಲ್ಲಿ 64 ಜನರ ತಪಾಸಣೆ ಕೈಗೊಂಡು ಚಿಕಿತ್ಸೆಗೆ ಆಯ್ಕೆ ಮಾಡಲಾಯಿತು. ಶಿಬಿರವನ್ನು ಕೆಎಂಎಫ್ ಅಧ್ಯಕ್ಷ ಆರ್.ಕೆ ಪಾಟೀಲ ಉದ್ಘಾಟಿಸಿ ಮಾತನಾಡಿ, ಮನುಷ್ಯನಿಗೆ ದೇಹದ ಅಂಗಾಂಗಳು ಕಳೆದುಕೊಂಡ ಮೇಲೆ ಮಾತ್ರ ಅವುಗಳ ಉಪಯುಕ್ತತೆ ಅರಿವು ಮೂಡುತ್ತದೆ. ಅದಕ್ಕೆ ನಾವು ನಮ್ಮ ಆರೋಗ್ಯದ ಪಾಲನೆ, ಸದೃಡತೆ ಬಗ್ಗೆ ಸದಾ ಮುನ್ನೆಚ್ಚರಿಕೆ ವಹಿಸಬೇಕು ತಿಳಿಸಿದರು. ಶಾಸಕರ ನಿಧಿಯಿಂದ 60 ಲಕ್ಷ ಅನುದಾನವು ಅಂಗವಿಕಲರಿಗೆ ತ್ರಿಚಕ್ರ ವಿತರಣೆಗೆ ಮೀಸಲಿರಿಸಲಾಗಿದೆ. ಮುಂದಿನ ದಿನಗಳಲ್ಲಿ ಅರ್ಹ ವಿಕಲಚೇತನರಿಗೆ ಅಗತ್ಯ ಸೌಲಭ್ಯಗಳು ಒದಗಿಸಲಾಗುವುದು ಎಂದರು. ತಾಲ್ಲೂಕಿನ ವಿವಿಧ ಗ್ರಾಮದಿಂದ ನೂರಕ್ಕೂ ಹೆಚ್ಚು ಜನರು ವಿಕಲಚೇತನರು ಆಗಮಿಸಿದರು. ಅಂತಿಮವಾಗಿ 64 ಜನರಿಗೆ ಕೃತಕ ಕೈಕಾಲು ಜೋಡಣೆಯ ಚಿಕಿತ್ಸೆಗೆ ಅಂತಿಮಗೊಳಿಸಲಾಯಿತು. ಮುಂಬರುವ 20 ದಿನಗಳಲ್ಲಿ ಹಂತಹಂತವಾಗಿ ಚಿಕಿತ್ಸೆ ಕೈಗೊಂಡು ಅಗತ್ಯ ಸಲಕರಣೆ ವಿತರಿಸಲಾಗುವುದು ಎಂದು ಸಂಯೋಜಕ ಬಾಬುರಾವ ಮಡ್ಡೆ ತಿಳಿಸಿದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 03:00 ರಿಂದ 04:30 |
| ಗುಳಿಕ ಕಾಲ | ಬೆಳಿಗ್ಗೆ | 12:00 ರಿಂದ 01:30 |
| ಯಮಗಂಡ ಕಾಲ | ಬೆಳಿಗ್ಗೆ | 09:00 ರಿಂದ 10:30 |

**ಮೇಷ** ನೀವು ಯೋಗ ಧ್ಯಾನದೊಂದಿಗೆ ದಿನವನ್ನು ಪ್ರಾರಂಭಿಸಬಹುದು. ಇದನ್ನು ಮಾಡುವುದರಿಂದ ನಿಮಗೆ ಪ್ರಯೋಜನಕಾರಿಯಾಗುತ್ತದೆ, ದಿನವಿಡೀ ನಿಮ್ಮಲ್ಲಿ ಶಕ್ತಿ ಉಳಿದಿರುತ್ತದೆ. ನಿಮ್ಮ ಹಳೆಯ ಯಾವುದೇ ರೋಗ ಇಂದು ನಿಮ್ಮನ್ನು ಕಾಡಬಹುದು. ಇದರ ಕಾರಣದಿಂದ ನೀವು ಆಸ್ಪತ್ರೆಗೂ ಹೋಗಬೇಕಾಗಬಹುದು.

**ವೃಷಭ** ದ್ವೇಷ ಪ್ರೀತಿಗಿಂತ ಹೆಚ್ಚು ಶಕ್ತಿಶಾಲಿಯಾಗಿದ್ದು ನಿಮ್ಮ ದೇಹದ ಮೇಲೆ ಪ್ರಾಣಾಂತಿಕ ಪರಿಣಾಮ ಬೀರುವದರಿಂದ ನಿಮ್ಮ ದ್ವೇಷವನ್ನು ಸಾಯಿಸಲು ಒಂದು ಸಮರಸದ ಸ್ವಭಾವವನ್ನು ರೂಪಿಸಿಕೊಳ್ಳಿ. ದುಷ್ಟತೆಯು ಒಳಿತಿಗಿಂತ ಬೇಗ ವಿಜಯ ಸಾಧಿಸುತ್ತದೆಂದು ನೆನಪಿಡಿ.

**ಮಿಥುನ** ಬೆಂಬಲ ನೀಡುವ ಸ್ನೇಹಿತರು ನಿಮ್ಮನ್ನು ಸಂತೋಷವಾಗಿರಿಸುತ್ತಾರೆ. ತನ್ನ ಹಣವನ್ನು ಹೇಗೆ ಸಂಗ್ರಹಿಸುವುದು ಎಂಬ ಈ ಕೌಶಲ್ಯವನ್ನು ಇಂದು ನೀವು ಕಲಿಯಬಹುದು, ಈ ಕೌಶಲ್ಯವನ್ನು ಕಲಿತು ನೀವು ನಿಮ್ಮ ಹಣವನ್ನು ಉಳಿಸಬಹುದು. ಕುಟುಂಬದ ಪರಿಸ್ಥಿತಿ ಇಂದು ನೀವು ಯೋಚಿಸುವ ಹಾಗೆ ಇರುವುದಿಲ್ಲ.

**ಕರ್ಕಾಟಕ** ನಿಮ್ಮ ಆರೋಗ್ಯದ ಸಲುವಾಗಿಯಾದರೂ ಕೂಗಬೇಡಿ. ಇಂದಿನ ದಿನವನ್ನು ಉತ್ತಮಗೊಳಿಸಲು ಕಳೆದ ದಿನಗಳಲ್ಲಿ ಹಣವನ್ನು ಹೂಡಿಕೆ ಮಾಡಿದ್ದರೆ, ಅದರ ಪ್ರಯೋಜನವನ್ನು ಇಂದು ನೀವು ಪಡೆಯಬಹುದು. ನಿಮ್ಮ ಸಂಗಾತಿಯೊಡನೆ ಒಂದು ಉತ್ತಮ ತಿಳುವಳಿಕೆ ಮನೆಯಲ್ಲಿ ಸಮೃದ್ಧಿಯನ್ನು ತರುತ್ತದೆ.

**ಸಿಂಹ** ಪ್ರೀತಿ, ಭರವಸೆ, ನಂಬಿಕೆ, ಸಹಾನುಭೂತಿ, ಆಶಾವಾದ ಮತ್ತು ನಿಷ್ಠೆಗಳಂಥ ಧನಾತ್ಮಕ ಭಾವನೆಗಳನ್ನು ಗ್ರಹಿಸಲು ಮನಸ್ಸನ್ನು ಪ್ರೋತ್ಸಾಹಿಸಿ. ಒಮ್ಮೆ ಈ ಭಾವನೆಗಳು ಸಂಪೂರ್ಣವಾಗಿ ಹತೋಟಿಗೆ ತೆಗೆದುಕೊಂಡ ನಂತರ ಮನಸ್ಸು ತಾನಾಗಿಯೇ ಪ್ರತಿ ಪರಿಸ್ಥಿತಿಗೂ ಧನಾತ್ಮಕವಾಗಿ ಪ್ರತಿಕ್ರಿಯಿಸುತ್ತದೆ.

**ಕನ್ಯಾ** ನೀವು ಚೈತನ್ಯದಿಂದ ತುಂಬಿರುತ್ತೀರಿ ಮತ್ತು ಇಂದು ಅಸಾಮಾನ್ಯವಾದದ್ದೇನಾದರೂ ಸಾಧಿಸುತ್ತೀರಿ. ಇಂದು ನೀವು ನಿಮ್ಮ ಮನೆಯ ಹಿರಿಯ ಜನರಿಂದ ಹಣವನ್ನು ಉಳಿಸುವ ಬಗ್ಗೆ ಯಾವುದೇ ಸಲಹೆಯನ್ನು ತೆಗೆದುಕೊಳ್ಳಬಹುದು, ಆ ಸಲಹೆಗೆ ಜೀವನದಲ್ಲಿ ಸ್ಥಾನವನ್ನು ಸಹ ನೀಡಬಹುದು.

**ತುಲಾ** ಆರೋಗ್ಯ ದೃಷ್ಟಿಯಿಂದ ಉತ್ತಮವಾದ ದಿನ. ನಿಮ್ಮ ಹರ್ಷಚಿತ್ತದ ಮನಸ್ಸು ರಾಜ್ಯದ ನೀವು ಬಯಸಿದ ಟಾನಿಕ್ ನೀಡುತ್ತದೆ ಮತ್ತು ನಿಮಗೆ ಆತ್ಮವಿಶ್ವಾಸ ತರುತ್ತದೆ. ಹೆಚ್ಚುವರಿ ಹಣವನ್ನು ರಿಯಲ್ ಎಸ್ಟೇಟ್‌ನಲ್ಲಿ ಹೂಡಿಕೆ ಮಾಡಬೇಕು. ನಿಮ್ಮ ಸ್ನೇಹಿತರೊಂದಿಗೆ ಇಂದು ಹೊರಗೆ ಹೋಗಬೇಕು.

**ವೃಶ್ಚಿಕ** ನೀವು ವ್ಯಾಯಾಮದ ಮೂಲಕ ನಿಮ್ಮ ತೂಕವನ್ನು ನಿಯಂತ್ರಿಸಬಹುದು. ಹಣ ನಿಮ್ಮ ಕೈಗಳ ಮೂಲಕ ಸುಲಭವಾಗಿ ಜಾರಿಹೋದರೂ ನಿಮ್ಮ ಅದೃಷ್ಟದ ತಾರೆಗಳು ನಿಮಗೆ ಹಣಕಾಸು ಸುಲಭವಾಗಿ ದೊರಕುವಂತೆ ಮಾಡುತ್ತದೆ. ಕುಟುಂಬದಲ್ಲಿ ಹೊಸ ಆಗಮನ ಸಂಭ್ರಮಾಚರಣೆ, ಆನಂದದ ಕ್ಷಣಗಳನ್ನು ತೆರೆದಿಡುತ್ತದೆ.

**ಧನಸ್ಸು** ನಿಮ್ಮ ಕೆಟ್ಟ ಚಟಗಳು ನಿಮ್ಮನ್ನು ನಾಶಗೊಳಿಸುತ್ತವೆ. ಆರ್ಥಿಕ ಸಮಸ್ಯೆ ರಚನಾತ್ಮಕವಾಗಿ ಯೋಚಿಸುವ ನಿಮ್ಮ ಸಾಮರ್ಥ್ಯವನ್ನು ಹಾಳುಮಾಡುತ್ತದೆ. ಹಳೆಯ ಸಂಪರ್ಕಗಳು ಮತ್ತು ಸಂಬಂಧಗಳ ಪುನಶ್ಚೇತನಕ್ಕೆ ಒಳ್ಳೆಯ ದಿನ. ಪ್ರಣಯದ ನೆನಪುಗಳು ನಿಮ್ಮ ದಿನವನ್ನು ಆಕ್ರಮಿಸುತ್ತವೆ.

**ಮಕರ** ನಿಮ್ಮ ಸಂಗಾತಿಯ ಆರೋಗ್ಯ, ಒತ್ತಡ, ಆತಂಕಕ್ಕೆ ಕಾರಣವಾಗಬಹುದು ಬುದ್ಧಿವಂತಿಕೆಯಿಂದ ಹೂಡಿಕೆ ಮಾಡಿ. ನಿಮ್ಮ ಸಂಗಾತಿಯೊಡನೆ ಒಂದು ಉತ್ತಮ ತಿಳುವಳಿಕೆ ಮನೆಯಲ್ಲಿ ಸಂತೋಷ–ಶಾಂತಿ, ಸಮೃದ್ಧಿಯನ್ನು ತರುತ್ತದೆ. ನೀವು ಹಂಚಿಕೊಂಡ ಉತ್ತಮ ಸಮಯವನ್ನು ನೆನಪಿಸಲು ನಿಮ್ಮ ಸ್ನೇಹವನ್ನು ನೆನಪು ಮಾಡಿಕೊಳ್ಳುವ ಸಮಯ.

**ಕುಂಭ** ಆಕರ್ಷಕವಾದ, ನಿಮ್ಮನ್ನು ಶಾಂತವಾಗಿರಿಸುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಿ. ಇಂವು ನಿಮಗೆ ನಿಮ್ಮ ಸಹೋದರ, ಸಹೋದರಿಯ ಸಹಾಯದಿಂದ ಹಣದ ಲಾಭವಾಗುವ ಸಾಧ್ಯತೆ ಇದೆ ಕುಟುಂಬದಲ್ಲಿ ನಿಮ್ಮ ಸರ್ವಾಧಿಕಾರಿ ಧೋರಣೆಯನ್ನು ಬದಲಾಯಿಸಿಕೊಳ್ಳಲು ಇದು ಒಳ್ಳೆಯ ಸಮಯ.

**ಮೀನ** ಮಾನಸಿಕ ಶಾಂತಿಗಾಗಿ ನಿಮ್ಮ ಒತ್ತಡವನ್ನು ಪರಿಹರಿಸಿ. ನಿಮ್ಮ ಯಾವುದೇ ಹಳೆಯ ಸ್ನೇಹಿತ ಇಂದು ವ್ಯಾಪಾರದಲ್ಲಿ ಲಾಭಗಳಿಸಲು ನಿಮಗೆ ಸಲಹೆ ನೀಡಬಹುದು, ನೀವು ಈ ಸಲಹೆಯನ್ನು ಅನುಸರಿಸಿದರೆ, ನೀವು ಖಂಡಿತವಾಗಿಯೂ ಹಣವನ್ನು ಗಳಿಸುವಿರಿ. ಸಂಜೆ ಸ್ನೇಹಿತರೊಡನೆ ಹೋಗಿ, ಇದು ತುಂಬ ಒಳ್ಳೆಯದನ್ನು ಮಾಡುತ್ತದೆ.

# ಮಕ್ಕಳಲ್ಲಿನ ರಕ್ತಹೀನತೆ ಇಂದೇ ತಡೆಗಟ್ಟಿ: ಬಾಲಪ್ಪ ನಾಯಕ

• ಉದಯವಾಹಿನಿ, ಸಿಂಧನೂರು

ಜಿಲ್ಲಾಡಳಿತ ಜಿಲ್ಲಾ ಪಂಚಾಯತ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು ಮತ್ತು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಿಂಧನೂರು ಪ್ರಾಥಮಿಕ ಆರೋಗ್ಯ ಕೇಂದ್ರ ಜವಳಗೇರಾ ಇವರ ಸಂಯುಕ್ತ ಆಶ್ರಯದಲ್ಲಿ ಅನಿಮಿಯಾ ಮುಕ್ತ ಭಾರತ ಸಮರೋಪಾಧಿ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು ಸ್ಥಳೀಯ ಅಂಗನವಾಡಿ ಕೇಂದ್ರದಲ್ಲಿ ನಂತರ ಕಾರ್ಯಕ್ರಮದ ಕುರಿತು ಮಾತನಾಡಿದ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ಅವರು ದೇಹದ ರಕ್ತದ ಕಣದಲ್ಲಿ ರಕ್ತಹೀನತೆ ಹಿಮೋಗ್ಲೋಬಿನ್ ಅಂಶದ ಕೊರತೆಯನ್ನು ರಕ್ತಹೀನತೆ ಎನ್ನುತ್ತಾರೆ. ಮಕ್ಕಳಿಗೆ ಸರಿಯಾದ ಪ್ರಮಾಣದಲ್ಲಿ ಉತ್ತಮವಾಗಿರುವಂತ ಪೌಷ್ಟಿಕ ಆಹಾರವನ್ನು ನೀಡಬೇಕು ಆಹಾರ ಪದಾರ್ಥದಲ್ಲಿ ಹಿಮೋಗ್ಲೋಬಿನ್ ಪ್ರಮಾಣ ಹೆಚ್ಚಿರುವ ಹಸಿರು ತರಕಾರಿ ಕಾಯಿಪಲ್ಲೆ



☛ ಉದಯವಾಹಿನಿ ಚಿತ್ರ

ಮೊಳಕೆ ಬರಿಸದ ಕಾಳು ಬೆಲ್ಲ, ಶೇಂಗಾದಿಂದ ತಯಾರಿಸಿದ ಆಹಾರ ಇನ್ನು ಮುಂತಾದ. ಹಸಿರು ಆಹಾರ ಪದಾರ್ಥಗಳಲ್ಲಿ ಕಬ್ಬಿಣಾಂಶದ ಪ್ರಮಾಣ ಹೆಚ್ಚಿರುತ್ತದೆ ಅದಕ್ಕಾಗಿ ತಾಯಂದಿರು ತಮ್ಮ ಮಕ್ಕಳಿಗೆ ಕಬ್ಬಿಣಾಂಶ ಹೆಚ್ಚಿರುವ ಆಹಾರ ಪದ್ಧತಿಯನ್ನು ರೂಢಿಸಿಕೊಳ್ಳಿ, ಗರ್ಭಿಣಿಯರು ಹಾಗೂ ಬಾಣಂತಿಯರು ತಮ್ಮ

> ಮನುಷ್ಯನ ದೇಹದಲ್ಲಿ ಚೈತನ್ಯ ಮತ್ತು ದೇಹದ ಬೆಳವಣಿಗೆಗೆ ಹಿಮೋಗ್ಲೋಬಿನ್ ಅಂಶ ಅಗತ್ಯವಾಗಿದೆ ಡೆಂಗ್ಯೂ ಜ್ವರ ಮಲೇರಿಯಾ ಜಂತು ಹುಳುವಿನ ಭಾದೆಯಿಂದ ದೇಹದಲ್ಲಿ ಹಿಮೋಗ್ಲೋಬಿನ್ ಅಂಶ ಕಡಿಮೆಯಾಗಲು ಕಾರಣವಾಗುತ್ತದೆ ಹಿಮೋಗ್ಲೋಬಿನ್ ಅಂಶ ಕಡಿಮೆಯಾಗುವುದರಿಂದ ದೇಹದ ಶಕ್ತಿ ಕುಂದಿ ಇನ್ನಿತರ ಖಾಯಿಲೆಗಳು ಬರುವ ಸಾಧ್ಯತೆ ಹೆಚ್ಚರುತ್ತದೆ ಅದಕ್ಕಾಗಿ ಸಮತೋಲನ ಆಹಾರ ಸೇವನೆ ಮಾಡಬಹುದು ಅವಶ್ಯವಾಗಿದೆ.
>
> – ರಾಧಾ
>
> ಹಿರಿಯ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ

ಗರ್ಭದ ಅವಧಿಯಲ್ಲಿ, ಬಾಣಂತಿ ಅವಧಿಯಲ್ಲಿ ಅಧಿಕ ಪ್ರಮಾಣದಲ್ಲಿ ಹಿಮೋಗ್ಲೋಬಿನ್ ಅಂಶ 12 ಗ್ರಾಂ ಮಹಿಳೆಯರಲ್ಲಿ, 14 ಗ್ರಾಂ ಹಿಮೋಗ್ಲೋಬಿನ್ ಪುರುಷರಲ್ಲಿ ಇರಬೇಕಾಗುತ್ತದೆ ಇದರಿಂದ ದೈಹಿಕ, ಮಾನಸಿಕದ ಆರೋಗ್ಯದ ಬೆಳವಣಿಗೆ ವೃದ್ಧಿಯಾಗುತ್ತದೆ ಅದಕ್ಕಾಗಿ ತಾಯಂದಿರು ಪ್ರಸವಪೂರ್ವ, ಪ್ರಸವ ನಂತರದ ಆರೈಕೆಯಲ್ಲಿ ಹಿಮೋಗ್ಲೋಬಿನ್‌ಅಂಶ ಹೆಚ್ಚಾಗಿರುವ ಆಹಾರವನ್ನು ಸೇವನೆ ಮಾಡುವುದು ಅವಶ್ಯವಾಗಿದೆ ಎಂದರು.

ಈ ಸಂದರ್ಭದಲ್ಲಿ ಲಿಂಗಮ್ಮ, ರಾಧಾ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳು ಮಕ್ಕಳ, ಗರ್ಭಿಣಿಯರ ಸುಮಾರು 55 ಮಕ್ಕಳು ಗರ್ಭಿಣಿಯರ ಮತ್ತು ಬಾಣಂತಿಯರ ಹಿಮೋಗ್ಲೋಬಿನ್ ಅಂಶದ ಪ್ರಮಾಣವನ್ನು ಪರೀಕ್ಷೆ ಮಾಡಿದರು. ಈ ಸಮಯದಲ್ಲಿ ಅಂಗನವಾಡಿ ಕಾರ್ಯಕರ್ತರಾದ ಆರೋಗ್ಯಮ್ಮ ಆಶಾ ಕಾರ್ಯಕರ್ತರು ಸುಜಾತಾ ಉಪಸ್ಥಿತರಿದ್ದರು.

# ಒಳಮೀಸಲಾತಿ ಜಾರಿ ವಿಳಂಬ ನೀತಿ ಖಂಡನೀಯ

## ಮಾದಿಗ ಜಾತಿ ಉಪಜಾತಿ ಸಂಘಟನೆಗಳ ಒಕ್ಕೂಟದಿಂದ ಟಮಟೆ ಚಳುವಳಿ

• ಉದಯವಾಹಿನಿ, ಚಿಂಚೋಳಿ



☛ ಉದಯವಾಹಿನಿ ಚಿತ್ರ



**ದಬ್ಬಾಳಿಕೆ ಮಾಡಲು ಸಮಯ ಅವಕಾಶ**

2024 ಆಗಸ್ಟ್ ತಿಂಗಳಲ್ಲಿ ಸುಪ್ರೀಂಕೋರ್ಟ್ ನ್ಯಾಯಾಲಯವು ಒಳಮೀಸಲಾತಿ ನೀಡಲು ಆಯಾ ರಾಜ್ಯ ಸರ್ಕಾರಕ್ಕೆ ಅಧಿಕಾರವಿದ್ದು ಒಳಮೀಸಲಾತಿ ಜಾರಿ ಮಾಡುವಂತೆ ಆದೇಶ ಹೊರಡಿಸಿದರು ಕಳೆದ ಒಂದು ವರ್ಷದಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಸರ್ಕಾರವು ಕುಂಟುನೆಪ ಹೇಳುತ್ತಾ ವಿಳಂಬ ನೀತಿ ಅನುಸರಿಸುತ್ತಿದೆ ಎಂದು ಆರೋಪಿ ಕರ್ನಾಟಕ ಮಾದಿಗ ಜಾತಿ ಉಪಜಾತಿ ಸಂಘಟನೆಗಳ ಒಕ್ಕೂಟದಿಂದ ತಹಶೀಲ್ ಕಛೇರಿ ಎದುರು ಟಮಟೆ ಚಳುವಳಿ ನಡೆಸಿ ತಹಶೀಲ್ದಾರ್ ಸುಬ್ಬಣ್ಣ ಜಮಖಂಡಿ ಮೂಲಕ ಒಳಮೀಸಲಾತಿ ಶೀಘ್ರದಲ್ಲೇ ಜಾರಿಗೊಳಿಸುವಂತೆ ಆಗ್ರಹಿಸಿ ಸರ್ಕಾರಕ್ಕೆ ಮನವಿಪತ್ರ ಸಲ್ಲಿಸಿದರು. ರಾಜ್ಯ ಮಾದಿಗ ಜಾತಿ ಉಪಜಾತಿ ಸಂಘಟನೆಗಳ ಒಕ್ಕೂಟದ ಸಂಚಾಲಕ ಗೋಪಾಲರಾವ ಕಟ್ಟಿಮನಿ ಮಾತನಾಡಿ ನಾಗಮೋಹನ್ ದಾಸ್ ವರದಿ ಸಲ್ಲಿಸಿದ ತರುವಾಯ ಕರೆದಿದ್ದ ವಿಶೇಷ ಸಚಿವ ಸಂಪುಟ ಸಭೆಯನ್ನು ಆಗಸ್ಟ್19ಕ್ಕೆ ಮುಂದೆ ಹಾಕಿರುವುದು ಒಳಮೀಸಲಾತಿ ವಿರೋಧಿಗಳಿಗೆ ಸರ್ಕಾರದ ಮೇಲೆ ದಬ್ಬಾಳಿಕೆ ಮಾಡಲು ಸಮಯವಕಾಶ ನೀಡಿದಂತಾಗಿದೆ.

ನ್ಯಾ.ನಾಗಮೋಹನ್ ದಾಸ್ ಆಯೋಗ ರಚಿಸುವುದು ಸಮಾಜದ ಬೇಡಿಕೆ ಇರಲಿಲ್ಲ,ಆಯೋಗದ ಕಾರ್ಯಕಲಾಪದಲ್ಲಿ ಒಂದೇ ಗುಂಪಿನ ಅಧಿಕಾರಿಗಳೇ ಕಾರ್ಯನಿರ್ವಹಿಸಿದ್ದಾರೆ,ಈಗ ಅದೇ ಜನ ವರದಿ ಬಗ್ಗೆ ತಕರಾರು ತೆಗೆದು ಸಂಪುಟ ಉಪ ಸಮಿತಿ ರಚಿಸುವ ಹುನ್ನಾರ ಹಿಂದೆ ಸಂಕ್ರಿಯರಾಗಿದ್ದಾರೆ,ಇದು ಒಳಮೀಸಲಾತಿ ಕುರಿತು ಕಾಂಗ್ರೇಸ್ ಸರಕಾರ ವಿಳಂಬ ನೀತಿ ನಿಧಾನ ದ್ರೋಹದ ಮುಂದುವರೆದ ಭಾಗವಾಗಿದೆ. ನ್ಯಾ.ನಾಗಮೋಹನ್ ದಾಸ್ ಆಯೋಗದ ಶಿಫಾರಸ್ಸಿನಲ್ಲಿ ಆದಿ ಕರ್ನಾಟಕ ಜನಸಂಖ್ಯೆ 1,47,199 ಆದಿ ದ್ರಾವಿಡ 3,20,641,ಆದಿ ಆಂಧ್ರ 7114, ಇದನ್ನು 'ಇ' ಪ್ರವರ್ಗದಲ್ಲಿ ಗುರುತಿಸಲಾಗಿದೆ, ಈಗ 'ಸಿ'ಗುಂಪಿಗೆ ಇಡಿಯಾಗಿ 'ಇ'ಗುಂಪಿಗೆ ಸೇರಿಸುವ ಹುನ್ನಾರ ನಡೆದಿದೆ, 'ಇ'ಗುಂಪಿನಲ್ಲಿ ಮೂಲ ಜಾತಿ ಹೇಳದೆ ಆದಿ ದ್ರಾವಿಡ ಎಂದು ಗುರುತಿಸಿಕೊಂಡವರು 3,20,641 ಜನ ಇದ್ದಾರೆ ಇದರಲ್ಲಿ ಬಹುತೇಕ ಜನ ಪೌರ ಕಾರ್ಮಿಕ ವೃತ್ತಿಯಲ್ಲಿದ್ದು ಮಾದಿಗೆ ಸಂಬಂಧಿತ ಜಾತಿಯವರಾಗಿದ್ದಾರೆ ಈ ಬಗ್ಗೆ ಸರಕಾರ ಎಚ್ಚರಿಕೆಯಿಂದ ಹೆಜ್ಜೆ ಇಡಬೇಕು. ಸರಕಾರದ ವಿಳಂಬ ನೀತಿಯ ಸಮಾಯವಕಾಶ ಬಳಸಿಕೊಂಡು ನಮ್ಮ ಸಹೋದರ ಗುಂಪು ಬಲ– ಬಲ ಪ್ರದರ್ಶನಕ್ಕೆ ಇಳಿದಿರುವುದು ಒಳ್ಳೆಯ ಬೆಳವಣಿಗೆ ಅಲ್ಲ, ಸರಕಾರದಲ್ಲಿ ಪ್ರಭಾವಿ ಸಚಿವರು ತಮ್ಮವರ ಇದ್ದರೂ ಅನಗತ್ಯವಾಗಿ ಬೀದಿಗಳಿದು ದ್ವೇಶ ಭಾಷಣ ಮಾಡುವುದು ಪರಸ್ಪರ ಅಂತರ ಹೆಚ್ಚು ಮಾಡುತ್ತಿದೆ,ಇದೊಂದು ಆತಂಕಕಾರಿ ಬೆಳವಣಿಗೆಯಾಗಿದೆ. ಸಿಎಂನವರು ನ್ಯಾ.ಕಾಂತರಾಜ್ ಆಯೋಗದ ಹೆಸರಿನಲಿ 165 ಕೋಟಿ ರೂ, ದುಂದುವೆಚ್ಚ ಈಗ ನ್ಯಾ.ನಾಗಮೋಹನದಾಸ್ ವರದಿಯನ್ನು ತಮ್ಮ ಮೂಗಿನ ನೇರಕ್ಕೆ ತಿದ್ದುಪಡಿ ಮಾಡಿಕೊಳ್ಳುವ ಹುನ್ನಾರ ನಡೆದಿವೆ ಇದೆಲ್ಲವನ್ನು ಅಧ್ಯಾಯನ ಮಾಡಿಯೇ ಮಾಧುಸ್ವಾಮಿ ಸಮಿತಿ ಬಲ ಗುಂಪಿಗೆ 5.5,ಭೋವಿ,ಬಂಜಾರ ಗುಂಪಿಗೆ 4.5.ಮೀಸಲಾತಿ ನಿಗಧಿಪಡಿಸಲಾಗಿತ್ತು. ಬೀಗುಮಾನ ಬಿಟ್ಟು ಸರಕಾರ ಮಾಧುಸ್ವಾಮಿ ವರದಿ ಜಾರಿ ಮಾಡುವುದು ಒಳ್ಳೆಯದು,ಇಲ್ಲವಾದರೆ ಆಯೋಗಗಳು ಹೇಳುವಂತೆ ಮಾದಿಗರಿಗೆ ಶೇ.6ರಷ್ಟು ಪ್ರತ್ಯೇಕ ಮೀಸಲಾತಿ ನೀಡಿ ಉಳಿದಿದು ನಿಧಾನಗತಿಯಲ್ಲಿ ಮಾಡಿ, ಒಳಮೀಸಲಾತಿ ಜಾರಿ ಆಗುವರೆಗೂ ಉದ್ಯೋಗ ಅವಕಾಶಗಳು ಸ್ಥಗಿತ ಆಗಿರುವುದರಿಂದ ಬೇರೆ ಸಮುದಾಯಗಳು ಸಿಎಂ ಮೇಲೆ ವಿಳಂಬ ನೀತಿಯ ಧೋರಣೆಯ ಬಗ್ಗೆ ಜನತೆ ರೋಷಿ ಹೋಗಿದ್ದಾರೆ, ಉದ್ಯೋಗ ಅವಕಾಶಗಳನ್ನು ನಿಲ್ಲಿಸಿ ಎಲ್ಲಾ 3 ಗುಂಪಿನ ದಲಿತರನ್ನು ಬೀದಿ ಬರುವಂತೆ ಮಾಡಿರುವುದು ಸಿದ್ದರಾಮಯ್ಯ ಘನ ಸಾಧನೆಯಾಗಿದೆ. ಕಾಲಹರಣದ ನೀತಿ ಬಿಟ್ಟು ಒಳಮೀಸಲಾತಿ ಜಾರಿ ಮಾಡಿ 19 ರಂದು ಅಂತಿಮ ನಿರ್ಧಾರ ಪ್ರಕಟಿಸಿ ಒಳಮೀಸಲಾತಿ ಘೋಷಿಸಬೇಕು ಇಲ್ಲಾದಿದ್ದರೆ ಬರುವ ದಿನಗಳಲ್ಲಿ ಉಗ್ರ ಹೋರಾಟ ಮಾಡುವ ಮೂಲಕ ರಾಜ್ಯಾದ್ಯಂತ ಬಂದ್ ಗೆ ಕರೆ ನೀಡಲಾಗುವುದು ಎಂದರು. ನರಸರೆಡ್ಡಿ ಕಿವಣೋರಕರ್, ಶಾಮರಾವ ಓಂಕಾರ, ವಿಜಯರಾಜ ಕೊಡಂಪಳ್ಳಿ, ವಿಜಯಕುಮಾರ ಶಾಬಾದಿ, ಪಂಡರಿ ಶೇರಿಕಾರ, ಅಶ್ವಥ ಕಟ್ಟಿಮನಿ, ಮೌನೇಶ ಐನಾಪೂರ, ಮೋಹನ ದಂಡೀನ, ನಾಗೇಶ, ಪ್ರಶಾಂತ ಕಟ್ಟಿಮನಿ, ಅನೀಲ ಮಟ್ಟಿ, ವಸಂತ, ಉಮೇಶ ಸಿಂಗೆ, ಸಾಗರ ಆನಂದಿ, ವಿಶಾಲ ಸುಗಂಧಿ, ಜಾನ್ಸನ್, ಜಗನ್ನಾಥ ಹೊಸಮನಿ, ಅನೀಲ ರುಸ್ತಾಂಪೂರ, ಸುಭಾಷ್, ಶರಣಪ್ಪ, ವಿಜಯಕುಮಾರ ನರನಾಳ ಅನೇಕರಿದ್ದರು.

> **ಯಾರದೋ ಆಣತಿಗೆ ತಕ್ಕಂತೆ ನಿರ್ಧಾರ**
>
> ಸಿದ್ದರಾಮಯ್ಯನವರು 2013 ರಿಂದ 2018 ರವರೆಗೆ ಸಿಎಂ ಆಗಿದ್ದಾಗ ಇದೇ ವಿಳಂಬ ನೀತಿ ನಡೆಸಿದ್ದು ಈಗಲೂ ಅದನೇ ಮುಂದುವರೆಸಿದ್ದಾರೆ, ಸಿದ್ದರಾಮಯ್ಯ ಯಾರದೋ ಆಣತಿಗೆ ತಕ್ಕಂತೆ ನಿರ್ಧಾರ ತೆಗೆದುಕೊಳ್ಳುತ್ತಿರುವುದನ್ನು ನೋಡಿದರೇ,ನ್ಯಾ.ನಾಗಮೋಹನ್ ದಾಸ್ ವರದಿಗೂ ನ್ಯಾ.ಕಾಂತರಾಜು ವರದಿಗೆ ಆದ ಗತಿಯೇ ಆಗುತ್ತದೆಯೋ ಎಂಬ ಆಂತಕವಿದೆ. ಸಿದ್ದರಾಮಯ್ಯ ನವರು ಚುನಾವಣಾ ಸಂದರ್ಭ ಕಾಂಗ್ರೇಸ್ ಸರ್ಕಾರ ಅಧಿಕಾರಕ್ಕೆ ಬಂದರೆ ಮೊದಲ ಸಂಪುಟ ಸಭೆಯಲ್ಲಿ ಒಳಮೀಸಲಾತಿ ನಿರ್ಣಯ ಘೋಷಿಸುವುದಾಗಿ ಹೇಳಿದರು 2ವರ್ಷ 3ತಿಂಗಳು ಕಳೆದರೂ ಹಳೆಯ ಪದ್ಧತಿ.

# ಪಿಒಪಿ ಮೂರ್ತಿಗಳಿಗೆ ನಿಷೇಧ ಗಣೇಶ ಪ್ರತಿಷ್ಠಾಪನೆಗೆ ಅನುಮತಿ ಕಡ್ಡಾಯ

• ಉದಯವಾಹಿನಿ, ಚಿತ್ರದುರ್ಗ

ಹೊಳಲ್ಕೆರೆ ಪುರಸಭೆ ವ್ಯಾಪ್ತಿಯಲ್ಲಿ ಪಿಒಪಿ, ರಾಸಾಯನಿಕ ಬಣ್ಣ ಲೇಪಿತ ಗಣೇಶ ಮೂರ್ತಿಗಳ ತಯಾರಿಕೆ ಹಾಗೂ ಮಾರಾಟವನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಸಂಘ ಸಂಸ್ಥೆಗಳು ಸಾರ್ವಜನಿಕವಾಗಿ ಗಣೇಶ ಪ್ರತಿಷ್ಠಾಪನೆ ಮಾಡಲು ನಗರ ಸಭೆ, ಪೊಲೀಸ್, ಅಗ್ನಿ ಶಾಮಕ ಸೇರಿದಂತೆ ಸಕ್ಷಮ ಪ್ರಾಧಿಕಾರಗಳಿಂದ ಅನುಮತಿ ಪಡೆಯುವುದು ಕಡ್ಡಾಯವಾಗಿದೆ. ಪ್ರತಿಷ್ಠಾಪನೆ ಸ್ಥಳಗಳಲ್ಲಿ ಏಕ ಬಳಕೆಯ ಪ್ಲಾಸ್ಟಿಕ್‌ನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ.

ಪ್ರತಿನಿತ್ಯ ಉತ್ಪನ್ನವಾಗುವ ತ್ಯಾಜ್ಯವನ್ನು ಪುರಸಭೆ ಕಸ ಸಂಗ್ರಹ ವಾಹನಕ್ಕೆ ನೀಡಬೇಕು. ಗಣೇಶ ವಿಸರ್ಜನೆಗೆ ತಾಲ್ಲೂಕು ಪಂಚಾಯಿತಿ ಹಿಂಭಾಗದಲ್ಲಿರುವ ಎನ್ ಇಎಸ್ ಕಾಲೋನಿಯಲ್ಲಿ ವ್ಯವಸ್ಥೆ ಕಲ್ಪಿಸಲಾಗಿದೆ.

ಪಿಒಪಿ, ರಾಸಾಯನಿಕ ಬಣ್ಣಗಳ ವಿಗ್ರಹ ಮಾರಾಟ ಹಾಗೂ ನಿಗದಿತ ಸ್ಥಳ ಹೊರತು ಪಡಿಸಿ ಗಣೇಶ ವಿರ್ಸಜನೆ ಮಾಡುವುದು ಕಂಡುಬಂದರೆ ದಂಡ ವಿಧಿಸಿ ಕಾನೂನು ಕ್ರಮ ಕೈಗೊಳ್ಳಲಾಗುವುದು. ಸಾರ್ವಜನಿಕರು ಪರಿಸರ ಸ್ನೇಹಿ, ಬಣ್ಣ ರಹಿತ, ಮಣ್ಣಿನ ಮೂರ್ತಿಗಳನ್ನು ಪ್ರತಿಷ್ಠಾಪಿಸುವಂತೆ ಹೊಳಲ್ಕೆರೆ ಪುರಸಭೆ ಪ್ರಕಟಣೆ ತಿಳಿಸಿದೆ.

# 2004ರಲ್ಲಿ ನನ್ನ ಸೋಲಿಗೆ ನಕಲಿ ವೋಟ್ ಕಾರಣ; ಜಿ.ಟಿ.ಪಾಟೀಲ

• ಉದಯವಾಹಿನಿ, ಕೆರೂರ

2004ರ ವಿಧಾನಸಭೆ ಚುನಾವಣೆಯಲ್ಲಿ ನನ್ನ ಸೋಲಿಗೆ ನಕಲಿ ಮತದಾನ ಕಾರಣ ಎಂದು ಶಾಸಕ ಜೆ.ಟಿ. ಪಾಟೀಲ ಆರೋಪಿಸಿದರು. ಸಮೀಪದ ಕಾಡರಕೊಪ್ಪ ಗ್ರಾಮದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚುನಾವಣೆಯಲ್ಲಿ 35,400 ಮತಗಳ ಅಂತರದಿಂದ ಸೋಲು ಕಂಡಿದ್ದೆ. ಅಂದಿನ ಜಿಲ್ಲಾಧಿಕಾರಿ ಶಿವಸೇಲ್ ಅವರು ಮತದಾರರ ಪಟ್ಟಿಯನ್ನು ಪರಿಷ್ಕರಿಸಿದಾಗ ನಕಲಿ ಮತದಾರರು ಬೀಳಗಿ ಕ್ಷೇತ್ರದಲ್ಲಿ ಇರುವುದು ಕಂಡು ಬಂದಿತ್ತು. ಈ ನಕಲಿ ಮತಗಳು ಅಂದಿನ ನನ್ನ ಸೋಲಿಗೆ ಕಾರಣವಾಗಿದ್ದವು ಎಂದು ಅಸಮಾಧಾನ ವ್ಯಕ್ತಪಡಿಸಿದರು. ಅಂದಿನ ಮತದಾರರ ಪಟ್ಟಿ ಇಂದಿಗೂ ಜಿಲ್ಲಾಡಳಿತ ಭವನದಲ್ಲಿ ಭದ್ರವಾಗಿದೆ. ನಕಲಿ ಮತದಾರರನ್ನು ಸೃಷ್ಟಿಸುವುದು ಪ್ರಜಾಪ್ರಭುತ್ವವನ್ನು ಕಗ್ಗೋಲೆ ಮಾಡಿದಂತೆ. ಈ ಬಗ್ಗೆ ನಮ್ಮ ನಾಯಕ ರಾಹುಲ್ ಗಾಂಧಿ ಹೋರಾಟ ನಡೆಸಿದ್ದಾರೆ ಎಂದು ಹೇಳಿದರು.

# ಟೋಲ್ ಶುಲ್ಕ ಬೇಡ: ಕರವೇ ಒತ್ತಾಯ

• ಉದಯವಾಹಿನಿ, ರಾಣೆಬೆನ್ನೂರು



ಇಲ್ಲಿನ ಚಳಗೇರಿ ಟೋಲ್‌ನಲ್ಲಿ ಟೋಲ್ ಸುತ್ತಮುತ್ತಲಿನ ಕಾರು, ಸಣ್ಣ ಗೂಡ್ಸ್ ವಾಹನಗಳಿಗೆ ಹೋಗಿ ಬರುವ ಎರಡೂ ಕಡೆ ಟೋಲ್ ವಸೂಲಿ ಮಾಡಬಾರದು. ಸುತ್ತಮುತ್ತಲಿನ ಗ್ರಾಮಗಳ ವಾಹನಗಳ ಮಾಲೀಕರಿಗೆ ಬಾರಿ ತೊಂದರೆಯಾಗುತ್ತಿದೆ. ಕೂಡಲೇ ಸುತ್ತಮುತ್ತಲಿನ ಗ್ರಾಮಗಳ ಕಾರು, ಗೂಡ್ಸ್ ವಾಹನಗಳಿಗೆ ಟೋಲ್ ಫ್ರೀ ಮಾಡಬೇಕೆಂದು ಒತ್ತಾಯಿಸಿ ಪ್ರತಿಭಟನೆ ನಡೆಸಿ ಟೋಲ್ ವ್ಯವಸ್ಥಾಪಕ ಕೇಶವರಡ್ಡಿ ಅವರಿಗೆ ಮನವಿ ಸಲ್ಲಿಸಿದರು.

ಕರವೇ ತಾಲ್ಲೂಕು ಘಟಕದ ಅಧ್ಯಕ್ಷ ಕೊಟ್ರೇಶ ಗುತ್ತೂರು ಮಾತನಾಡಿ, ಈ ಹಿಂದೆ ಇದ್ದ ಟೋಲ್ ಗುತ್ತಿಗೆದಾರರು ಚಳಗೇರಿ ಟೋಲ್ ಸುತ್ತ ಮುತ್ತಲಿನ ಗ್ರಾಮಗಳ ವಾಹನಗಳಿಗೆ ಟೋಲ್ ವಸೂಲಿಮಾಡುತ್ತಿದ್ದಿಲ್ಲ. ಈಗ ಬಂದಿರುವ ಗುತ್ತಿಗೆದಾರರು ಟೋಲ್ ವಸೂಲಿ ಮಾಡುತ್ತಿದ್ದಾರೆ. ಇದರಿಂದ ಟೋಲ್ ಸುತ್ತಮುತ್ತಲಿನ ಗ್ರಾಮಗಳ ಜನತೆಗೆ ತೊಂದರೆಯಾಗಿದೆ.

ಸಂಬಂಧಿಸಿದ ಅಧಿಕಾರಿಗಳು ಕೂಡಲೇ ಗುತ್ತಿಗೆದಾರರ ಜೊತೆಗೆ ಚರ್ಚಿಸಿ ಸುತ್ತಮುತ್ತಲಿನ ಗ್ರಾಮಗಳ ಜನರ ವಾಹನಗಳಿಗೆ ಟೋಲ್ ಫ್ರೀ ಮಾಡಿಸಬೇಕು ಎಂದು ಒತ್ತಾಯಿಸಿದರು. ಕುಮಾರಪಟ್ಟಣ, ಕವಲೆತ್ತು, ಕರೂರು, ನದೀಹಳಹಳ್ಳಿ, ಮಾಕನೂರು ಕ್ರಾಸ್‌ನಿಂದ ಸ್ವರಾಜ್ ಮಜ್ದಾ ವಾಹನಗಳು ಇಟ್ಟಂಗಿ ತುಂಬಿಕೊಂಡು ರಾಣೆಬೆನ್ನೂರಿಗೆ ಹೋಗಿ ಬರಬೇಕಾದರೆ 325 ಟೋಲ್ ಕೊಡಬೇಕಾಗುತ್ತದೆ. ಒಂದು ಗಾಡಿಯ ಬಾಡಿಗೆ 2500 ಇದೆ. ಅದರಲ್ಲಿ 800 ಡಿಸೇಲ್, ಹಮಾಲಿ, ಡ್ರೈವರ್ ಪಗಾರ 300, ಗಾಡಿ ಸವಕಳಿ 500 ಸೇರಿ ಒಟ್ಟು 2400 ಖರ್ಚು ಬರುತ್ತದೆ. ಟೋಲ್‌ಗೆ 325 ಹಣ ಕೊಟ್ಟರೆ ಮಾಲೀಕರು ಬರಿ ಗೈಲಿ ಮನೆಗೆ ಹೋಗಬೇಕಾಗುತ್ತದೆ. ಟೋಲ್ ಸುತ್ತಮುತ್ತಲಿನ ಗ್ರಾಮಗಳ ವಾಹನಗಳಿಗೆ ಉಚಿತವಾಗಿ ಸಂಚರಿಸಲು ಬಿಡಬೇಕು ಎಂದು ಮನವಿ ಮಾಡಿದರು.

# ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಕನ್ನಡ ರಸಪ್ರಶ್ನೆ ಸ್ಪರ್ಧೆ

• ಉದಯವಾಹಿನಿ, ಮುದ್ದೇಬಿಹಾಳ

ಮುದ್ದೇಬಿಹಾಳ ತಾಲ್ಲೂಕಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ತಾಲ್ಲೂಕಿನ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಕನ್ನಡ ರಸಪ್ರಶ್ನೆ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ತಾಲ್ಲೂಕ ಕಸಾಪ ಅಧ್ಯಕ್ಷ ಕಾಮರಾಜ ಬಿರಾದಾರ ಪತ್ರಿಕೆ ಪ್ರಕಟಣೆ ಮೂಲಕ ತಿಳಿಸಿದ್ದಾರೆ. ಈ ಸ್ಪರ್ಧೆ ಆ. 23ರಂದು ಮಧ್ಯಾಹ್ನ 2.00 ಗಂಟೆಗೆ ಮುದ್ದೇಬಿಹಾಳದ ಟಾಪ್ ಇನ್ ಟೌನ್ ಹಾಲ್‌ನಲ್ಲಿ ನಡೆಯಲಿದ್ದು, ತಾಲ್ಲೂಕಿನ ಸರಕಾರಿ, ಅನುದಾನಿತ, ಅನುದಾನರಹಿತ ಪ್ರೌಢಶಾಲೆಗಳ ವಿದ್ಯಾರ್ಥಿಗಳ. ಪ್ರತಿ ಶಾಲೆಯಿಂದ 3 ವಿದ್ಯಾರ್ಥಿಗಳಿಂದ ಕೂಡಿದ ಒಂದು ತಂಡ ಸ್ಪರ್ಧೆಯಲ್ಲಿ ಪಾಲ್ಗೊಳ್ಳಲು ಅವಕಾಶವಿದೆ. ನೊಂದಣಿಗಾಗಿ ಶಾಲೆಗಳ ಮುಖ್ಯಗುರುಗಳು ತಮ್ಮ ತಂಡವನ್ನು ಆ. 20ರ ಸಂಜೆ 5.00 ಗಂಟೆಯೊಳಗಾಗಿ ಕಸಾಪ ಮುದ್ದೇಬಿಹಾಳದ ಸಂಘಟನಾ ಕಾರ್ಯದರ್ಶಿ ಹುಸೇನ್ ಮುಲ್ಲಾ (ಮೊ.9731772677) ಇವರನ್ನು ಸಂಪರ್ಕಿಸಲು ತಿಳಿಸಲಾಗಿದೆ.

ಸ್ಪರ್ಧೆಯಲ್ಲಿ ವಿಜೇತರಿಗೆ ವಿಶೇಷ ಬಹುಮಾನಗಳನ್ನು ನೀಡಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಮೊ. 9611249398, 9741618230 ಸಂಪರ್ಕಿಸಬಹುದು.

ವಿ.ಸೂ: 1. ಪ್ರಶ್ನೆಗಳು ಪ್ರೌಢಶಾಲಾ ವಿದ್ಯಾರ್ಥಿಗಳ ಪಠ್ಯಕ್ರಮ ಹಾಗೂ ಬುದ್ಧಿಮಟ್ಟದ ಆಧಾರದ ಮೇಲೆ ರೂಪಿಸಲ್ಪಟ್ಟಿದ್ದು, ಪ್ರಚಲಿತ ಕನ್ನಡ, ಕನ್ನಡ ಸಾಹಿತ್ಯ, ವಚನಸಾಹಿತ್ಯ, ಕರ್ನಾಟಕಕ್ಕೆ ಸಂಬಂಧಿಸಿದ ವಿಚಾರಗಳನ್ನು ಒಳಗೊಂಡಿರುತ್ತವೆ.
2. ವಿಷಯವಾರು ಗಣಿತ, ವಿಜ್ಞಾನ ರೀತಿಯ ಪ್ರಶ್ನೆಗಳಿರುವುದಿಲ್ಲ.

# ಕಾನೂನು ಉಲ್ಲಂಘನೆ ಮಾಡಿದರೆ ಕಠಿಣ ಕ್ರಮ



☛ ಉದಯವಾಹಿನಿ ಚಿತ್ರ



• ಉದಯವಾಹಿನಿ, ಲಕ್ಷ್ಮೇಶ್ವರ

ಗಣೇಶ ಹಾಗೂ ಈದ್ ಮಿಲಾದ್ ಹಬ್ಬಗಳ ಆಚರಣೆಯಲ್ಲಿ ಶಾಂತಿ ಕದಡುವವರ ವಿರುದ್ಧ ಕಾನೂನಿನ ಪ್ರಕಾರ ಕ್ರಮ ಕೈಗೊಳ್ಳಲಾಗುವುದು. ತಾಲ್ಲೂಕಿನಲ್ಲಿ 185 ಕಡೆ ಸಾರ್ವಜನಿಕ ಗಣೇಶನ ಮೂರ್ತಿಗಳ ಪ್ರತಿಷ್ಠಾಪಿಸಲಾಗುತ್ತಿದ್ದು, ಸಿಸಿ ಕ್ಯಾಮೆರಾ ಅಳವಡಿಸಲಾಗುವುದು. ಗಣಪತಿ ಪೆಂಡಾಲ್‌ಗಳಲ್ಲಿ ಇಸ್ಪೀಟ್ ಆಡಬಾರದು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ ಹೇಳಿದರು. ತಾಲ್ಲೂಕು ಪಂಚಾಯ್ತಿ ಕಾರ್ಯಾಲಯದಲ್ಲಿ ಗಣಪತಿ, ಈದ್ ಮಿಲಾದ್ ಹಬ್ಬದ ಅಂಗವಾಗಿ ನಡೆದ ಶಾಂತಿ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಹಬ್ಬದ ಅಂಗವಾಗಿ ಪೊಲೀಸರೊಂದಿಗೆ ಸ್ವಯಂ ಸೇವಕರಾಗಿ ಸೇವೆ ಸಲ್ಲಿಸುವರಿಗೆ ಸ್ವಾಗತ. 200 ಯುವಕರು ಒಂದೇ ತರನಾದ ಟೀ ಶರ್ಟ್ ಧರಿಸಿ ಸ್ವಯಂ ಸೇವಕರಾಗಬಹುದು. ತಾಲ್ಲೂಕಿನಲ್ಲಿ ಮದ್ಯ ಅಕ್ರಮ ಮಾರಾಟ ತಡೆಗಟ್ಟಲು ಸೂಕ್ತ ಕ್ರಮಕೈಗೊಳ್ಳುತ್ತಿದ್ದೇವೆ' ಎಂದು ತಿಳಿಸಿದರು. ಸೋಮೇಶ ಉಪನಾಳ ಹಾಗೂ ನಿವೃತ್ತ ಶಿಕ್ಷಕ ಪೂರ್ಣಾಜಿ ಖರಾಟೆ ಮಾತನಾಡಿ, ಗಣಪತಿ ಹಬ್ಬ ಹಿಂದೂಗಳ ಪಾಲಿಗೆ ಮಹತ್ವವಾಗಿದ್ದು, ಸಂಭ್ರಮ, ಶಾಂತಿಯಿಂದ ಹಬ್ಬ ಆಚರಿಸಬೇಕು. ಇತ್ತೀಚಿನ ದಿನಗಳಲ್ಲಿ ಹಬ್ಬದ ಆಚರಣೆ ಮಹತ್ವ ಕಳೆದು ಕೊಳ್ಳುತ್ತಿರುವುದು ವಿಷಾದನೀಯ ಎಂದರು.

# ಆದಾಯಕ್ಕಾಗಿ ಬದುಕಬೇಡಿ, ಆದರ್ಶಕ್ಕಾಗಿ ಬದುಕಿ

• ಉದಯವಾಹಿನಿ, ಬಾಗಲಕೋಟೆ



☛ ಉದಯವಾಹಿನಿ ಚಿತ್ರ

ದೇಹ ನಶ್ವರ ಸೇವೆ ಅಮರ. ಕಾಯ ಅಳಿವುದು ಕಾರ್ಯ ಉಳಿವುದು. ಆದಾಯಕ್ಕಾಗಿ ಬದುಕಬೇಡಿ, ಆದರ್ಶಕ್ಕಾಗಿ ಬದುಕಿ ಎಂದು ಶಿವಮೊಗ್ಗ ನಾರಾಯಣ ಗುರು ಮಹಾಸಂಸ್ಥಾನ ಈಡಿಗರ ಗುರುಪೀಠದ ರೇಣುಕಾನಂದ ಸ್ವಾಮೀಜಿ ಹೇಳಿದರು. ನಗರದ ಸಿದ್ಧರಾಮೇಶ್ವರ ಮಹಾಸಂಸ್ಥಾನ ಶರಣಬಸವ ಆಶ್ರಮದಲ್ಲಿ ನಡೆದ ಶ್ರಾವಣ ಪ್ರವಚನದ ಸಾನ್ನಿಧ್ಯವಹಿಸಿ ಮಾತನಾಡಿದ ಅವರು, ವಚನಗಳಲ್ಲಿ ಶರಣ ಜೀವನ ದರ್ಶನವಾಗುತ್ತದೆ. ಗುರುಬೋಧೆಯಿಂದ ಜೀವನಪಥ ಸನ್ಮಾರ್ಗದ ಕಡೆ ಹೋಗುತ್ತದೆ. ಜೀವನ ಬಂಧ ಕಳಚಲು ಭಗವಂತನ ಅನುಬಂಧ ಬೇಕಾಗುತ್ತದೆ. ಶಿವ ಪಥವನ್ನರಿಯಲು ಗುರು ಪಥವೇ ಮೊದಲಾಗಿದೆ ಎಂದರು.

ಧರ್ಮ ಪಥ ತಪ್ಪಿದಾಗ ಜೀವನದ ಶಾಂತಿ, ನೆಮ್ಮದಿ ಕದಡುತ್ತದೆ. ಹಣದ ಹಿಂದೆ ಸಾಗಿ ಸತ್ಯ, ಶುದ್ಧ ಕಾಯಕ ಧರ್ಮ ಮರೆತಿದ್ದೇವೆ. ಶಿವಶರಣ ಜೀವನ ಸ್ಮರಣೆ ಮಾಡುವ ಮೂಲಕ ನಾವೂ ಶರಣರಾಗಬೇಕು. ಮಕ್ಕಳಿಗೆ ಶಿಕ್ಷಣ ಹಾಗೂ ಸಂಸ್ಕಾರ ನೀಡಬೇಕು. ತನ್ಮೂಲಕ ನೈಜವಾದ ಶ್ರೇಷ್ಠ ವಿಕಾಸ ಕಾಣಬಹುದು ಎಂದು ತಿಳಿಸಿದರು. ಭೋವಿ ಗುರುಪೀಠದ ಇಮ್ಮಡಿ ಸಿದ್ದರಾಮೇಶ್ವರ ಸ್ವಾಮೀಜಿ ಮಾತನಾಡಿ, ವಿಭೂತಿ ಧಾರಣೆಯಿಂದ ದುಷ್ಟಶಕ್ತಿಯ ಕಾಟದಿಂದ ತಪ್ಪಿಸಿಕೊಳ್ಳಬಹುದು. ಪಾಪ ಕಳೆದು ಹೋಗುತ್ತದೆ. ವಿಭೂತಿ ಧಾರಣ ಮಾಡಿದವರನ್ನು ನೋಡಿದರೆ ಒಳ್ಳೆಯದಾಗುತ್ತದೆ. ವಿಭೂತಿಗೆ ರೋಗ ನಿವಾರಣ ಶಕ್ತಿ ಇದೆ. ವಿಭೂತಿ ಧಾರಣದಿಂದ ಶರೀರ ಮತ್ತು ಮನಸ್ಸಿನ ಮೇಲೆ ಪ್ರಭಾವ ಆಗುತ್ತದೆ ಎಂದರು. ವಿಭೂತಿ ಪೂಜಾ ಸಾಧನೆಯಾಗದೇ, ಭಕ್ತಿಗೆ, ಮುಕ್ತಿಗೆ ಸಾಧನವಾಗುತ್ತದೆ. ದುರ್ಗುಣ ಸುಟ್ಟು ಜ್ಞಾನ ನೇತ್ರ ಸಾಧಿಸುವುದು ಗೌರವ ಭಾವನೆ ತಂದುಕೊಡುತ್ತದೆ. ಅರಿಷಡ್ವರ್ಗಗಳನ್ನು ಸುಟ್ಟು ದೈವತ್ವವನ್ನು ತಂದುಕೊಡುತ್ತದೆ ಎಂದು ಹೇಳಿದರು.

# ಪಾರದರ್ಶಕ ಆಡಳಿತಕ್ಕೆ ಅಪ್ಪಣಗೌಡ ಬಣ ಬೆಂಬಲಿಸಿ: ಸಚಿವ

• ಉದಯವಾಹಿನಿ, ಸಂಕೇಶ್ವರ

ಉತ್ತಮ, ಪಾರದರ್ಶಕ, ಕ್ರಿಯಾಶೀಲ ಆಡಳಿತದ ಅವಶ್ಯಕತೆಯಿದ್ದು ಹುಕ್ಕೇರಿ ತಾಲ್ಲೂಕು ಗ್ರಾಮೀಣ ವಿದ್ಯುಚ್ಛಕ್ತಿ ಸಹಕಾರ ಸಂಘದ ಚುನಾವಣೆಯಲ್ಲಿ ಅಪ್ಪಣ್ಣಗೌಡ ಪಾಟೀಲ ಅವರ ಬಣವನ್ನು ಬೆಂಬಲಿಸಬೇಕು ಎಂದು ಸಚಿವ ಸತೀಶ ಜಾರಕಿಹೊಳಿ ಹೇಳಿದರು.

ಸಂಕೇಶ್ವರದ ನೇಸರಿ ಗಾರ್ಡನ್‌ನಲ್ಲಿ ನಡೆದ ಹುಕ್ಕೇರಿ ತಾಲ್ಲೂಕು ಗ್ರಾಮೀಣ ವಿದ್ಯುಚ್ಛಕ್ತಿ ಸಹಕಾರ ಸಂಘದ ಚುನಾವಣೆಯ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಬೇರೆಯವರಿಗೆ ಮಾರ್ಗದರ್ಶಿಯಾಗಿದ್ದ ಸಂಕೇಶ್ವರದ ಹಿರಣ್ಯಕೇಶಿ ಸಹಕಾರ ಸಕ್ಕರೆ ಕಾರ್ಖಾನೆ ಹಾಗೂ ಹುಕ್ಕೇರಿ ತಾಲ್ಲೂಕು ಗ್ರಾಮೀಣ ವಿದ್ಯುಚ್ಛಕ್ತಿ ಸಹಕಾರ ಸಂಘಗಳು ಕಳೆದ 30 ವರ್ಷಗಳಿಂದ ಕತ್ತಿ ಕುಟುಂಬದ ಆಡಳಿತಾವಧಿಯಲ್ಲಿ ಹಾನಿ ಅನುಭವಿಸಿ ಕೋಟ್ಯಾಂತರ ರೂಪಾಯಿ ಸಾಲ ಮಾಡಿಕೊಂಡಿವೆ ಎಂದರು. ಸಂಕೇಶ್ವರದ ಹಿರಣ್ಯಕೇಶಿ ಸಹಕಾರ



☛ ಉದಯವಾಹಿನಿ ಚಿತ್ರ



ಸಕ್ಕರೆ ಕಾರ್ಖಾನೆ, ಹುಕ್ಕೇರಿ ತಾಲ್ಲೂಕು ವಿದ್ಯುಚ್ಛಕ್ತಿ ಸಹಕಾರ ಸಂಘ ಹಾಗೂ ಬಿಡಿಸಿಸಿ ಬ್ಯಾಂಕಿನಲ್ಲಿ ಅವರು ಮಾಡಿರುವ ಅವ್ಯವಹಾರಗಳನ್ನು ಶೀಘ್ರವೇ ಜನರ ಮುಂದೆ ಇಟ್ಟು ಸರ್ಕಾರದ ವತಿಯಿಂದ ತನಿಖೆ ಮಾಡಲಾಗುವುದು ಎಂದು ಹೇಳಿದರು.

ಮಾಜಿ ಸಚಿವ ಶಶಿಕಾಂತ ನಾಯಿಕ ಮಾತನಾಡಿ, ಸಹಕಾರಿ ಧುರೀಣ ರಿಷಬ್ ಪಾಟೀಲ, ದಿ ಅಪ್ಪಣ್ಣಗೌಡ ಪಾಟೀಲ, ದಿ.ಬಸಗೌಡ ಪಾಟೀಲ ಅವರಂಥ ಪ್ರಾಮಾಣಿಕರು ಕಟ್ಟಿದ ಸಂಸ್ಥೆಗಳಿಂದ ಇಡೀ ತಾಲ್ಲೂಕಿನ ಪ್ರತಿಯೊಂದು ಮನೆಯವರು ಪ್ರಯೋಜನ ಪಡೆಯುತ್ತಿದ್ದಾರೆ. ಆದರೆ ಅವರು ಕಟ್ಟಿದ ಸಹಕಾರ ಸಂಘಗಳು ಇಂದು ಕೋಟ್ಯಾಂತರ ರೂಪಾಯಿ ನಷ್ಟ ಅನುಭವಿಸುತ್ತಿವೆ. ಇದಕ್ಕೆ ಕಾರಣರಾದವರನ್ನು ಮುಂದಿನ ಚುನಾವಣೆಯಲ್ಲಿ ಮನೆಗೆ ಕಳಿಸಬೇಕು' ಎಂದು ಮನವಿ ಮಾಡಿದರು.

> ಬೆಳಗಾವಿ ಜಿಲ್ಲಾ ಕೇಂದ್ರ ಬ್ಯಾಂಕಿನ ಚುನಾವಣೆಯಲ್ಲಿ ರಮೇಶ ಕತ್ತಿ ಅವರಿಗೆ ಒಬ್ಬ ಸಂಚಾಲಕರು ಮಾತ್ರ ಬೆಂಬಲಕ್ಕಿದ್ದರು. ಆದರೆ ನಾವೆಲ್ಲಾ ಕೂಡಿ ಅವರನ್ನು ಜಿಲ್ಲಾ ಕೇಂದ್ರ ಬ್ಯಾಂಕಿಗೆ ಅಧ್ಯಕ್ಷರನ್ನಾಗಿ ಮಾಡಿದೆವು. ಆದರೆ ಸರ್ವಾಧಿಕಾರಿಯಾಗಿ ವರ್ತಿಸತೊಡಗಿದಾಗ ಅವರನ್ನು ಅಧ್ಯಕ್ಷಗಿರಿಯಿಂದ ಕೆಳಗೆ ಇಳಿಸಬೇಕಾಯಿತು ಎಂದರು.

# ರೈತರ ಆದಾಯ ವೃದ್ಧಿಗೆ ಉತ್ತಮ ಮಾರುಕಟ್ಟೆ ವ್ಯವಸ್ಥೆ ಅವಶ್ಯ: ಡಾ.ಎ.ಬಿ.ಪಾಟೀಲ್

## ಕೃಷಿ ತ್ಯಾಜ್ಯದ ಮೌಲ್ಯವರ್ಧನೆ, ಮಾರುಕಟ್ಟೆಯ ಸೌಲಭ್ಯ ಕುರಿತು ಒಂದು ದಿನದ ವಿಚಾರ ಸಂಕಿರಣ

• ಉದಯವಾಹಿನಿ, ಚಿತ್ರದುರ್ಗ

ರೈತರ ಆದಾಯ ವೃದ್ಧಿಗೆ ಉತ್ತಮ ಮಾರುಕಟ್ಟೆ ವ್ಯವಸ್ಥೆ ಅವಶ್ಯವಾಗಿ ಬೇಕಾಗಿದೆ ಎಂದು ಬೆಂಗಳೂರು ಕೃಷಿ ತಂತ್ರಜ್ಞರ ಸಂಸ್ಥೆ ಅಧ್ಯಕ್ಷರು, ಕೃಷಿ ಸಚಿವರ ವಿಶೇಷ ಕರ್ತವ್ಯ ಅಧಿಕಾರಿಗಳಾದ ಡಾ.ಎ.ಬಿ.ಪಾಟೀಲ್ ಹೇಳಿದರು. ನಗರದ ಕೃಷಿ ತಂತ್ರಜ್ಞರ ಸಂಸ್ಥೆಯಲ್ಲಿ ಕೃಷಿ ಇಲಾಖೆ, ಕೃಷಿ ತಂತ್ರಜ್ಞರ ಸಂಸ್ಥೆ ರಾಜ್ಯ ಮತ್ತು ಪ್ರಾದೇಶಿಕ ಘಟಕ ಹಾಗೂ ಸಮನ್ವಯ ಟ್ರಸ್ಟ್ ಸಹಯೋಗದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಕೃಷಿ ತ್ಯಾಜ್ಯದ ಮೌಲ್ಯವರ್ಧನೆ ಹಾಗೂ ರೈತ ಉತ್ಪಾದಕ ಕಂಪನಿಗಳಿಗೆ ಮಾರುಕಟ್ಟೆಯ ಸೌಲಭ್ಯ ಕಲ್ಪಿಸುವ ಕುರಿತು ಒಂದು ದಿನದ ವಿಚಾರ ಸಂಕಿರಣ ಉದ್ಘಾಟಿಸಿ ಅವರು ಮಾತನಾಡಿದರು.

ರೈತರು ಪ್ರಾಥಮಿಕ ಉತ್ಪನ್ನಗಳನ್ನು ಮಾರಾಟ ಮಾಡುವ ಮೂಲಕ ಆದಾಯ ಗಳಿಸುತ್ತಾರೆ. ಆದರೆ ಅಧಿಕ ಆದಾಯ ಗಳಿಸಬೇಕಾದರೆ ರೈತ–ರೈತೋದ್ಯಮಿ ಆಗಬೇಕಾದರೆ ರೈತರಿಗೆ, ರೈತ ಉತ್ಪಾದಕ ಸಂಸ್ಥೆಯು ಉತ್ತಮವಾಗಿ ಸೇವೆ ನೀಡಬೇಕು. ವಿಜ್ಞಾನ, ವಾಣಿಜ್ಯ ಸೇರಿದಾಗ ಮಾತ್ರ ಆದಾಯ ಹೆಚ್ಚಾಗಲಿದೆ. ಇದರ ಜೊತೆಗೆ ಮಾರುಕಟ್ಟೆ ಹಾಗೂ ಹೆಚ್ಚಿನ ಬೆಲೆ



☛ ಉದಯವಾಹಿನಿ ಚಿತ್ರ

**ಕೃಷಿಯ ಬೆಳವಣಿಗೆ ಹೇಗಿದೆ?**

ಸಿಗುವುದು ಸಹ ಬಹಳ ಮುಖ್ಯವಾಗಿದ್ದು, ಮಾರುಕಟ್ಟೆ, ಮಾರಾಟಗಾರರು, ಖರೀದಿದಾರರನ್ನು, ಉತ್ಪಾದಕರನ್ನು ಹಾಗೂ ಉತ್ಪಾದಕ ಸಂಸ್ಥೆಗಳನ್ನು ಒಂದುಗೂಡಿಸಿ, ಸಮನ್ವಯತೆ ತಂದಿರುವ ಸಮನ್ವಯ ಟ್ರಸ್ಟ್‌ನ ಕಾರ್ಯ ಎಂದು ಶ್ಲಾಘನೀಯ ಎಂದರು. ಜಂಟಿ ಕೃಷಿ ನಿರ್ದೇಶಕ ಬಿ.ಮಂಜುನಾಥ್ ಮಾತನಾಡಿ, ಜಾಗತಿಕ ಮಟ್ಟದಲ್ಲಿ ಹಾಗೂ ನಮ್ಮ ದೇಶದಲ್ಲಿ ಕೃಷಿಯ ಬೆಳವಣಿಗೆ ಹೇಗಿದೆ? ನಮ್ಮ ದೇಶಿಯ ಮಾರುಕಟ್ಟೆಗಳಲ್ಲಿರುವ ಸಾಧ್ಯತೆ, ಅವಕಾಶಗಳು, ವಿದೇಶಗಳಲ್ಲಿರುವ ಸಾಧ್ಯತೆ, ಅವಕಾಶಗಳನ್ನು ಅರ್ಥೈಸಿಕೊಂಡು ನಾವು ನಮ್ಮ ಕೃಷಿಯಲ್ಲಿ ತೆಗೆದುಕೊಳ್ಳಬೇಕಾದ ಬದಲಾವಣೆಗಳನ್ನು ಬಹಳಷ್ಟು ತ್ವರಿತಗತಿಯಲ್ಲಿ ತರುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ರೈತ ಉತ್ಪಾದಕ ಸಂಸ್ಥೆಗಳನ್ನು ಹುಟ್ಟು ಹಾಕಿದೆ. ರೈತರ ಉತ್ಪಾದಕ ಸಂಸ್ಥೆಗಳು ಕೇವಲ ಕೃಷಿ ಪರಿಕರಗಳ ವಿತರಣೆ ಮಾಡುವುದು ಅಷ್ಟೇ ಅಲ್ಲದೇ ಕೃಷಿಯಲ್ಲಿ ಆಗಬೇಕಾದ ಬದಲಾವಣೆಗಳನ್ನು ಸಹ ತರುವ ದಿಕ್ಕಿನಲ್ಲಿ ಸಕ್ರಿಯವಾಗಿ ಭಾಗವಹಿಸಿ, ಬೇಸಾಯ ಪದ್ದತಿ, ನವೀನ ಬೆಳೆ ಪದ್ಧತಿ, ತಳಿಗಳ ಬದಲಾವಣೆ,

> ಜಿಲ್ಲೆಯಲ್ಲಿ ಹೆಚ್ಚು ಪುಷ್ಪ ಕೃಷಿಯನ್ನು ಮಾಡುತ್ತಿದ್ದು, ಹೂ ಬೆಳೆಗಾರರಿಗೆ ಮಧ್ಯವರ್ತಿಗಳ ಶೋಷಣೆ ತಪ್ಪಿಸುವ ನಿಟ್ಟಿನಲ್ಲಿ ದೇವಸ್ಥಾನಗಳಿಗೆ ನೇರವಾಗಿ ಸಂಪರ್ಕ ಕಲ್ಪಿಸಲು ಸಾಧ್ಯವಾದರೆ ರೈತ ಉತ್ಪಾದಕ ಸಂಸ್ಥೆಗಳ ಮೂಲಕ ದೇವಸ್ಥಾನಗಳಿಗೆ ತಲುಪಿಸುವ ಕೆಲಸ ಮಾಡೋಣ. ಈ ನಿಟ್ಟಿನಲ್ಲಿ ಸಂಪರ್ಕ ಕಲ್ಪಿಸಲು ಸಮನ್ವಯ ಟ್ರಸ್ಟ್ ಸಹಕಾರ ಅಗತ್ಯವಾಗಿದೆ ಎಂದರು.

> **ಕಸದಿಂದ ರಸ ಮಾಡುವ ಸಾಕಷ್ಟು ವಿಧಾನ**
>
> ಕೃಷಿ, ತೋಟಗಾರಿಕೆ, ಹೈನುಗಾರಿಕೆ ಹಾಗೂ ಇತರೆ ಉಪ ಕಸುಬುಗಳನ್ನು ಅಳವಡಿಸಿಕೊಂಡರೆ ಆದಾಯ ವೃದ್ಧಿಯಾಗಲಿದ್ದು, ಕೃಷಿಯಿಂದ ಸಂಸ್ಕೃತಿ, ತೋಟಗಾರಿಕೆಯಿಂದ ಸಂಸ್ಕಾರ ಹಾಗೂ ಪಶುಸಂಗೋಪನೆಯಿಂದ ರೈತರಿಗೆ ಸಮ್ಮೋಹನ ಶಕ್ತಿ ಬರಲಿದೆ ಎಂದು ತಿಳಿಸಿದ ಅವರು, ಕೃಷಿ ಹಾಗೂ ಇತರೆ ಉಪಕಸುಬುಗಳಿಂದ 350 ದಶಲಕ್ಷ ಟನ್ ಕೃಷಿ ತ್ಯಾಜ್ಯ ಉತ್ಪಾದನೆಯಾಗುತ್ತಿದ್ದು, ಕಸದಿಂದ ರಸ ಮಾಡುವ ಸಾಕಷ್ಟು ವಿಧಾನ, ತಂತ್ರಜ್ಞಾನಗಳಿದ್ದು, ಕೃಷಿ ತ್ಯಾಜ್ಯದಿಂದ ಮೌಲ್ಯವರ್ಧಿತ ಪದಾರ್ಥ ಪಡೆಯುವುದು. ಕೇವಲ ಪ್ರಾಥಮಿಕ ಆಹಾರ ಪದಾರ್ಥಗಳನ್ನು ಸಂಸ್ಕರಣೆ ಮಾಡುವುದು ಮಾತ್ರವಲ್ಲದೇ ಕೃಷಿ ತ್ಯಾಜ್ಯ ವಸ್ತುಗಳನ್ನು ಸಹ ವಿಘಟನೆ, ಮೌಲ್ಯವರ್ಧನೆ, ಪ್ಯಾಕಿಂಗ್, ಮಾರಾಟ ಮಾಡಿ ಆದಾಯ ಪಡೆಯಲು ಸಾಧ್ಯವಿದೆ ಎಂದರು.

ಉತ್ಪಾದಕತೆ ಹೆಚ್ಚಳ ಮಾಡುವುದು, ಸಮಗ್ರ ಕೃಷಿ ಪದ್ಧತಿಗಳ ಅಳವಡಿಕೆ, ಕೃಷಿ ಸಂಸ್ಕರಣೆ, ಮೌಲ್ಯವರ್ಧನೆ, ಬ್ರಾಂಡಿಂಗ್, ಪ್ಯಾಕಿಂಗ್ ಸೇರಿದಂತೆ ಅಗತ್ಯ ಬದಲಾವಣೆ ತರುವ ಕೆಲಸಗಳನ್ನು ಮಾಡಬೇಕಿದೆ ಎಂದು ಹೇಳಿದರು. ಸಮನ್ವಯ ಟ್ರಸ್ಟ್ ಸಂಸ್ಥಾಪಕರು ಹಾಗೂ ಮ್ಯಾನೇಜಿಂಗ್ ಟ್ರಸ್ಟಿ ಕೆ.ಹೆಚ್.ಸುಮಂಗಳ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಚಿತ್ರದುರ್ಗ ಪ್ರಾದೇಶಿಕ ಕೃಷಿ ತಂತ್ರಜ್ಞರ ಸಂಸ್ಥೆ ಅಧ್ಯಕ್ಷ ಕಟ್ಟಾ ಶ್ರೀನಿವಾಸ ರೆಡ್ಡಿ, ಕಾರ್ಯದರ್ಶಿ ಜಿ.ಟಿ.ವೀರಭದ್ರ ರೆಡ್ಡಿ, ಪಾಲಿಕ್ಲಿನಿಕ್ ಉಪನಿರ್ದೇಶಕ ಡಾ.ತಿಪ್ಪೇಸ್ವಾಮಿ, ಕರ್ನಾಟಕ ಕೋಳಿ ಸಾಕಣೆದಾರರು, ತಳಿಗಾರರ ಸಂಘದ ನಿರ್ವಹಣಾ ಸಮಿತಿ ಸದಸ್ಯ ಎಸ್.ಜಿ.ವೀರಣ್ಣ, ರಾಜಸ್ಥಾನ್ ವಿಜ್ಞಾನಿ ಅನ್ಮೋಲ್ ಶರ್ಮಾ, ದೃಷ್ಠಿ ಇಂಟರ್ ನ್ಯಾಷನಲ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಸೆಹ್‌ವಾಲ್, ಸರ್ಕಲ್ ಇನ್ಸ್‌ಪೆಕ್ಟರ್ ಪ್ರಕಾಶ್ ಪಾಟೀಲ್ ಸೇರಿದಂತೆ ರೈತರು, ರೈತ ಉತ್ಪಾದಕ ಕಂಪನಿಗಳ ಪದಾಧಿಕಾರಿಗಳು ಇದ್ದರು.

# ರಷ್ಯಾದಿಂದ ಕಚ್ಚಾತೈಲ ಖರೀದಿಸುವ ಭಾರತದ ಮೇಲೆ ಶೇ. ರಷ್ಟು ಸುಂಕ

## ರಷ್ಯಾದಿಂದ ತೈಲ ಖರೀದಿಸುವ ಚೀನಾ ಮೇಲೆ ಹೇರದ ಸುಂಕ ಭಾರತದ ಮೇಲೆ ಯಾಕಣ್ಣ? ದುಡ್ಡೇ ಅಲ್ಲವೇ ದೊಡ್ಡಣ್ಣ?

**ವಾಷಿಂಗ್ಟನ್:** ರಷ್ಯಾದಿಂದ ಕಚ್ಚತೈಲ ಖರೀದಿಸುವ ಭಾರತದ ಮೇಲೆ ಶೇ. 50ರಷ್ಟು ಸುಂಕ ಹೇರಿಕೆ ಮಾಡಿರುವ ಅಮೆರಿಕ, ಅದೇ ಕೆಲಸ ಮಾಡುವ ಚೀನಾವನ್ನು ಮಾತ್ರ ಮುಟ್ಟಲು ಹೋಗಿಲ್ಲ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಒಂದು ಕಣ್ಣಿಗೆ ಬೆಣ್ಣೆ ಮತ್ತೊಂದು ಕಣ್ಣಿಗೆ ಸುಣ್ಣ ನೀತಿ ಏಕೆ ಅನುಸರಿಸುತ್ತಿದ್ದಾರೆ ಎಂಬುದು ಮಿಲಿಯನ್ ಡಾಲರ್ ಪ್ರಶ್ನೆಯಾಗಿ ಉಳಿದಿದೆ. ಇದಕ್ಕೆ ಉತ್ತರ ನೀಡಿರುವ ಅಮೆರಿಕ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ, ರಷ್ಯಾದಿಂದ ಕಚ್ಚಾತೈಲ ಖರೀದಿಸುತ್ತಿರುವ ಭಾರತದ ಮೇಲೆ ದಂಡದ ರೂಪದಲ್ಲಿ ಸುಂಕ ವಿಧಿಸುವುದಕ್ಕೂ, ಚೀನಾಗೂ ಅದೇ ನೀತಿ ಅನ್ವಯಿಸುವುದಕ್ಕೂ ವ್ಯತ್ಯಾಸ ಇದೆ ಎಂದು ಮಾರ್ಕೊ ರೂಬಿಯೊ ಪ್ರತಿಪಾದಿಸಿದ್ದಾರೆ. ರಷ್ಯಾ ಕಚ್ಚಾತೈಲದ ಅತಿದೊಡ್ಡ ಖರೀದಿದಾರ ರಾಷ್ಟ್ರವಾಗಿರುವ ಚೀನಾದ ಮೇಲೆ, ಅಮೆರಿಕ ಯಾವುದೇ ರೀತಿಯ ದ್ವಿತೀಯ ನಿರ್ಬಂಧಗಳನ್ನು ವಿಧಿಸಿಲ್ಲ. ಇದಕ್ಕೆ ಕಾರಣ ಹೇಳಿರುವ ಮಾರ್ಕೊ ರೂಬಿಯೊ, ರಷ್ಯಾದಿಂದ ಖರೀದಿಸುತ್ತಿರುವ ತೈಲದ ಬಹುಪಾಲು ಭಾಗವನ್ನು, ಚೀನಾ ಸಂಸ್ಕರಿಸಿ ನಂತರ ಜಾಗತಿಕ ಮಾರುಕಟ್ಟೆಯಲ್ಲಿ ಮಾರಾಟ ಮಾಡುತ್ತಿದೆ. ಚೀನಾದ ಮೇಲಿನ ಯಾವುದೇ ಹೆಚ್ಚುವರಿ ನಿರ್ಬಂಧಗಳು ಜಾಗತಿಕ ಇಂಧನ ಬೆಲೆಗಳನ್ನು ಹೆಚ್ಚಿಸಬಹುದು ಎಂದು ಹೇಳಿದ್ದಾರೆ.

ರಷ್ಯಾದಿಂದ ಚೀನಾಕ್ಕೆ ಹೋಗುತ್ತಿರುವ ಕಚ್ಚಾತೈಲವು ಸಂಸ್ಕರಿಸಲ್ಪಟ್ಟು ಮತ್ತೆ ಯುರೋಪ್‌ಗೆ ಮರಳುತ್ತಿದೆ. ಅಂದರೆ ಯುರೋಪ್ ಒಂದರ್ಥದಲ್ಲಿ



ಯುರೋಪ್ ಈಗಲೂ ರಷ್ಯಾದಿಂದ ನೈಸರ್ಗಿಕ ಅನಿಲವನ್ನು ಖರೀದಿಸುತ್ತಿದೆ. ಆದರೆ ಕೆಲವು ದೇಶಗಳು ರಷ್ಯಾದಿಂದ ದೂರ ಸರಿಯುವ ನಿರ್ಧಾರ ಮಾಡಿವೆ. ಇಂತಹ ಪರಿಸ್ಥಿತಿಯಲ್ಲಿ ಚೀನಾದ ಮೇಲೆ ದಂಡದ ರೂಪದಲ್ಲಿ ಸುಂಕ ವಿಧಿಸಿ ಜಾಗತಿಕ ಇಂಧನ ಸಮತೋಲವನ್ನು ಕದಡಲು ಅಮೆರಿಕಕ್ಕೆ ಇಷ್ಟವಿಲ್ಲ.

-ಮಾರ್ಕೊ ರೂಬಿಯೊ

ಪರೋಕ್ಷವಾಗಿ ರಷ್ಯಾದಿಂದ ಕಚ್ಚಾತೈಲವನ್ನು ಖರೀದಿಸುತ್ತಿದೆ. ನಾವು ಈ ಸಮಯದಲ್ಲಿ ಚೀನಾ ಮೇಲೆ ದ್ವಿತೀಯ ನಿರ್ಬಂಧಗಳನ್ನು ಹೇರಿದರೆ, ಜಾಗತಿಕ ಮಟ್ಟದಲ್ಲಿ ಇಂಧನ ಬೆಲೆಗಳು ಹೆಚ್ಚಾಗುತ್ತವೆ. ಇದರಿಂದ ಯುರೋಪ್ ಸಂಕಷ್ಟಕ್ಕೆ ಸಿಲುಕುತ್ತದೆ ಎಂದು ಮಾರ್ಕೊ ರೂಬಿಯೊ ತಮ್ಮ ವಾದ ಮಂಡಿಸಿದ್ದಾರೆ.

**ಯುರೋಪ್ ಮೇಲೂ ಸುಂಕಗಳು?**

ರಷ್ಯಾದಿಂದ ತೈಲ ಮತ್ತು ಅನಿಲವನ್ನು ಖರೀದಿಸುವುದನ್ನು ಮುಂದುವರಿಸುವುದಕ್ಕಾಗಿ ಯುರೋಪ್ ವಿರುದ್ಧ ನಿರ್ಬಂಧಗಳನ್ನು ವಿಧಿಸಲಾಗುತ್ತಿದೆಯೇ? ಎಂಬ ಪ್ರಶ್ನೆಗೆ, ಯುರೋಪ್ ಮೇಲೆ ನಿರ್ಬಂಧ ವಿಧಿಸುವ ಸಂಗತಿ ನನಗೆ ಸ್ಪಷ್ಟವಾಗಿ ತಿಳಿದಿಲ್ಲ. ಆದರೆ ಖಂಡಿತವಾಗಿಯೂ ದ್ವಿತೀಯ ನಿರ್ಬಂಧಗಳ ಪರಿಣಾಮಗಳನ್ನು ಎದುರಿಸಬೇಕಾಗುತ್ತದೆ ಎಂದು ಮಾರ್ಕೊ ರೂಬಿಯೊ ಎಚ್ಚರಿಕೆ ನೀಡಿದ್ದಾರೆ. ಮುಂದುವರೆದು, ಈ ವಿಷಯದಲ್ಲಿ ಯುರೋಪಿಯನ್ನರೊಂದಿಗೆ ಜಗಳವಾಡಲು ನಾನು ಬಯಸುವುದಿಲ್ಲ ಎಂದು ಹೇಳಿದ ಮಾರ್ಕೊ ರೂಬಿಯೊ, ಉಕ್ರೇನ್ ಯುದ್ಧ ಕೊನೆಗಾಣಿಸುವಲ್ಲಿ ಯುರೋಪ್ ಬಹಳ ರಚನಾತ್ಮಕ ಪಾತ್ರವನ್ನು ವಹಿಸಬಹುದು ಎಂದು ನಾನು ಭಾವಿಸುತ್ತೇನೆ ಎಂದು ಸೂಚ್ಯವಾಗಿ ಹೇಳಿದ್ದಾರೆ.

**ಇಂಧನ ಬೆಲೆ ಹೆಚ್ಚು**

**ಲೆಕ್ಕಾಚಾರ ತೆರೆದಿಟ್ಟ ರೂಬಿಯೊ:** ಫಾಕ್ಸ್ ನ್ಯೂಸ್‌ಗೆ ನೀಡಿರುವ ಸಂದರ್ಶನದಲ್ಲಿ ಮಾತನಾಡಿದ ಮಾರ್ಕೊ ರೂಬಿಯೊ, ರಷ್ಯಾದಿಂದ ಕಚ್ಚಾತೈಲ ಖರೀದಿಸುವ ಭಾರತದ ಮೇಲೆ ನಾವು ಶೇ. 50ರಷ್ಟು ಸುಂಕ ವಿಧಿಸಿದ್ದೇವೆ ಎಂಬುದು ನಿಜ. ಆದರೆ ಅದೇ ಸುಂಕವನ್ನು ಚೀನಾದ ಮೇಲೆ ಹೇರಿದರೆ, ಜಾಗತಿಕ ಇಂಧನ ಸಮತೋಲನದ ಕದಡುತ್ತದೆ ಎಂದು ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಎಚ್ಚರಿಸಿದ್ದಾರೆ. ನಾವು ಚೀನಾ ಮೇಲೆ ದಂಡದ ರೂಪದಲ್ಲಿ ಯುಎಸ್ ಸುಂಕ ವಿಧಿಸಿದರೂ, ಅದು ರಷ್ಯಾದಿಂದ ಕಚ್ಚಾತೈಲ ಖರೀದಿಸುವುದನ್ನು ಮುಂದುವರೆಸುತ್ತದೆ. ಆಗ ದಂಡವನ್ನು ಸರಿದೂಗಿಸಲು ಚೀನಾ ತೈಲ ದರವನ್ನು ಹೆಚ್ಚಿಸುತ್ತದೆ. ಇದರಿಂದ ಜಾಗತಿಕ ಮಾರುಕಟ್ಟೆಯಲ್ಲಿ ತೈಲ ಖರೀದಿಸುವ ಯಾವುದೇ ರಾಷ್ಟ್ರ ಹೆಚ್ಚುವರಿ ಹಣ ನೀಡಿ ಖರೀದಿಸಬೇಕಾಗುತ್ತದೆ.

ಇದರಿಂದ ಯಾರಿಗೂ ಲಾಭಆಗುವುದಿಲ್ಲ ಎಂದು ಮಾರ್ಕೊ ರೂಬಿಯೊ ಅಭಿಪ್ರಾಯಪಟ್ಟಿದ್ದಾರೆ. ಚೀನಾದಿಂದ ರಷ್ಯಾದ ತೈಲವನ್ನು ಖರೀದಿಸುವ ಯುರೋಪಿಯನ್ ರಾಷ್ಟ್ರಗಳು ಬೀಜಿಂಗ್ ವಿರುದ್ಧದ ಯಾವುದೇ ದಂಡನಾತ್ಮಕ ಕ್ರಮಗಳ ಬಗ್ಗೆ ಈಗಾಗಲೇ ಅಸಮಾಧಾನ ವ್ಯಕ್ತಪಡಿಸಿವೆ ಎಂದೂ ಮಾರ್ಕೊ ರೂಬಿಯೊ ಇದೇ ವೇಳೆ ಮಾಹಿತಿ ನೀಡಿದರು.

## ಬಿಹಾರ ಮತದಾರರ ಪಟ್ಟಿಯಿಂದ ಅಳಿಸಲಾದ 65 ಲಕ್ಷ ಜನರ ಹೆಸರು ಬಹಿರಂಗ

**ಪಾಟ್ನಾ:** ದೇಶದಾದ್ಯಂತ ಚರ್ಚೆ ಹುಟ್ಟುಹಾಕಿರುವ ಬಿಹಾರದ ವಿಶೇಷ ಪರಿಷ್ಕರಣೆಯಿಂದ ಕರಡು ಮತದಾರರ ಪಟ್ಟಿಯಿಂದ ತೆಗೆದುಹಾಕಲಾದ 65 ಲಕ್ಷ ಜನರ ಹೆಸರುಗಳನ್ನು ಚುನಾವಣಾ ಆಯೋಗ ಇಂದು ಬಹಿರಂಗ ಪಡಿಸಿದೆ. ಆ.19 ರೊಳಗೆ ಅಳಿಸಲಾದ ಹೆಸರುಗಳನ್ನು ಪ್ರಕಟಿಸಲು, ಆ.22 ರೊಳಗೆ ಅನುಸರಿಸಲಾದ ವರದಿಯನ್ನು ಸಲ್ಲಿಸಲು ಸುಪ್ರೀಂ ಕೋರ್ಟ್ ನಿರ್ದೇಶಿಸಿದ ನಂತರ ಈ ಬೆಳವಣಿಗೆ ಸಂಭವಿಸಿದೆ. ಮತಗಟ್ಟೆಗಳಾದ್ಯಂತ ಮತದಾರರ ಹೆಸರುಗಳನ್ನು ಪ್ರಕಟಿಸುತ್ತಿದೆ ಮತ್ತು ಸುಪ್ರೀಂ ಕೋರ್ಟ್ ನಿರ್ದೇಶಿಸಿದಂತೆ ಆನ್‌ಲೈನ್‌ನಲ್ಲಿ ಬಿಡುಗಡೆ ಮಾಡುವ ಸಾಧ್ಯತೆಯಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಬಿಹಾರದ ಮುಖ್ಯ ಚುನಾವಣಾ ಅಧಿಕಾರಿ ಪ್ರಕಾರ, ರೋಹ್ತಾಸ್, ಬೇಗುಸರಾಯ್, ಅರ್ವಾಲ್, ಸಿವಾನ್, ಭೋಜ್‌ಪುರ, ಇತರ ಸ್ಥಳಗಳ ಮತಗಟ್ಟೆಗಳಲ್ಲಿ ಪಟ್ಟಿಗಳನ್ನು ಪ್ರದರ್ಶಿಸಲಾಗಿದೆ. ಬಿಹಾರದಲ್ಲಿ ಚುನಾವಣಾ ಆಯೋಗದಿಂದ ಮೊದಲ ಹಂತದ ಭಾಗವಾಗಿ ಸಿದ್ಧಪಡಿಸಲಾದ ಕರಡು ಮತದಾರರ ಪಟ್ಟಿಯಲ್ಲಿ 65 ಲಕ್ಷಕ್ಕೂ ಹೆಚ್ಚು ಗಣತಿ ನಮೂನೆಗಳನ್ನು ಸೇರಿಸಲಾಗಿಲ್ಲ, ಇದರಿಂದಾಗಿ ಸುಮಾರು 7.9 ಕೋಟಿ ನೋಂದಾಯಿತ ಮತದಾರರ ಒಟ್ಟು ಸಂಖ್ಯೆ 7.24 ಕೋಟಿಗೆ ಇಳಿದಿದೆ. ಪಾಟ್ನಾದಲ್ಲಿ ಅತಿ ಹೆಚ್ಚು 3.95 ಲಕ್ಷ, ನಂತರ ಮಧುಬನಿ (3.52 ಲಕ್ಷ), ಪೂರ್ವ ಚಂಪಾರಣ್ (3.16 ಲಕ್ಷ), ಗೋಪಾಲಗಂಜ್ (3.10 ಲಕ್ಷ), ಸಮಷ್ಟಿಪುರ (2.83 ಲಕ್ಷ), ಮುಜಫರ್‌ಪುರ (2.82 ಲಕ್ಷ), ಪೂರ್ಣಿಯಾ (2.739 ಲಕ್ಷ), ಸರನ್ (2.732 ಲಕ್ಷ), ಸೀತಾಮರ್ಹಿ (2.44 ಲಕ್ಷ), ಕತಿಹಾರ್ (1.84 ಲಕ್ಷ), ಕಿಶನ್ ಗಂಜ್ (1.45 ಲಕ್ಷ) ಹೆಸರು ತೆಗೆದುಹಾಕಲಾಗಿದೆ ಎಂದು ಚುನಾವಣಾ ಆಯೋಗ ತಿಳಿಸಿದೆ. ಮತದಾರರ ಪಟ್ಟಿಯಲ್ಲಿದ್ದ 22,34,501 ಜನರು ಈ ಪ್ರಕ್ರಿಯೆಯ ಸಮಯದಲ್ಲಿ ಸಾವನ್ನಪ್ಪಿದ್ದಾರೆ ಎಂದು ಚುನಾವಣಾ ಆಯೋಗ ಹೇಳಿಕೊಂಡಿದೆ. ಇನ್ನೂ 36.28 ಲಕ್ಷ ಜನರು ರಾಜ್ಯದಿಂದ ಶಾಶ್ವತವಾಗಿ ಸ್ಥಳಾಂತರಗೊಂಡಿದ್ದಾರೆ ಅಥವಾ ಅವರ ವಿಳಾಸಗಳಲ್ಲಿ ಕಂಡುಬಂದಿಲ್ಲ, ಮತ್ತು ಇನ್ನೂ 7.01 ಲಕ್ಷ ಜನರು ಒಂದಕ್ಕಿಂತ ಹೆಚ್ಚು ಸ್ಥಳಗಳಲ್ಲಿ ಮತದಾನದ ಗುರುತಿನ ಚೀಟಿ ಹೊಂದಿರುವುದು ಕಂಡುಬಂದಿದೆ.

## ಅನಾವರಣಗೊಂಡ 28 ರಾಜ್ಯಗಳ ಭಾರತೀಯ ಪರಂಪರೆ

**ನ್ಯೂಯಾರ್ಕ್:** ಭಾರತದ ಎಲ್ಲಾ ರಾಜ್ಯಗಳ ಶ್ರೀಮಂತ ಸಾಂಸ್ಕೃತಿಕ ವೈವಿಧ್ಯತೆಯನ್ನು ಸಿಯಾಟಲ್‌ನಲ್ಲಿ ಪ್ರದರ್ಶಿಸಲಾಯಿತು, ಏಕೆಂದರೆ ನಗರದ ಭಾರತದ ಕಾನ್ಸುಲೇಟ್ ಜನರಲ್ ದೇಶದ 79ನೇ ಸ್ವಾತಂತ್ರ್ಯ ದಿನಾಚರಣೆಯ ಸ್ಮರಣಾರ್ಥ ಮೊದಲ ಭಾರತ ದಿನದ ಮೆರವಣಿಗೆಯನ್ನು ಆಯೋಜಿಸಿದ್ದರು. ಈ ಮೆರವಣಿಗೆಯಲ್ಲಿ, ಎಲ್ಲಾ 28 ಭಾರತೀಯ ರಾಜ್ಯಗಳನ್ನು ಪ್ರತಿನಿಧಿಸುವ ಸಾಂಸ್ಕೃತಿಕ ನೃತ್ಯ ಪ್ರದರ್ಶನಗಳು, ಪ್ರತಿ ರಾಜ್ಯ, ಕೇಂದ್ರಾಡಳಿತ ಪ್ರದೇಶದಿಂದ ವಸ್ತುಗಳನ್ನು ಪ್ರದರ್ಶಿಸುವ ಭಾರತ ಮಂಟಪವೂ ಸೇರಿತ್ತು. ಸಿಯಾಟಲ್‌ನಲ್ಲಿರುವ ಭಾರತದ ಕಾನ್ಸುಲ್ ಜನರಲ್ ಪ್ರಕಾಶ್ ಗುಪ್ತಾ, ಸಿಯಾಟಲ್‌ನ ಮೇಯರ್ ಬ್ರೂಸ್ ಹ್ಯಾರೆಲ್, ಇತರ ಗಣ್ಯರೊಂದಿಗೆ, ಭವ್ಯ ಮೆರವಣಿಗೆಯ ಆರಂಭವನ್ನು ಗುರುತಿಸಲು ಆಕಾಶದಲ್ಲಿ ತ್ರಿವರ್ಣ ಬಲೂನ್‌ಗಳನ್ನು ಹಾರಿಸುವುದರೊಂದಿಗೆ ಭಾರತ ದಿನದ ಮೆರವಣಿಗೆಯನ್ನು ವಿಧ್ಯುಕ್ತವಾಗಿ ಧ್ವಜಾರೋಹಣ ಮಾಡಿದರು. ಭಾರತೀಯ ತ್ರಿವರ್ಣದ ರೋಮಾಂಚಕ ವರ್ಣಗಳಿಂದ ಬೀದಿಗಳು ಜೀವಂತವಾಗಿದ್ದವು.

ಭಾರತ ಮಂಟಪ ಪ್ರಮುಖ ಆಕರ್ಷಣೆಯಾಗಿತ್ತು, ಭಾರತದ 28 ರಾಜ್ಯಗಳನ್ನು ಪ್ರತಿನಿಧಿಸುವ 30ಕ್ಕೂ ಹೆಚ್ಚು ಬೂತ್‌ಗಳು, ಹಲವಾರು ವಿಷಯಾಧಾರಿತ ಪ್ರದರ್ಶನಗಳನ್ನು ಒಳಗೊಂಡಿತ್ತು. ಪ್ರತಿಯೊಂದು ಬೂತ್ ವಿಶಿಷ್ಟವಾದ ವಸ್ತುಗಳನ್ನು ಪ್ರದರ್ಶಿಸಿತು, ಜೊತೆಗೆ ಅವುಗಳ ಸಾಂಸ್ಕೃತಿಕ ಮತ್ತು ಐತಿಹಾಸಿಕ ಮಹತ್ವವನ್ನು ಎತ್ತಿ ತೋರಿಸುವ ವಿವರಣೆಗಳನ್ನು ಒಳಗೊಂಡಿತ್ತು. ಗಣ್ಯರು ಮತ್ತು ಭಾಗವಹಿಸುವವರು ಪ್ರಾದೇಶಿಕ ಪಾಕಪದ್ಧತಿಯ ವಿಶೇಷತೆಗಳನ್ನು ಸವಿಯುವ ಮತ್ತು ಸಾಂಸ್ಕೃತಿಕ ಕಲಾಕೃತಿಗಳನ್ನು ಅನ್ವೇಷಿಸುವ ಮೂಲಕ ಭಾರತದ ಶ್ರೀಮಂತ ಪರಂಪರೆ, ಸಂಪ್ರದಾಯಗಳ ಬಗ್ಗೆ ಸ್ಪಷ್ಟ ನೋಟವನ್ನು ನೀಡಿದ್ದಾರೆ ಎಂದು ಸಿಯಾಟಲ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ.




2,000 ಕ್ಕೂ ಹೆಚ್ಚು ಭಾಗವಹಿಸುವವರ ಸಭೆಯನ್ನುದ್ದೇಶಿಸಿ ಮಾತನಾಡಿದ ಮೇಯರ್ ಹ್ಯಾರೆಲ್, ಭಾರತದ ಪ್ರೀತಿ, ಕರುಣೆ ಮತ್ತು ಅಹಿಂಸೆಯ ಸಂದೇಶದಿಂದ ಅಮೆರಿಕ ಕಲಿಯಬೇಕು ಎಂದು ಹೇಳಿದರು. ಭಾರತೀಯ-ಅಮೆರಿಕನ್ನರ ಕೊಡುಗೆಗಳಿಂದಾಗಿ ಸಿಯಾಟಲ್ ತಾಂತ್ರಿಕ ಶ್ರೇಷ್ಠತೆಯ ವೈವಿಧ್ಯಮಯ ನಗರವಾಗಿದೆ ಎಂದು ಅವರು ಗಮನಿಸಿದರು. ಸಿಯಾಟಲ್‌ನಲ್ಲಿ ಭಾರತೀಯ ದೂತಾವಾಸದ ಉದ್ಘಾಟನೆಯನ್ನು ಹೆಗ್ಗುರುತು ಅಭಿವೃದ್ಧಿ ಎಂದು ಸ್ವಾಗತಿಸಿದ ಹ್ಯಾರೆಲ್, ಮೊದಲ ಭಾರತ ದಿನದ ಮೆರವಣಿಗೆಯನ್ನು ಸಹ-ಆತಿಥ್ಯ ವಹಿಸಲು ನಗರಕ್ಕೆ ಗೌರವವಿದೆ ಎಂದು ಹೇಳಿದರು. ಯುಎಸ್ ಕಾಂಗ್ರೆಸ್ಸಿಗ ಆಡಮ್ ಸ್ಮಿತ್ ತಮ್ಮ ಭಾಷಣದಲ್ಲಿ, ಜಗತ್ತಿನಾದ್ಯಂತ ಶಾಂತಿ, ಭದ್ರತೆ ಅತ್ಯಂತ ಮಹತ್ವದ್ದಾಗಿದೆ ಎಂದು ಒತ್ತಿ ಹೇಳಿದರು. ಈ ಗುರಿಗಳನ್ನು ಸಾಧಿಸುವಲ್ಲಿ ಅಮೆರಿಕಕ್ಕೆ ಭಾರತಕ್ಕಿಂತ ಉತ್ತಮ ಪಾಲುದಾರ ಇಲ್ಲ ಎಂದು ಗಮನಿಸಿದರು. ಭಾರತದ ಎಲ್ಲಾ ರಾಜ್ಯಗಳ ಸಾವಿರಾರು ಭಾರತೀಯ-ಅಮೆರಿಕನ್ನರು ತಮ್ಮ ಪ್ರದೇಶಗಳ ಸಂಸ್ಕೃತಿಗಳು, ಭಾಷೆಗಳು, ಕಲಾ ಪ್ರಕಾರಗಳನ್ನು ಎತ್ತಿ ತೋರಿಸುವ ಫ್ಲೋಟ್‌ಗಳು, ಪ್ರದರ್ಶನಗಳ ಮೂಲಕ ಮೆರವಣಿಗೆಯಲ್ಲಿ ಭಾಗವಹಿಸಿದರು ವೈವಿಧ್ಯತೆಯಲ್ಲಿ ಏಕತೆಯ ನಿಜವಾದ ಭಾರತೀಯ ಮನೋಭಾವವನ್ನು ಪ್ರದರ್ಶಿಸಿದರು.

ಛತ್ರಪತಿ ಶಿವಾಜಿಯ ಶೌರ್ಯ, ಪರಂಪರೆಯನ್ನು ಚಿತ್ರಿಸುವ ಬೀಟ್ಸ್ ಆಫ್ ವಾಷಿಂಗ್ಟನ್‌ನ ಉತ್ಸಾಹಭರಿತ ಪ್ರದರ್ಶನವು ಜನಸಮೂಹವನ್ನು ಮೋಡಿ ಮಾಡಿದ ಅನೇಕರಲ್ಲಿ ಸೇರಿತ್ತು. ಸಮಾರಂಭವು ವೇದ ಪ್ರಾರ್ಥನೆಯೊಂದಿಗೆ ಪ್ರಾರಂಭವಾಯಿತು, ನಂತರ ಧ್ವಜಾರೋಹಣ ಮತ್ತು ಭಾರತ ಮತ್ತು ಯುನೈಟೆಡ್ ಸ್ಟೇಟ್ಸ್‌ನ ರಾಷ್ಟ್ರಗೀತೆಗಳನ್ನು ಹಾಡಲಾಯಿತು.ಎ ಡ್ಯಾನ್ಸ್ ಮೊಸಾಯಿಕ್ ಆಫ್ ಭಾರತ್ ಎಂಬ ಶೀರ್ಷಿಕೆಯ ರೋಮಾಂಚಕ ಸಾಂಸ್ಕೃತಿಕ ಪ್ರದರ್ಶನವು ಭಾರತದ ವೈವಿಧ್ಯಮಯ ನೃತ್ಯ ಸಂಪ್ರದಾಯಗಳನ್ನು ಪ್ರದರ್ಶಿಸಿತು ಮತ್ತು ಪ್ರೇಕ್ಷಕರನ್ನು ಆಕರ್ಷಿಸಿತು.

ಪ್ರತಿಯೊಂದು ಟ್ಯಾಬ್ಲೋ, ಪ್ರದರ್ಶನವನ್ನು ಪ್ರಮುಖ ಭಾರತೀಯ-ಅಮೆರಿಕನ್ ನಾಯಕರ ನೇತೃತ್ವದ ಸಮುದಾಯ ಗುಂಪುಗಳು ಸಂಯೋಜಿಸಿದವು. ವಾಷಿಂಗ್ಟನ್ ತೆಲಂಗಾಣ ಅಸೋಸಿಯೇಷನ್ ಸಮುದಾಯದ ನೇತೃತ್ವ ವಹಿಸಿದ್ದರೂ, ಗುಜರಾತ್‌ನ ರೋಮಾಂಚಕ ಗರ್ಬಾ, ಮಹಾರಾಷ್ಟ್ರದ ಲಾವಣಿ ಜಾನಪದ ನೃತ್ಯ, ಆಂಧ್ರಪ್ರದೇಶದ ಆಕರ್ಷಕ ಕೂಚಿಪುಡಿ, ವಂದೇ ಉತ್ಕಲಾ ಜನನಿಯೊಂದಿಗೆ ಒಡಿಶಾದ ಬೋಯಿತಾ ಬಂದಾನ ಮತ್ತು ಸ್ವಾಮಿ ವಿವೇಕಾನಂದರ ಮೌಲ್ಯಗಳನ್ನು ಚಿತ್ರಿಸುವ ಪಶ್ಚಿಮ ಬಂಗಾಳದ ಫ್ಲೋಟ್ ಪ್ರಮುಖ ಅಂಶಗಳಾಗಿವೆ. ಯುವ ಭಾರತೀಯ-ಅಮೆರಿಕನ್ನರ ಸಾಂಪ್ರದಾಯಿಕ ವರ್ಣಚಿತ್ರಗಳನ್ನು ಪ್ರದರ್ಶಿಸಿದ ಭಾರತೀಯ ಪರಂಪರೆ ಕಲೆಗಳು ಮತ್ತು ಭಾರತದ ಭಾಷಾ ವೈವಿಧ್ಯತೆಯನ್ನು ಆಚರಿಸಿದ ಗುರುಕುಲ ಸೇರಿದಂತೆ ವಿಷಯಾಧಾರಿತ ಪ್ರದರ್ಶನಗಳನ್ನು ಸಹ ಪ್ರದರ್ಶಿಸಲಾಯಿತು.

## ಉಪರಾಷ್ಟ್ರಪತಿ ಚುನಾವಣೆಗೆ ಅಭ್ಯರ್ಥಿಯಾಗಿ ರಾಧಾಕೃಷ್ಣನ್ ಆಯ್ಕೆ ತಮಿಳರಿಗೆ ಹೆಮ್ಮೆಯ ಕ್ಷಣ

**ಚೆನ್ನೈ:** ಮಹಾರಾಷ್ಟ್ರ ರಾಜ್ಯಪಾಲ ಸಿ.ಪಿ. ರಾಧಾಕೃಷ್ಣನ್ ಅವರನ್ನು ಉಪರಾಷ್ಟ್ರಪತಿ ಚುನಾವಣೆಗೆ ನಾಮನಿರ್ದೇಶನ ಮಾಡಿರುವುದನ್ನು ತಮಿಳು ಜನರಿಗೆ ಹೆಮ್ಮೆಯ ಕ್ಷಣ ಎಂದು ತಮಿಳುನಾಡು ಬಿಜೆಪಿ ಅಧ್ಯಕ್ಷ ನೈನಾರ್ ನಾಗೇಂದ್ರನ್ ಬಣ್ಣಿಸಿದ್ದಾರೆ. ಜೊತೆಗೆ, ರಾಧಾಕೃಷ್ಣನ್ ಅವರಿಗೆ ಬೆಂಬಲ ನೀಡಲು ನಿರಾಕರಿಸಿದ್ದಕ್ಕಾಗಿ ಆಡಳಿತಾರೂಢ ಡಿಎಂಕೆ ಪಕ್ಷದ ಮೇಲೆಯೂ ವಾಗ್ದಾಳಿ ನಡೆಸಿದ್ದಾರೆ. ರಾಧಾಕೃಷ್ಣನ್ ಅವರ ಪದೋನ್ನತಿ ರಾಷ್ಟ್ರಕ್ಕೆ ತಮಿಳುನಾಡು ನೀಡಿದ ಕೊಡುಗೆಯನ್ನು ಗುರುತಿಸಲಾಗಿದೆ ಎಂದು ನಾಗೇಂದ್ರನ್ ಹೇಳಿದ್ದಾರೆ. ಪ್ರಧಾನಿ ಮೋದಿ, ಎನ್‌ಡಿಎ ನಾಯಕತ್ವಕ್ಕೆ ಧನ್ಯವಾದ ಅರ್ಪಿಸಿದ್ದಾರೆ.ಡಾ. ಸಿ.ಪಿ. ರಾಧಾಕೃಷ್ಣನ್ ದೇಶಕ್ಕೆ ಸೇವೆ ಸಲ್ಲಿಸುವಾಗ ಯಾವಾಗಲೂ ತಮಿಳು ಮೌಲ್ಯಗಳ ಪರವಾಗಿ ನಿಂತಿದ್ದಾರೆ.

ಅವರ ಗೆಲುವು ಪ್ರತಿ ತಮಿಳು ಕುಟುಂಬಕ್ಕೂ ಹೆಮ್ಮೆಯ ಕ್ಷಣವಾಗಿರುತ್ತದೆ ಎಂದು ನಾಗೇಂದ್ರನ್ ಬಣ್ಣಿಸಿದ್ದಾರೆ. ನಮ್ಮ ಪ್ರೀತಿಯ ಪುತ್ರ ಡಾ. ಕಲಾಂ ಅವರ ಮರು ಚುನಾವಣೆಯನ್ನು ಬೆಂಬಲಿಸದ ಡಿಎಂಕೆ ತನ್ನ ಐತಿಹಾಸಿಕ ಪ್ರಮಾದವನ್ನು ಸರಿಪಡಿಸಲು ಇದು ಡಿಎಂಕೆಗೆ ಒಂದು ಅವಕಾಶ. ಮತ್ತೊಬ್ಬ ತಮಿಳನನ್ನು ಬೆಂಬಲಿಸಲು ನಿರಾಕರಿಸುವ ಮೂಲಕ, ಡಿಎಂಕೆ ಮತ್ತೊಮ್ಮೆ ಇತಿಹಾಸದ ತಪ್ಪು ಬದಿಯಲ್ಲಿರುವ ಅಪಾಯವನ್ನು ಎದುರಿಸುತ್ತಿದೆ ಎಂದು ಅವರು ಘೋಷಿಸಿದರು. ಕೊಯಮತ್ತೂರಿನಿಂದ ಎರಡು ಬಾರಿ ಸಂಸದರಾಗಿ, ತಮಿಳುನಾಡಿನ ಮಾಜಿ ಬಿಜೆಪಿ ಅಧ್ಯಕ್ಷರಾಗಿ, ಪ್ರಸ್ತುತ ಮಹಾರಾಷ್ಟ್ರ ರಾಜ್ಯಪಾಲರಾಗಿ ಸೇವೆ ಸಲ್ಲಿಸಿರುವ ರಾಧಾಕೃಷ್ಣನ್, ತಮಿಳುನಾಡು



ರಾಧಾಕೃಷ್ಣನ್ ಅವರ ನಾಮನಿರ್ದೇಶನವನ್ನು ಸ್ವಾಗತಿಸುತ್ತಾ, ಬಿಜೆಪಿಗೆ ಸೈದ್ಧಾಂತಿಕ ವಿರೋಧವನ್ನು ಉಲ್ಲೇಖಿಸಿ ಡಿಎಂಕೆ ಈಗಾಗಲೇ ಬೆಂಬಲವನ್ನು ತಳ್ಳಿಹಾಕಿದೆ. ಆದರೆ ಬಿಜೆಪಿ ಇದನ್ನು ಆರಂಭಿಕ ಹಂತವಾಗಿ ನೋಡುತ್ತದೆ ಡಿಎಂಕೆ ತಮಿಳು ಹೆಮ್ಮೆಯ ಮೇಲೆ ಅಸಮಂಜಸವಾಗಿದೆ ಎಂದು ಚಿತ್ರಿಸುತ್ತಾ ತಮಿಳು ನಾಯಕರನ್ನು ರಾಷ್ಟ್ರೀಯ ಪ್ರಾಮುಖ್ಯತೆಗೆ ಏರಿಸುವ ಪಕ್ಷವಾಗಿ ತನ್ನನ್ನು ತಾನು ಇರಿಸಿಕೊಂಡಿದೆ.

ಸಿಎಂ ಎಂಕೆ ಸ್ಟಾಲಿನ್ ಸೇರಿದಂತೆ ಪಕ್ಷಾತೀತವಾಗಿ ಒಳ್ಳೆಯ ಅಭಿಪ್ರಾಯ ಹೊಂದಿದ್ದಾರೆ. ಅವರ ನಾಮನಿರ್ದೇಶನವು ಅಂಗೀಕಾರವಾದರೆ, ಡಾ. ಸರ್ವಪಲ್ಲಿ ರಾಧಾಕೃಷ್ಣನ್, ಅಧ್ಯಕ್ಷರಾದ ಆರ್ ವೆಂಕಟರಾಮನ್ ನಂತರ ಅವರನ್ನು ತಮಿಳುನಾಡಿನ ಮೂರನೇ ಉಪಾಧ್ಯಕ್ಷರನ್ನಾಗಿ ಮಾಡಿದಂತಾಗುತ್ತದೆ.

## ಎಸ್‌ಐಆರ್ ಮತಚೋರಿಯ ಹೊಸ ಆಸ್ತ್ರ; ರಾಹುಲ್ ಗಾಂಧಿ

**ಔರಂಗಾಬಾದ್:** ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಸೋಮವಾರ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಮತ ಚೋರಿಯ ಅಸ್ತ್ರ ಎಂದು ಹೇಳಿದ್ದಾರೆ, ಒಬ್ಬ ವ್ಯಕ್ತಿ, ಒಂದು ಮತ ತತ್ವವನ್ನು ರಕ್ಷಿಸುವುದಾಗಿ ಪ್ರತಿಜ್ಞೆ ಮಾಡಿದ್ದಾರೆ. ಬಿಹಾರದಲ್ಲಿ ಹಿಂದಿನ ಲೋಕಸಭಾ ಚುನಾವಣೆಯಲ್ಲಿ ಮತ ಚಲಾಯಿಸಿದ ಆದರೆ ಎಸ್‌ಐಆರ್ ವ್ಯಾಯಾಮದಲ್ಲಿ ಅವರ ಹೆಸರನ್ನು ಅಳಿಸಲಾಗಿದ್ದ ಜನರ ಗುಂಪಿನೊಂದಿಗಿನ ಭೇಟಿಯ ಬಗ್ಗೆ ಮಾತನಾಡುತ್ತಾ ಅವರು ತಮ್ಮ ವಾಟ್ಸಾಪ್‌ಚಾನೆಲ್‌ನಲ್ಲಿ ಪೋಸ್ಟ್‌ನಲ್ಲಿ ಈ ಹೇಳಿಕೆಗಳನ್ನು ನೀಡಿದ್ದಾರೆ. ಸಸಾರಂನಲ್ಲಿ ತಮ್ಮ ಮತ ಅಧಿಕಾರ ಯಾತ್ರೆಯ ಪ್ರಾರಂಭದಲ್ಲಿ ಗಾಂಧಿಯವರು ಈ ಗುಂಪನ್ನು ಭೇಟಿಯಾದರು. ಸಭೆಯ ಚಿತ್ರದೊಂದಿಗೆ



ಹಿಂದಿಯಲ್ಲಿ ತಮ್ಮ ಎಕ್ಸ್‌ಪೋಸ್ಟ್‌ನಲ್ಲಿ, ಲೋಕಸಭೆಯ ವಿರೋಧ ಪಕ್ಷದ ನಾಯಕರು, ಎಸ್‌ಐಆರ್ ಮತ ಕಳ್ಳತನದ ಹೊಸ ಅಸ್ತ್ರ. ಕಾಕತಾಳೀಯವಾಗಿ, ಈ ಚಿತ್ರದಲ್ಲಿ ನನ್ನೊಂದಿಗೆ ನಿಂತಿರುವ ಈ ಜನರು ಈ ಕಳ್ಳತನದ ಜೀವಂತ ಪುರಾವೆಯಾಗಿದ್ದಾರೆ ಎಂದು ಹೇಳಿದರು. ಅವರೆಲ್ಲರೂ 2024 ರ ಲೋಕಸಭಾ ಚುನಾವಣೆಯಲ್ಲಿ ಮತ ಚಲಾಯಿಸಿದ್ದರು ಆದರೆ ಬಿಹಾರ ವಿಧಾನಸಭಾ ಚುನಾವಣೆಗಳು ಬರುವ ಹೊತ್ತಿಗೆ, ಅವರ ಗುರುತು, ಅವರ ಅಸ್ತಿತ್ವವು ಭಾರತದ ಪ್ರಜಾಪ್ರಭುತ್ವದಿಂದ ಅಳಿಸಿಹೋಗಿತ್ತು ಎಂದು ಅವರು ಹೇಳಿದರು. ಅವರು ಯಾರೆಂದು ನಿಮಗೆ ತಿಳಿದಿದೆಯೇ ರಾಜ್ ಮೋಹನ್ ಸಿಂಗ್ (70) ರೈತ, ನಿವೃತ್ತ ಸೈನಿಕ ಉಮ್ರಾವತಿ ದೇವಿ (35) ದಲಿತ, ಕಾರ್ಮಿಕ; ಧಂಜಯ್ ಕುಮಾರ್ ಬಿಂದ್ (30) ಹಿಂದುಳಿದ ವರ್ಗ, ಕಾರ್ಮಿಕ; ಸೀತಾ ದೇವಿ (45) ಮಹಿಳೆ, ಮಾಜಿ ಕಾರ್ಮಿಕ; ರಾಜು ದೇವಿ (55) ಹಿಂದುಳಿದ ವರ್ಗ, ಕಾರ್ಮಿಕ; ಮೊಹಮ್ಮದ್ದೀನ್ ಅನ್ಸಾರಿ (52) ಅಲ್ಪಸಂಖ್ಯಾತ ಮತ್ತು ಕಾರ್ಮಿಕ, ಅವರು ಮಾಹಿತಿ ನೀಡಿದರು.

## 4.4ಕೋಟಿ ಮೌಲ್ಯದ ಹೆರಾಯಿನ್ ವಶ, ಮೂವರು ಮಹಿಳೆಯರ ಬಂಧನ

**ಶಿಲ್ಲಾಂಗ್:** ಮೇಘಾಲಯದ ಪೂರ್ವ ಜೈನ್ತಿಯಾ ಹಿಲ್ಸ್ ಜಿಲ್ಲೆಯಲ್ಲಿ ಮಣಿಪುರದ ಮೂವರು ಮಹಿಳೆಯರನ್ನು ಬಂಧಿಸಲಾಗಿದ್ದು, ಅವರ ಬಳಿ 4.4 ಕೋಟಿ ರೂ. ಮೌಲ್ಯದ ಹೆರಾಯಿನ್ ವಶಪಡಿಸಿಕೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಖಚಿತ ಸುಳಿವಿನ ಮೇರೆಗೆ ಕಾರ್ಯನಿರ್ವಹಿಸಿದ ಮಾದಕ ದ್ರವ್ಯ ವಿರೋಧಿ ಕಾರ್ಯಪಡೆ, ಜಿಲ್ಲಾ ಪೊಲೀಸರ ತಂಡವು ಉಮ್ಕಿಯಾಂಗ್ ಗಸ್ತು ಠಾಣೆಯಲ್ಲಿ ಕಾರೊಂದನ್ನು ತಡೆದು ವಾಹನದಲ್ಲಿ ಶೋಧ ಕಾರ್ಯಾಚರಣೆ ನಡೆಸಿದೆ ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಶೋಧದ ಸಮಯದಲ್ಲಿ ಮೂರು ಪ್ರಯಾಣ ಚೀಲಗಳನ್ನು ವಶಪಡಿಸಿಕೊಳ್ಳಲಾಗಿದೆ. ಪೊಲೀಸರು 80 ಸೋಪ್ ಬಾಕ್ಸ್‌ಗಳಲ್ಲಿ ಪ್ಯಾಕ್ ಮಾಡಲಾದ 961.33 ಗ್ರಾಂ ಹೆರಾಯಿನ್ ಅನ್ನು ವಶಪಡಿಸಿಕೊಂಡಿದ್ದಾರೆ ಎಂದು ಪೂರ್ವ ಜೈನ್ತಿಯಾ ಹಿಲ್ಸ್ ಪೊಲೀಸ್ ವರಿಷ್ಠಾಧಿಕಾರಿ ವಿಕಾಶ್ ಕುಮಾರ್ ಪಿಟಿಐಗೆ ತಿಳಿಸಿದ್ದಾರೆ.


ಮಣಿಪುರದ ಖೊಂಗ್‌ಜೋಮ್ ನಿವಾಸಿಗಳಾದ ಮೂವರು ಮಹಿಳೆಯರನ್ನು ಬಂಧಿಸಲಾಗಿದ್ದು, ಲುಮ್ಶ್ಯಾಂಗ್ ಪೊಲೀಸ್ ಠಾಣೆಯಲ್ಲಿ ಮಾದಕ ದ್ರವ್ಯ, ಮನೋವಿಕೃತ ವಸ್ತುಗಳ ಕಾಯ್ದೆಯಡಿ ಪ್ರಕರಣ ದಾಖಲಿಸಲಾಗಿದೆ ಎಂದು ಅವರು ಹೇಳಿದರು ಮಣಿಪುರದ ಚುರಾಚಂದ್‌ಪುರದಿಂದ ಶಿಲ್ಲಾಂಗ್‌ಗೆ ಪ್ರಯಾಣಿಸುತ್ತಿದ್ದಾಗ ಅವರ ಕಾರನ್ನು ತಡೆಹಿಡಿಯಲಾಗಿದೆ ಎಂದು ಅಧಿಕಾರಿ ಹೇಳಿದರು. ಅದೇ ದಿನ ನಡೆದ ಮತ್ತೊಂದು ಕಾರ್ಯಾಚರಣೆಯಲ್ಲಿ, ಖ್ಲೈಹ್ರಿಯಾತ್ ಪೊಲೀಸ್ ಠಾಣೆ ವ್ಯಾಪ್ತಿಯ ಬೈಂಡಿಹತಿ ಗ್ರಾಮದಲ್ಲಿ ಪೊಲೀಸರು ಬಸ್ಸನ್ನು ತಡೆದು, ಒಂಬತ್ತು ಸೋಪ್ ಬಾಕ್ಸ್‌ಗಳಲ್ಲಿ ಪ್ಯಾಕ್ ಮಾಡಲಾದ 91.86 ಗ್ರಾಂ ಹೆರಾಯಿನ್ ಅನ್ನು ವಶಪಡಿಸಿಕೊಂಡ ನಂತರ ಶಿಲ್ಲಾಂಗ್‌ನ ಒಬ್ಬ ವ್ಯಕ್ತಿಯನ್ನು ಬಂಧಿಸಿದರು ಎಂದು ಎಸ್ಪಿ ಹೇಳಿದರು.

ವಶಪಡಿಸಿಕೊಂಡ ನಿಷಿದ್ಧ ವಸ್ತುವಿನ ಮೌಲ್ಯ 40 ಲಕ್ಷ ರೂ.ಗಳಾಗಿದ್ದು, ಬಸ್ ಮಣಿಪುರದಿಂದಲೂ ಬರುತ್ತಿದೆ ಎಂದು ಅವರು ಹೇಳಿದರು.ಅಂತರ್ ರಾಜ್ಯ ಮಾದಕವಸ್ತು ಸಿಂಡಿಕೇಟ್‌ನ ಸಂಪರ್ಕಗಳನ್ನು ಗುರುತಿಸಲು ತನಿಖೆ ನಡೆಯುತ್ತಿದೆ ಎಂದು ಎಸ್ಪಿ ಹೇಳಿದರು. ಮಾದಕ ವಸ್ತುಗಳ ಪೂರೈಕೆಯ ಬಗ್ಗೆ ಮಾಹಿತಿಯನ್ನು ಹಂಚಿಕೊಳ್ಳಲು ಅವರು ಸಾರ್ವಜನಿಕರಿಗೆ ಮನವಿ ಮಾಡಿದರು, ಗೌಪ್ಯತೆ ಮತ್ತು ವಿಶ್ವಾಸಾರ್ಹ ಮಾಹಿತಿಗಾಗಿ ಸೂಕ್ತ ಪ್ರತಿಫಲವನ್ನು ಖಚಿತಪಡಿಸಿದರು.

### ಶುಭಾಂಶು ಶುಕ್ಲಾ ಬಾಹ್ಯಾಕಾಶ ಸಾಹಸ ಕುರಿತ ಚರ್ಚೆಯಲ್ಲಿ ಭಾಗವಹಿಸದ ಪ್ರತಿಪಕ್ಷ; ದುರದೃಷ್ಟಕರ ಎಂದ ರಾಜನಾಥ್ ಸಿಂಗ್

## ಚರ್ಚೆಯಲ್ಲಿ ಭಾಗವಹಿಸದೇ ಪ್ರತಿಭಟನೆ ಮುಂದುವರೆಸಿದ ವಿಪಕ್ಷಗಳು

**ಹೊಸದಿಲ್ಲಿ:** ಲೋಕಸಭೆಯಲ್ಲಿ ಸೋಮವಾರ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಅವರ ಇತ್ತೀಚಿನ ಬಾಹ್ಯಾಕಾಶ ಸಾಹಸದ ಕುರಿತು ನಡೆದ ಚರ್ಚೆಯ ಸಂದರ್ಭದಲ್ಲಿ, ವಿಪಕ್ಷಗಳು ತೋರಿದ



ವರ್ತನೆಯನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ತೀವ್ರವಾಗಿ ಖಂಡಿಸಿದ್ದಾರೆ. ಶುಭಾಂಶು ಶುಕ್ಲಾ ಅವರ ಬಾಹ್ಯಾಕಾಶ ಯಾತ್ರೆ ಮತ್ತು ಭಾರತದ ಭವಿಷ್ಯದ ಬಾಹ್ಯಾಕಾಶ ಯೋಜನೆಗಳ ಕುರಿತು, ಲೋಕಸಭೆಯಲ್ಲಿ ಚರ್ಚೆ ನಿಗದಿಪಡಿಸಲಾಗಿತ್ತು. ಆದರೆ ವಿಪಕ್ಷಗಳು ಚರ್ಚೆಯಲ್ಲಿ ಭಾಗವಹಿಸುವುದನ್ನು ಬಿಟ್ಟು, ಬಿಹಾರ ಮತದಾರರ ಪಟ್ಟಿ ಪರಿಷ್ಕರಣೆ ವಿರುದ್ಧ ಪ್ರತಿಭಟನೆ ಮಾಡಲಾರಂಭಿಸಿದರು. ಚುನಾವಣಾ ಆಯೋಗದ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದ ವಿಪಕ್ಷ ಸದಸ್ಯರಿಗೆ, ಚರ್ಚೆಯಲ್ಲಿ ಭಾಗವಹಿಸುವಂತೆ ಪದೇ ಪದೇ ಮನವಿ ಮಾಡಿಕೊಳ್ಳಲಾಯಿತು. ಆದರೆ ಪ್ರತಿಪಕ್ಷ ಸದಸ್ಯರು ಚರ್ಚೆಯಲ್ಲಿ ಭಾಗವಹಿಸದೇ ತಮ್ಮ ಪ್ರತಿಭಟನೆಯನ್ನು ಮುಂದುವರೆಸಿದರು. ಸೋಮವಾರ ಬೆಳಿಗ್ಗೆ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರು ಸಂಸತ್ತು ಶುಭಾಂಶು ಶುಕ್ಲಾ ಅವರ ಬಾಹ್ಯಾಕಾಶ ಪ್ರಯಾಣದ ಕುರಿತು ವಿಶೇಷ ಚರ್ಚೆಯನ್ನು ನಡೆಸುವ ಮೂಲಕ ಅವರನ್ನು ಗೌರವಿಸುತ್ತದೆ ಎಂದು ಹೇಳಿದ್ದರು. ಈ ಚರ್ಚೆಯಲ್ಲಿ ವಿರೋಧ ಪಕ್ಷದ ಸಹಕಾರ ಕೋರಿದ್ದ ಕಿರಣ್ ರಿಜಿಜು, ಭಿನ್ನಾಭಿಪ್ರಾಯಗಳನ್ನು



**ಶುಕ್ಲಾ ಭಾರತಕ್ಕೆ ವಾಪಸ್ಸು**

ಬದಿಗಿಟ್ಟು ರಾಷ್ಟ್ರೀಯ ನಾಯಕನ ಸಾಧನೆಯನ್ನು ಆಚರಿಸೋಣ ಎಂದು ಮನವಿ ಮಾಡಿದ್ದರು. ಇತ್ತೀಚೆಗಷ್ಟೇ ಭಾರತೀಯ ಗಗನಯಾತ್ರಿ, ಶುಭಾಂಶು ಶುಕ್ಲಾ ಭಾರತಕ್ಕೆ ವಾಪಸ್ಸು ಬಂದಿದ್ದಾರೆ.

**ರಾಜನಾಥ್ ಕಿಡಿ:** ಶುಭಾಂಶು ಶುಕ್ಲಾ ಅವರ ಕುರಿತ ಚರ್ಚೆ ಸಂದರ್ಭದಲ್ಲಿ ಪ್ರತಿಭಟನೆ ನಡೆಸಿದ ವಿಪಕ್ಷ ಸದಸ್ಯರ ವರ್ತನೆಯನ್ನು ತೀವ್ರವಾಗಿ ತರಾಟೆಗೆ ತೆಗೆದುಕೊಂಡಿರುವ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಇದು ಅತ್ಯಂತ ದುರದೃಷ್ಟಕರ ಮತ್ತು ನಿರಾಶಾದಾಯಕ ಎಂದು ಬಣ್ಣಿಸಿದ್ದಾರೆ. ಬಾಹ್ಯಾಕಾಶದಂತಹ ವಿಷಯಗಳನ್ನು ಪಕ್ಷಪಾತ ರಾಜಕೀಯಕ್ಕಿಂತ ಮೇಲಿಡಬೇಕು ಎಂದು ಹೇಳಿರುವ ರಾಜನಾಥ್ ಸಿಂಗ್, ವಿರೋಧ ಪಕ್ಷಗಳು ಚರ್ಚೆಯಲ್ಲಿ ಭಾಗವಹಿಸಿ ಭಾರತದ ಬಾಹ್ಯಾಕಾಶ ಕಾರ್ಯಕ್ರಮಕ್ಕೆ ರಚನಾತ್ಮಕ ಸಲಹೆಗಳನ್ನು ನೀಡಬಹುದಿತ್ತು ಎಂದು ಅಭಿಪ್ರಾಯಪಟ್ಟಿದ್ದಾರೆ.

ವಿರೋಧ ಪಕ್ಷದ ಪ್ರತಿಭಟನೆಯನ್ನು ತೀವ್ರವಾಗಿ ಟೀಕಿಸಿದ ಕೇಂದ್ರ ಬಾಹ್ಯಾಕಾಶ ಮತ್ತು ತಂತ್ರಜ್ಞಾನ ಸಚಿವ ಡಾ. ಜಿತೇಂದ್ರ ಸಿಂಗ್, ವಿಜ್ಞಾನಿಗಳು ಮತ್ತು ಗಗನಯಾತ್ರಿಗಳನ್ನು ಪ್ರೋತ್ಸಾಹಿಸುವಂತೆ ಮನವಿ ಮಾಡಿದರು. ನಿಮಗೆ ಸರ್ಕಾರ ಅಥವಾ ಬಿಜೆಪಿಯೊಂದಿಗೆ ಭಿನ್ನಾಭಿಪ್ರಾಯಗಳಿರಬಹುದು, ಆದರೆ ಇದು ರಾಷ್ಟ್ರಕ್ಕೆ ಹೆಮ್ಮೆ ತಂದ ಗಗನಯಾತ್ರಿ ಮತ್ತು ವಾಯುಪಡೆಯ ಅಧಿಕಾರಿಯ ಬಗೆಗಿನ ಚರ್ಚೆಯಾಗಿದೆ. ಕನಿಷ್ಠ ಪಕ್ಷ ನಮ್ಮ ವಿಜ್ಞಾನಿಗಳು, ಗಗನಯಾತ್ರಿಗಳಿಗಾದರೂ ಪ್ರೋತ್ಸಾಹ ನೀಡಿ.

-ಜಿತೇಂದ್ರ ಸಿಂಗ್

ಈ ಚರ್ಚೆಯು ಭಾರತದ ಬಾಹ್ಯಾಕಾಶ ಕಾರ್ಯಕ್ರಮ ಮತ್ತು 2047ರಲ್ಲಿ ಬಾಹ್ಯಾಕಾಶ ಕ್ಷೇತ್ರದಲ್ಲಿ ವಿಕಸಿತ ಭಾರತದ ಪಾತ್ರ ಎಂಬ ವಿಷಯದ ಮೇಲೆ ನಡೆಯುತ್ತಿತ್ತು. ಇದು ರಾಷ್ಟ್ರೀಯ ಸಾಧನೆ, ದೇಶದ ಹೆಮ್ಮೆ, ಸ್ವಾಭಿಮಾನ ಮತ್ತು ಭವಿಷ್ಯದಲ್ಲಿ ವೈಜ್ಞಾನಿಕ ಮತ್ತು ರಾಷ್ಟ್ರೀಯ ಭದ್ರತೆಯ ನಿರೀಕ್ಷೆಗಳಿಗೆ ಸಂಬಂಧಿಸಿದೆ. ಪ್ರತಿಪಕ್ಷಗಳು ಅದನ್ನು ತಡೆದ ರೀತಿ, ಇಂದಿನ ಅವರ ನಡವಳಿಕೆ ಅತ್ಯಂತ ನಿರಾಶಾದಾಯಕವಾಗಿತ್ತು ಎಂದು ರಕ್ಷಣಾ ಸಚಿವರು ತೀವ್ರ ಅಸಮಾಧಾನ ಹೊರಹಾಕಿದ್ದಾರೆ. ಮುಂದುವರೆದು, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ, ಭಾರತವು ಬಾಹ್ಯಾಕಾಶ ಪರಿಶೋಧನೆಯಲ್ಲಿ ತಲುಪುತ್ತಿರುವ ಅಭೂತಪೂರ್ವ ಎತ್ತರಗಳು ಗಮನಾರ್ಹವಾಗಿವೆ. ವಿರೋಧ ಪಕ್ಷವು ಚರ್ಚೆಯಲ್ಲಿ ಭಾಗವಹಿಸಿ ಭಾರತದ ಬಾಹ್ಯಾಕಾಶ ಕಾರ್ಯಕ್ರಮಕ್ಕೆ ರಚನಾತ್ಮಕ ವಿಮರ್ಶೆ, ಟೀಕೆ ಮತ್ತು ಸಲಹೆಗಳನ್ನು ನೀಡಬಹುದಿತ್ತು ಎಂದು ರಾಜನಾಥ್ ಸಿಂಗ್ ಖೇದ ವ್ಯಕ್ತಪಡಿಸಿದ್ದಾರೆ. ಇತ್ತೀಚೆಗೆ ತಮ್ಮ ಸ್ವಾತಂತ್ರ್ಯ ದಿನಾಚರಣೆ ಮುನ್ನಾ ದಿನದ ಭಾಷಣದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಶುಭಾಂಶು ಶುಕ್ಲಾ ಅವರ ಬಾಹ್ಯಾಕಾಶ ಯಾತ್ರೆಗೆ ಮೆಚ್ಚುಗೆ ವ್ಯಕ್ತಪಡಿಸಿದ್ದರು.

**ಒಂದು ಐತಿಹಾಸಿಕ ಮೈಲುಗಲ್ಲು**

ಪ್ರತಿಪಕ್ಷಗಳು ತಮ್ಮ ಪ್ರತಿಭಟನೆಯನ್ನು ಮುಂದುವರೆಸಿದವು. ಭಾರತೀಯ ವಾಯುಪಡೆಯಲ್ಲಿ ಗ್ರೂಪ್ ಕ್ಯಾಪ್ಟನ್ ಆಗಿರುವ ಶುಭಾಂಶು ಶುಕ್ಲಾ, ನಾಸಾ, ಇಸ್ರೋ ಮತ್ತು ಆಕ್ಸಿಯಮ್ ಸಂಸ್ಥೆ ಒಟ್ಟಾಗಿ ಹಮ್ಮಿಕೊಂಡಿದ್ದ ಆಕ್ಸಿಯಮ್-4 ಬಾಹ್ಯಾಕಾಶ ಕಾರ್ಯಾಚರಣೆಯಲ್ಲಿ, ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣವನ್ನು ತಲುಪಿ ಬಂದಿದ್ದರು. ಶುಭಾಂಶು ಶುಕ್ಲಾ ಅವರ ಐಎಸ್ಎಸ್ ಕಾರ್ಯಾಚರಣೆ, ಭಾರತೀಯ ಬಾಹ್ಯಾಕಾಶ ಕ್ಷೇತ್ರದಲ್ಲಿ ಒಂದು ಐತಿಹಾಸಿಕ ಮೈಲುಗಲ್ಲು ಎಂದು ಪರಿಗಣಿಸಲಾಗಿದೆ.

## ಮಿನಿ ನ್ಯೂಸ್

### ಭಾರತ-ಪಾಕ್ ನಡುವೆ ಮತ್ತೆ ಯುದ್ಧ ಸಾಧ್ಯತೆ : ಮಾರ್ಕೊ ರುಬಿಯೋ

**ವಾಷಿಂಗ್ಟನ್:** ಭಾರತ, ಪಾಕಿಸ್ತಾನ ನಡುವೆ ಮತ್ತೆ ಯುದ್ಧ ನಡೆಯುವ ಸಾಧ್ಯತೆಗಳಿವೆ ಎಂದು ಅಮೆರಿಕ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೋ ಭವಿಷ್ಯ ನುಡಿದಿದ್ದಾರೆ. ಮಾಧ್ಯಮವೊಂದಕ್ಕೆ ನೀಡಿದ ಸಂದರ್ಶನದಲ್ಲಿ ಮಾತನಾಡಿದ ಅವರು, ಭಾರತ ಮತ್ತು ಪಾಕಿಸ್ತಾನದ ನಡುವೆ ಸಂಘರ್ಷ ಏರ್ಪಡುವ ಸುಳಿವು ನೀಡಿದ್ದಾರೆ. ಭಾರತ ಮತ್ತು ಪಾಕಿಸ್ತಾನ ನಡುವಿನ ಕದನ ವಿರಾಮ ಒಪ್ಪಂದಗಳು ದುರ್ಬಲವಾಗಿವೆ. ಅವುಗಳನ್ನ ನಿರ್ವಹಣೆ ಮಾಡುವುದು ಸವಾಲಿನ ಕೆಲಸವಾಗಿದೆ.

ಆದ್ದರಿಂದ ಕದನ ವಿರಾಮ ಶೀಘ್ರದಲ್ಲೇ ಸ್ಥಗಿತಗೊಳ್ಳಬಹುದು ಎಂದು ಅವರು ತಿಳಿಸಿದ್ದಾರೆ. ಪ್ರತಿದಿನ ನಾವು ಭಾರತ-ಪಾಕಿಸ್ತಾನದ ನಡುವೆ ಏನಾಗುತ್ತಿದೆ? ಕಾಂಬೋಡಿಯಾ ಥೈಲ್ಯಾಂಡ್ ನಡುವೆ ಏನಾಗುತ್ತಿದೆ? ಅನ್ನೋದರ ಮೇಲೆ ಕಣ್ಣಿಟ್ಟಿದ್ದೇವೆ. ಈ ನಿಟ್ಟಿನಲ್ಲಿ ನೋಡಿದಾಗ ಭಾರತ-ಪಾಕ್ ಕದನ ವಿರಾಮ ಸ್ಥಗಿತವಾಗಬಹುದು ಅನ್ನಿಸಿರುವುದಾಗಿ ತಿಳಿಸಿದರು. ಇದೇ ವೇಳೆ ಭಾರತ ಮತ್ತು ಪಾಕಿಸ್ತಾನ ನಡುವೆ ಯುದ್ಧ ನಿಲ್ಲಿಸಿದ್ದು ಟ್ರಂಪ್ ಅಂತ ರೂಬಿಯೋ ಕೂಡ ಪುನರುಚ್ಚರಿಸಿದ್ದಾರೆ. ನಾವು ತುಂಬಾ ಅದೃಷ್ಟವಂತರು. ಶಾಂತಿ, ಶಾಂತಿ ಸಾಧನೆಯನ್ನೇ ತಮ್ಮ ಆಡಳಿತದ ಆದ್ಯತೆಯನ್ನಾಗಿ ಮಾಡಿಕೊಂಡ ಅಧ್ಯಕ್ಷರನ್ನ ಹೊಂದಿರುವುದಕ್ಕೆ ಕೃತಜ್ಞರಾಗಿರಬೇಕು ಎಂದು ಟ್ರಂಪ್ ಗುಣಗಾನ ಮಾಡಿದ್ದಾರೆ. ಒಂದು ದಿನದ ಹಿಂದೆಯಷ್ಟೆ ಟ್ರಂಪ್ ಮಾಧ್ಯಮದಲ್ಲಿ ಮಾತನಾಡುವಾಗ ಭಾರತ ಮತ್ತು ಪಾಕ್ ಯುದ್ಧ ನಿಲ್ಲಿಸಿದ್ದು ನಾನೇ ಎಂದು ಮತ್ತೆ ಹೇಳಿಕೊಂಡಿದ್ದರು.

### ದೆಹಲಿಯ ಮೂರು ಶಾಲೆಗಳಿಗೆ ಬಾಂಬ್ ಬೆದರಿಕೆ

**ನವದೆಹಲಿ:** ದೆಹಲಿಯ ದ್ವಾರಕಾ ಪ್ರದೇಶದ ಮೂರು ಶಾಲೆಗಳಿಗೆ ಸೋಮವಾರ ಬೆಳಿಗ್ಗೆ ಇ-ಮೇಲ್ ಮೂಲಕ ಬಾಂಬ್ ಬೆದರಿಕೆ ಬಂದಿದೆ. ಇದು ವಿದ್ಯಾರ್ಥಿಗಳಲ್ಲಿ ಭೀತಿ ಮೂಡಿಸಿದ್ದು, ಕೂಡಲೇ ಮಕ್ಕಳನ್ನು ಹೊರಗೆ ಕಳುಹಿಸಿದ್ದಾರೆ. ದೆಹಲಿ ಪಬ್ಲಿಕ್ ಸ್ಕೂಲ್ (ಡಿಪಿಎಸ್), ಮಾಡ್ರನ್ ಕಾನ್ವೆಂಟ್ ಸ್ಕೂಲ್ ಮತ್ತು ಶ್ರೀ ರಾಮ್ ವರ್ಲ್ಡ್ ಸ್ಕೂಲ್ ಈ ಬೆದರಿಕೆ ಕರೆ ಬಂದಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ದೆಹಲಿ ಪೊಲೀಸರು, ಬಾಂಬ್ ನಿಷ್ಕ್ರಿಯ ದಳ ಮತ್ತು ಶ್ವಾನ ದಳದ ತಂಡಗಳು ಸ್ಥಳಕ್ಕೆ ಧಾವಿಸಿ ಶಾಲೆಗಳಲ್ಲಿ ಶೋಧ ಕಾರ್ಯಾಚರಣೆ ನಡೆಸಿದ್ದಾರೆ. ದುಷ್ಕರ್ಮಿಗಳು ಬೆದರಿಕೆ ಸಂದೇಶ ಕಳಿಸಿರುವ ಐಪಿ ವಿಳಾಸವನ್ನು ಪತ್ತೆಹಚ್ಚಲು ಸೈಬರ್ ತಂಡಗಳು ಕಾರ್ಯನಿರ್ವಹಿಸುತ್ತಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

### ಕೃಷ್ಣ ಜನಾಷ್ಟಮಿ ಮೆರವಣಿಗೆ ವೇಳೆ ವಿದ್ಯುತ್ ಅವಘಡ, ಐದು ಸಾವು

**ಹೈದರಾಬಾದ್:** ಶ್ರೀಕೃಷ್ಣ ಜನಾಷ್ಟಮಿ ಪ್ರಯುಕ್ತ ನಡೆದ ಮೆರವಣಿಗೆ ವೇಳೆ ರಥವೊಂದು ವಿದ್ಯುತ್ ತಂತಿಗಳಿಗೆ ತಾಕಿದ ಪರಿಣಾಮ ಸಂಭವಿಸಿದ ಅವಘಡದಲ್ಲಿ ಐವರು ಸಾವನ್ನಪ್ಪಿದ್ದಾರೆ. ಮಧ್ಯರಾತ್ರಿ 12:30ರ ಸುಮಾರಿಗೆ ರಾಮಂತಪುರದ ಗೋಕುಲನಗರದಲ್ಲಿ ಶೋಭಾ ಯಾತ್ರೆಯಲ್ಲಿನ ಈ ದುರಂತ ಸಂಭವಿಸಿದೆ. ಮೃತರನ್ನು ಕೃಷ್ಣ ಯಾದವ್ (21), ಸುರೇಶ್ ಯಾದವ್ (34), ಶ್ರೀಕಾಂತ್ ರೆಡ್ಡಿ (35), ರುದ್ರ ವಿಕಾಸ್ (39), ರಾಜೇಂದ್ರ ರೆಡ್ಡಿ (45) ಎಂದು ಗುರುತಿಸಲಾಗಿದ್ದು, ಗಾಯಗೊಂಡವರಲ್ಲಿ ಕೇಂದ್ರ ಸಚಿವ ಕಿಶನ್ ರೆಡ್ಡಿಯ ಗನ್‌ಮ್ಯಾನ್ ಶ್ರೀನಿವಾಸ್ ಕೂಡ ಸೇರಿದ್ದಾರೆ. ಸುಮಾರು 10 ಮಂದಿ ಗಾಯಗೊಂಡವರನ್ನು ವಿವಿಧ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಮೃತ ದೇಹಗಳನ್ನು ಗಾಂಧಿ ಆಸ್ಪತ್ರೆಗೆ ಮರಣೋತ್ತರ ಪರೀಕ್ಷೆಗಾಗಿ ಕಳುಹಿಸಲಾಗಿದೆ. ಈ ಘಟನೆಯಿಂದ ಸ್ಥಳೀಯರಲ್ಲಿ ಆತಂಕ ಮತ್ತು ಶೋಕದ ವಾತಾವರಣ ನಿರ್ಮಾಣವಾಗಿದೆ. ಭಾರೀ ಮಳೆಯ ನಡುವೆಯೂ ರಾತ್ರಿ 9 ಗಂಟೆಗೆ ಆರಂಭವಾದ ಈ ಯಾತ್ರೆಯು ಮಧ್ಯರಾತ್ರಿಯ ವೇಳೆಗೆ ಯಾದವ ಸಂಘದ ಬಳಿಗೆ ತಲುಪಿತು. ರಥವನ್ನು ಜೀಪ್‌ನಿಂದ ಎಳೆಯಲಾಗುತ್ತಿತ್ತು. ಜೀಪ್‌ನ ಎಂಜಿನ್‌ನಲ್ಲಿ ತೊಂದರೆ ಕಾಣಿಸಿಕೊಂಡಾಗ, ಭಕ್ತರು ರಥವನ್ನು ಕೈಯಿಂದ ತಳ್ಳಿದ್ದಾರೆ. ಈ ವೇಳೆ ರಥದ ಮೇಲ್ಭಾಗವು 11 ಕೆವಿ ವಿದ್ಯುತ್ ತಂತಿಗಳಿಗೆ ತಾಕಿದ್ದು, ರಥವನ್ನು ಹಿಡಿದಿದ್ದವರಿಗೆ ವಿದ್ಯುತ್ ಶಾಕ್ ತಗುಲಿದೆ. ಇನ್ನೂ ರಥದ ಮೇಲೆ ಇದ್ದ ಪೂಜಾರಿ ರಥದ ಲೋಹದ ಭಾಗವನ್ನು ಹಿಡಿಯದೇ ಇದ್ದ ಕಾರಣ ಯಾವುದೇ ಗಾಯವಿಲ್ಲದೇ ಪಾರಾಗಿದ್ದಾರೆ. ವಿದ್ಯುತ್ ಶಾಕ್‌ನಿಂದ ರಥದ ಸುತ್ತಲೂ ಇದ್ದವರು ಕೆಳಗೆ ಬಿದ್ದಿದ್ದು, ವಿದ್ಯುತ್ ವೈರ್‌ಗಳಿಂದ ಬೆಂಕಿಯ ಕಿಡಿಗಳು ಬೀಳುತ್ತಿತ್ತು ದೃಶ್ಯ ಭಯಾನಕವಾಗಿತ್ತು ಎಂದು ಸ್ಥಳೀಯರು ತಿಳಿಸಿದ್ದಾರೆ.

### ಚುನಾವಣಾ ಆಯೋಗದ ಕ್ರಮ ಸಮರ್ಥಿಸಿಕೊಂಡ ಆಯುಕ್ತ ರಾವತ್

**ಇಂದೋರ್:** ಮಾಜಿ ಮುಖ್ಯ ಚುನಾವಣಾ ಆಯುಕ್ತ ಒ.ಪಿ. ರಾವತ್ ಚುನಾವಣಾ ಆಯೋಗವನ್ನು ನಿಷ್ಪಕ್ಷಪಾತ ಎಂದು ಕರೆದಿದ್ದಾರೆ, ಬಿಹಾರದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಗೊಂದಲ ತೆರವುಗೊಳಿಸಲು ನಡೆಸಿದ ಪತ್ರಿಕಾಗೋಷ್ಠಿಯನ್ನು ಸ್ವಾಗತಿಸಿದ್ದಾರೆ. ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರ ಮತ ಕಳ್ಳತನ ಆರೋಪದ ವಿವಾದದ ಕುರಿತು ಪ್ರತಿಕ್ರಿಯಿಸಲು ನಿರಾಕರಿಸಿದ ರಾವತ್, ಪತ್ರಿಕಾಗೋಷ್ಠಿಯಲ್ಲಿ ಆಯೋಗದ ಪ್ರತಿಕ್ರಿಯೆಯನ್ನು ಕೇಳಿಲ್ಲ ಎಂದು ಹೇಳಿದರು.

2024ರ ಲೋಕಸಭಾ ಚುನಾವಣೆಯಲ್ಲಿ ಗಾಂಧಿ ಮತ ಚೋರಿ ಆರೋಪಗಳನ್ನು ಹೊರಿಸಿದ ನಂತರ, ಹಲವಾರು ವಿರೋಧ ಪಕ್ಷದ ನಾಯಕರು ಬಿಹಾರದಲ್ಲಿ ಎಸ್‌ಐಆರ್ ಬಗ್ಗೆ ಸಮಸ್ಯೆಗಳನ್ನು ಎತ್ತಿ ತೋರಿಸಿದ ನಂತರ ತಮ್ಮ ಮೊದಲ ಪತ್ರಿಕಾಗೋಷ್ಠಿಯಲ್ಲಿ, ಚುನಾವಣಾ ನಿಯಮಗಳ ಅಡಿಯಲ್ಲಿ ಅಗತ್ಯವಿರುವಂತೆ ಸಹಿ ಮಾಡಿದ ಅಫಿಡವಿಟ್‌ನೊಂದಿಗೆ ಕಾಂಗ್ರೆಸ್ ಸಂಸದರು ಕ್ಷಮೆಯಾಚಿಸಬೇಕು ಅಥವಾ ಅವರ ಹಕ್ಕುಗಳನ್ನು ಬೆಂಬಲಿಸಬೇಕು ಎಂದು ಸಿಇಸಿ ಜ್ಞಾನೇಶ್ ಕುಮಾರ್ ಕೇಳಿದರು. ಚುನಾವಣಾ ಸಮಿತಿಯು ನಿಷ್ಪಕ್ಷಪಾತ ರೀತಿಯಲ್ಲಿ ಕಾರ್ಯನಿರ್ವಹಿಸುತ್ತದೆ ಎಂದು ರಾವತ್ ಒತ್ತಿ ಹೇಳಿದರು.

ಚುನಾವಣಾ ಆಯೋಗದ ಪತ್ರಿಕಾಗೋಷ್ಠಿಯನ್ನು ಸ್ವಾಗತಿಸಬೇಕು ಏಕೆಂದರೆ ಇದು ಎಸ್‌ಐಆರ್ ಪ್ರಕ್ರಿಯೆ, ಇತರ ಸಮಸ್ಯೆಗಳ ಬಗ್ಗೆ ಸಾರ್ವಜನಿಕ ಅನುಮಾನಗಳನ್ನು ನಿವಾರಿಸಲು ಉತ್ತಮ ಹೆಜ್ಜೆಯಾಗಿದೆ ಎಂದು ರಾವತ್ ಇಂದೋರ್‌ನಲ್ಲಿ ಪಿಟಿಐಗೆ ತಿಳಿಸಿದರು. ಇನ್ನೊಂದು ಪ್ರಶ್ನೆಗೆ, ಅಂತಿಮ ಮತದಾರರ ಪಟ್ಟಿಯನ್ನು ಈಗಾಗಲೇ ಸಾರ್ವಜನಿಕಗೊಳಿಸಲಾಗಿದೆ, ಆದ್ದರಿಂದ ಅವುಗಳನ್ನು ಮತ್ತೆ ಬಿಡುಗಡೆ ಮಾಡಬೇಕೆಂಬ ಬೇಡಿಕೆ ಅಸಮಂಜಸವಲ್ಲ ಎಂದು ಅವರು ಹೇಳಿದರು.ಮತದಾರರ ಪಟ್ಟಿಯಲ್ಲಿ ಒಬ್ಬರ ಹೆಸರನ್ನು ನೋಂದಾಯಿಸಿಕೊಳ್ಳುವುದು ಪ್ರಜಾಪ್ರಭುತ್ವವನ್ನು ಬಲಪಡಿಸುತ್ತದೆ. ಇಲ್ಲಿ ಗೌಪ್ಯತೆ ಸಮಸ್ಯೆಯಲ್ಲ. ಮತದಾರರ ವೈಯಕ್ತಿಕ ವಿವರಗಳನ್ನು ಸ್ವಾರ್ಥ ಹಿತಾಸಕ್ತಿ ಹೊಂದಿರುವ ವ್ಯಕ್ತಿಗಳೊಂದಿಗೆ ಹಂಚಿಕೊಂಡಾಗ ಮಾತ್ರ ಅದು ಉದ್ಭವಿಸುತ್ತದೆ ಎಂದು ಅವರು ಗಮನಿಸಿದರು. ನಕಲಿ ಮತದಾನದ ಆರೋಪಗಳ ಬಗ್ಗೆ ಕೇಳಿದಾಗ, ಮತದಾನ ಕೇಂದ್ರಗಳಲ್ಲಿ ದಾಖಲೆಗಳ ಕಟ್ಟುನಿಟ್ಟಿನ ಪರಿಶೀಲನೆ ಮತ್ತು ಮತ ಚಲಾಯಿಸುವ ಮೊದಲು ಮತದಾರರ ಬೆರಳಿಗೆ ಅಳಿಸಲಾಗದ ಶಾಯಿಯನ್ನು ಅನ್ವಯಿಸುವುದರಿಂದ ಒಬ್ಬ ವ್ಯಕ್ತಿಯು ಚುನಾವಣೆಯಲ್ಲಿ ಒಂದಕ್ಕಿಂತ ಹೆಚ್ಚು ಬಾರಿ ಮತ ಚಲಾಯಿಸುವ ಸಾಧ್ಯತೆ ನಗಣ್ಯ ಎಂದು ರಾವತ್ ಹೇಳಿದರು.

# ಜೂನಿಯರ್ ಎನ್‌ಟಿಆರ್ 'ವಾರ್ 2' ಬ್ಯಾನ್ ಮಾಡಿ



ಟಿಡಿಪಿ ಶಾಸಕ ದಗ್ಗುಬಾಟಿ ವೆಂಕಟೇಶ್ವರ ಪ್ರಸಾದ್ ಅವರು ಜೂನಿಯರ್ ಎನ್‌ಟಿಆರ್ ಅಭಿನಯದ 'ವಾರ್ 2' ಚಿತ್ರವನ್ನು ಬಹಿಷ್ಕರಿಸುವಂತೆ ತಮ್ಮ ಬೆಂಬಲಿಗರಿಗೆ ಹೇಳಿದ್ದಾರೆ ಎಂಬ ಆಡಿಯೋ ಕ್ಲಿಪ್ ವೈರಲ್ ಆಗಿದೆ. ಇದರಿಂದ ಕೋಪಗೊಂಡ ಅಭಿಮಾನಿಗಳು ಪ್ರತಿಭಟನೆ ನಡೆಸಿದ್ದು, ಶಾಸಕರು ಕ್ಷಮೆ ಕೇಳಿದ್ದಾರೆ. ಆಡಿಯೋ ನಕಲಿ ಎಂದು ಅವರು ಹೇಳಿದ್ದಾರೆ.

ಆದರೆ ಈ ವಿವಾದ ರಾಜಕೀಯ ತಿರುವು ಪಡೆದುಕೊಂಡಿದೆ. ತೆಲುಗು ದೇಶಂ ಪಕ್ಷದ ಅನಂತಪುರ ಶಾಸಕ ದಗ್ಗುಬಾಟಿ ವೆಂಕಟೇಶ್ವರ ಪ್ರಸಾದ್ ಅವರು ಇತ್ತೀಚೆಗೆ ಸುದ್ದಿಯಲ್ಲಿದ್ದಾರೆ. ಅವರು ಜೂನಿಯರ್ ಎನ್‌ಟಿಆರ್ ನಟಿಸಿದ 'ವಾರ್ 2' ಸಿನಿಮಾ ನೋಡದಂತೆ ತನ್ನ ಬೆಂಬಲಿಗರಿಗೆ ಬೆದರಿಕೆ ಹಾಕಿದ್ದಾರೆ ಎನ್ನಲಾಗಿದೆ. ಅವರದ್ದು ಎನ್ನಲಾದ ಆಡಿಯೋ ಒಂದು ಈಗ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದ್ದು, ಜೂ.ಎನ್‌ಟಿಆರ್ ಫ್ಯಾನ್ಸ್ ಸಿಟ್ಟಾಗಿದ್ದಾರೆ. ಅವರ ಮನೆ ಮುಂದೆ ಪ್ರತಿಭಟನೆ ನಡೆದಿದ್ದು, ಶಾಸಕ ಕ್ಷಮೆ ಕೇಳಿದ್ದಾರೆ. 'ಟಿಡಿಪಿಯಿಂದ ದೂರವಿರುವ ಎನ್‌ಟಿಆರ್ ಚಿತ್ರವನ್ನು ಏಕೆ ನೋಡಬೇಕು' ಎಂದು ದಗ್ಗುಬಾಟಿ ಪ್ರಸಾದ್ ಪ್ರಶ್ನಿಸಿದ್ದಾರೆ ಎಂಬ ಆಡಿಯೋ ಕ್ಲಿಪ್ ವೈರಲ್ ಆಗಿದೆ. ನಟನ ವಿರುದ್ಧ ಕೆಟ್ಟ ಪದ ಬಳಕೆ ಆಗಿದೆ ಎನ್ನಲಾಗುತ್ತಿದೆ. ಸಾಮಾಜಿಕ ಮಾಧ್ಯಮಗಳಲ್ಲಿ ಲೀಕ್ ಆಗಿರುವ ಆಡಿಯೋಗೂ ವಂಕಟೇಶ್ವರ ಪ್ರಸಾದ್ ಧ್ವನಿಗೂ ಸಾಮ್ಯತೆ ಇದೆ. ಹೀಗಾಗಿ, ಜೂನಿಯರ್ ಎನ್‌ಟಿಆರ್ ಅಭಿಮಾನಿಗಳಲ್ಲಿ ಆಕ್ರೋಶವನ್ನು ಹುಟ್ಟುಹಾಕಿತು.

# ಹುಟ್ಟುಹಬ್ಬಕ್ಕೆ ಮುಧೋಳ್

ಸ್ಯಾಂಡಲ್ ವುಡ್‌ನ ಕ್ರೇಜಿಸ್ಟಾರ್ ರವಿಚಂದ್ರನ್ ಅವರ ಎರಡನೇ ಸುಪುತ್ರ, ವಿಕ್ರಂ ರವಿಚಂದ್ರನ್ ತಮ್ಮ ಹುಟ್ಟುಹಬ್ಬದಂದು ವಿಶೇಷವಾದ ಮಾಹಿತಿಯನ್ನ ನೀಡಲು ಮುಂದಾಗಿದ್ರು, ಅದರಲ್ಲೂ ವಿಶೇಷವಾಗಿ ಕನ್ನಡ ಚಿತ್ರೋದ್ಯಮದಲ್ಲಿ ದೊಡ್ಡ ಮಟ್ಟದ ಸಂಚಲನ ಮಾಡಲು ಚಿತ್ರ ನಿರ್ಮಾಣದ ಜೊತೆಗೆ ಚಿತ್ರ ನಿರ್ಮಾಪಕರಿಗೆ ಬೆನ್ನೆಲುಬಾಗಿ ನಿಲ್ಲುವ ಸಲುವಾಗಿ ಬಂದಿರುವಂತಹ ಖ್ಯಾತ ಉದ್ಯಮಿ ವಿಜಯ್ ಟಾಟಾ ತಮ್ಮ ಅಮೃತ ಸಿನಿ ಕ್ರಾಫ್ಟ್ ಮೂಲಕ ಸಿನಿಮಾ ನಿರ್ಮಿಸಲು ಮುಂದಾಗಿದ್ದಾರೆ. ಚಿತ್ರ ನಿರ್ಮಿಸುವುದರ ಜೊತೆಗೆ ವಿತರಣೆ, ಮಾರ್ಕೆಟಿಂಗ್, ಸೇರಿದಂತೆ ಬೇರೆ ಚಿತ್ರಗಳ ಜೊತೆ ಕೊಲಾಬ್ರೇಷನ್‌ಗೂ ಮುಂದಾಗಿರುವುದು ಮತ್ತೊಂದು ಸಂತೋಷದ ಸಂಗತಿ. ಇನ್ನು ವಿಶೇಷವಾಗಿ ಕರೆದಿರುವ ಪತ್ರಿಕಾಗೋಷ್ಠಿಯಲ್ಲಿ ಯುವ ನಟ ವಿಕ್ರಂ ರವಿಚಂದ್ರನ್, ಮುಧೋಳ್ ಚಿತ್ರದ ನಿರ್ಮಾಪಕಿ ರಕ್ಷಾ ಹಾಗೂ ಖ್ಯಾತ ಉದ್ಯಮಿ ನಿರ್ಮಾಪಕ ವಿಜಯ್ ಟಾಟಾ ಹಾಜರಿದ್ದರು. ಇನ್ನು ಪ್ರಮುಖವಾಗಿ ಈ ಚಿತ್ರದ ಪತ್ರಿಕಾಗೋಷ್ಠಿಯಲ್ಲಿ ನಟ ವಿಕ್ರಂ ರವಿಚಂದ್ರನ್ ಮಾತನಾಡುತ್ತಾ, ಮೊದಲಿಗೆ ನೀವೆಲ್ಲರೂ ಇಲ್ಲಿವರೆಗೂ ಬಂದಿರುವುದಕ್ಕೆ ಧನ್ಯವಾದಗಳು, ಮೊದಲಿಗೆ ವಿಶೇಷವಾಗಿ ವಿಜಯ ಸರ್ ಗೆ ಥ್ಯಾಂಕ್ಸ್ ತಿಳಿಸುತ್ತೇನೆ. ಯಾಕೆಂದರೆ ಸಾಮಾನ್ಯವಾಗಿ ನನ್ನ ಹುಟ್ಟುಹಬ್ಬವನ್ನು ನಾನು ಆಚರಿಸಿಕೊಳ್ಳುವುದಿಲ್ಲ. ಬೇರೆ ಬೇರೆ ಕೆಲಸದಲ್ಲಿ ತೊಡಗಿಕೊಂಡಿರುತ್ತೇನೆ.





# ಮಲಯಾಳಂಗೆ ದೇವರಾಜ್ ಪುತ್ರನ S/O ಮುತ್ತಣ್ಣ ಸಿನಿಮಾ



'ಸು ಫ್ರಮ್ ಸೋ'' ಭರ್ಜರಿ ಯಶಸ್ಸಿನ ನಂತರ ಕನ್ನಡ ಚಿತ್ರಗಳ ಬೇಡಿಕೆ ಹೆಚ್ಚಾಗಿದೆ. ಪುರಾತನ ಫಿಲಂಸ್ ನಿರ್ಮಾಣದ ಶ್ರೀಕಾಂತ್ ಹುಣಸೂರು ನಿರ್ದೇಶನದ ಡೈನಾಮಿಕ್ ಹೀರೊ ದೇವರಾಜ್ ಅವರ ದ್ವಿತೀಯ ಪುತ್ರ ಪ್ರಣಮ್ ದೇವರಾಜ್ ನಾಯಕನಾಗಿ ನಟಿಸಿರುವ 'S/O ಮುತ್ತಣ್ಣ' ಚಿತ್ರ ಕೂಡ ಅಪ್ಪ ಮಗನ ಬಾಂಧವ್ಯವನ್ನು ಬಣ್ಣಿಸುವ ಕೌಟುಂಬಿಕ ಕಥಾಹಂದರ ಹೊಂದಿರುವ ಚಿತ್ರವಾಗಿದ್ದು, ಈ ಚಿತ್ರದ ಕಥೆಗೆ ಮಲಯಾಳಂನಲ್ಲೂ ಬೇಡಿಕೆ ಹೆಚ್ಚಾಗಿದೆ. ಹಾಗಾಗಿ ಆಗಸ್ಟ್ 22 ರಂದು ಬಿಡುಗಡೆಯಾಗಬೇಕಿದ್ದ 'S/O ಮುತ್ತಣ್ಣ'' ಚಿತ್ರವನ್ನು ಸೆಪ್ಟೆಂಬರ್ 12ರಂದು ಬಿಡುಗಡೆ ಮಾಡಲು ಚಿತ್ರತಂಡ ನಿರ್ಧರಿಸಿದೆ. ಕನ್ನಡ, ತೆಲುಗು ಹಾಗೂ ಮಲಯಾಳಂನಲ್ಲಿ ಏಕಕಾಲಕ್ಕೆ ಚಿತ್ರ ಅದ್ದೂರಿಯಾಗಿ ಬಿಡುಗಡೆಯಾಗಲಿದೆ. ಈಗಾಗಲೇ ಟೀಸರ್ ಹಾಗೂ ಹಾಡುಗಳ ಮೂಲಕ ಜನರ ಮನಸ್ಸಿಗೆ ಹತ್ತಿರವಾಗಿರುವ ಈ ಚಿತ್ರದ ಟ್ರೇಲರ್ ಆಗಸ್ಟ್ 22 ರಂದು ಬಿಡುಗಡೆಯಾಗಲಿದೆ. ಬಹು ನಿರೀಕ್ಷಿತ ಈ ಚಿತ್ರದ ಬಿಡುಗಡೆಗಾಗಿ ಅಭಿಮಾನಿಗಳು ಕಾತುರದಿಂದ ಕಾಯುತ್ತಿದ್ದಾರೆ.

ಪ್ರಣಾಮ್ ದೇವರಾಜ್ ಅವರಿಗೆ ನಾಯಕಿಯಾಗಿ ದಿಯಾ ಖ್ಯಾತಿಯ ಖುಷಿ ರವಿ ಅಭಿನಯಿಸಿದ್ದಾರೆ. ಇದೊಂದು ತಂದೆ ಮಗನ ಬಾಂಧವ್ಯದ ಚಿತ್ರವಾಗಿದ್ದು, ರಂಗಾಯಣ ರಘು ನಾಯಕನ ತಂದೆಯ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಸುಚೇಂದ್ರ ಪ್ರಸಾದ್, ಗಿರೀಶ್ ಶಿವಣ್ಣ, ತಬಲ ನಾಣಿ, ಶ್ರೀನಿವಾಸ್ ಪ್ರಭು, ಸುಧಾ ಬೆಳವಾಡಿ, ಅರುಣ್ ಚಕ್ರವರ್ತಿ ಮುಂತಾದವರು ತಾರಾಬಳಗದಲ್ಲಿದ್ದಾರೆ. ಸಚಿನ್ ಬಸ್ರೂರು ಸಂಗೀತವಿರುವ S/O ಮುತ್ತಣ್ಣ' ಸಿನಿಮಾದ ಹಾಡುಗಳನ್ನು ಯೋಗರಾಜ್ ಭಟ್, ಜಯಂತ್ ಕಾಯ್ಕಿಣಿ ಬರೆದಿದ್ದಾರೆ. ಸ್ಕೇಟಿಂಗ್ ಕೃಷ್ಣ ಛಾಯಾಗ್ರಹಣ ಹಾಗೂ ಹರೀಶ್ ಕೊಮ್ಮೆ ಅವರ ಸಂಕಲನ ಬಹು ನಿರೀಕ್ಷಿತ ಈ ಚಿತ್ರಕ್ಕಿದೆ.

# ಅಮೆರಿಕದಲ್ಲಿ ರಶ್ಮಿಕಾ ಕೈ ಹಿಡಿದು ನಡೆಸಿದ ವಿಜಯ್

ರಶ್ಮಿಕಾ ಮಂದಣ್ಣ ಮತ್ತು ವಿಜಯ್ ದೇವರಕೊಂಡ ಅವರು ನ್ಯೂಯಾರ್ಕ್‌ನಲ್ಲಿ ನಡೆದ ಭಾರತೀಯ ದಿನಾಚರಣೆಯಲ್ಲಿ ಒಟ್ಟಿಗೆ ಕಾಣಿಸಿಕೊಂಡಿದ್ದಾರೆ. ಅವರ ಫೋಟೋಗಳು ವೈರಲ್ ಆಗಿದ್ದು, ಅವರ ಪ್ರೇಮ ಸಂಬಂಧದ ವದಂತಿಗಳನ್ನು ಮತ್ತಷ್ಟು ಬಲಪಡಿಸಿದೆ.

ಇಬ್ಬರೂ 'ಗೀತ ಗೋವಿಂದಂ' ಸಿನಿಮಾದ ನಂತರ ಅನೇಕ ಬಾರಿ ಒಟ್ಟಿಗೆ ಕಾಣಿಸಿಕೊಂಡಿದ್ದಾರೆ. ಆದರೆ ತಮ್ಮ ಸಂಬಂಧವನ್ನು ಅಧಿಕೃತವಾಗಿ ಒಪ್ಪಿಕೊಂಡಿಲ್ಲ. ರಶ್ಮಿಕಾ ಮಂದಣ್ಣ ಹಾಗೂ ವಿಜಯ್ ದೇವರಕೊಂಡ ಅವರ ಆಪ್ತತೆ ಬಗ್ಗೆ ಹೊಸದಾಗಿ ಹೇಳಬೇಕಾಗಿಲ್ಲ. ಇಬ್ಬರ ಮಧ್ಯೆ ಒಳ್ಳೆಯ ಗೆಳೆತನ ಇದೆ. ಇವರು ತಮ್ಮ ಪ್ರೀತಿಯನ್ನು ಅಧಿಕೃತವಾಗಿ ಒಪ್ಪಿಕೊಂಡಿಲ್ಲ. ಹಾಗಂತ ಇವರು ಸುತ್ತಾಟ ಮಾಡೋದನ್ನು ನಿಲ್ಲಿಸಿಲ್ಲ. ಇವರ ಮಧ್ಯೆ ಪ್ರೀತಿ ಇದೆ ಎಂಬುದು ಜನರಿಗೆ ಸ್ಪಷ್ಟವಾಗುತ್ತಿದೆ. ಈಗ ಅಂಥದ್ದೇ ಘಟನೆ ಒಂದು ನಡೆದಿದೆ. ಇದರಲ್ಲಿ ವಿಜಯ್ ಹಾಗೂ ರಶ್ಮಿಕಾ ಒಟ್ಟಾಗಿ ಕಾಣಿಸಿಕೊಂಡಿದ್ದಾರೆ.

ರಶ್ಮಿಕಾ ಮಂದಣ್ಣ ಹಾಗೂ ವಿಜಯ್ ಈ ಮೊದಲು ಒಟ್ಟಾಗಿ ಅನೇಕ ಬಾರಿ ವಿದೇಶ ಪ್ರಯಾಣ ಮಾಡಿ ಬಂದ ಉದಾಹರಣೆ ಇದೆ. ಆದರೆ, ವಿಶೇಷ ಎಂದರೆ ಯಾವಾಗಲೂ ಅವರು ಈ ವಿಚಾರವನ್ನು ಅಧಿಕೃತವಾಗಿ ಒಪ್ಪಿಕೊಂಡಿಲ್ಲ. ವಿದೇಶದಲ್ಲಿ ಇವರು ಒಟ್ಟಾಗಿ ಕಾಣಿಸಿಕೊಂಡಿರೋ ಫೋಟೋ ವೈರಲ್ ಆಗಿಲ್ಲ. ಈಗ ವಿಜಯ್ ಹಾಗೂ ರಶ್ಮಿಕಾ ಅವರು ಅಮೆರಿಕದ ನ್ಯೂಯಾರ್ಕ್‌ನಲ್ಲಿ ಒಟ್ಟಾಗಿ ಕಾಣಿಸಿಕೊಂಡಿದ್ದಾರೆ.



# ಅಪರಿಚಿತೆ ಸಿನಿಮಾದಲ್ಲಿ ಸಿಂಧೂ

**ಚಿತ್ರದಲ್ಲಿ ಭಾವನಾತ್ಮಕ ಸನ್ನಿವೇಶ**

'ತಾಯವ್ವ' ಎಂಬ ಸಿನಿಮಾದಲ್ಲಿ ನಟಿಸಿದ್ದ, ಗೀತಪ್ರಿಯ ಸುರೇಶ್ ಕುಮಾರ್ ಇದೀಗ 'ಅಪರಿಚಿತೆ' ಚಿತ್ರದ ಮುಖ್ಯ ಪಾತ್ರದಲ್ಲಿ ನಟಿಸುತ್ತಿದ್ದಾರೆ. ವಿಶ್ವನಾಥ್ ಅವರು ನಿರ್ದೇಶಿಸುತ್ತಿರುವ ಈ ಚಿತ್ರದ ಶೀರ್ಷಿಕೆಯನ್ನು ಇತ್ತೀಚೆಗೆ ಶಾಸಕ ಅಶ್ವಥ್ ನಾರಾಯಣ್ ಅನಾವರಣ ಮಾಡಿ ಚಿತ್ರಕ್ಕೆ ಚಾಲನೆ ನೀಡಿದ್ದರು. ಪ್ರಸ್ತುತ ಚಿತ್ರಕ್ಕೆ ರಾಮನಗರದಲ್ಲಿ ಬಿರುಸಿನ ಚಿತ್ರೀಕರಣ ನಡೆಯುತ್ತಿದೆ. ಗೀತಪ್ರಿಯ, ಸಿಂಧೂ ಲೋಕನಾಥ್ ಸೇರಿದಂತೆ ಅನೇಕ ಕಲಾವಿದರು ಚಿತ್ರೀಕರಣದಲ್ಲಿ ಭಾಗಿಯಾಗಿದ್ದಾರೆ. ನೈಜ ಘಟನೆ ಆಧಾರಿತ ಈ ಚಿತ್ರದಲ್ಲಿ ಭಾವನಾತ್ಮಕ ಸನ್ನಿವೇಶಗಳು ಜನರ ಮನಸ್ಸಿಗೆ ಹತ್ತಿರವಾಗಲಿದೆ. ಜೊತೆಗೆ ಸಮಾಜಕ್ಕೆ ಉತ್ತಮ ಸಂದೇಶ ನೀಡುವ ಕಥಾಹಂದರ ಸಹ ಹೊಂದಿದೆ ಎಂದು ನಟಿ ಗೀತಪ್ರಿಯ ತಿಳಿಸಿದ್ದಾರೆ. ಗೀತಪ್ರಿಯ ಅವರ ಪತಿ ಸುರೇಶ್ ಕುಮಾರ್ ಅವರು ಅಮರ್ ಫಿಲಂಸ್ ಲಾಂಛನದಲ್ಲಿ ನಿರ್ಮಾಣ ಮಾಡುತ್ತಿರುವ ಈ ಚಿತ್ರದ ತಾರಾಬಳಗದಲ್ಲಿ ಗೀತಪ್ರಿಯ, ಹಿರಿಯ ನಟ ಶ್ರೀನಾಥ್, ರೋಹಿತ್, ಸಿಂಧೂ ಲೋಕನಾಥ್, ಆರ್.ಜೆ ನಿಖಿತಾ ಮುಂತಾದವರಿದ್ದಾರೆ.

# ಮೊದಲ ದಿನವೇ ಭರ್ಜರಿ ಶತಕ ಸಿಡಿಸಿದ ಸರ್ಫರಾಜ್ ಖಾನ್

ಬುಚಿ ಬಾಬು 2025 ಪಂದ್ಯಾವಳಿಯಲ್ಲಿ ಸರ್ಫರಾಜ್ ಖಾನ್ ಅವರ ಅದ್ಭುತ ಶತಕ ಎಲ್ಲರ ಗಮನ ಸೆಳೆದಿದೆ. ಭಾರತೀಯ ಟೆಸ್ಟ್ ತಂಡಕ್ಕೆ ಆಯ್ಕೆಯಾಗದ ನಂತರ ತೂಕ ಇಳಿಸಿಕೊಂಡ ಸರ್ಫರಾಜ್, 92 ಎಸೆತಗಳಲ್ಲಿ 100 ರನ್ ಗಳಿಸಿದ್ದಾರೆ. ಈ ಶತಕದ ಮೂಲಕ ಅವರು ವೆಸ್ಟ್ ಇಂಡೀಸ್ ವಿರುದ್ಧದ ಸರಣಿಯಲ್ಲಿ ಸ್ಥಾನ ಪಡೆಯುವ ನಿರೀಕ್ಷೆಯಲ್ಲಿದ್ದಾರೆ. ಬುಚಿ ಬಾಬು 2025 ಪಂದ್ಯಾವಳಿ ಆರಂಭವಾಗಿದೆ. ಈ ಪಂದ್ಯಾವಳಿಯನ್ನು ತಮಿಳುನಾಡು ಕ್ರಿಕೆಟ್ ಅಸೋಸಿಯೇಷನ್ ಆಗಸ್ಟ್ 18 ರಿಂದ ಸೆಪ್ಟೆಂಬರ್ 9 ರವರೆಗೆ ಆಯೋಜಿಸುತ್ತಿದೆ. ಪಂದ್ಯಾವಳಿಯಲ್ಲಿ 16 ತಂಡಗಳು ಭಾಗವಹಿಸುತ್ತಿದ್ದು, ಇವುಗಳನ್ನು ತಲಾ ನಾಲ್ಕು ಗುಂಪುಗಳಾಗಿ ವಿಂಗಡಿಸಲಾಗಿದೆ. ಸುತ್ತು 1 ರಲ್ಲಿ, ಟಿಎನ್‌ಸಿಎ ಇಲೆವೆನ್ ಮತ್ತು ಮುಂಬೈ ಗೋಜನ್ ಕಾಲೇಜು ಬಿ ಮೈದಾನದಲ್ಲಿ



ಸ್ಪರ್ಧಿಸುತ್ತಿವೆ. ಈ ಪಂದ್ಯದ ಮೊದಲ ದಿನದಂದೇ ಸರ್ಫರಾಜ್ ಖಾನ್ ಶತಕ ಬಾರಿಸುವ ಮೂಲಕ ಎಲ್ಲರ ಗಮನ ಸೆಳೆದಿದ್ದಾರೆ. ಮುಂಬೈ ತಂಡದ ಪರ 5ನೇ ಕ್ರಮಾಂಕದಲ್ಲಿ ಬ್ಯಾಟಿಂಗ್‌ಗಿಳಿದಿದ್ದ ಸರ್ಫರಾಜ್ ಖಾನ್ ಶತಕ ತಮ್ಮ ಪೂರೈಸಿದರು. ವಾಸ್ತವವಾಗಿ ಸರ್ಫರಾಜ್ ಬ್ಯಾಟಿಂಗ್ ಮಾಡಲು ಬಂದಾಗ ಮುಂಬೈ ತಂಡ 98 ರನ್‌ಗಳಿಗೆ ಮೂರು ವಿಕೆಟ್‌ಗಳನ್ನು ಕಳೆದುಕೊಂಡಿತ್ತು . ಇದರ ನಂತರ, ಸರ್ಫರಾಜ್ ಖಾನ್ ತಂಡದ ಇನ್ನಿಂಗ್ಸ್ ನಿಭಾಯಿಸಿ ಬಿರುಸಿನ ಶತಕ ಸಿಡಿಸಿದರು. ಸರ್ಫರಾಜ್ ಕೇವಲ 92 ಎಸೆತಗಳಲ್ಲಿ 100 ರನ್ ಗಳ ಗಡಿ ತಲುಪಿದರು. ಈ ಸಮಯದಲ್ಲಿ, ಅವರು 9 ಬೌಂಡರಿಗಳು ಮತ್ತು 3 ಸಿಕ್ಸರ್‌ಗಳನ್ನು ಸಹ ಹೊಡೆದರು. ಈ ಇನ್ನಿಂಗ್ಸ್ ಸರ್ಫರಾಜ್ ಖಾನ್‌ಗೆ ಹಲವು ವಿಧಗಳಲ್ಲಿ ವಿಶೇಷವಾಗಿದೆ,

**ಮುಂಬೈ ತಂಡದ ಪರ ಬ್ಯಾಟಿಂಗ್**

ಏಕೆಂದರೆ ಇತ್ತೀಚೆಗೆ ಅವರನ್ನು ಇಂಗ್ಲೆಂಡ್ ಪ್ರವಾಸಕ್ಕಾಗಿ ಭಾರತೀಯ ಟೆಸ್ಟ್ ತಂಡಕ್ಕೆ ಆಯ್ಕೆ ಮಾಡಲಾಗಿರಲಿಲ್ಲ. ಸರ್ಫರಾಜ್ ಖಾನ್ ಕೆಲವು ಸಮಯದಿಂದ ತಮ್ಮ ಫಿಟ್ನೆಸ್ ವಿಚಾರದಲ್ಲಿ ಸುದ್ದಿಯಲ್ಲಿದ್ದಾರೆ . ಟೀಂ ಇಂಡಿಯಾಕ್ಕೆ ಆಯ್ಕೆಯಾಗದ ನಂತರ ತಮ್ಮ ಫಿಟ್ನೆಸ್ ಮೇಲೆ ಸಾಕಷ್ಟು ಕೆಲಸ ಮಾಡಿರುವ ಸರ್ಫರಾಜ್ ಖಾನ್ ಕೇವಲ ಒಂದೂವರೆ ತಿಂಗಳಲ್ಲಿ ಸುಮಾರು 17 ಕೆಜಿ ತೂಕ ಇಳಿಸಿಕೊಳ್ಳುವ ಮೂಲಕ ಎಲ್ಲರನ್ನೂ ಅಚ್ಚರಿಗೊಳಿಸಿದರು. ತೂಕ ಇಳಿಸಿಕೊಂಡ ನಂತರ ಇದು ಅವರ ಮೊದಲ ಪಂದ್ಯವಾಗಿದ್ದು, ಈ ಪಂದ್ಯದಲ್ಲಿ ಅವರು ತಮ್ಮ ಛಾಪನ್ನು ಮೂಡಿಸುವಲ್ಲಿ ಯಶಸ್ವಿಯಾಗಿದ್ದಾರೆ. ಸರ್ಫರಾಜ್ ಖಾನ್ ಈಗ ವೆಸ್ಟ್ ಇಂಡೀಸ್ ವಿರುದ್ಧ ನಡೆಯಲಿರುವ ತವರು ಟೆಸ್ಟ್ ಸರಣಿಯಲ್ಲಿ ಅವಕಾಶ ಪಡೆಯುವ ನಿರೀಕ್ಷೆಯಲಿದ್ದಾರೆ. ಸರ್ಫರಾಜ್ ಖಾನ್ ಅವರ ಕಿರಿಯ ಸಹೋದರ ಮುಶೀರ್ ಖಾನ್ ಕೂಡ ಈ ಪಂದ್ಯಾವಳಿಯಲ್ಲಿ ಮುಂಬೈ ತಂಡದ ಭಾಗವಾಗಿದ್ದಾರೆ. ಆದರೆ ಈ ಪಂದ್ಯಾವಳಿಯ ಆರಂಭಿಕ ಇನ್ನಿಂಗ್ಸ್‌ನಲ್ಲಿ ಅವರು ವಿಶೇಷವಾದದ್ದೇನೂ ಮಾಡಲು ಸಾಧ್ಯವಾಗಲಿಲ್ಲ. ಈ ಪಂದ್ಯದ ಮೊದಲ ಇನ್ನಿಂಗ್ಸ್‌ನಲ್ಲಿ ಮುಶೀರ್ ಖಾನ್ 75 ಎಸೆತಗಳನ್ನು ಎದುರಿಸಿ ಕೇವಲ 30 ರನ್ ಗಳಿಸಲು ಮಾತ್ರ ಸಾಧ್ಯವಾಯಿತು.

# ಭಾರತ ಮತ್ತು ಪಾಕಿಸ್ತಾನ್ ನಡುವಣ ಪಂದ್ಯ ನಡೆಯಲ್ಲ..!

ಯುಎಇನಲ್ಲಿ ನಡೆಯಲಿರುವ ಈ ಬಾರಿಯ ಏಷ್ಯಾಕಪ್‌ನಲ್ಲಿ ಒಟ್ಟು 8 ತಂಡಗಳು ಕಣಕ್ಕಿಳಿಯಲಿವೆ. ಈ ತಂಡಗಳಲ್ಲಿ ಭಾರತ, ಪಾಕಿಸ್ತಾನ್, ಒಮಾನ್ ಮತ್ತು ಯುಎಇ ಗ್ರೂಪ್ ಎ ನಲ್ಲಿದ್ದರೆ, ಬಾಂಗ್ಲಾದೇಶ್, ಅಫ್ಘಾನಿಸ್ತಾನ್, ಹಾಂಗ್ ಕಾಂಗ್ ಹಾಗೂ ಶ್ರೀಲಂಕಾ ಬಿ ಗ್ರೂಪ್‌ನಲ್ಲಿದೆ. ಅದರಂತೆ ಮೊದಲ ಸುತ್ತಿನಲ್ಲಿ ಟೀಮ್ ಇಂಡಿಯಾ ಪಾಕಿಸ್ತಾನ್, ಒಮಾನ್ ಹಾಗೂ ಯುಎಇ ವಿರುದ್ಧ ಕಣಕ್ಕಿಳಿಯಲಿದೆ. ಕ್ರಿಕೆಟ್ ಅಂಗಳದ ಹೈವೋಲ್ಟೇಜ್ ಕದನಕ್ಕೆ ವೇದಿಕೆ ಸಿದ್ಧವಾಗಿದೆ. ಸೆಪ್ಟೆಂಬರ್ 14 ರಂದು ದುಬೈನಲ್ಲಿ ನಡೆಯಲಿರುವ ಏಷ್ಯಾಕಪ್ ಪಂದ್ಯದಲ್ಲಿ ಸಾಂಪ್ರದಾಯಿಕ ಎದುರಾಳಿಗಳಾದ ಭಾರತ ಮತ್ತು ಪಾಕಿಸ್ತಾನ್ ಮುಖಾಮುಖಿಯಾಗಲಿದೆ.



ಆದರೆ ಈ ಪಂದ್ಯದಿಂದ ಭಾರತ ತಂಡ ಹಿಂದೆ ಸರಿಯುವುದು ಖಚಿತ ಎಂದಿದ್ದಾರೆ ಟೀಮ್ ಇಂಡಿಯಾದ ಮಾಜಿ ಆಟಗಾರ ಕೇದಾರ್ ಜಾಧವ್. ಎಎನ್‌ಐ ಜೊತೆ ಮಾತನಾಡಿದ ಕೇದಾರ್ ಜಾಧವ್, ನನ್ನ ಪ್ರಕಾರ ಭಾರತ ತಂಡವು ಪಾಕಿಸ್ತಾನ್ ವಿರುದ್ಧ ಯಾವುದೇ ಪಂದ್ಯವನ್ನು ಆಡಬಾರದು. ಇನ್ನು ಪಾಕ್ ವಿರುದ್ಧ ಎಲ್ಲೇ ಆಡಿದರೂ ಟೀಮ್ ಇಂಡಿಯಾ ಯಾವಾಗಲೂ ಗೆಲ್ಲುತ್ತದೆ. ಇದಾಗ್ಯೂ, ನಾವು ಅವರ ವಿರುದ್ಧ ಆಡಲೇಬಾರದು ಎಂಬುದು ನನ್ನ ಅನಿಸಿಕೆ. ಅಲ್ಲದೆ ಈ ಪಂದ್ಯವನ್ನು ಭಾರತ ತಂಡ ತಿರಸ್ಕರಿಸುತ್ತೆ ಎಂಬ ವಿಶ್ವಾಸವಿದೆ.

ಟೀಮ್ ಇಂಡಿಯಾ ಪಾಕಿಸ್ತಾಣ್ ವಿರುದ್ಧ ಆಡಲ್ಲ ಎಂಬುದನ್ನು ನಾನು ಆತ್ಮವಿಶ್ವಾಸದಿಂದ ಹೇಳಬಲ್ಲೆ. ಆಪರೇಷನ್ ಸಿಂಧೂರ್ ಯಶಸ್ವಿಯಾಗಿದೆ, ಇದು ಸಹ ಯಶಸ್ವಿಯಾಗಲಿದೆ ಎಂದು ಕೇದಾರ್ ಜಾಧವ್ ಹೇಳಿದ್ದಾರೆ. ಅಂದರೆ ಕೇದಾರ್ ಜಾಧವ್ ಪ್ರಕಾರ, ಪಾಕಿಸ್ತಾನ್ ವಿರುದ್ಧದ ಪಂದ್ಯದಿಂದ ಟೀಮ್ ಇಂಡಿಯಾ ಹಿಂದೆ ಸರಿಯಲಿದೆ. ಇತ್ತೀಚೆಗೆ ವರ್ಲ್ಡ್ ಚಾಂಪಿಯನ್ಸ್ ಆಫ್ ಲೆಜೆಂಡ್ಸ್ ಟೂರ್ನಿಯಲ್ಲಿ ಪಾಕಿಸ್ತಾನ್ ಚಾಂಪಿಯನ್ಸ್ ವಿರುದ್ಧದ ಕಣಕ್ಕಿಳಿಯಲು ಇಂಡಿಯಾ ಚಾಂಪಿಯನ್ಸ್ ತಂಡ ನಿರಾಕರಿಸಿತ್ತು. ಪಾಕಿಸ್ತಾನ್ ಚಾಂಪಿಯನ್ಸ್ ವಿರುದ್ಧದ ಲೀಗ್ ಸುತ್ತಿನ ಪಂದ್ಯದಿಂದ ಹಿಂದೆ ಸರಿದಿದ್ದ ಇಂಡಿಯಾ ಚಾಂಪಿಯನ್ಸ್, ಆ ಬಳಿಕ ಪಾಕ್ ವಿರುದ್ಧ ಸೆಮಿಫೈನಲ್ ಆಡಲು ಕೂಡ ನಿರಾಕರಿಸಿತ್ತು. ಅತ್ತ ಸೆಮಿಫೈನಲ್ ಪಂದ್ಯದಿಂದ ಇಂಡಿಯಾ ಚಾಂಪಿಯನ್ಸ್ ಹಿಂದೆ ಸರಿದ ಕಾರಣ, ಪಾಕಿಸ್ತಾನ್ ಚಾಂಪಿಯನ್ಸ್ ಫೈನಲ್‌ಗೇರಿದ್ದರು. ಇದೀಗ ಇದೇ ಮಾದರಿಯಲ್ಲಿ ಏಷ್ಯಾಕಪ್‌ನಲ್ಲೂ ಸಂಭವಿಸಲಿದೆ ಎಂದು ಕೇದಾರ್ ಜಾಧವ್ ಭವಿಷ್ಯ ನುಡಿದಿದ್ದಾರೆ. ಅಂದರೆ ಪೆಹಲ್ಗಾಮ್‌ನಲ್ಲಿ ನಡೆದ ಪಾಕ್ ಪ್ರೇರಿತ ಉಗ್ರರ ದಾಳಿಯನ್ನು ಖಂಡಿಸಿ ಪಾಕಿಸ್ತಾನ್ ವಿರುದ್ಧದ ಪಂದ್ಯದಿಂದ ಟೀಮ್ ಇಂಡಿಯಾ ಆಟಗಾರರು ಹಿಂದೆ ಸರಿಯಲಿದೆ. ಈ ಮೂಲಕ ಭಾರತ ತಂಡವು ತನ್ನ ನಿಲುವನ್ನು ಸ್ಪಷ್ಟಪಡಿಸಲಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಏಷ್ಯಾಕಪ್ ಟಿ20 ಟೂರ್ನಿಯು ಸೆಪ್ಟೆಂಬರ್ 9 ರಿಂದ ಶುರುವಾಗಲಿದೆ. ಪಾಕಿಸ್ತಾನ್ ತಂಡವು ಸೆಪ್ಟೆಂಬರ್ 12 ರಂದು ಒಮಾನ್ ವಿರುದ್ಧ ಕಣಕ್ಕಿಳಿಯುವ ಮೂಲಕ ಏಷ್ಯಾಕಪ್ ಅಭಿಯಾನ ಆರಂಭಿಸಲಿದೆ.

ಇದಾದ ಬಳಿಕ ಸೆಪ್ಟೆಂಬರ್ 14 ರಂದು ಸಾಂಪ್ರದಾಯಿಕ ಎದುರಾಳಿ ಭಾರತ ತಂಡವನ್ನು ಎದುರಿಸಲಿದೆ. ಈ ಪಂದ್ಯದಿಂದ ಟೀಮ್ ಇಂಡಿಯಾ ಹಿಂದೆ ಸರಿಯಲಿದೆಯಾ ಕಾದು ನೋಡಬೇಕಿದೆ.

# ಬಾಬರ್ ಆಝಂಗೆ ಎಂಟರ ಗಂಟು



ಬಹುನಿರೀಕ್ಷಿತ ಏಷ್ಯಾಕಪ್ ಟೂರ್ನಿಯು ಸೆಪ್ಟೆಂಬರ್ 9 ರಿಂದ ಶುರುವಾಗಲಿದೆ. ಯುಎಇನಲ್ಲಿ ನಡೆಯಲಿರುವ ಈ ಟೂರ್ನಿಯಲ್ಲಿ ಭಾರತ, ಪಾಕಿಸ್ತಾನ್, ಬಾಂಗ್ಲಾದೇಶ್, ಅಫ್ಘಾನಿಸ್ತಾನ್, ಶ್ರೀಲಂಕಾ, ಯುಎಇ, ಒಮಾನ್ ಹಾಗೂ ಹಾಂಗ್ ಕಾಂಗ್ ತಂಡಗಳು ಕಣಕ್ಕಿಳಿಯಲಿವೆ. ಈ ಟೂರ್ನಿಯ ಮೂಲಕ ಟಿ20 ಕ್ರಿಕೆಟ್‌ಗೆ ಕಂಬ್ಯಾಕ್ ಮಾಡುವ ಬಾಬರ್ ಆಝಂ ಕನಸು ಹುಸಿಯಾಗಿದೆ. ಏಷ್ಯಾಕಪ್ ಟೂರ್ನಿಗಾಗಿ ಪಾಕಿಸ್ತಾನ್ ತಂಡದ ಘೋಷಣೆಯಾಗಿದೆ. 17 ಸದಸ್ಯರ ಈ ತಂಡದಲ್ಲಿ ಪಾಕ್ ತಂಡದ ಮಾಜಿ ನಾಯಕ ಬಾಬರ್ ಆಝಂ ಕಾಣಿಸಿಕೊಂಡಿಲ್ಲ. ಇತ್ತ ಏಷ್ಯಾಕಪ್ ಟೂರ್ನಿಯಿಂದ ಬಾಬರ್ ಹೊರಗುಳಿದಿರುವ ಕಾರಣ ಅತ್ತ ರೋಹಿತ್ ಶರ್ಮಾ ಅವರ ಭರ್ಜರಿ ದಾಖಲೆಯೊಂದು ಸೇಫ್ ಝೋನ್‌ನಲ್ಲಿ ಉಳಿದಿದೆ. ಅಂದರೆ ಟಿ20 ಕ್ರಿಕೆಟ್‌ನಲ್ಲಿ ಅತ್ಯಧಿಕ ರನ್ ಕಲೆಹಾಕಿದ ವಿಶ್ವದಾಖಲೆ ಬರೆಯಲು ಬಾಬರ್ ಆಝಂಗೆ ಕೇವಲ 8 ರನ್‌ಗಳ ಅವಶ್ಯಕತೆಯಿದೆ. ಆದರೆ ಇದೀಗ ಏಷ್ಯಾಕಪ್‌ನಲ್ಲಿ ಕಣಕ್ಕಿಳಿಯುವ ಅವಕಾಶದಿಂದ ವಂಚಿತರಾಗಿರುವ ಬಾಬರ್ ರೋಹಿತ್ ಶರ್ಮಾ ಅವರ ವಿಶ್ವದಾಖಲೆಯನ್ನು ಮುರಿಯಲು ಇನ್ನೊಂದಷ್ಟು ತಿಂಗಳುಗಳ ಕಾಲ ಕಾಯಬೇಕಾಗಿ ಬರಬಹುದು. ಟಿ20 ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಅತ್ಯಧಿಕ ರನ್ ಕಲೆಹಾಕಿದ ಬ್ಯಾಟರ್‌ಗಳ ಪಟ್ಟಿಯಲ್ಲಿ ಹಿಟ್‌ಮ್ಯಾನ್ ರೋಹಿತ್ ಶರ್ಮಾ ಅಗ್ರಸ್ಥಾನದಲ್ಲಿದ್ದಾರೆ. ಟೀಮ್ ಇಂಡಿಯಾ ಪರ 151 ಟಿ20 ಇನಿಂಗ್ಸ್ ಆಡಿರುವ ರೋಹಿತ್ ಶರ್ಮಾ ಒಟ್ಟು 4231 ರನ್ ಗಳಿಸಿ ಈ ಭರ್ಜರಿ ದಾಖಲೆ ನಿರ್ಮಿಸಿದ್ದಾರೆ. ಈ ದಾಖಲೆ ಮುರಿಯಲು ಬಾಬರ್ ಆಝಂಗೆ ಬೇಕಿರುವುದು ಕೇವಲ 8 ರನ್‌ಗಳು ಮಾತ್ರ. ಪಾಕ್ ಪರ ಈವರೆಗೆ 121 ಟಿ20 ಇನಿಂಗ್ಸ್ ಆಡಿರುವ ಬಾಬರ್ ಒಟ್ಟು 2223 ರನ್ ಕಲೆಹಾಕಿದ್ದಾರೆ. ಈ ಮೂಲಕ ಟಿ20 ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಅತೀ ಹೆಚ್ಚು ರನ್‌ಗಳಿಸಿದ 2ನೇ ಬ್ಯಾಟರ್ ಎನಿಸಿಕೊಂಡಿದ್ದಾರೆ. ಇತ್ತ ಏಷ್ಯಾಕಪ್ ಮೂಲಕ ಅಗ್ರಸ್ಥಾನಕ್ಕೇರುವ ವಿಶ್ವಾಸದಲ್ಲಿದ್ದ ಬಾಬರ್ ಆಝಂಗೆ ಪಾಕಿಸ್ತಾನ್ ಕ್ರಿಕೆಟ್ ಮಂಡಳಿ ಬಿಗ್ ಶಾಕ್ ನೀಡಿದೆ. ಕಳಪೆ ಸ್ಟ್ರೈಕ್ ರೇಟ್ ಅನ್ನು ಪರಿಗಣಿಸಿ ಬಾಬರ್‌ಗೆ ಟಿ20 ತಂಡದಲ್ಲಿ ಸ್ಥಾನ ನೀಡಲಾಗಿಲ್ಲ. ಹೀಗಾಗಿ ರೋಹಿತ್ ಶರ್ಮಾ ಅವರ ವಿಶ್ವದಾಖಲೆ ಮುರಿಯಲು ಬಾಬರ್ ಇನ್ನೊಂದಷ್ಟು ದಿನಗಳವರೆಗೆ ಕಾಯಲೇಬೇಕು. ಅದು ಸಹ ಪಾಕ್ ಟಿ20 ತಂಡದಲ್ಲಿ ಮತ್ತೆ ಚಾನ್ಸ್ ಸಿಕ್ಕರೆ ಮಾತ್ರ ಎಂಬುದು ಇಲ್ಲಿ ಉಲ್ಲೇಖಾರ್ಹ.

# ದುಲೀಪ್ ಟ್ರೋಫಿಯಿಂದ ಇಶಾನ್ ಕಿಶನ್ ಔಟ್



**ಆಶೀರ್ವಾದ್ ಸ್ವೈನ್ ಆಯ್ಕೆ**

ದುಲೀಪ್ ಟ್ರೋಫಿ 2025 ಆಗಸ್ಟ್ 28 ರಿಂದ ಶುರುವಾಗಲಿದೆ. ಈ ಬಾರಿಯ ಟೂರ್ನಿಯು ಎಲ್ಲಾ ಪಂದ್ಯಗಳು ಬೆಂಗಳೂರಿನ ಬಿಸಿಸಿಐ ಸೆಂಟರ್ ಆಫ್ ಎಕ್ಸಲೆನ್ಸ್ ಮೈದಾನದಲ್ಲಿ ನಡೆಯಲಿದೆ. ವಿಶೇಷ ಎಂದರೆ ಈ ಬಾರಿ ಕಣಕ್ಕಿಳಿಯಲಿರುವ 6 ತಂಡಗಳಲ್ಲಿ ಟೀಮ್ ಇಂಡಿಯಾದ ಪ್ರಮುಖ ಆಟಗಾರರು ಕೂಡ ಕಾಣಿಸಿಕೊಳ್ಳಲಿದ್ದಾರೆ.

ದುಲೀಪ್ ಟ್ರೋಫಿ ಟೂರ್ನಿಯಿಂದ ಇಶಾನ್ ಕಿಶನ್ ಹೊರಬಿದ್ದಿದ್ದಾರೆ. ಪೂರ್ವ ವಲಯ ತಂಡದ ನಾಯಕರಾಗಿ ಆಯ್ಕೆಯಾಗಿದ್ದ ಕಿಶನ್ ಗಾಯದ ಕಾರಣ ಹೊರಗುಳಿದಿದ್ದು, ಅವರ ಬದಲಿಗೆ ಅಭಿಮನ್ಯು ಈಶ್ವರನ್ ಅವರಿಗೆ ಕ್ಯಾಪ್ಟನ್ ಪಟ್ಟ ನೀಡಲಾಗಿದೆ. ಇನ್ನು ಇಶಾನ್ ಕಿಶನ್ ಸ್ಥಾನಕ್ಕೆ ಯುವ ವಿಕೆಟ್ ಕೀಪರ್ ಬ್ಯಾಟರ್ ಆಶೀರ್ವಾದ್ ಸ್ವೈನ್ ಆಯ್ಕೆಯಾಗಿದ್ದಾರೆ. ಒಡಿಶಾದ 20 ವರ್ಷದ ವಿಕೆಟ್ ಕೀಪರ್-ಬ್ಯಾಟ್ಸ್‌ಮನ್ ಆಶಿರ್ವಾದ್ ಸ್ವೈನ್ ಇದುವರೆಗೆ ಪ್ರಥಮ ದರ್ಜೆ ಕ್ರಿಕೆಟ್‌ನಲ್ಲಿ 11 ಪಂದ್ಯಗಳನ್ನು ಆಡಿದ್ದಾರೆ. ಈ ವೇಳೆ 21 ಇನ್ನಿಂಗ್ಸ್‌ಗಳಲ್ಲಿ ಬ್ಯಾಟ್ ಬೀಸಿರುವ ಅವರು 30.75 ಸರಾಸರಿಯಲ್ಲಿ ಒಟ್ಟು 615 ರನ್ ಗಳಿಸಿದ್ದಾರೆ. ಇದರ ಜೊತೆಗೆ ವಿಕೆಟ್ ಕೀಪಿಂಗ್‌ನಲ್ಲಿ 32 ಕ್ಯಾಚ್‌ಗಳು ಮತ್ತು 3 ಸ್ಟಂಪಿಂಗ್‌ಗಳನ್ನು ಸಹ ಮಾಡಿದ್ದಾರೆ. ಈ ಪ್ರದರ್ಶನದ ಫಲವಾಗಿ ಇದೀಗ ಯುವ ವಿಕೆಟ್ ಕೀಪರ್ ಬ್ಯಾಟರ್‌ನನ್ನು ಪೂರ್ವ ವಲಯ ತಂಡಕ್ಕೆ ಆಯ್ಕೆ ಮಾಡಲಾಗಿದೆ.

**ದುಲೀಪ್ ಟ್ರೋಫಿಗೆ ಪೂರ್ವ ವಲಯ ತಂಡ:** ಅಭಿಮನ್ಯು ಈಶ್ವರನ್ (ನಾಯಕ), ಆಶೀರ್ವಾದ್ ಸ್ವೈನ್ (ವಿಕೆಟ್ ಕೀಪರ್), ಸಂದೀಪ್ ಪಟ್ನಾಯಕ್, ವಿರಾಟ್ ಸಿಂಗ್, ಡ್ಯಾನಿಶ್ ದಾಸ್, ಶ್ರೀದಾಮ್ ಪಾಲ್, ಶರಣದೀಪ್ ಸಿಂಗ್, ಕುಮಾರ್ ಕುಶಾಗ್ರಾ, ರಿಯಾನ್ ಪರಾಗ್, ಉತ್ಕರ್ಷ್ ಸಿಂಗ್, ಮನೀಷಿ, ಸೂರಜ್ ಸಿಂಧು ಜೈಸ್ವಾಲ್, ಮುಖೇಶ್ ಕುಮಾರ್, ಆಕಾಶ್ ದೀಪ್ ಮತ್ತು ಮೊಹಮ್ಮದ್ ಶಮಿ.ಸ್ಟ್ಯಾಂಡ್‌ಬೈ: ಮುಖ್ತಾರ್ ಹುಸೇನ್, ವೈಭವ್ ಸೂರ್ಯವಂಶಿ, ಸ್ವಸ್ತಿಕ್ ಸಮಲ್, ಸುದೀಪ್ ಕುಮಾರ್ ಘರಾಮಿ ಮತ್ತು ರಾಹುಲ್ ಸಿಂಗ್.

**ಏನಿದು ದುಲೀಪ್ ಟ್ರೋಫಿ:** ದುಲೀಪ್ ಟ್ರೋಫಿ ಎಂಬುದು ಭಾರತದಲ್ಲಿ ಆಡಲಾಗುವ ದೇಶೀಯ ಟೆಸ್ಟ್ ಕ್ರಿಕೆಟ್ ಟೂರ್ನಿ. ಈ ಟೂರ್ನಿಗೆ ಮಾಜಿ ಆಟಗಾರ ದುಲೀಪ್‌ಸಿನ್‌ಜಿ ಅವರ ಹೆಸರನ್ನು ಇಡಲಾಗಿದೆ. ಈ ಟೂರ್ನಿಯಲ್ಲಿ ಒಟ್ಟು 6 ವಲಯ ತಂಡಗಳು ಕಣಕ್ಕಿಳಿಯುತ್ತವೆ. ಇಲ್ಲಿ ಆಯಾ ವಲಯಗಳನ್ನು ಆಯಾ ಭಾಗದ ರಾಜ್ಯಗಳ ಆಟಗಾರರು ಪ್ರತಿನಿಧಿಸುತ್ತಾರೆ.

**ಉತ್ತರ ವಲಯ :** ಚಂಡೀಗಢ, ದೆಹಲಿ, ಹರಿಯಾಣ, ಹಿಮಾಚಲ ಪ್ರದೇಶ, ಜಮ್ಮು ಮತ್ತು ಕಾಶ್ಮೀರ, ಪಂಜಾಬ್ ಮತ್ತು ಸರ್ವೀಸಸ್ ತಂಡಗಳು.ದಕ್ಷಿಣ ವಲಯ : ಆಂಧ್ರಪ್ರದೇಶ, ಗೋವಾ, ಹೈದರಾಬಾದ್ ಕರ್ನಾಟಕ, ಕೇರಳ, ಪಾಂಡಿಚೇರಿ ಮತ್ತು ತಮಿಳುನಾಡು.ಫಿ ಕೇಂದ್ರ ವಲಯ : ಛತ್ತೀಸ್‌ಗಢ, ಮಧ್ಯಪ್ರದೇಶ, ರೈಲ್ವೆ, ರಾಜಸ್ಥಾನ, ಉತ್ತರಾಖಂಡ, ಉತ್ತರ ಪ್ರದೇಶ ಮತ್ತು ವಿದರ್ಭ. ಪೂರ್ವ ವಲಯ : ಅಸ್ಸಾಂ, ಬಿಹಾರ, ಬಂಗಾಳ, ಜಾರ್ಖಂಡ್, ಒಡಿಶಾ ಮತ್ತು ತ್ರಿಪುರಾ. ಈಶಾನ್ಯ ವಲಯ : ಅರುಣಾಚಲ ಪ್ರದೇಶ, ಮಣಿಪುರ, ಮೇಘಾಲಯ, ಮಿಜೋರಾಂ, ನಾಗಾಲ್ಯಾಂಡ್ ಮತ್ತು ಸಿಕ್ಕಿಂ. ಪಶ್ಚಿಮ ವಲಯ : ಬರೋಡಾ, ಗುಜರಾತ್, ಮಹಾರಾಷ್ಟ್ರ, ಮುಂಬೈ ಮತ್ತು ಸೌರಾಷ್ಟ್ರ.

**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru - 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**